ಸಂಪುಟ: 04 ಸಂಚಿಕೆ: 322 ಪುಟಗಳು: 08 ಸೋಮವಾರ 03 ಫೆಬ್ರವರಿ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**
ಬದುಕುವುದಕ್ಕಾಗಿ ದುಡಿಯುವುದು ಅನಿವಾರ್ಯ, ಹಾಗಂತ ಫಲದ ಮೇಲೆ ಕಣ್ಣಿಟ್ಟು ಕೆಲಸ ಮಾಡಿದರೆ ನಿರಾಸೆ ಹೆಚ್ಚು, ಕೆಲಸವನ್ನು ಶ್ರದ್ಧೆಯಿಂದ, ಪ್ರೀತಿಯಿಂದ ಮಾಡಿದರೆ ಫಲ ಇಂದಲ್ಲ ನಾಳೆ ದೊರಕಿಯೇ ದೊರಕುತ್ತದೆ.

# ಗೂಗ್ಲಿ ಹಾಕಿದ ಆರ್.ಅಶೋಕ್

• ಉದಯವಾಹಿನಿ, ಬೆಂಗಳೂರು

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪಾಲಿಗೆ ನವೆಂಬರ್ ಡೆಡ್ ಲೈನ್ ಅಂತ ವಿಪಕ್ಷ ನಾಯಕ ಆರ್.ಅಶೋಕ್ ಸಿಡಿಸಿದ ಬಾಂಬ್ ಈಗ ರಾಜಕೀಯ ವಲಯದಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿದೆ. ಕಾಂಗ್ರೆಸ್ ಸಚಿವರು ಕಿಡಿಕಾರಿದ್ರೆ, ನೋಡ್ತಾ ಇರಿ ಅಂತಾ ಬಿಜೆಪಿ ರಾಜಕೀಯ ಮೇಲಾಟ ಶುರು ಮಾಡಿದೆ. ಈ ನಡುವೆ ಸಚಿವ ಜಿ. ಪರಮೇಶ್ವರ್ ಆಪ್ತರ ಟೀಂ ದೆಹಲಿ ಪ್ರವಾಸಕ್ಕೆ ಸಜ್ಜಾಗ್ತಿದೆ.



ಕಾಂಗ್ರೆಸ್ ನಲ್ಲಿ ಮೊದಲೇ ಪವರ್ ಶೇರಿಂಗ್ ಫೈಟ್ ಜೋರಾಗಿದೆ. ಹೈಕಮಾಂಡ್ ಸೂಚನೆ ಬೆನ್ನಲ್ಲೇ ಎಲ್ಲಾವೂ ಮೇಲ್ನೋಟಕ್ಕೆ ತಣ್ಣಗಾದಂತಿದೆ. ಆದರೆ ಈಗ ಅಶೋಕ್, ಸಿದ್ದರಾಮಯ್ಯ ಸಿಎಂ ಸ್ಥಾನದ ಅವಧಿ ನವೆಂಬರ್‌ವರೆಗೆ ಮಾತ್ರ ಎಂದು ಬಾಂಬ್ ಹಾಕಿದ್ದಾರೆ.

**ನವೆಂಬರ್ ಸಿದ್ದರಾಮಯ್ಯಗೆ ಡೆಡ್‌ಲೈನ್**

ಸಿದ್ದರಾಮಯ್ಯ ಸಿಎಂ ಆಗುವಾಗಲೇ ಅವರ ಅಧಿಕಾರ ಅವದಿ 2.5 ವರ್ಷ ನಿಗದಿ ಆಗಿದೆ ಎನ್ನಲಾಗಿತ್ತು. ನವೆಂಬರ್‌ಗೆ ಸಿದ್ದರಾಮಯ್ಯ ಸಿಎಂ ಅವಧಿ ಖಚಿತವಾಗಿ ಮುಗಿಯಲಿದೆ ಎಂಬ ಅಶೋಕ್ ಹೇಳಿಕೆ ಈಗ ಹೊಸ ಚರ್ಚೆ ಹುಟ್ಟು ಹಾಕಿದೆ. ಇನ್ನೂ ಹೈಕಮಾಂಡ್ ದೆಹಲಿ ಬುಲಾವ್‌ಗೆ ಮೊದಲೇ ಪರಮೇಶ್ವರ್ ಆಪ್ತ ಸಚಿವರ ದೆಹಲಿ ಚಲೋ ಕೈಗೊಳ್ಳಲು ಮುಂದಾಗಿದ್ದಾರೆ. ಫೆಬ್ರವರಿ 10ರ ಒಳಗೆ ದೆಹಲಿ ತೆರಳಿ ಹೈಕಮಾಂಡ್ ಭೇಟಿಗೆ ನಾಲ್ವರು ಸಚಿವರು ಮುಂದಾಗಿದ್ದಾರೆ.ದಲಿತ ನಾಯಕರ ಸಭೆಗೆ ಬ್ರೇಕ್ ಹಾಕಿದ್ದನ್ನೇ ಮುಂದಿಟ್ಟುಕೊಂಡು ಹೈಕಮಾಂಡ್ ಭೇಟಿ ಮಾಡ್ತಿದ್ದಾರೆ. ಈ ಭೇಟಿ ಸಂದರ್ಭದಲ್ಲಿ ಪವರ್ ಶೇರಿಂಗ್ ಫೈಟ್, ಪವರ್ ಸೆಂಟರ್ ಪಾಲಿಟಿಕ್ಸ್ ಎಲ್ಲಾ ವಿಚಾರ ಹೈಕಮಾಂಡ್ ಮುಂದಿಡುವ ಲೆಕ್ಕಾಚಾರ ಇದೆ ಎನ್ನಲಾಗಿದೆ. ಆದ್ರೆ ಆರ್.ಅಶೋಕ್ ಹೇಳಿಕೆಗೆ ಕಾಂಗ್ರೆಸ್ ಸಚಿವರಾದ ಪರಮೇಶ್ವರ್, ಬೋಸರಾಜು ವಾಗ್ದಾಳಿ ನಡೆಸಿದ್ದಾರೆ.

ಈ ನಡುವೆ ಸಿಎಂ ರಾಜಕೀಯ ಸಲಹೆಗಾರ ಹುದ್ದೆಗೆ ಬಿ.ಆರ್ ಪಾಟೀಲ್ ರಾಜೀನಾಮೆ ವಿಚಾರ ಕಾಂಗ್ರೆಸ್ ನಲ್ಲಿ ಸಾಕಷ್ಟು ಸದ್ದು ಮಾಡ್ತಿದೆ.

## ಬಜೆಟ್ ಜನಪರ, ಸರಕಾರಕ್ಕೆ ಅಧಿಕೃತ ಪತ್ರ ಬರೆಯುವ ತಾಕತ್ತಿಲ್ಲ

• ಉದಯವಾಹಿನಿ, ಕಲಬುರಗಿ

ಜಿಲ್ಲೆಯ ಸೇಡಂ ತಾಲ್ಲೂಕಿನ ಬೀರಹನಳ್ಳಿಯಲ್ಲಿ ನಡೆಯುತ್ತಿರುವ 7ನೇ ಭಾರತೀಯ ಸಾಂಸ್ಕೃತಿಕ ಉತ್ಸವಕ್ಕೆ ರಾಜ್ಯ ಸರಕಾರ ವಿರೋಧ ಮಾಡಿರುವುದು ಸರಿಯಲ್ಲ. ಅದೂ ಅಲ್ಲದೆ, ಕೆಲವರು ಪ್ರತಿಭಟನೆಯನ್ನೂ ಮಾಡಿದ್ದಾರೆ. ಯಾಕೆ ಇಂತಹ ಮನಸ್ಥಿತಿ ಎಂದು ಕೇಂದ್ರದ ಕಾರ್ಮಿಕ ಮತ್ತು ಉದ್ಯೋಗ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಪ್ರಶ್ನಿಸಿದರು.ಉತ್ಸವದ ವೇದಿಕೆಯ ಸ್ಥಳದಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಇದೊಂದು ರಾಷ್ಟ್ರ, ಸಂಸ್ಕೃತಿ ಉತ್ಸವ. ಇದು ಬಿಜೆಪಿಯಿಂದಲೋ, ಇನ್ಯಾವುದೋ ಸಂಘದಿಂದ ಮಾಡುತ್ತಿಲ್ಲ ಜಾತಿ, ಧರ್ಮ ಪಕ್ಷದ ಸಮಾವೇಶ ಅಲ್ಲ ಕಲೆ, ಸಂಸ್ಕೃತಿ ಬಿಂಬಿಸುವ ಉತ್ಸವ ಮಾಡುತ್ತಿರುವ ಸಂಸ್ಥೆಗೆ ಸರಕಾರ ನಿಂತು ಬೆಂಬಲಿಸಬೇಕಿತ್ತು. ಅದರೆ, ಇದರಲ್ಲಿ ರಾಜಕಾರಣ ಮಾಡಲಾಗುತ್ತಿದೆ. ಶಿಕ್ಷಣ ಇಲಾಖೆಗೆ ಹಾಗೂ ಅಧಿಕಾರಿಗಳಿಗೆ ಮೌಖಿಕವಾಗಿ ಹೋಗಬೇಡಿ ಎನ್ನುವ ಸಂದೇಶ ನೀಡಲಾಗಿದೆ. ಅದನ್ನೇ ಲಿಖಿತವಾಗಿ ಹೇಳುವ ತಾಕತ್ತು ಸರಕಾರಕ್ಕೆ ಇಲ್ಲ ಎಂದು ಛೇಡಿಸಿದರು. ಮಂತ್ರಿ, ಶಾಸಕರಿಗೂ ಆಹ್ವಾನ ನೀಡಲಾಗಿದೆ. ಅದರೆ, ಸ್ಥಳೀಯ ಶಾಸಕರೂ ವಿದೇಶಕ್ಕೆ ಹೋಗಿದ್ದಾರೆ ಎಂದ ಅವರು, ಕೆಲವು ಸಂಘಟನೆಗಳು ವಿರೋಧಿಸಿ ಪ್ರತಿಭಟನೆ ಮಾಡಿವೆ. ಯಾಕೆ ಇಂತಹ ವಿಕೃತಿ ಎಂದು ಪ್ರಶ್ನಿಸಿದರು.

## ಕಣ್ವ ಅಣೆಕಟ್ಟು ಪ್ರವಾಸೋದ್ಯಮ ತಾಣವಾಗಿ ಅಭಿವೃದ್ಧಿ: ಡಿಸಿಎಂ

• ಉದಯವಾಹಿನಿ, ಚನ್ನಪಟ್ಟಣ

ಕಣ್ವ ಅಣೆಕಟ್ಟು ಪ್ರದೇಶವನ್ನು ಪ್ರವಾಸೋದ್ಯಮ ತಾಣವಾಗಿ ಅಭಿವೃದ್ಧಿ ಮಾಡುವ ಬಗ್ಗೆ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಜನಪ್ರತಿನಿಧಿಗಳ ಜತೆ ಸಮಾಲೋಚನೆ ನಡೆಸಿದರು. ಚನ್ನಪಟ್ಟಣ ಉಪಚುನಾವಣೆಯಲ್ಲಿ ಕಾಂಗ್ರೆಸ್ ಗೆಲುವಿನ ನಂತರ ಮತದಾರರಿಗೆ ಕೃತಜ್ಞತಾ ಸಮಾವೇಶ' ನಡೆಸಿದ ಬಳಿಕ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಕಣ್ವ ಅಣೆಕಟ್ಟೆಗೆ ಭೇಟಿ ನೀಡಿ ಭಾನುವಾರ ಪರಿಶೀಲನೆ ನಡೆಸಿದರು.



ಈ ಸಂದರ್ಭದಲ್ಲಿ ಸ್ಥಳೀಯ ಶಾಸಕ ಸಿ.ಪಿ. ಯೋಗೇಶ್ವರ್, ಮಾಜಿ ಸಂಸದ ಡಿ.ಕೆ. ಸುರೇಶ್, ಶಾಸಕರಾದ ಬಾಲಕೃಷ್ಣ, ರಂಗನಾಥ್, ಎನ್ ಶ್ರೀನಿವಾಸ್, ವಿಧಾನ ಪರಿಷತ್ ಸದಸ್ಯ ಎಸ್. ರವಿ ಮತ್ತಿತರ ನಾಯಕರು ಉಪಸ್ಥಿತರಿದ್ದರು. ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಜನಪ್ರತಿನಿಧಿಗಳ ಜತೆ ಮೋಟಾರ್ ಬೋಟ್ ಮೂಲಕ ಕಣ್ವ ಡ್ಯಾಮ್ ನಲ್ಲಿ ವಿಹಾರ ನಡೆಸಿದರು. ಕಣ್ವ ಅಣೆಕಟ್ಟಿನ ಪ್ರದೇಶವನ್ನು ಪ್ರವಾಸೋದ್ಯಮದ ತಾಣವಾಗಿ ರೂಪಿಸಲು ಇರುವ ಅವಕಾಶಗಳ ಕುರಿತು ಚರ್ಚೆ ನಡೆಸಿದರು.ಜಲ ವಿಹಾರ, ಜಲ ಕ್ರೀಡೆ, ಪಾರ್ಕ್ ನಿರ್ಮಾಣ ಸೇರಿದಂತೆ ಅಲ್ಲಿ ಕೈಗೊಳ್ಳಬಹುದಾದ ಅಭಿವೃದ್ಧಿ ಚಟುವಟಿಕೆಗಳ ಬಗ್ಗೆ ಸಮಾಲೋಚನೆ ನಡೆಸಿದರು.

## ಸಿಎಂ ಜೈಲಿಗೆ ಹೋದ್ರೆ ನಾನು ಸೇರಿ 1 ಕೋಟಿ ಜನರು ಹೋಗ್ತಿವಿ

• ಉದಯವಾಹಿನಿ, ಮೈಸೂರು

ಮುಖ್ಯಮಂತ್ರಿ ಸ್ಥಾನಕ್ಕೆ ಸಿದ್ದರಾಮಯ್ಯ ರಾಜೀನಾಮೆ ನೀಡ ಬಾರದು. ಅವರು ಜೈಲಿಗೆ ಹೋದರೂ ಅಲ್ಲಿಂದಲೇ ಕೆಲಸ ಮಾಡಬೇಕು. ಒಂದು ವೇಳೆ ಜೈಲಿಗೆ ಹೋಗಿದ್ದೇ ಆದಲ್ಲಿ ನಾನು ಸೇರಿದಂತೆ 1 ಕೋಟಿ ಜನರು ಜೈಲಿಗೆ ಹೋಗ್ತಿವಿ ಎಂಬುದಾಗಿ ಕನ್ನಡಪರ ಹೋರಾಟಗಾರ ವಾಟಾಳ್ ನಾಗರಾಜ್ ಗುಡುಗಿದ್ದಾರೆ. ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದಂತ ಅವರು, ಸಿದ್ದರಾಮಯ್ಯ ರಾಜೀನಾಮೆಯನ್ನು ಯಾವುದೇ ಸಂದರ್ಭದಲ್ಲೂ ನೀಡಬಾರದು. ಏನಾದರೂ ಜೈಲಿಗೆ ಹೋದ್ರೆ ನಾನು ಸೇರಿದಂತೆ 1 ಕೋಟಿ ಜನರು ಜೈಲಿಗೆ ಹೋಗಲು ಸಿದ್ಧರಾಗಿದ್ದೇವೆ ಎಂದರು.ಸಿಎಂ ಸಿದ್ದರಾಮಯ್ಯ ಜೈಲಿಗೆ ಹೋದರೂ ಅಲ್ಲಿಂದಲೇ ಅಧಿಕಾರ ಮಾಡಲಿ, ಸಿಎಂ ಸಿದ್ದರಾಮಯ್ಯ ಅವರು ನೂರಾರು ನಾಗರಹಾವುಗಳ ಮಧ್ಯೆ ಇದ್ದಾರೆ. ಹಿತಶತ್ರುಗಳ ಕಾಟ ಇದೆ. ವಿಪಕ್ಷಕ್ಕಿಂತ ಕಾಂಗ್ರೆಸ್ ಪಕ್ಷದವರೇ ಹಿತಶತ್ರುಗಳಾಗಿದ್ದಾರೆ ಎಂದರು. ಕಾಂಗ್ರೆಸ್ ಪಕ್ಷದವರು ಬಾಯಿ ಮುಚ್ಚಿಕೊಂಡು ಇರಬೇಕು. ವಿರೋಧ ಪಕ್ಷದವರು ಅವರ ಮನೆ ಮೊದಲು ನೋಡಿಕೊಳ್ಳಲಿ. ಸಿಎಂ ಸ್ಥಾನಕ್ಕೆ ಡೆಡ್ ಲೈನ್ ಇಲ್ಲ. ಅದೊಂದು ಜೋಕ್ ಆಗಿದೆ. 5 ವರ್ಷ ಸಿದ್ದರಾಮಯ್ಯ ಅವರೇ ಮುಖ್ಯಮಂತ್ರಿಯಾಗಿರುತ್ತಾರೆ ಎಂಬುದಾಗಿ ತಿಳಿಸಿದರು.

**ಯಾರೇ ಕೂಗಾಡಲಿ... ಎಷ್ಟೇ ಹೋರಾಡಲಿ...!**

# ವಿಜಯೇಂದ್ರ ಪಟ್ಟ ಭದ್ರ

**ರಾಜ್ಯ ಬಿಜೆಪಿ ಅಧ್ಯಕ್ಷರಾಗಿ ವಿಜಯೇಂದ್ರ ಮುಂದುವರಿಕೆ...!**

**ಕಮಲದಲ್ಲಿ ಗದ್ದುಗೆ ಗುದ್ದಾಟ ಅರವಿಂದ ಲಿಂಬಾವಳಿ ವಾಗ್ದಾಳಿ**



• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಬಿಜೆಪಿಯಲ್ಲಿ ಮನೆಯೊಂದು ಮೂರು ಬಾಗಿಲು ಎನ್ನುವಂತಾಗಿದೆ. ಕರ್ನಾಟಕ ಬಿಜೆಪಿಯಲ್ಲಿ ಸ್ಪಷ್ಟವಾಗಿ ಎರಡು ಬಣಗಳು ಸೃಷ್ಟಿಯಾಗಿವೆ. ಒಂದು ಬಣ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ವಿರುದ್ಧ ನೇರವಾಗಿ ವಾಗ್ದಾಳಿ ನಡೆಸಿದರೆ, ಮತ್ತೊಂದು ಬಣ ವಿಜಯೇಂದ್ರ ಪರವಾಗಿ ಗಟ್ಟಿಯಾಗಿ ನಿಂತಿದೆ. ವಿಜಯೇಂದ್ರ ವಿರುದ್ಧದ ಬಣದಲ್ಲಿ ಸಂಘಟನಾ ಚತುರ ಎಂದು ಕರೆಸಿಕೊಳ್ಳುವ ಅರವಿಂದ ಲಿಂಬಾವಳಿ ಗುರುತಿಸಿಕೊಂಡಿದ್ದು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ ನಡ್ಡಾ ಅವರನ್ನು ಭೇಟಿಯಾಗಿದ್ದಾರೆ. ಭಿನ್ನ ಮತೀಯರ ವಿರೋಧವನ್ನು ಲೆಕ್ಕಿಸದೆ, ಕರ್ನಾಟಕದಲ್ಲಿ ಹೊಸ ಸಂಪ್ರದಾಯಕ್ಕೆ ನಾಂದಿ ಹಾಡಲು ಒಲವು ತೋರದ ಕೇಂದ್ರ ಬಿಜೆಪಿ ವರಿಷ್ಠರು, ಹಾಲಿ ಅಧ್ಯಕ್ಷರಾಗಿರುವ ಬಿ.ವೈ ವಿಜಯೇಂದ್ರ ಅವರನ್ನೇ ಅಧ್ಯಕ್ಷ ಸ್ಥಾನದಲ್ಲಿ ಮುಂದುವರೆಸಲು ಮುಂದಾಗಿದ್ದಾರೆ. ಬಿಜೆಪಿಯ ಇತಿಹಾಸದಲ್ಲೇ ರಾಜ್ಯಾಧ್ಯಕ್ಷ ಸ್ಥಾನಕ್ಕೆ ಹಣಾಹಣಿ ನಡೆದ ಉದಾಹರಣೆ ಇಲ್ಲ. ಹೀಗಾಗಿ ಈ ಸಂಪ್ರದಾಯವನ್ನು ಮುರಿಯದೆ ಇರಲು ಬಿಜೆಪಿ ನಿರ್ಧಾರ ಮಾಡಿದೆ.ಬಿಜೆಪಿಯ ಉನ್ನತ ನಾಯಕರು ಮತಪತ್ರದ ಮೂಲಕ ಹೊಸ ಅಧ್ಯಕ್ಷರನ್ನು ಆಯ್ಕೆ ಮಾಡಲು ಒತ್ತಾಯಿಸಿದ್ದಾರೆ. ಬಿ.ವೈ. ವಿಜಯೇಂದ್ರ, ವಿರುದ್ಧ ಸಮರ್ಥ ನಾಯಕತ್ವ ಅಭ್ಯರ್ಥಿ ಕಣಕ್ಕಿಳಿಸಲು ಬಿಜೆಪಿಯಲ್ಲಿ ಚರ್ಚಿಸಲಾಗಿದೆ. ಇದೇ ವಿಚಾರಕ್ಕೆ ಸಂಬಂಧಿಸಿದಂತೆ ರಮೇಶ್ ಜಾರಕಿಹೊಳಿ ಮತ್ತು ಬಸನಗೌಡ ಪಾಟೀಲ್ ಯತ್ನಾಳ್ ಅವರಿರುವ ಬಣದಲ್ಲಿ ಮಹತ್ವದ ಚರ್ಚೆಗಳು ಆಗಿವೆ.



### ಬಿ.ವೈ. ವಿಜಯೇಂದ್ರ ತಿರುಗೇಟು

ಕೇಂದ್ರ ಬಜೆಟ್‌ನಲ್ಲಿ ರಾಜ್ಯಕ್ಕೆ ಸಿಕ್ಕಿದ್ದು ಚೊಂಬು' ಎಂದು ಹೇಳಿಕೆ ನೀಡಿರುವ ಸಿಎಂ ಸಿದ್ದರಾಮಯ್ಯಗೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ತಿರುಗೇಟು ನೀಡಿದ್ದು, ರಾಜಕೀಯ ಅರಾಜಕತೆ ಸೃಷ್ಟಿಸುವತ್ತ ನಿಮ್ಮ ಆಡಳಿತ ಮುನ್ನಡೆದಿದೆ, ನೀವು ಅಧಿಕಾರದಲ್ಲಿ ಇರಲೇಬೇಕೆಂದರೆ ತೆರಿಗೆಯ ಮೇಲೆ ತೆರಿಗೆ, ಬೆಲೆ ಏರಿಕೆ ಮೇಲೆ ಬೆಲೆ ಏರಿಕೆ ಮಾಡಿ ಜನರನ್ನು ಸುಲಿಗೆ ಮಾಡುವುದೊಂದೇ ಉಳಿದಿರುವ ಮಾರ್ಗ ಎಂದು ಟೀಕಿಸಿದ್ದಾರೆ. ಭಾರತದಲ್ಲಿ ಸಂಪನ್ಮೂಲ ಸಮೃದ್ಧತೆ ಹೊಂದಿರುವ ಮುಂಚೂಣಿ ರಾಜ್ಯಗಳಲ್ಲಿ ಕರ್ನಾಟಕ ಸದಾ ಮುಂದು, ಇಂತಹ ಸಂಪದ್ಭರಿತ ರಾಜ್ಯವನ್ನು ಬರಡು ಮಾಡಲು ಹೊರಟಿರುವ ನಿಮ್ಮ ಆಡಳಿತ ವೈಖರಿ ಇತಿಹಾಸದ ಕಪ್ಪು ಚುಕ್ಕೆಯಾಗುತ್ತಿರುವಾಗ ಮೋದಿ ಸರಕಾರದ ಬಗ್ಗೆ ಕೀಳು ಮಟ್ಟದ ಟೀಕೆಗೆ ಇಳಿಯುವುದು ಶೋಭೆಯಲ್ಲ.

1. ಪಕ್ಷದ ಹಿರಿಯ ನಾಯಕರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳುತ್ತಿಲ್ಲ.
2. ಶಾಸಕರ ಮಾತಿಗೂ ಬೆಲೆ ಇಲ್ಲ, ಯಾವುದೇ ಹೋರಾಟವನ್ನು ತಾರ್ಕಿಕ ಅಂತ್ಯಕ್ಕೆ ಕೊಂಡೊಯ್ಯುತ್ತಿಲ್ಲ.
3. ಕಾಂಗ್ರೆಸ್ ನಾಯಕರ ಜತೆಗೆ ಹೊಂದಾಣಿಕೆ ರಾಜಕಾರಣ ಮಾಡುತ್ತಿದ್ದಾರೆ.
4. ಪಕ್ಷ ಸಂಘಟನೆ ಆಗುತ್ತಿಲ್ಲ, ಪಕ್ಷದ ಜಿಲ್ಲಾ ಘಟಕದ ಅಧ್ಯಕ್ಷರ ನೇಮಕದಲ್ಲೂ ಭಾರಿ ಲೋಪ ಆಗಿದೆ.
5. ಪಕ್ಷದ ನೇಮಕದ ಸಂದರ್ಭದಲ್ಲಿ ವಿಜಯೇಂದ್ರ ಆಪ್ತರಿಗೆ ಮಣೆ ಹಾಕಲಾಗಿದೆ.

ಕರ್ನಾಟಕದಲ್ಲಿ ಬಿಜೆಪಿ ಅಧ್ಯಕ್ಷ ಸ್ಥಾನಕ್ಕೆ ಚುನಾವಣೆ ನಡೆಯುವ ಸಾಧ್ಯತೆಗಳು ದಿನದಂದ ದಿನಕ್ಕೆ ಕ್ಷೀಣಿಸುತ್ತಿದ್ದು, ಮುಂದಿನ ಮೂರು ವರ್ಷಗಳ ಅವಧಿಗೆ ಹಾಲಿ ಅಧ್ಯಕ್ಷರಾಗಿರುವ ಬಿ.ವೈ ವಿಜಯೇಂದ್ರ, ಅವರನ್ನೇ ಮುಂದುವರೆಸಲು ಕೇಂದ್ರ ವರಿಷ್ಠರು ಸಮತಿಸಿದ್ದಾರೆ. ಬಿಜೆಪಿ ಅಧ್ಯಕ್ಷರ ಬದಲಾವಣೆ ಕೂಗಿಗೆ ವರಿಷ್ಠರು ತಡೆ ಹಾಕಿದ್ದಾರೆ ಎಂದೇ ಹೇಳಲಾಗುತ್ತಿದೆ.

ಸರ್ವಸಮತಿಯೊಂದಿಗೆ ಬಿಜೆಪಿ ರಾಜ್ಯಾಧ್ಯಕ್ಷರ ಆಯ್ಕೆಗೆ ಒಲವು ತೋರಿರುವ ಬಿಜೆಪಿ ವರಿಷ್ಠರು, ಹಾಲಿ ರಾಜ್ಯಾ ಧ್ಯಕ್ಷ ವಿಜಯೇಂದ್ರ- ತಟಸ್ಥ ಬಣದ ನಡುವಣ ವಿವಾದಕ್ಕೆ ತೆರೆ ಎಳೆಯಲು ರಾಜ್ಯ ಸಂಘಟನ ಪ್ರಧಾನ ಕಾರ್ಯದರ್ಶಿ ಸ್ಥಾನಕ್ಕೆ ಉತ್ತರ ಪ್ರಾಂತ್ಯದ ವ್ಯಕ್ತಿಯನ್ನು ನೇಮಕ ಮಾಡಲು ಒಲವು ತೋರಿದ್ದಾರೆ. ಚುನಾವಣೆ ಇಲ್ಲದೆ ಬಿಜೆಪಿ ರಾಜ್ಯಾಧ್ಯಕ್ಷರ ನೇಮಕ ನಡೆಯುವುದು ಬಹುತೇಕ ಖಾತ್ರಿಯಾಗಿದೆ.

ಅಲ್ಲದೆ ಬಿಜೆಪಿ ರಾಜ್ಯಾಧ್ಯಕ್ಷರಾಗಿ ವಿಜಯೇಂದ್ರ, ಅವರನ್ನೇ ಮುಂದುವರಿಸುವ ಸಾಧ್ಯತೆ ಬಲವಾಗಿದೆ. ಈಗ ರಾಜ್ಯಾಧ್ಯಕ್ಷ ಸ್ಥಾನಕ್ಕೆ ಚುನಾವಣೆ ನಡೆಸಲು ವರಿಷ್ಠರು ಒಲವು ತೋರದೇ ಇರುವುದರಿಂದ ಯಾರು ರಾಜ್ಯಾಧ್ಯಕ್ಷ ಎಂಬ ಪ್ರಶ್ನೆ ಉದ್ಭವವಾಗಿತ್ತು. ಬಿಜೆಪಿಯ ಆಂತರಿಕ ಮೂಲಗಳ ಪ್ರಕಾರ ವಿಜಯೇಂದ್ರ ಅವರೇ ಈ ಸ್ಥಾನದಲ್ಲಿ ಮುಂದುವರಿಯುವ ಸಾಧ್ಯತೆ ಅಧಿಕವಾಗಿದೆ. ಯತ್ನಾಳ್ ಬಣದಲ್ಲಿ ಶಾಸಕ ರಮೇಶ್ ಜಾರಕಿಹೊಳಿ, ಮಾಜಿ ಶಾಸಕ ಅರವಿಂದ ಲಿಂಬಾವಳಿ, ಮಾಜಿ ಸಚಿವ ಕುಮಾರ ಬಂಗಾರಪ್ಪ, ಮಾಜಿ ಸಂಸದ ಪ್ರತಾಪ ಸಿಂಹ, ಮಾಜಿ ಕೇಂದ್ರ ಸಚಿವ ಜಿ ಎಂ ಸಿದ್ದೇಶ್ವರ್, ಮಾಜಿ ಸಂಸದ ಅಣ್ಣಾ ಸಾಹೇಬ ಜೊಲ್ಲೆ, ಮಾಜಿ ಸಚಿವ ಕುಮಾರ್ ಬಂಗಾರಪ್ಪ, ಶಾಸಕ ಆರ್ ಚಂದ್ರಪ್ಪ, ಬಿಪಿ ಹರೀಶ್, ಮಾಜಿ ಶಾಸಕ ಚಂದ್ರ ನಾಯ್ಕ, ಮಾಜಿ ಸಂಸದ ಬಿವಿ ನಾಯ್ಕ ಬಹಿರಂಗವಾಗಿ ಗುರುತಿಸಿಕೊಂಡಿದ್ದಾರೆ. ಅಷ್ಟೇ ಅಲ್ಲದೆ, ಬಿಜೆಪಿಯ ಕೆಲವು ಶಾಸಕರು, ಮಾಜಿ ಶಾಸಕರ ಪರೋಕ್ಷ ಬೆಂಬಲವೂ ಯತ್ನಾಳ್ ತಂಡಕ್ಕೆ ಇದೆ. ಹೀಗಿರುವಾಗ ಯತ್ನಾಳ್ ಟೀಂ ಯಾರನ್ನು ರಾಜ್ಯಾಧ್ಯಕ್ಷ ಸ್ಥಾನಕ್ಕೆ ಅಭ್ಯರ್ಥಿಯನ್ನಾಗಿ ಘೋಷಣೆ ಮಾಡಲಿದೆ ಎಂಬುವುದು ಸಾಕಷ್ಟು ಕುತೂಹಲಕ್ಕೆ ಕಾರಣವಾಗಿತ್ತು.ರಾಜ್ಯ ಬಿಜೆಪಿಯಲ್ಲಿ ಅಧ್ಯಕ್ಷ ಸ್ಥಾನಕ್ಕೆ 3 ವರ್ಷಕ್ಕೊಮ್ಮೆ ಚುನಾವಣೆ ನಡೆಯುತ್ತದೆ. ಆದರೆ ಅಂತಿಮವಾಗಿ ಹೈಕಮಾಂಡ್ ರಾಜ್ಯಾಧ್ಯಕ್ಷ ಸ್ಥಾನವನ್ನು ಅವಿರೋಧವಾಗಿ ಆಯ್ಕೆ ಮಾಡುತ್ತದೆ.



### ಭರ್ಜರಿ ತಯಾರಿ

ಬಣ ಬಡಿದಾಟದಿಂದ ಒಡೆದ ಮನೆಯಾಗಿರುವ ರಾಜ್ಯ ಬಿಜೆಪಿಯಲ್ಲಿ ಮಹತ್ವದ ಬೆಳವಣಿಗೆ ನಡೆದಿದೆ. ಬಿಜೆಪಿ ರಾಜ್ಯಾಧ್ಯಕ್ಷರ ಚುನಾವಣೆಯ ಹಿನ್ನೆಲೆ ಬಿ.ವೈ. ವಿಜಯೇಂದ್ರ ಹಾಗೂ ಬಸನಗೌಡ ಪಾಟೀಲ್ ಯತ್ನಾಳ್ ಬಣಗಳ ನಡುವೆ ಜಿದ್ದಾಜಿದ್ದಿ ಜೋರಾಗಿದೆ. ರಾಜ್ಯಾಧ್ಯಕ್ಷರ ಚುನಾವಣೆಗೆ ಯತ್ನಾಳ್ ಬಣದಿಂದ ಪ್ರಬಲ ಕಣಕ್ಕಿಳಿಸಲು ಭರ್ಜರಿ ತಯಾರಿ ನಡೆದಿತ್ತು. ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಅವರ ಬದಲಾವಣೆಗೆ ಪಟ್ಟು ಹಿಡಿದಿರುವ ಯತ್ನಾಳ್ ಬಣ ಚುನಾವಣೆಗೆ ಆಗ್ರಹಿಸಿದೆ. ಅಲ್ಲದೆ, ತಮ್ಮ ಬಣದ ಅಭ್ಯರ್ಥಿಯನ್ನು ಕಣಕ್ಕಿಳಿಸುವ ಘೋಷಣೆಯನ್ನು ಮಾಡಿತ್ತು.

### ಅರವಿಂದ ಲಿಂಬಾವಳಿ ರೆಬೆಲ್ ಆಗಿ ಸಂಚಲನ

ಇತ್ತೀಚೆಗೆ ಚಿಕ್ಕಬಳ್ಳಾಪುರ ಸಂಸದ ಡಾ.ಕೆ.ಸುಧಾಕರ್ ಅವರು ಕೂಡ ವಿಜಯೇಂದ್ರ ವಿರುದ್ಧ ಏಕವಚನದಲ್ಲಿ ವಾಗ್ದಾಳಿ ನಡೆಸುವ ಮೂಲಕ ಮಾಧ್ಯಮಗಳ ಮುಂದೆ ಬಹಿರಂಗವಾಗಿ ತಮ್ಮ ಅಸಮಾಧಾನ ಹೊರಹಾಕಿದ್ದರು. ವಿಜಯೇಂದ್ರ ಅವರ ಬಗ್ಗೆ ಹೈಕಮಾಂಡ್ ನಾಯಕರಿಗೆ ದೂರು ಕೊಡುವುದಾಗಿಯೂ ಹೇಳಿದ್ದರು. ಇದರ ನಡುವೆ ಅರವಿಂದ ಲಿಂಬಾವಳಿ ಕೂಡ ವಿಜಯೇಂದ್ರ ವಿರುದ್ಧ ರೆಬೆಲ್ ಆಗಿ ಸಂಚಲನ ಸೃಷ್ಟಿಸಿದ್ದಾರೆ.

ಪುಟ ವಿನ್ಯಾಸ: ಶೇಷಾದ್ರಿ ದನಗೂರು

**ಜೆಪಿ ನಡ್ಡಾಗೆ ಅರವಿಂದ ಲಿಂಬಾವಳಿ ಮನವಿ**






## ಕರ್ನಾಟಕದಲ್ಲಿ ರಾಜಕಾರಣ ಗಬ್ಬೆದ್ದು ಹೋಗಿದೆ: ಈಶ್ವರಪ್ಪ

• ಉದಯವಾಹಿನಿ, ವಿಜಯಪುರ



ಕರ್ನಾಟಕದಲ್ಲಿ ರಾಜಕಾರಣ ಗಬ್ಬೆದ್ದು ಹೋಗಿದೆ ಎಂದು ಮಾಜಿ ಡಿಸಿಎಂ ಕೆ.ಎಸ್ ಈಶ್ವರಪ್ಪ ಅಸಮಾಧಾನ ವ್ಯಕ್ತಪಡಿಸಿದರು.ವಿಜಯಪುರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿ, ಆ ಪಕ್ಷ ಈ ಪಕ್ಷ ಅಲ್ಲ, ಎಲ್ಲಾ ಪಕ್ಷಗಳು ಇದೆ ರೀತಿ ಆಗಿದೆ. ಎಲ್ಲಾ ಕಡೆ ಗುಂಪುಗಾರಿಕೆ ನಡೆದಿದೆ. ಹೈಕಮಾಂಡ್ ಏನು ಮಾಡುತ್ತಿದೆ ಗೊತ್ತಿಲ್ಲ. ಬಿಜೆಪಿ ಏನು ಮಾಡುತ್ತಿದೆ. ಹಿಂದುತ್ವದ ಅಡಿಯಲ್ಲಿ ಸಾಗಿತ್ತು. ಆದರೆ ಈಗ ಎಲ್ಲಾ ಜಾತಿ ಮೇಲೆ ನಡೆದಿದೆ. ಬಿಜೆಪಿ ಕಟ್ಟಿದ ಹಿರಿಯ ನಾಯಕರು ಈಗ ಸೈಡ್ ಲೈನ್ ಆಗಿದ್ದಾರೆ ಎಂದು ದೂರಿದರು.ಕಾಂಗ್ರೆಸ್‌ನಲ್ಲಿ ಕೂಡ ಗುಂಪುಗಾರಿಕೆ ಇದೆ. ಒಂದು ಕಡೆ ಸಿದ್ದರಾಮಯ್ಯ, ಇನ್ನೊಂದೆಡೆ ಡಿಕೆಶಿಯವರ ಗುಂಪುಗಳಿವೆ. ಡಿಕೆಶಿಗೆ ಪಕ್ಷದಲ್ಲಿ ಯಾವುದೆ ಬೆಲೆ ಇಲ್ಲ ಎಂದರು.ಗಂಗೆಯಲ್ಲಿ ಮುಳುಗುವುದರಿಂದ ಬಡತನ ಹೋಗುವುದಿಲ್ಲ ಎಂಬ ಮಲ್ಲಿಕಾರ್ಜುನ ಹೇಳಿಕೆಗೆ ಪ್ರತಿಕ್ರಿಯಿಸಿ, 144 ವರ್ಷದ ನಂತರ ಮಹಾ ಕುಂಭಮೇಳದಲ್ಲಿ ನಡೆದಿದೆ.

ಖರ್ಗೆಯವರೇ ಯಾಕೆ ಹಿಂದುಗಳ ಮನಸ್ಸು ನೋಯಿಸುತ್ತೀರಿ. ಹಿಂದು ಸಮಾಜವನ್ನು ಕೆಣಕಬೇಡಿ. ಕಾಂಗ್ರೆಸ್‌ನಿಂದ ಯಾರೆಲ್ಲ ಕುಂಭಮೇಳಕ್ಕೆ ಹೋಗಿದ್ದಾರೆ ಅವರನ್ನು ಕಿತ್ತು ಹಾಕಿ. ಖರ್ಗೆಯವರೇ ಬಾಯಿ ಮುಚ್ಕೊಂಡು ಇರಿ ಎಂದು ವಾಗ್ದಾಳಿ ನಡೆಸಿದರು.

## ಲಂಚಕ್ಕೆ ಬೇಡಿಕೆ ಆರೋಪ: ದಾವಣಗೆರೆ ವಿವಿ ಪ್ರಾಧ್ಯಾಪಕಿ ಬಂಧನ

• ಉದಯವಾಹಿನಿ, ದಾವಣಗೆರೆ

ಲಂಚ ಪಡೆದ ಹಿನ್ನಲೆ ದಾವಣಗೆರೆ ವಿಶ್ವವಿದ್ಯಾಲಯದ ಪ್ರೊ.ಗಾಯತ್ರಿ ದೇವರಾಜ್‌ರನ್ನು ಹೈದರಾಬಾದ್‌ನಲ್ಲಿ ಸಿಬಿಐ ಅಧಿಕಾರಿಗಳು ಬಂಧಿಸಿದ್ದಾರೆ. ನ್ಯಾಕ್ ಗ್ರೇಡ್ ಕೊಡಲು ಲಂಚಕ್ಕೆ ಬೇಡಿಕೆ ಇಟ್ಟಿದ್ದ ಆರೋಪ ಕೇಳಿಬಂದಿದೆ. ದಾಳಿ ವೇಳೆ 37 ಲಕ್ಷ ರೂ. ನಗದು, 6 ಲ್ಯಾಪ್‌ಟಾಪ್, ಐಫೋನ್ ವಶಕ್ಕೆ ಪಡೆದುಕೊಳ್ಳಲಾಗಿದೆ. ಭ್ರಷ್ಟಾಚಾರ, ಲಂಚ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಬಿಐ ತನಿಖೆ ನಡೆಸಿದೆ. ದಾವಣಗೆರೆ ವಿವಿಯ ಮೈಕ್ರೋ ಬಯಾಲಜಿ ಪ್ರಾಧ್ಯಾಪಕಿಯಾಗಿರುವ ಗಾಯತ್ರಿ, ನ್ಯಾಕ್ ಸಮಿತಿಯ ಸದಸ್ಯೆ ಕೂಡ ಆಗಿದ್ದಾರೆ. ಆಂಧ್ರದ ಗುಂಟೂರಿನ ಕೆಎಲ್‌ಇಎಫ್ ವಿಶ್ವವಿದ್ಯಾಲಯದ ನ್ಯಾಕ್ ಕಮಿಟಿ ಪರಿಶೀಲನೆ ವೇಳೆ ಲಂಚ ಪಡೆಯುವಾಗ ಬಂಧಿಸಲಾಗಿದೆ. ಲೋಕಾಯುಕ್ತ ಡಿವೈಎಸ್‌ಪಿ ಎಂದು ಹೇಳಿಕೊಂಡು ವಂಚನೆಗೆ ಯತ್ನಿಸಿದ್ದ ಆರೋಪಿಯನ್ನು ಪೊಲೀಸರು ಬಂಧಿಸಿರುವಂತಹ ಘಟನೆ ವಿಜಯಪುರದಲ್ಲಿ ನಡೆದಿದೆ. ಆರೋಪಿ ಮುರಿಗೆಪ್ಪ ಕುಂಬಾರ ಬಂಧಿತ ಆರೋಪಿ. ಕೆಬಿಜೆಎನ್‌ಎಲ್ ಎಇಇ ಅಶೋಕ್ ಬಿರಾದಾರ್‌ಗೆ ಕರೆ ಮಾಡಿದ್ದ ಆರೋಪಿ, ನಿಮ್ಮ ಮೇಲೆ ಲೋಕಾಯುಕ್ತ ಕೇಸ್ ಇದೆ ಎಂದು 70 ಸಾವಿರ ರೂ. ಹಣಕ್ಕೆ ಬೇಡಿಕೆಯಿಟ್ಟಿದ್ದ. ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ತಾಲ್ಲೂಕಿನ ಸದಲಗಾ ಗ್ರಾಮದ ಮುರಿಗೆಪ್ಪ, ಮಹಾರಾಷ್ಟ್ರದ ಶಿರೋಳನಲ್ಲಿ ಆರೋಪಿ ಮುರಿಗೆಪ್ಪ ಬಂಧಿಸಿ ವಿಚಾರಣೆ ಮಾಡಲಾಗಿದೆ.

# ಸಿಎಂ ಬದಲಾವಣೆ: ಭವಿಷ್ಯ ಹೇಳೋದನ್ನ ಯಾವಾಗ ಕಲಿತ್ರೋ ಗೊತ್ತಿಲ್ಲ: ಟಾಂಗ್

• ಅಂಥ ಯಾವುದೇ ಬೆಳವಣಿಗೆ ನಡೆದಿಲ್ಲ. ನಾವೆಲ್ಲ 5 ವರ್ಷ ಸಿದ್ದರಾಮಯ್ಯ ಅವರೇ ಸಿಎಂ ಆಗಿರ್ತಾರೆ ಅಂತ ಅಂದುಕೊಂಡಿದ್ದೇವೆ.

• ಉದಯವಾಹಿನಿ, ಬೆಂಗಳೂರು

**ವಿಪಕ್ಷ ನಾಯಕನಿಗೆ ಗೃಹಸಚಿವ ತಿರುಗೇಟು**

ಸಿಎಂ ಬದಲಾವಣೆ ಹೇಳಿಕೆಗೆ ಸಂಬಂಧಿಸಿದಂತೆ ವಿಧಾನಸಭೆ ವಿಪಕ್ಷ ನಾಯಕ ಆರ್.ಅಶೋಕ್‌ಗೆ ಗೃಹ ಸಚಿವ ಜಿ.ಪರಮೇಶ್ವರ್ ಟಾಂಗ್ ಕೊಟ್ಟಿದ್ದಾರೆ. ಅಶೋಕ್ ಯಾವಾಗ ಭವಿಷ್ಯ ಹೇಳೋದನ್ನ ಕಲಿತರೋ ಗೊತ್ತಿಲ್ಲ ಎಂದು ವ್ಯಂಗ್ಯವಾಡಿದರು.

ನವೆಂಬರ್‌ನಲ್ಲಿ ಸಿದ್ದರಾಮಯ್ಯ ಸಿಎಂ ಅವಧಿ ಮುಕ್ತಾಯ ಎಂಬ ಆರ್. ಅಶೋಕ್ ಹೇಳಿಕೆ ವಿಚಾರವಾಗಿ ಪ್ರತಿಕ್ರಿಯಿಸಿ, ಅವರು ಯಾವಾಗ ಭವಿಷ್ಯ ಹೇಳೋದನ್ನು ಕಲಿತರು ಎಂದು ನಮಗೆ ಗೊತ್ತಿಲ್ಲ. ಅಂಥ ಯಾವುದೇ ಬೆಳವಣಿಗೆ ನಡೆದಿಲ್ಲ. ನಾವೆಲ್ಲ 5 ವರ್ಷ ಸಿದ್ದರಾಮಯ್ಯ ಅವರೇ ಸಿಎಂ ಆಗಿರ್ತಾರೆ ಅಂತ ಅಂದುಕೊಂಡಿದ್ದೇವೆ. ಸಿಎಲ್‌ಪಿ ಸಭೆಯಲ್ಲಿ ಸಿಎಂ ಆಯ್ಕೆ ಆಯ್ತು. ಆ ಸಂದರ್ಭದಲ್ಲಿ ಅವರು ಎರಡೂವರೆ ವರ್ಷ ಮಾತ್ರ ಇರುತ್ತಾರೆ ಎಂದು ನಮಗೇನೂ ಹೈಕಮಾಂಡ್ ಹೇಳಿಲ್ಲ. ಹಾಗಾಗಿ ನಾವೆಲ್ಲ ಸಿದ್ದರಾಮಯ್ಯ ಅವರೇ ಐದು ವರ್ಷ ಸಿಎಂ ಆಗಿರುತ್ತಾರೆ ಎಂದು ಅಂದುಕೊಂಡಿದ್ದೇವೆ. ಈ ಮಧ್ಯೆ ಹೈಕಮಾಂಡ್ ಏನು ತೀರ್ಮಾನ ಮಾಡುತ್ತೋ ಗೊತ್ತಿಲ್ಲ ಎಂದು ಸ್ಪಷ್ಟಪಡಿಸಿದರು.



ಬಿ.ಆರ್.ಪಾಟೀಲ್ ರಾಜೀನಾಮೆ ವಿಚಾರವಾಗಿ ಮಾತನಾಡಿ, ಅವರು ಯಾಕೆ ರಾಜೀನಾಮೆ ಕೊಟ್ರು ಅಂತ ಗೊತ್ತಿಲ್ಲ. ಯಾಕೆ ರಾಜೀನಾಮೆ ಕೊಟ್ರು ಅಂತ ಸಿಎಂಗೆ ಹೇಳಿರುತ್ತಾರೆ. ಅವರಿಗೆ ಏನು ಅಸಮಾಧಾನ ಅಂತ ಗೊತ್ತಿಲ್ಲ. ರಾಜೀನಾಮೆ ಕೊಟ್ಟ ಬಗ್ಗೆಯೂ ಗೊತ್ತಿಲ್ಲ ಎಂದು ಹೇಳಿದರು.

ಮೈಕ್ರೋ ಫೈನಾನ್ಸ್ ಕಿರುಕುಳ ತಡೆಗೆ ಮಸೂದೆ ಬಗ್ಗೆ ಪ್ರತಿಕ್ರಿಯಿಸಿ, ಮಸೂದೆ ಮಾಡಿದ ಮೇಲೆ ಕೋರ್ಟ್‌ನಲ್ಲಿ ತಡೆ ಆಗಬಾರದು. ಈಗ ಇರುವ ಬೇರೆ ಬೇರೆ ಕಾನೂನುಗಳನ್ನು ಲಿಂಕ್ ಮಾಡಿ ಹೊಸ ಮಸೂದೆ ಮಾಡಲು ಅಧಿಕಾರಿಗಳಿಗೆ ಸಿಎಂ ಹೇಳಿದ್ದಾರೆ. ಆದಷ್ಟು ಬೇಗ ಮಸೂದೆಯ ಕರಡು ರಚನೆ ಮುಗಿದರೆ ರಾಜ್ಯಪಾಲರ ಒಪ್ಪಿಗೆಗೆ ಕಳಿಸಲಾಗುತ್ತದೆ ಎಂದರು.ಈ ಬಾರಿಯ ಕೇಂದ್ರದ ಬಜೆಟ್ ಕರ್ನಾಟಕ್ಕೆ ನಿರಾಶೆ ತಂದಿದೆ.

### ಬಜೆಟ್‌ನಲ್ಲಿ ಕೃಷಿ ಕ್ಷೇತ್ರದ ತಿರಸ್ಕಾರ ಮಾಡಲಾಗಿದೆ



ನಮ್ಮದು ಕೃಷಿ ಪ್ರಧಾನ ದೇಶ. ಇದನ್ನು ಪರಿಗಣಿಸಿ ಕೃಷಿ ಉತ್ಪಾದನೆ ಹೆಚ್ಚಿಸುವ ಕೃಷಿಕರಿಗೆ ಸಾಲ ಕೊಡುವ ಪ್ರಸ್ತಾಪ ಮಾಡಿಲ್ಲ. ಬಜೆಟ್‌ನಲ್ಲಿ ಕೃಷಿ ಕ್ಷೇತ್ರದ ತಿರಸ್ಕಾರ ಮಾಡಲಾಗಿದೆ. ಕೃಷಿಗೆ ಉತ್ತೇಜನ ಕೊಟ್ಟಿಲ್ಲ ಎಂದು ದೂರಿದರು. ಇಡೀ ದೇಶಕ್ಕೆ 50.68 ಲಕ್ಷ ಕೋಟಿ ರೂ. ಬಜೆಟ್ ಕೊಟ್ಟಿದ್ದಾರೆ. ಒಂದರಲ್ಲಿ 15 ಲಕ್ಷ ಕೋಟಿ ರೂ.ಗೆ ಹೆಚ್ಚು ಸಾಲ ತೋರಿಸಲಾಗಿದೆ. 200 ಲಕ್ಷ ರೂ.ಗೆ ಹೆಚ್ಚು ಸಾಲ ಇದೆ ಅದನ್ನು ತೀರಿಸಿಕೊಳ್ಳಲು ಪೂರಕ ಮಾಡಿಕೊಂಡಿದ್ದಾರೆ ಎಂದರು. ನಾನು ದೆಹಲಿಗೆ ಹೋಗಬೇಕು ಅಂತ ಅಂದುಕೊಂಡಿದ್ದೇನೆ. ಇನ್ನೂ ಯಾವಾಗ ಅಂತ ನಿಗದಿಯಾಗಿಲ್ಲ. ಆದ್ರೆ ದೆಹಲಿಗೆ ನಾನು ರಾಜಕೀಯ ಕಾರಣಕ್ಕೆ ಹೋಗ್ತಿಲ್ಲ. ಇಲಾಖೆ ಕೆಲಸಗಳಿಗೆ ದೆಹಲಿಗೆ ಹೋಗಬೇಕಿದೆ. ರಾಜಕೀಯ ಕಾರಣಕ್ಕೆ ಹೋಗಲ್ಲ, ಯಾಕಂದ್ರೆ ಇಲ್ಲಿಗೇ ನಮ್ಮ ಎಐಸಿಸಿ ಅಧ್ಯಕ್ಷರು, ಉಸ್ತುವಾರಿಗಳು ಬರ್ತಾರೆ. ಆಗಲೇ ಏನಾದ್ರೂ ಇದ್ದರೆ ಚರ್ಚೆ ಮಾಡುತ್ತೇವೆ ಎಂದು ಸ್ಪಷ್ಟಪಡಿಸಿದರು.

ಕರ್ನಾಟಕಕ್ಕೆ ಯಾವುದೇ ಕಾರ್ಯಕ್ರಮ ಕೊಟ್ಟಿಲ್ಲ. ಪ್ರಮುಖ ಬೇಡಿಕೆಗಳನ್ನು ಕೇಂದ್ರದ ಮುಂದೆ ಇಟ್ಟಿದ್ದವು. ಆಶ್ರಯ ಮನೆಗಳಿಗೆ ಹೆಚ್ಚಿನ ಹಣ ಕೇಳಿದ್ದವು. ಸಮಾಜ ಕಲ್ಯಾಣ ಇಲಾಖೆಗೆ ಇನ್ನೂ ಹೆಚ್ಚಿನ ಹಣ ಕೇಳಿದ್ದವು. ಕೇಂದ್ರದ ಯೋಜನೆಗಳಲ್ಲಿ ಹೆಚ್ಚಿನ ಅನುದಾನ ಕೇಳಿದ್ದವು. ಐಐಎಂ, ಐಐಟಿಗಳನ್ನು ರಾಜ್ಯಕ್ಕೆ ಕೊಡುವಂತೆ ಸಹ ಕೇಳಿದ್ದವು. ನೀರಾವರಿ ಯೋಜನೆಗಳಲ್ಲಿ ಭದ್ರ ಮೇಲ್ದಂಡೆಗೆ 5300 ಕೋಟಿ ರೂ. ಕೊಡೋದಾಗಿ ಕಳೆದ ಸಲ ಘೋಷಣೆ ಮಾಡಿದ್ದರು. ಈ ಸಲ ಅದರ ಪ್ರಸ್ತಾಪವೇ ಮಾಡಿಲ್ಲ ಎಂದು ಗುಡುಗಿದರು.ಮೇಕೆದಾಟು ಪ್ರಸ್ತಾಪ ಮಾಡಿಲ್ಲ. ಬೆಂಗಳೂರು ಅಭಿವೃದ್ಧಿಗೆ ಏನೂ ಕೊಟ್ಟಿಲ್ಲ. ಪೆರಿಫೆರಲ್, ಸಿಆರ್ ಆರ್ ಯೋಜನೆಗಳಿಗೂ ಏನೂ ಕೊಟ್ಟಿಲ್ಲ.

ಸಿಎಂ ಹೇಳಿದ ಹಾಗೆ ಕರ್ನಾಟಕಕ್ಕೆ ಕೇಂದ್ರ ಬಜೆಟ್ ನಲ್ಲಿ ಚೊಂಬು ಕೊಟ್ಟಿದೆ. ಬಜೆಟ್‌ನಲ್ಲಿ ಕರ್ನಾಟಕಕ್ಕೆ ಯಾವುದೇ ಸಹಾಯ ಆಗಿಲ್ಲ ಎಂದರು.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹8,449 /Gram24ct ₹7,745/Gram22ct ಬೆಳ್ಳಿ: ₹99.50/Gram



## ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

## ದ್ವಾದಶ ಉಪನಿಷತ್ ಪ್ರದೀಪಿಕೆ

ಈಶ ಕೇನ ಕಠ ಪ್ರಶ್ನ ಮುಂಡಕ ಮಾಂಡೂಕ್ಯ ಐತರೇಯ ತೈತ್ತಿರೀಯ ಬೃಹದಾರಣ್ಯಕ ಛಾಂದೋಗ್ಯ ಕೈವಲ್ಯ ಶ್ವೇತಾಶ್ವತರ ಹೀಗೆ ಹನ್ನೆರಡು ಉಪನಿಷತ್ತುಗಳ ಸಾರವನ್ನು ನಿರೂಪಿಸುವ ಕನ್ನಡದ ವೇದಾಂತ ಗ್ರಂಥ. ಮೂಲತಃ ಇದರ ಕರ್ತೃ ಬೆಂಗಳೂರಿನ ಜ್ಞಾನ ಜ್ಯೋತಿ ನಗರದ ಶಂಕರಾನಂದಾಶ್ರಮದ ಸಂಸ್ಥಾಪಕ ಶ್ರೀ ಪ್ರಬೋಧಾನಂದ ಸ್ವಾಮೀಜಿ. ಬಿಡಿ ಬಿಡಿಯಾಗಿದ್ದ ಈ ಪುಸ್ತಕಗಳನ್ನು ಪರಿಷ್ಕರಿಸಿ ಹೊಸ ರೂಪ ನೀಡಿ ಒಂದೇ ಪುಸ್ತಕಗೊಳಿಸಿದವರು ಅವರ ಪೂರ್ವಾಶ್ರಮದ ಸುಪುತ್ರಿ, ಅಧ್ಯಾತ್ಮ ಚಿಂತಕಿ ವಾಗ್ಮಿ ಲೇಖಕಿ ಶ್ರೀಮತಿ ಗೀತಾಶಂಕರ್. ಸರಳ ಭಾಷೆಯ ಈ ಕೃತಿ ಅಲ್ಲಲ್ಲಿ ಉಪನಿಷತ್ತುಗಳ ಆಯ್ದ ಮೂಲ ಮಂತ್ರಗಳನ್ನು ವಿವರಿಸುತ್ತದೆ. ಗಾತ್ರ : 1/8 ಡೆಮ್ಮಿ, ಪುಟ: 287. ಪ್ರಕಟಣೆ : ಡಿಸೆಂಬರ್ 2024. ಬೆಲೆ ನಿಗದಿಸಿಲ್ಲ. ಉಪನಿಷತ್ತುಗಳ ಸಾರವನ್ನು ಸರಳವಾಗಿ ಓದಿ ತಿಳಿಯಬೇಕೆನ್ನುವವರಿಗೆ ಇದೊಂದು ಉಪಯುಕ್ತ ಗ್ರಂಥ. ಇದಲ್ಲದೇ ಇನ್ನೂ ಹಲವಾರು ಕೃತಿಗಳು ಇವರಿಂದ ರಚನೆಗೊಂಡು ಅನುವಾದಗೊಂಡು ಪ್ರಕಟಗೊಂಡಿವೆ. ಕೃತಿಗಳಿಗಾಗಿ ಸಂಪರ್ಕಿಸಿ : ಶ್ರೀಮತಿ ಗೀತಾಶಂಕರ್, ಕಾರ್ಯದರ್ಶಿ, ಶಂಕರಾನಂದಾಶ್ರಮ – 99457 82036.

# ಬಿಹಾರ ಬಜೆಟ್ ಕನ್ನಡಿಗರಿಗೆ ಅನ್ಯಾಯ ಮಾಡಿದೆ

## ಸಿದ್ದರಾಮಯ್ಯ ಅವರು 5 ವರ್ಷ ಸಿಎಂ ಆಗಿರುತ್ತಾರೆ ಎನ್ನುವುದು ನಮ್ಮ ಭಾವನೆ ಎಂಬ ಪರಂ ಹೇಳಿಕೆ

• ಉದಯವಾಹಿನಿ, ಬೆಂಗಳೂರು

ಕೇಂದ್ರ ಬಜೆಟ್ ಮಂಡನೆ ಕುರಿತು ಸಚಿವ ಪ್ರಿಯಾಂಕ್ ಖರ್ಗೆ, ಇದು ಕೇಂದ್ರ ಬಜೆಟ್ ಅಲ್ಲ, ಬಿಹಾರ ಬಜೆಟ್, ಈ ಬಿಹಾರ ಬಜೆಟ್ ಕನ್ನಡಿಗರಿಗೆ ಅನ್ಯಾಯ ಮಾಡಿದೆ ಎಂದು ಕಿಡಿಕಾರಿದ್ದಾರೆ.

ಕೇಂದ್ರ ಬಜೆಟ್ ಬಗ್ಗೆ ಕಾಂಗ್ರೆಸ್ ಟೀಕೆಗೆ ಬಿಜೆಪಿ ಖಂಡನೆ ವಿಚಾರವಾಗಿ ಮಾತನಾಡಿ, ನಾವೇನೂ ಮೊಸರಲ್ಲಿ ಕಲ್ಲು ಹುಡುಕುತ್ತಿಲ್ಲ. ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರೇ ರಾಜ್ಯಕ್ಕೆ ಸಮರ್ಪಕ ತೆರಿಗೆ ಪರಿಹಾರ ಕೊಟ್ಟಿಲ್ಲ, ಬೊಮ್ಮಾಯಿ ಸಿಎಂ ಆಗಿದ್ದಾಗ ದೆಹಲಿಗೆ ಹೋಗಿ ತೆರಿಗೆ ಪರಿಹಾರ ಕೇಳಬೇಕು ಅಂದಿದ್ದರು. ಅಂಕಿ ಅಂಶ ಇಟ್ಟು ನಾವು ಕೇಂದ್ರದಿಂದ ತೆರಿಗೆ ಪರಿಹಾರ, ಅನುದಾನ ಕೇಳಿದ್ದೇವೆ. ಉದ್ಯೋಗ ಸೃಷ್ಟಿಸುವ ರಾಜ್ಯಗಳಿಗೆ ಹೆಚ್ಚು ಅನುದಾನ ನೀಡಿದರೆ ದೇಶಕ್ಕೆ ಒಳ್ಳೆಯದಾಗುತ್ತದೆ. ಬಿಹಾಕ್ಕೆ ಈ ಸಲ ಜಾಸ್ತಿ ಒತ್ತು ಕೊಟ್ಟಿದ್ದಾರೆ. ಹಿಂದಿನ ಬಜೆಟ್‌ನಲ್ಲಿ ಆಂಧ್ರಪ್ರದೇಶದ ಅಮರಾವತಿಗೆ ಆದ್ಯತೆ ನೀಡಿದ್ದರು. ಇದು ರಾಜಕೀಯ ಬಜೆಟ್ ಆಗಿದೆ. ಕೇಂದ್ರ ದೇಶ ಕಟ್ಟುವ, ಉದ್ಯೋಗ ಸೃಷ್ಟಿಸುವ ಬಜೆಟ್ ಕೊಟ್ಟಿಲ್ಲ ಎಂದು ದೂರಿದ್ದಾರೆ.



> ದಲಿತ ಸಚಿವರ ಸಭೆ ನಡೆಸಿದ್ದಾರೆಂಬ ವಿಚಾರವಾಗಿ, ನಾವು ಸಭೆ ಸೇರಿಲ್ಲ. ನಮ್ಮ ನಾಯಕರು ಕೂತು ಮಾತಾಡೋದು ತಪ್ಪಾ ನಾನು ಪ್ರಸಾದ್ ಅಬ್ಬಯ್ಯ ಹುಬ್ಬಳ್ಳಿಯಲ್ಲಿ ಸೇರಿದ್ದೆವು. ಹಾಗಂತ ನಮ್ಮದೊಂದು ಬಣ ಆಗಿಹೋಗುತ್ತಾ ದಲಿತ ಸಮುದಾಯದ ಕೆಲ ವಿಚಾರಗಳ ಚರ್ಚೆಗೆ ಸೇರೋಣ ಎಂದು ನಿರ್ಧರಿಸಿದ್ದೆವು. ಆಗ ವರಿಷ್ಠರು ನಾವೂ ಬರುತ್ತೇವೆ ಅಂದಿದ್ದಕ್ಕೆ ಅದು ಮುಂದೂಡಿಕೆ ಆಯ್ತು. ಅದನ್ನೇ ಪರಮೇಶ್ವರ್ ಅವರು ತಿಳಿಸಿದ್ದರು. ಪರಮೇಶ್ವರ್ ದೆಹಲಿಗೆ ಯಾಕೆ ಹೋಗುತ್ತಿದ್ದಾರೋ ಗೊತ್ತಿಲ್ಲ. ನಾವು ನಮ್ಮ ಇಲಾಖೆ ಕೆಲಸಕ್ಕೆ ಹೋಗುತ್ತಿದ್ದೇವೆ. ನಮ್ಮ ಮಾತು ಇಲ್ಲೇ ನಡೆಯಲ್ಲ. ಇನ್ನೂ ಅಲ್ಲೇನು ನಡೆಯುತ್ತದೆ. ಇಲಾಖೆ ಕೆಲಸಕ್ಕೆ ಅಷ್ಟೇ ಹೋಗ್ತಿದ್ದೇನೆ ಎಂದು ಸ್ಪಷ್ಟಪಡಿಸಿದ್ದಾರೆ.

**ವಿಧಾನಸಭಾ ವಿಪಕ್ಷ ನಾಯಕ ಆರ್.ಅಶೋಕ್ ಹೇಳಿಕೆ**

ಸಿದ್ದರಾಮಯ್ಯ ಅವರು 5 ವರ್ಷ ಸಿಎಂ ಆಗಿರುತ್ತಾರೆ ಎನ್ನುವುದು ನಮ್ಮ ಭಾವನೆ ಎಂಬ ಪರಮೇಶ್ವರ್ ಹೇಳಿಕೆ ವಿಚಾರವಾಗಿ, ಎಲ್ಲರೂ ಹೈಕಮಾಂಡ್‌ಗೆ ಬಿಟ್ಟಿದ್ದಾರೆ. ಹೈಕಮಾಂಡ್ ನಿರ್ಧಾರ ಮಾಡುತ್ತದೆ. ಖರ್ಗೆ ಸಾಹೇಬ್ರು ಹೇಳಿದ್ರು, ಸಿದ್ದರಾಮಯ್ಯನವರು ಹೇಳಿದ್ರು. ಡಿ.ಕೆ.ಶಿವಕುಮಾರ್ ಅವರು ಅದನ್ನೇ ಹೇಳಿದ್ದಾರೆ. ಆ ವಿಚಾರ ಹೈಕಮಾಂಡ್‌ಗೆ ಬಿಟ್ಟಿರೋದು ಎಂದು ಸ್ಪಷ್ಟಪಡಿಸಿದ್ದಾರೆ.

ಸಿಎಂ ಬದಲಾವಣೆ ವಿಚಾರವಾಗಿ ವಿಧಾನಸಭಾ ವಿಪಕ್ಷ ನಾಯಕ ಆರ್.ಅಶೋಕ್ ಹೇಳಿಕೆ ಬಗ್ಗೆ ಮಾತನಾಡಿ, ನಮ್ಮ ಪಕ್ಷದಲ್ಲಿ ಯಾವುದೇ ಗೊಂದಲ ಇಲ್ಲ, ಬದಲಾವಣೆ ಪ್ರಶ್ನೆಯೂ ಇಲ್ಲ. ಅಶೋಕ್ ಅವರು ಅವರ ಪಕ್ಷದ ಭವಿಷ್ಯದ ಬಗ್ಗೆ ಮೊದಲು ಮಾತನಾಡಲಿ ಎಂದಿದ್ದಾರೆ.

## ಲಕ್ಕಿ ಬಾಸ್ಕರ್ ಸಿನಿಮಾ ಸ್ಟೈಲ್‌ನಲ್ಲಿ 24 ಕೋಟಿ ವಂಚನೆ ಸಿಸಿಬಿ ತನಿಖೆ

• ಉದಯವಾಹಿನಿ, ಬೆಂಗಳೂರು

ಲಕ್ಕಿ ಬಾಸ್ಕರ್ ಸಿನಿಮಾ ಸ್ಟೈಲ್‌ನಲ್ಲಿ 24 ಕೋಟಿ ರೂ. ವಂಚನೆ ಮಾಡಿರುವ ಘಟನೆಯೊಂದು ಸಿಸಿಬಿ ಅಧಿಕಾರಿಗಳ ತನಿಖೆ ವೇಳೆ ಬೆಳಕಿಗೆ ಬಂದಿದೆ.ವಂಚಕಿ ರೇಖಾ ದಂಪತಿ, ಆರೋಪಿ ಚೇತನ್ ಎಂಬ ಆಡಿಟರ್‌ನ ಜೊತೆಯಲ್ಲಿ ಸೇರಿಕೊಂಡು ಹಲವರಿಗೆ ಆಮಿಷವೊಡ್ಡಿ ವಂಚನೆ ಮಾಡಿದ್ದಾರೆ. ತನಿಖೆ ವೇಳೆ 14 ಬೇರೆ ಬೇರೆ ಬ್ಯಾಂಕ್ ಅಕೌಂಟ್‌ನಿಂದ 24 ಕೋಟಿ ರೂ. ಹಣ ವಹಿವಾಟು ಆಗಿರುವುದು ಪತ್ತೆಯಾಗಿದೆ. ಲಕ್ಕಿ ಬಾಸ್ಕರ್ ಸಿನಿಮಾದಲ್ಲಿ ನಟ ದುಲ್ಕರ್ ಸಲ್ಮಾನ್ ಹೇಗೆ ಬ್ಯಾಂಕ್ ಹಣ ಬಳಸಿಕೊಂಡು ಲಾಟರಿಯಲ್ಲಿ ಬರುವ ಹಣವನ್ನ ಬ್ಯಾಂಕ್‌ಗೆ ಜಮೆ ಮಾಡಿ ಲಾಭ ಮಾಡಿಕೊಳ್ಳುತ್ತಾನೆ. ಹಾಗೆಯೇ ಆರೋಪಿ ರೇಖಾ ದಂಪತಿ ಲಾಟರಿ ಹೆಸರಿನಲ್ಲಿ ಬಂದ ಹಣವನ್ನು 14 ಬೇರೆ ಬೇರೆ ಅಕೌಂಟ್‌ಗಳಿಗೆ ಹಾಕಿ ಲಾಭ ಪಡೆದುಕೊಂಡಿದ್ದಾರೆ. ಇನ್ನೂ ರೇಖಾ ದಂಪತಿ ಕಂಪನಿಯಲ್ಲಿ ಆಡಿಟರ್ ಆಗಿ ಕೆಲಸ ಮಾಡುತ್ತಿರೋದಾಗಿ ತಿಳಿಸಿ ಚೇತನ್ ಹಲವರಿಗೆ ಅಪ್ರೋಚ್ ಮಾಡಿ ಹಣ ಪಡೆದು ಪಂಗನಾಮ ಹಾಕಿದ್ದಾನೆ.ಉಳಿದಂತೆ ಆರೋಪಿಗಳ ವಿರುದ್ಧ ಮತ್ತಷ್ಟು ಪ್ರಕರಣಗಳು ದಾಖಲಾಗುವ ಸಾಧ್ಯತೆಯಿದ್ದು, ಆರೋಪಿಗಳ ವಿರುದ್ಧ ದೂರು ದಾಖಲಿಸಲು ಹಲವರು ಬರುತ್ತಿರುವುದಾಗಿ ತಿಳಿದು ಬಂದಿದೆ. ಸದ್ಯ ಸಿಸಿಬಿ ಪೊಲೀಸರು ತನಿಖೆ ಮುಂದುವರೆಸಿದ್ದಾರೆ



## ಕರ್ನಾಟಕಕ್ಕೆ ಬಜೆಟ್‌ನಲ್ಲಿ ಏನೇನೂ ಸಿಕ್ಕಿಲ್ಲ: ಡಿಕೆಶಿ

• ಉದಯವಾಹಿನಿ, ಬೆಂಗಳೂರು

ಕೇಂದ್ರ ಬಜೆಟ್ ನಲ್ಲಿ ಕರ್ನಾಟಕಕ್ಕೆ ಎಲ್ಲಾ ರೀತಿಯಿಂದಲೂ ಅನ್ಯಾಯವಾಗಿದೆ. ಕರ್ನಾಟಕಕ್ಕೆ ಏನು ಕೊಡುಗೆ ಸಿಕ್ಕಿದೆ ಎಂದು ಕೇಂದ್ರ ಮಂತ್ರಿಗಳು, ರಾಜ್ಯದ ಬಿಜೆಪಿ ಸಂಸದರು ಉತ್ತರ ನೀಡಬೇಕು ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಹರಿಹಾಯ್ದರು. ದಿಲ್ಲಿಯ ಕರ್ನಾಟಕ ಭವನದಲ್ಲಿ ಮಾಧ್ಯಮಗಳ ಪ್ರಶ್ನೆಗೆ ಶನಿವಾರ ಡಿಕೆ ಶಿವಕುಮಾರ್ ಅವರು ಪ್ರತಿಕ್ರಿಯೆ ನೀಡಿದರು.

ನಮ್ಮ ರಾಜ್ಯದ ಶಾಸಕರಿಂದ ಆಯ್ಕೆಯಾದ ನಿರ್ಮಲಾ ಸೀತಾರಾಮನ್ ಅವರು ಇಷ್ಟೊಂದು ನಿರಾಸೆ ಉಂಟು ಮಾಡುತ್ತಾರೆ ಎಂದು ಭಾವಿಸಿರಲಿಲ್ಲ. ಇಡೀ ದೇಶದಲ್ಲಿಯೇ ತೆರಿಗೆ ಕಟ್ಟುವುದರಲ್ಲಿ ಕರ್ನಾಟಕ ಎರಡನೇ ಸ್ಥಾನದಲ್ಲಿದೆ. ಐಟಿ ರಫ್ತಿನಲ್ಲಿ ಮೊದಲ ಸ್ಥಾನದಲ್ಲಿ ಇದ್ದೇವೆ. ರಾಜ್ಯದ ಪ್ರಮುಖ ಯೋಜನೆಗಳಿಗೆ ಅನುದಾನ ನೀಡಿಲ್ಲ. ಯಾವುದೇ ಚುನಾವಣೆಗಳು ಹತ್ತಿರವಿಲ್ಲದ ಕಾರಣಕ್ಕೆ ಯಾವುದೇ ಯೋಜನೆ ಘೋಷಣೆ ಮಾಡಿಲ್ಲ ಅನ್ನಿಸುತ್ತದೆ. ರಾಜ್ಯಕ್ಕೆ ಏನಾದರು ಲಾಭ ಆಗಿದೆಯೇ ಎಂದು ರಾಜ್ಯವನ್ನು ಪ್ರತಿನಿಧಿಸುವವರು ಹೇಳಬೇಕು ಎಂದು ತಿವಿದರು.

12 ಲಕ್ಷ ಆದಾಯ ಮಿತಿ ಇರುವವರಿಗೆ ತೆರಿಗೆ ವಿನಾಯಿತಿ ನೀಡಿರುವುದು ಕಡಿಮೆ ಜನಕ್ಕೆ ಲಾಭವಾಗಲಿದೆ. ದೇಶದ ಶೇ. 5 ರಷ್ಟು ಜನ, ಸರ್ಕಾರಿ ಉದ್ಯೋಗ ಇರುವವರು ಮಾತ್ರ ಆದಾಯ ತೆರಿಗೆ ಪಾವತಿ ಮಾಡುತ್ತಾರೆ. ತೆರಿಗೆ ಸ್ಲಾಬ್ ಅನ್ನೇ ತೆಗೆದು ಹಾಕಬೇಕಾಗಿತ್ತು, ಅದು ಆಗಿಲ್ಲ. ಬಜೆಟ್ ಓದಬೇಕಿತ್ತು ಅದಕ್ಕೆ ಓದಿದ್ದಾರೆ ಎಂದರು.



**ಎರಡನೇ ಅತಿ ಹೆಚ್ಚು ಜಿಎಸ್‌ಟಿ ಸಂಗ್ರಹ**

> ಯಾವ ಕ್ಷೇತ್ರಕ್ಕೂ ಬಜೆಟ್‌ನಿಂದ ಅನುಕೂಲವಾಗಿಲ್ಲ. ಕೃಷಿ ಉದ್ಯೋಗ ಹೇಳಿದಂತೆ ಮೂಲಸೌಕರ್ಯಕ್ಕೂ ಉಪಯೋಗವಾಗಿಲ್ಲ. ಗ್ರೇಟರ್ ಬೆಂಗಳೂರಿಗೆ ಬೇಡ, ಬೆಂಗಳೂರಿಗೆ ಅನುದಾನ ಅವಶ್ಯಕತೆ ಇತ್ತು. ವಾಜಪೇಯಿ ಅವರ ಕಾಲದಲ್ಲಿ ಇಡೀ ದೇಶವನ್ನು ಬೆಂಗಳೂರು ಮುಖಾಂತರ ನೋಡಲಾಗುತ್ತದೆ ಎಂದು ಹೇಳಲಾಗುತ್ತಿತ್ತು. ಬ್ರಾಂಡ್ ಬೆಂಗಳೂರಿಗೆ ಬಜೆಟ್ ಅಲ್ಲಿ ಅನುಕೂಲವಾಗಿಲ್ಲವೇ ಎಂದು ಮರು ಪ್ರಶ್ನಿಸಿದಾಗ, ಬ್ರಾಂಡ್ ಬೆಂಗಳೂರು ಹಾಗೂ ಗ್ರೇಟರ್ ಬೆಂಗಳೂರು ಎರಡು ಬೇರೆ ಬೇರೆ ವಿಚಾರ ಎಂದರು.

## ಲಕ್ಷಾಂತರ ಮೌಲ್ಯದ ನಕಲಿ ಸಿಗರೇಟ್ ಸೀಜ್

• ಉದಯವಾಹಿನಿ, ಬೆಂಗಳೂರು

ಧೂಮಪಾನ ಆರೋಗ್ಯಕ್ಕೆ ಹಾನಿಕರ ಅಂತಾ ಗೊತ್ತಿದ್ದರೂ ಜನ ಮಾತ್ರ ಅದನ್ನು ಬಿಡಲ್ಲ. ಜನರ ಈ ಚಟವನ್ನೇ ಬಂಡವಾಳ ಮಾಡಿಕೊಂಡಿರುವ ಕೆಲ ಕಿರಾತಕರು ಸಿಗರೇಟ್‌ಗಳನ್ನು ಸಹ ನಕಲಿ ಮಾಡಿ ಮಾರಾಟ ಮಾಡುತ್ತಿದ್ದಾರೆ. ಈಗ ಪೊಲೀಸರು ಇಂತಹ ಒಂದು ಜಾಲವನ್ನು ಭೇದಿಸಿ ಆರೋಪಿಗಳಿಗೆ ಬಿಸಿ ಮುಟ್ಟಿಸಿದ್ದಾರೆ.

ಇತ್ತೀಚೆಗೆ ಯಾವುದು ನಕಲಿ, ಯಾವುದು ಅಸಲಿ ಅನ್ನೋದೆ ಗೊತ್ತಾಗ್ತಿಲ್ಲ. ತಿನ್ನೋ ಆಹಾರದಿಂದ ಹಿಡಿದು ವಾಶ್ ರೂಂ ತೊಳೆಯೋ ವಸ್ತುಗಳು ಸಹ ಕಲಬೆರಕೆಯಾಗುತ್ತಿವೆ. ಅದರಲ್ಲೂ ಸಿಲಿಕಾನ್ ಸಿಟಿಯಲ್ಲಿ ನಕಲಿ ವಸ್ತುಗಳ ಹಾವಳಿ ಜೋರಾಗಿದೆ. ಅನೇಕ ಬಾರಿ ಬೆಂಗಳೂರು ಪೊಲೀಸರು ನಕಲಿ ವಸ್ತುಗಳನ್ನು ಸೀಜ್ ಮಾಡ್ತಾನೆ ಇರ್ತಾರೆ. ಈಗ ಅಂತಹದ್ದೇ ಒಂದು ನಕಲಿ ಪ್ರಾಡಕ್ಟ್ ಮಾರಾಟ ಮಾಡುತ್ತಿದ್ದ ಜಾಲವೊಂದನ್ನು ವಿಲ್ಸನ್ ಗಾರ್ಡನ್ ಪೊಲೀಸರು ಭೇದಿಸಿದ್ದಾರೆ. ಯೆಸ್. ಸಿಲಿಕಾನ್ ಸಿಟಿ ಬೆಂಗಳೂರಿಗೆ ರಾಷ್ಟ್ರ ರಾಜಧಾನಿ ದೆಹಲಿಯಿಂದ ನಕಲಿ ಸಿಗರೇಟ್ ಸ್ಮಗ್ಲಿಂಗ್ ಮಾಡಲಾಗುತ್ತಿತ್ತು. ಐಟಿಸಿ ಕಂಪನಿಯ ಸಿಗರೇಟ್ ಮಾದರಿಯಲ್ಲಿ ಅಸಲಿ ಸಿಗರೇಟ್ ತಲೆ ಮೇಲೆ ಹೊಡೆದ ಹಾಗೆ ನಕಲಿ ಸಿಗರೇಟ್ ತಯಾರಿಸಲಾಗುತ್ತಿತ್ತು. ಜ್ಯೂಸ್ ಪ್ಯಾಕೆಟ್?ಗಳು ತುಂಬಿರುವ ಬಾಕ್ಸ್ ಅಂತಾ ಹೇಳಿಕೊಂಡು ನಕಲಿ ಸಿಗರೇಟ್ ಸಪ್ಲೈ ಮಾಡಲಾಗುತ್ತಿತ್ತು. ಇದರಿಂದ ಐಟಿಸಿ ಕಂಪನಿಗೆ ಲಕ್ಷಾಂತರ ರೂಪಾಯಿ ನಷ್ಟವಾಗಿತ್ತು.

ಇನ್ನೂ ನಕಲಿ ಸಿಗರೇಟ್ ಮಾರಾಟ ಮಾಡುತ್ತಿರುವ ಆರೋಪಿಗಳ ಕಳ್ಳಾಟ ಐಟಿಸಿ ಕಂಪನಿಗೆ ಗೊತ್ತಾದ ಕೂಡಲೇ ವಿಲ್ಸನ್ ಗಾರ್ಡನ್ ಪೊಲೀಸರಿಗೆ ಮಾಹಿತಿ ಕೊಟ್ಟಿದ್ದಾರೆ. ಪೊಲೀಸರು ಅಷ್ಟೇ ಕ್ಷಿಪ್ರ ಗತಿಯಲ್ಲಿ ಕಾರ್ಯಾಚರಣೆ ನಡೆಸಿ ಕೇರಳ ಮೂಲದ ಯೂಸಫ್ ಎಂಬಾತನನ್ನು ಬಂಧಿಸಿ 27 ಲಕ್ಷ ರೂ. ಮೌಲ್ಯದ ನಕಲಿ ಸಿಗರೇಟ್ ಸೀಜ್ ಮಾಡಿದ್ದಾರೆ. ಜೊತೆಗೆ ನಕಲಿ ಸಿಗರೇಟ್ ಸಾಗಿಸಲು ಬಳಸಿದ್ದ ಒಂದು ಗೂಡ್ಸ್ ವಾಹನ, ಆರೋಪಿ ಬಳಸುತ್ತಿದ್ದ ಕಾರನ್ನು ಸೀಜ್ ಮಾಡಿ ತನಿಖೆ ಮುಂದುವರೆಸಿದ್ದಾರೆ. ಒಟ್ಟಾರೆ ಒಂದೇ ದಿನ ಬೆಂಗಳೂರಿಗೆ ಇಷ್ಟೊಂದು ಮೌಲ್ಯದ ನಕಲಿ ಸಿಗರೇಟ್ ಬರುತ್ತಿದೆ ಅಂದರೆ ತಿಂಗಳಲ್ಲಿ ಎಷ್ಟು ಸಪ್ಲೈ ಆಗುತ್ತಿದೆ ಎಂಬುದನ್ನು ಊಹೆ ಮಾಡಿಕೊಳ್ಳಲು ಸಾಧ್ಯವಿಲ್ಲ. ಇನ್ನಾದರೂ ಸಂಬಂಧಪಟ್ಟವರು ಈ ನಕಲಿ ವಸ್ತುಗಳ ಹಾವಳಿ ತಡೆಯಬೇಕಿದೆ.



ಉದಯವಾಹಿನಿ ಚಿತ್ರ

## ಬ್ಯಾಂಕ್ ನಿಂದ ಹಣ ಡ್ರಾ ಮಾಡಿಕೊಂಡವರನ್ನು ದೋಚುತ್ತಿದ್ದ ಇಬ್ಬರು ಅರೆಸ್ಟ್

• ಉದಯವಾಹಿನಿ, ಬೆಂಗಳೂರು

ಬ್ಯಾಂಕ್‌ನಲ್ಲಿ ಹಣ ಡ್ರಾ ಮಾಡಿಕೊಂಡು ತೆರಳುತ್ತಿದ್ದಂತವರನ್ನೇ ಟಾರ್ಗೆಟ್ ಮಾಡಿಕೊಳ್ಳುತ್ತಿದ್ದಂತ ಈ ಗ್ಯಾಂಗ್, ಅವರಿಂದ ಹಣ ದೋಚಿ ಪರಾರಿಯಾಗುತ್ತಿತ್ತು. ಹೀಗೆ ಹಣ ದೋಚುತ್ತಿದ್ದಂತ ಇಬ್ಬರು ಕಳ್ಳರನ್ನು ಪೊಲೀಸರು ಎಡೆಮುರಿಕಟ್ಟಿ ಬಂಧಿಸಿದ್ದಾರೆ.ಬೆಂಗಳೂರಿನ ದೇವನಹಳ್ಳಿ ಹಾಗೂ ವಿಜಯಪುರದ ಪೊಲೀಸರು ಜಂಟಿ ಕಾರ್ಯಾಚರಣೆ ನಡೆಸಿ ಬ್ಯಾಂಕ್ ನಿಂದ ಹಣ ಡ್ರಾ ಮಾಡಿಕೊಂಡು ಹೋಗುತ್ತಿದ್ದಂತವರನ್ನು ಟಾರ್ಗೆಟ್ ಮಾಡಿ, ಅವರಿಂದ ಹಣ ದೋಚುತ್ತಿದ್ದಂತ ಸಂಬಂಧ ಹರಿಕೃಷ್ಣ ಹಾಗೂ ಸುಧಾಕರ್ ಎಂಬ ಆರೋಪಿಗಳನ್ನು ದೇವನಹಳ್ಳಿ ಠಾಣೆಯ ಪೊಲೀಸರು ಅರೆಸ್ಟ್ ಮಾಡಿದ್ದಾರೆ.ಬಂಧಿತ ಆರೋಪಿಗಳನ್ನು 2 ಲಕ್ಷ ನಗದನ್ನು ವಶಕ್ಕೆ ಪಡೆದಿದ್ದಾರೆ. ಓಜಿ ಕುಪ್ಪಂ ಗ್ಯಾಂಗ್ ಎಂಬುದಾಗಿಯೇ ಕರೆಯಲಾಗುತ್ತಿದ್ದಂತ ಗ್ಯಾಂಗ್ ನ ಸದಸ್ಯರು ಬಂಧಿತ ಇಬ್ಬರು ಆರೋಪಿಗಳಾಗಿದ್ದಾರೆ.

## ಕೇಂದ್ರ ಕಚೇರಿಗೆ ಮಹಾರಾಷ್ಟ್ರ ಸಾರಿಗೆ ಸಚಿವ ಪ್ರತಾಪ್ ಸರ್ ನಾಯಕ್ ಭೇಟಿ

• ಉದಯವಾಹಿನಿ, ಬೆಂಗಳೂರು

ಮಹಾರಾಷ್ಟ್ರ ಸಾರಿಗೆ ಸಚಿವ ಪ್ರತಾಪ್ ಸರ್‌ನಾಯಕ್, ಮಾಧವ್ ಕುಸೆಕರ್ ಭಾಆಸೇ, ಎಂ.ಎಸ್.ಆರ್.ಟಿ.ಸಿ ಉಪಾಧ್ಯಕ್ಷರು ಹಾಗೂ ವ್ಯವಸ್ಥಾಪಕ ನಿರ್ದೇಶಕರು ಹಾಗೂ ಅಧಿಕಾರಿಗಳ ತಂಡವು ಕರಾರಸಾ ನಿಗಮದ, ಘಟಕ, ಕಾರ್ಯಾಗಾರ ಹಾಗೂ ಕೇಂದ್ರ ಕಛೇರಿಗೆ ಭೇಟಿ ನೀಡಿದರು.

ಈ ಸಂದರ್ಭದಲ್ಲಿ ನಿಗಮದಲ್ಲಿನ ಪ್ರತಿಷ್ಠಿತ ವಾಹನಗಳ ಕಾರ್ಯಾಚರಣೆ, ಕಾರ್ಮಿಕ ಕಲ್ಯಾಣ ಉಪಕ್ರಮಗಳು, ವಾಣಿಜ್ಯ ಆದಾಯ, ಬಸ್ಸುಗಳ 2–3, ಕೆ.ಎಸ್.ಆರ್.ಟಿ.ಸಿ. ಆರೋಗ್ಯ, ರೂ1 ಕೋಟಿ ಅಪಘಾತ ವಿಮೆ, ಇತರೆ ಉಪಕ್ರಮಗಳ ಬಗ್ಗೆ ರಾಮಲಿಂಗಾ ರೆಡ್ಡಿ ಸಾರಿಗೆ ಮತ್ತು ಮುಜರಾಯಿ ಸಚಿವರು, ಕರ್ನಾಟಕ ಸರ್ಕಾರ ಮತ್ತು ರಿಜ್ವಾನ್ ನವಾಬ್ ಮಾನ್ಯ ಉಪಾಧ್ಯಕ್ಷರು, ಕರಾರಸಾ. ನಿಗಮ., ಸರ್ಕಾರದ ಕಾರ್ಯದರ್ಶಿಗಳು, ಸಾರಿಗೆ ಇಲಾಖೆ, ವ್ಯವಸ್ಥಾಪಕ ನಿರ್ದೇಶಕರು, ಕರಾರಸಾ ನಿಗಮ ಅವರೊಂದಿಗೆ ವಿವರವಾಗಿ ಚರ್ಚಿಸಿ ಮಾಹಿತಿ ಪಡೆದುಕೊಂಡರು.

ಮುಂದುವರೆದು, ನಿಗಮದ ಬೆಂಗಳೂರು ಕೇಂದ್ರೀಯ ವಿಭಾಗದ ಘಟಕ-2ಕ್ಕೆ ಭೇಟಿ ನೀಡಿದ ತಂಡವು ಐರಾವತ ಕ್ಲಬ್ ಕಾಸ್, ಐರಾವತ ಕ್ಲಬ್ ಕಾಸ್ 2.0, ಅಂಬಾರಿ ಡ್ರಿಮ್ ಕ್ಲಾಸ್, ಪಲ್ಲಕ್ಕಿ, ಅಂಬಾರಿ ಉತ್ಸವ, ಫ್ಲೈ ಬಸ್, ನಗರ ಸಾರಿಗೆ, ರಾಜಹಂಸ ಹಾಗೂ ಅಶ್ವಮೇಧ ವಾಹನಗಳನ್ನು ವೀಕ್ಷಿಸಿದರು. ಘಟಕ ಹಾಗೂ ಕಾರ್ಯಾಗಾರ ನಿರ್ವಹಣೆ, ವಾಹನಗಳಿಗೆ ನೀಡಿರುವ ಬ್ರಾಂಡಿಗ್ ಹಾಗೂ ವಾಹನಗಳ ಪುನಶ್ವೇತನ ಕಾರ್ಯ ಹಾಗೂ ಹಲವು ಉಪಕ್ರಮಗಳ ಕುರಿತು ಮುಕ್ತಕಂಠದಿಂದ ಮೆಚ್ಚುಗೆ ವ್ಯಕ್ತಪಡಿಸಿದರು.ಈ ಸಂದರ್ಭದಲ್ಲಿ ವ್ಯವಸ್ಥಾಪಕ ನಿರ್ದೇಶಕರು ಬೆಂ.ಮ.ಸಾ.ಸಂಸ್ಥೆ, ಹಾಗೂ ಮಾನ್ಯ ನಿರ್ದೇಶಕರು (ಸಿ ಮತ್ತು ಜಾ), ಅಪರ ಸಾರಿಗೆ ಆಯುಕ್ತರು, (ಪ್ರವರ್ತನ) (ದಕ್ಷಿಣ), ಹಾಗೂ ಎಂ.ಎಸ್.ಆರ್.ಟಿ.ಸಿ. ತಾಂತ್ರಿಕ, ಸಂಚಾರ ಹಾಗೂ ಕಾಮಗಾರಿ ಇಲಾಖೆಯ ಹಿರಿಯ ಅಧಿಕಾರಿಗಳು ಹಾಗೂ ಕರಾರಸಾ ನಿಗಮದ ಅಧಿಕಾರಿಗಳು ಉಪಸ್ಥಿತಿರಿದ್ದರು.



ಉದಯವಾಹಿನಿ ಚಿತ್ರ

## ಪೊಲೀಸ್ ಅಧಿಕಾರಿಯ ಸೋಗಿನಲ್ಲಿ ಯುವತಿಯರ ರೂಮ್‌ಗೆ ನುಗ್ಗಿ ಕಿರುಕುಳ

• ಉದಯವಾಹಿನಿ, ಬೆಂಗಳೂರು

ಕ್ರೈಂ ಬ್ರಾಂಚ್ ಪೊಲೀಸ್ ಅಧಿಕಾರಿಯ ಸೋಗಿನಲ್ಲಿ ಯುವತಿಯರಿಗೆ ಕಿರುಕುಳ ಕೊಡುತ್ತಿದ್ದ ಆರೋಪಿಯನ್ನು ಪೊಲೀಸರು ಬಂಧಿಸಿದ್ದಾರೆ. ಬಂಧಿತ ಆರೋಪಿಯನ್ನು ರಮೇಶ್ ಎಂದು ಗುರುತಿಸಲಾಗಿದೆ. ಆರೋಪಿ ಹೋಮ್‌ಗಾರ್ಡ್ ಆಗಿದ್ದು, ಪೊಲೀಸ್ ಅಧಿಕಾರಿಯಂತೆ ಯುವತಿಯರ ರೂಮ್‌ಗೆ ರಾತ್ರಿ ವೇಳೆ ನುಗ್ಗುತ್ತಿದ್ದ. ಅಲ್ಲದೇ ಯುವತಿಯರ ಬಳಿ ಅಶ್ಲೀಲವಾಗಿ ಮಾತನಾಡಿ ಕಿರುಕುಳ ಕೊಡುತ್ತಿದ್ದ. ಕೇರಳದಿಂದ ಬೆಂಗಳೂರಿಗೆ ಬಂದು ಕಾಲೇಜೊಂದರಲ್ಲಿ 2ನೇ ವರ್ಷದ ಬಿಎಸ್‌ಸಿ ಓದುತ್ತಿದ್ದ ವಿದ್ಯಾರ್ಥಿನಿ ಮೂವರು ಸ್ನೇಹಿತೆಯರ ಜೊತೆ ರೂಮ್ ಮಾಡಿಕೊಂಡಿದ್ದಳು. ಜ.25ರಂದು ಊಟ ಮಾಡಿ ಮಲಗಿದ್ದಾಗ ಆರೋಪಿ ಬಾಗಿಲು ತಟ್ಟಿದ್ದ. ಬಾಗಿಲು ತೆಗೆದಾಗ ನಾನು ಪೊಲೀಸ್ ಅಂತ ಹೇಳಿ ಒಳಗಡೆ ಹೋಗಿದ್ದ. ಆತ ಒಳಗೆ ಬರುತ್ತಿದ್ದಂತೆ ಯುವತಿ ಆಕೆಯ ಸ್ನೇಹಿತನಿಗೆ ಕರೆ ಮಾಡಿ ಪೊಲೀಸರು ಬಂದಿದ್ದಾರೆ ಎಂದು ತಿಳಿಸಿದ್ದಳು. ಆರೋಪಿ ಡೋರ್ ಲಾಕ್ ಮಾಡಿ, ಎಲ್ಲರ ಮೊಬೈಲ್‌ನ್ನು ಹೆದರಿಸಿ ಕಸಿದುಕೊಂಡಿದ್ದ. ಬಳಿಕ ಯುವತಿ ಕೈಯಲ್ಲಿದ್ದ ಹಾವಿನ ಟ್ಯಾಟೋ ನೋಡಿ ಅಶ್ಲಿಲವಾಗಿ ಮಾತನಾಡಿದ್ದ. ಅಲ್ಲದೇ ಯುವತಿ ಕರೆ ಮಾಡಿದ್ದಕ್ಕೆ ಬಂದಿದ್ದ ಆಕೆಯ ಸ್ನೇಹಿತರ ಮೊಬೈಲ್ ವಶಕ್ಕೆ ಪಡೆದು, ಯುವತಿರಿಗೆ ಮಂಡಿಕಾಲಿನಲ್ಲಿ ನಿಲ್ಲಿಸಿ ಟಾರ್ಚರ್ ನೀಡಿದ್ದ. 1:30 ಸುಮಾರಿಗೆ ಇನ್ನೊಬ್ಬ ಯುವಕ ಬಂದು ಪೊಲೀಸರಿಗೆ ಕರೆ ಮಾಡಿ ಮಾಹಿತಿ ನೀಡಿದ್ದ. ಸ್ಥಳಕ್ಕೆ ಸದಾಶಿವನಗರಠಾಣೆ ಪೊಲೀಸರು ಬರುತ್ತಿದ್ದಂತೆ ವ್ಯಕ್ತಿಯ ಬಣ್ಣ ಬಯಲಾಗಿದೆ.

## ಅರಣ್ಯ ಹಕ್ಕು ಕಾಯಿದೆಯಡಿ ಅರ್ಜಿ ಸಲ್ಲಿಸಿದ್ದವರಿಗೆ ಬಿಗ್ ಶಾಕ್

• ಉದಯವಾಹಿನಿ, ಬೆಂಗಳೂರು

ಅರಣ್ಯ ಹಕ್ಕು ಕಾಯಿದೆ ಅಡಿ ಸೌಲಭ್ಯಕ್ಕಾಗಿ ಪಟ್ಟಾ ಜಮೀನು ಹೊಂದಿರುವವರೂ ಅರ್ಜಿ ಹಾಕಿದ್ದರೆ ಪರಿಶೀಲಿಸಿ ಕೈಬಿಡುವಂತೆ ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ. ಖಂಡ್ರೆ ಸೂಚಿಸಿದ್ದಾರೆ.

ಈ ಸಂಬಂಧ ಅಪರ ಮುಖ್ಯ ಕಾರ್ಯದರ್ಶಿಯವರಿಗೆ ಸೂಚನೆ ನೀಡಿರುವ ಸಚಿವರು, ಅರಣ್ಯ ಹಕ್ಕು ಕಾಯಿದೆ ಅಡಿ ಅರ್ಹ ಫಲಾನುಭವಿಗಳಿಗೆ ಅಂದರೆ 2005ರ ಡಿಸೆಂಬರ್ 13ಕ್ಕೆ ಮೊದಲು ಜೀವನೋಪಾಯಕ್ಕಾಗಿ ಅರಣ್ಯ ಭೂಮಿ ಬಳಸುತ್ತಿರುವ ಮತ್ತು ಅರಣ್ಯದಲ್ಲಿ ವಾಸಿಸುತ್ತಿರುವವರಿಗೆ ಅನ್ಯಾಯವಾಗದಂತೆ ರಾಜ್ಯ ಸರ್ಕಾರ ಕ್ರಮ ವಹಿಸಿದೆ ಎಂದು ತಿಳಿಸಿದ್ದಾರೆ. ಅರಣ್ಯ ಹಕ್ಕು ಕಾಯಿದೆ ಅಡಿ ಇನ್ನೂ ಸಾವಿರಾರು ಅರ್ಜಿಗಳು ಇತ್ಯರ್ಥವಾಗದೆ ಬಾಕಿ ಉಳಿದಿರುವುದನ್ನು ಗಂಭೀರವಾಗಿ ಪರಿಗಣಿಸಲಾಗಿದೆ ಎಂದು ತಿಳಿಸಿರುವ ಸಚಿವರು, ಕಂದಾಯ ಭೂಮಿ (ಪಟ್ಟಾ ಜಮೀನು) ಮಾಲಿಕತ್ವ ಹೊಂದಿರುವವರೂ ಅರಣ್ಯ ಹಕ್ಕು ಕಾಯಿದೆ ಅಡಿ ಅರ್ಜಿ ಸಲ್ಲಿಸಿದ್ದರೆ ಪರಿಶೀಲಿಸಿ ಕ್ರಮ ವಹಿಸಲು ಸೂಚಿಸಿದ್ದಾರೆ. ಅರಣ್ಯ ಹಕ್ಕು ಕಾಯಿದೆ ಅಡಿ ಅರ್ಜಿ ಸಲ್ಲಿಸಿರುವವರಿಂದ ತಮಗಾಗಲೀ, ತಮ್ಮ ಕುಟುಂಬದ ಸದಸ್ಯರಿಗಾಗಲೀ 2005ರ ಡಿಸೆಂಬರ್ 13ಕ್ಕೆ ಮೊದಲು ಅರಣ್ಯ ಮತ್ತು ಪಟ್ಟಾ ಜಮೀನು ಸೇರಿದಂತೆ 3 ಎಕರೆಗಿಂತ ಹಚ್ಚು ಜಮೀನು ಇರಲಿಲ್ಲ ಎಂಬ ಬಗ್ಗೆ ಸ್ವಯಂ ಘೋಷಣೆ (ಡಿಕ್ಲರೇಷನ್) ಬರೆಸಿಕೊಳ್ಳಲು ಮತ್ತು 'ನಮೂನೆ-ಎ'ಯಲ್ಲಿರುವ ಅಂಶಗಳನ್ನು ಕಡ್ಡಾಯವಾಗಿ ಮತ್ತು ನಿಯಮಾನುಸಾರ ಪರಿಶೀಲಿಸಲು ಹಾಗೂ ತಪ್ಪು/ಸುಳ್ಳು ಮಾಹಿತಿ ಒದಗಿಸಿ ಪ್ರೇಮ್ ಅರ್ಜಿ ಸಲ್ಲಿಸಿರುವವರನ್ನು ಅರಣ್ಯ ಹಕ್ಕು ಕಾಯಿದೆ ಫಲಾನುಭವಿಗಳ ಪಟ್ಟಿಯಿಂದ ಕೈಬಿಡಲು ಸೂಚಿಸಿದ್ದಾರೆ.



## ಕಾರಿನ ಡೋರ್ ತಗುಲಿ ಕೆಳಗೆ ಬಿದ್ದ ಮಹಿಳೆ ಮೇಲೆ ಬಿಎಂಟಿಸಿ ಬಸ್ ಹರಿದು ಸಾವು

• ಉದಯವಾಹಿನಿ, ಬೆಂಗಳೂರು

ಮದುವೆ ಮುಗಿಸಿ ಕೊಂಡು ಸಹೋದರನ ಜೊತೆ ಮಹಿಳೆ ಹೋಂಡಾ ಆ್ಯಕ್ಟಿವಾದಲ್ಲಿ ತೆರಳುತ್ತಿದ್ದಾಗ ಕಾರಿನ ಡೋರ್ ತಗುಲಿದ ಪರಿಣಾಮ ಕೆಳಗೆ ಬಿದ್ದ ಮಹಿಳೆ ಮೇಲೆ ಬಿಎಂಟಿಸಿ ಬಸ್ ಹರಿದು ಅವರು ಸ್ಥಳದಲ್ಲೇ ಸಾವಿಗೀಡಾಗಿರುವ ಘಟನೆ ಬ್ಯಾಟರಾಯನಪುರ ಸಂಚಾರಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ರಾತ್ರಿ ನಡೆದಿದೆ.

ಕಾಮಕ್ಷಿಪಾಳ್ಯದ ನಿವಾಸಿ ಸರೋಜ (50) ಮೃತಪಟ್ಟ ಮಹಿಳೆ. ಇವರ ಸಹೋದರ ಮತ್ತೊಂದು ಬದಿ ಬಿದ್ದಿದ್ದರಿಂದ ಸಣ್ಣ ಪುಟ್ಟ ಗಾಯಗೊಂಡು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಸರೋಜ ಅವರು ಸಹೋದರನ ಜೊತೆ ಜ್ಞಾನಭಾರತಿಯಲ್ಲಿ ಮದುವೆ ಮುಗಿಸಿಕೊಂಡು ರಾತ್ರಿ 9.45 ರ ಸುಮಾರಿನಲ್ಲಿ ಮನೆಗೆ ಹಿಂದಿರುಗುತ್ತಿದ್ದಾಗ ಮೈಸೂರು ರಸ್ತೆಯ ಪಂತರಪಾಳ್ಯದ ಪೂರ್ಣಿಮ ಟಿಂಬರ್ ಮುಂಭಾಗ ರಸ್ತೆಯಲ್ಲಿ ನಿಂತಿದ್ದ ಕಾರಿನ ಡೋರ್ನ್ನು ಚಾಲಕ ನಿರ್ಲಕ್ಷತೆಯಿಂದ ಏಕಾಏಕಿ ತೆಗೆದ ಪರಿಣಾಮ ಡೋರ್ಗೆ ಇವರ ಬೈಕ್ ತಾಗಿದ್ದರಿಂದ ನಿಯಂತ್ರಣ ತಪ್ಪಿ ಇಬ್ಬರೂ ಕೆಳಗೆ ಬಿದ್ದಿದ್ದಾರೆ.ಅದೇ ವೇಳೆಗೆ ಹಿಂದಿನಿಂದ ಬರುತ್ತಿದ್ದ ಬಿಎಂಟಿಸಿ ಬಸ್ ಮಹಿಳೆ ಮೇಲೆ ಹರಿದ ಪರಿಣಾಮ ಅವರು ಸ್ಥಳದಲ್ಲಿ ಮೃತಪಟ್ಟಿದ್ದಾರೆ.ಸುದ್ದಿ ತಿಳಿದು ಬ್ಯಾಟರಾಯನಪುರ ಸಂಚಾರಿ ಠಾಣೆ ಪೊಲೀಸರು ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿದ್ದಾರೆ.ಮೃತ ಸರೋಜಾ ಅವರ ಮೃತದೇಹವನ್ನು ಪೊಲೀಸರು ವಿಕ್ಟೋರಿಯಾ ಆಸ್ಪತ್ರೆಗೆ ಮರಣೋತ್ತರ ಪರೀಕ್ಷೆಗೆ ರವಾನಿಸಿದ್ದು, ಇಂದು ಮೃತದೇಹವನ್ನು ವಾರಸುದಾರರಿಗೆ ಹಸ್ತಾಂತರಿಸಲಾಗಿದೆ.

ಈ ಬಗ್ಗೆ ಬ್ಯಾಟರಾಯನಪುರ ಸಂಚಾರಿ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.



**ಸಣ್ಣ ಪುಟ್ಟ ಗಾಯ ಪ್ರಾಣಾಪಾಯದಿಂದ ಪಾರು**

## ಮಣಿಪಾಲ್ ಆಸ್ಪತ್ರೆಯಲ್ಲಿ ಚಿಕಿತ್ಸೆ, ಮನೆಗೆ ವಾಪಸ್

• ಉದಯವಾಹಿನಿ, ಬೆಂಗಳೂರು

ಎಡಗಾಲಿನ ಮಂಡಿಯಲ್ಲಿ ನೋವು ಕಾಣಿಸಿಕೊಂಡ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಣಿಪಾಲ್ ಆಸ್ಪತ್ರೆಯಲ್ಲಿ ತಪಾಸಣೆಗೆ ಒಳಗಾದರು.ತಪಾಸಣೆ ನಡೆಸಿದ ವೈದ್ಯರು ಈ ಹಿಂದೆ ಲೆಗಮೆಂಟ್ ಶಸ್ತ್ರಚಿಕಿತ್ಸೆ ನಡೆದ ಜಾಗದ ಮೇಲೆ ಒತ್ತಡ ಬಿದ್ದಿರುವುದರಿಂದ ನೋವು ಕಾಣಿಸಿಕೊಂಡಿದೆ. ಉಳಿದಂತೆ ಯಾವುದೇ ಸಮಸ್ಯೆ ಇಲ್ಲ ಎಂದು ತಿಳಿಸಿದ್ದಾರೆ.ಎರಡು ದಿನ ಪ್ರಯಾಣ ಮಾಡದೆ ಮನೆಯಲ್ಲೇ ವಿಶ್ರಾಂತಿ ಪಡೆಯುವಂತೆ ವೈದ್ಯರು ಸಲಹೆ ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿಗಳ ಇಂದಿನ ಎಲ್ಲಾ ಕಾರ್ಯಕ್ರಮಗಳನ್ನು ರದ್ದುಗೊಳಿಸಲಾಗಿದೆ.ಇನ್ನು ಮಧ್ಯಾಹ್ನ ಆಸ್ಪತ್ರೆಯಿಂದ ಕಾವೇರಿ ನಿವಾಸಕ್ಕೆ ಮರಳಿದ ಸಿಎಂ ಸಿದ್ದರಾಮಯ್ಯ, ಎರಡು ದಿನ ವಿಶ್ರಾಂತಿ ಪಡೆಯಲಿದ್ದಾರೆ.



## ದೇಶದಲ್ಲಿ ಹುಲಿಗಳ ಸಂಖ್ಯೆ, ವಾಸ ಪ್ರದೇಶದ ವ್ಯಾಪ್ತಿ ಹೆಚ್ಚಳ

### ಕಳೆದ 20 ವರ್ಷಗಳಲ್ಲಿ ಹುಲಿ ವಾಸ ಪ್ರದೇಶದ ವ್ಯಾಪ್ತಿ ಶೇ.30ರಷ್ಟು ವಿಸ್ತರಣೆ

• ಉದಯವಾಹಿನಿ, ಬೆಂಗಳೂರು

ದೇಶದಲ್ಲಿ ಹುಲಿಗಳ ಸಂಖ್ಯೆ ಮಾತ್ರವಲ್ಲ, ಅವುಗಳ ವಾಸ ಪ್ರದೇಶದ ವ್ಯಾಪ್ತಿಯೂ ಹೆಚ್ಚಾಗಿದೆ ಎಂದು ಅಧ್ಯಯನ ತಿಳಿಸಿದೆ.ಸೈನ್ಸ್ ಜರ್ನಲ್ನಲ್ಲಿ ಪ್ರಕಟವಾದ ಜನರು ಮತ್ತು ಬಡತನದ ಮಧ್ಯೆ ಹುಲಿಗಳ ಚೇತರಿಕೆ' ಎಂಬ ಅಧ್ಯಯನವು ಕಳೆದ ಎರಡು ದಶಕಗಳಲ್ಲಿ ಹುಲಿ ಆಕ್ರಮಿತ ಪ್ರದೇಶವು ಶೇಕಡಾ 30 ರಷ್ಟು ಹೆಚ್ಚಾಗಿದೆ.ಹುಲಿಗಳು ಈಗ ಅರಣ್ಯದ ಒಳಭಾಗಗಳನ್ನು ಸಂತಾನೋತ್ಪತ್ತಿ ಸ್ಥಳಗಳಾಗಿ ಬಳಸುತ್ತಿವೆ ಮತ್ತು ತಮ್ಮ ಪ್ರದೇಶವನ್ನು ವಿಸ್ತರಿಸುತ್ತಿವೆ ಎಂದು ಅಧ್ಯಯನವು ಹೇಳಿದೆ.

ಟೈಗರ್ ರಿಕವರಿ ಅಮಿಡ್ ಪೀಪಲ್ ಆಂಡ್ ಪವರ್ಟಿಬಿ ಎಂಬ ವರದಿಯಲ್ಲಿ ಕಳೆದ 20 ವರ್ಷಗಳಲ್ಲಿ ಹುಲಿ ವಾಸ ಪ್ರದೇಶದ ವ್ಯಾಪ್ತಿ ಶೇ 30 ರಷ್ಟು ವಿಸ್ತರಣೆಯಾಗಿದೆ ಎಂದು ತಿಳಿಸಲಾಗಿದೆ. ಹುಲಿಗಳು ದಟ್ಟಾರಣ್ಯ ಪ್ರದೇಶಗಳನ್ನು ಸಂತಾನೋತ್ಪತ್ತಿ ಸ್ಥಳಗಳಾಗಿ ಮಾಡಿಕೊಳ್ಳುತ್ತಿದ್ದು ತಮ ವಾಸ ಪ್ರದೇಶವನ್ನು ವಿಸ್ತರಿಸುತ್ತಿವೆ. ಹುಲಿಗಳು ಆಕ್ರಮಿಸಿಕೊಂಡಿರುವ ಪ್ರದೇಶವು ವಾರ್ಷಿಕವಾಗಿ 2,929 ಚದರ ಕಿ.ಮೀ. ವೇಗದಲ್ಲಿ ಹೆಚ್ಚುತ್ತಿದೆ. ಇದು ಸುಮಾರು 1,38,200 ಚದರ ಕಿ.ಮೀ.ನಷ್ಟು ದೊಡ್ಡ ಜಾಗತಿಕ ಜನಸಂಖ್ಯೆಯ ಆವಾಸಸ್ಥಾನವಾಗಿದೆ ಎಂದು ಅಧ್ಯಯನವು ಹೇಳಿದೆ, ಹುಲಿಗಳು ಮಾನವ-ಮುಕ್ತ ಮತ್ತು ಬೇಟೆ-ಸಮೃದ್ಧ ಸಂರಕ್ಷಿತ ಪ್ರದೇಶಗಳನ್ನು ನಿರಂತರವಾಗಿ ಆಕ್ರಮಿಸುತ್ತಲೇ ಇವೆ.

ಅದೇ ಸಮಯದಲ್ಲಿ ಸುಮಾರು 60 ಮಿಲಿಯನ್ ಜನರೊಂದಿಗೆ ಹಂಚಿಕೊಳ್ಳಲಾದ ಹತ್ತಿರದ ಸಂಪರ್ಕಿತ ಆವಾಸಸ್ಥಾನಗಳನ್ನು ವಸಾಹತುವನ್ನಾಗಿ ಮಾಡಿಕೊಂಡಿವೆ ಎಂದು ಅಧ್ಯಯನವು ಹೇಳಿದೆ. ಕರ್ನಾಟಕ, ಮಧ್ಯಪ್ರದೇಶ, ಉತ್ತರಾಖಂಡ ಮತ್ತು ಮಹಾರಾಷ್ಟ್ರಗಳಲ್ಲಿ ಅತಿ ಹೆಚ್ಚು ಹುಲಿಗಳು ವಾಸಿಸುತ್ತಿವೆ ಎಂದು ಅಧ್ಯಯನವು ಹೇಳಿದೆ. 2023 ರಲ್ಲಿ ಬಿಡುಗಡೆಯಾದ 2023 ರ ಹುಲಿ ಅಂದಾಜು ವರದಿಯು 2018 ಕ್ಕೆ ಹೋಲಿಸಿದರೆ ಈ ರಾಜ್ಯಗಳಲ್ಲಿ ಹುಲಿಗಳ ಸಂಖ್ಯೆಯಲ್ಲಿ ಏರಿಕೆಯನ್ನು ತೋರಿಸಿದೆ. ಮಾನವ ಸಾಂದ್ರತೆ ತುಲನಾತ್ಮಕವಾಗಿ ಕಡಿಮೆ ಇದ್ದಾಗಲೂ (ಒಡಿಶಾ, ಛತ್ತೀಸ್ಗಢ, ಜಾರ್ಖಂಡ್, ಈಶಾನ್ಯ ರಾಜ್ಯಗಳು ಮತ್ತು ಆಗ್ನೆಯ ಏಷ್ಯಾದಲ್ಲಿ) ಹುಲಿಗಳು ಅಳಿವಿನಂಚಿನಲ್ಲಿವೆ ಅಥವಾ ವ್ಯಾಪಕವಾದ ಬುಷ್ಮೀಟ್ ಸೇವನೆ ಅಥವಾ ವಾಣಿಜ್ಯ ಬೇಟೆಯಾಡುವಿಕೆಯ ಪರಂಪರೆಯನ್ನು ಹೊಂದಿರುವ ಪ್ರದೇಶಗಳಲ್ಲಿ ಇಲ್ಲವಾಗಿದ್ದವು ಎಂದು ಅಧ್ಯಯನವು ಹೇಳಿದೆ. ಬಡತನ ಮತ್ತು ಹೆಚ್ಚಿನ ಸಶಸ್ತ್ರ ಸಂಘರ್ಷ ಇರುವ ರಾಜ್ಯಗಳಿಗೆ ಹೋಲಿಸಿದರೆ ಹೆಚ್ಚು ಸಮೃದ್ಧಿ ಇರುವ ರಾಜ್ಯಗಳಲ್ಲೇ ಹುಲಿ ವಾಸ ಪ್ರದೇಶ ವ್ಯಾಪ್ತಿ ಹೆಚ್ಚಾಗಿದೆ ಎಂದು ವೈಲ್ಡ್ ಲೈಫ್ ಇನ್ಸಿಟ್ಯೂಟ್ ಆಫ್ ಇಂಡಿಯಾ ಮತ್ತು ಅಧ್ಯಯನದ ಸಹ-ಲೇಖಕರಾದ ಯದುವೇದ್ರದೇವ್ ಝಾಲಾ ತಿಳಿಸಿದ್ದಾರೆ. ಅರಣ್ಯ ಪ್ರದೇಶ ಹೆಚ್ಚಾಗದಿದ್ದರೂ ಹುಲಿಗಳ ವಾಸ ಪ್ರದೇಶದ ವ್ಯಾಪ್ತಿ ಹೆಚ್ಚಿದೆ. ಪ್ರಸ್ತುತ ಶೇ 40 ರಷ್ಟು ಹುಲಿಗಳು ಮಾನವ ವಾಸಕ್ಕೆ ಹತ್ತಿರವಿರುವ ಪ್ರದೇಶಗಳಲ್ಲಿ ವಾಸಿಸುತ್ತವೆ ಎಂದು ಅವರು ತಿಳಿಸಿದ್ದಾರೆ.



**ಸುಮಾರು 1,38,200 ಚದರ ಕಿ.ಮೀ.ನಷ್ಟು**

> ಭಾರತೀಯ ವನ್ಯಜೀವಿ ಸಂಸ್ಥೆಯ ಯಾದವೇಂದ್ರದೇವ್ ಝಾಲಾ ಮತ್ತು ಅಧ್ಯಯನದ ಸಹ-ಲೇಖಕ, ಬಡತನ ಮತ್ತು ಹೆಚ್ಚಿನ ಸಂಘರ್ಷವಿರುವ ರಾಜ್ಯಗಳಿಗೆ ಹೋಲಿಸಿದರೆ ಸಮೃದ್ಧಿಯನ್ನು ತೋರಿಸುವ ರಾಜ್ಯಗಳಲ್ಲಿ ಹುಲಿ ಆಕ್ರಮಿತ ಪ್ರದೇಶಗಳು ಹೆಚ್ಚಾಗಿದೆ. ಅರಣ್ಯ ಪ್ರದೇಶಗಳು ಹೆಚ್ಚಿಲ್ಲದಿದ್ದರೂ, ಹುಲಿಗಳು ಆಕ್ರಮಿಸಿಕೊಂಡಿರುವ ಪ್ರದೇಶ ಹೆಚ್ಚಾಗಿದೆ. ಅವು ತಮ್ಮ ವ್ಯಾಪ್ತಿಯನ್ನು ವಿಸ್ತರಿಸಿಕೊಂಡಿವೆ. ಸುಮಾರು 40% ಹುಲಿಗಳು ಮಾನವ ವಾಸಸ್ಥಳಕ್ಕೆ ಹತ್ತಿರವಿರುವ ಪ್ರದೇಶಗಳಲ್ಲಿ ವಾಸಿಸುತ್ತವೆ ಎಂದು ಹೇಳುತ್ತಾರೆ.

## ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಕಚೇರಿಗೆ ಮುತ್ತಿಗೆ ಯತ್ನ




• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನಲ್ಲಿ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಕಚೇರಿಗೆ NSUI ವಿದ್ಯಾರ್ಥಿ ಸಂಘಟನೆ ಕಾರ್ಯಕರ್ತರು ಮುತ್ತಿಗೆ ಯತ್ನಿಸಿರುವ ಘಟನೆ ನಡೆದಿದೆ. ಕೇಂದ್ರ ಸರ್ಕಾರದ ಬಜೆಟ್ ನಲ್ಲಿ ಕರ್ನಾಟಕಕ್ಕೆ ಅನ್ಯಾಯ ಖಂಡಿಸಿ ಬೆಂಗಳೂರಿನ ಅಲಿ ಆಸ್ಕರ್ ರಸ್ತೆಯಲ್ಲಿರುವ ರಾಜ್ಯಸಭಾ ಸದಸ್ಯರ ಕಚೇರಿಗೆ ಎನ್ ಎಸ್ ಯುಐ ವಿದ್ಯಾರ್ಥಿ ಸಂಘಟನೆ ಮುತ್ತಿಗೆ ಯತ್ನಿಸಿದೆ.ಬಜೆಟ್ ನಲ್ಲಿ ಕರ್ನಾಟಕಕ್ಕೆ ಅನ್ಯಾಯ ಮಾಡಲಾಗಿದೆ ಎಂದು ನಿರ್ಮಲಾ ಸೀತಾರಾಮನ್, ಬಿಜೆಪಿ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಈ ವೇಳೆ ಪೊಲೀಸರು ಪ್ರತಿಭಟನಾಕಾರರನ್ನು ವಶಕ್ಕೆ ಪಡೆದು ಬಿಎಂಟಿಸಿ ಬಸ್ ನಲ್ಲಿ ಕರೆದೊಯ್ದಿದ್ದಾರೆ.

# ಘೋಷಣೆಯಾಗದ ಐಐಟಿ, ಮೇಲ್ದರ್ಜೆಗೇರದ ವಿಮಾನ ನಿಲ್ದಾಣ

## • ಕೇಂದ್ರವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಮಂಡಿಸಿದ ಬಜೆಟ್‌ನಲ್ಲಿ ಮೈಸೂರು ಜಿಲ್ಲೆಯ ಪಾಲಿಗೆ ಶೂನ್ಯ ಸಾಧನೆ

• ಉದಯವಾಹಿನಿ ಮೈಸೂರು

ಕೇಂದ್ರವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಮಂಡಿಸಿದ ಬಜೆಟ್‌ನಲ್ಲಿ ಮೈಸೂರು ಜಿಲ್ಲೆಯ ಪಾಲಿಗೆ ಶೂನ್ಯ ಸಾಧನೆಯಾಗಿದೆ. ಮೈಸೂರು ರಾಜ್ಯದಲ್ಲಿ ಬೆಂಗಳೂರು ನಂತರ ವೇಗವಾಗಿ ಬೆಳೆಯುತ್ತಿರುವ ನಗರವಾಗಿದ್ದು, ಸಾರಿಗೆ, ಪ್ರವಾಸೋದ್ಯಮ, ಕೈಗಾರಿಕೆ, ಆರೋಗ್ಯ ಮತ್ತು ಶಿಕ್ಷಣ ಕ್ಷೇತ್ರದಲ್ಲಿ ಸಾಕಷ್ಟು ಸುಧಾರಣೆ ಕಾಣಬೇಕಿದೆ. ಮೈಸೂರು ಪ್ರವಾಸೋದ್ಯಮ ನಗರಿ. ಪ್ರಮುಖ ಧಾರ್ಮಿಕ ಕೇಂದ್ರ ಚಾಮುಂಡೇಶ್ವರಿ ಬೆಟ್ಟ ಹೆಸರುವಾಸಿ ತಾಣವಾಗಿದೆ. ಆದರೂ ಮೈಸೂರು ಪ್ರವಾಸೋದ್ಯಮಕ್ಕೆ ಪೂರಕವಾಗುವ ಯಾವುದೇ ಯೋಜನೆ ಘೋಷಣೆಯಾಗಿಲ್ಲ.

ಅಲ್ಲದೆ, ಮೈಸೂರು-ಬೆಂಗಳೂರು ಎಕ್ಸ್‌ಪ್ರೆಸ್ ವೇ ಆದ ಬಳಿಕ ಪ್ರಮುಖ ಕೈಗಾರಿಕೆಗಳ ತಮ್ಮ ಶಾಖೆಯನ್ನು ಮೈಸೂರಿನಲ್ಲೂ ತೆರೆಯುತ್ತಿವೆ. ಆದರೆ, ಕೈಗಾರಿಕೆಗಳ ಬೆಳವಣಿಗೆ ಯಾವುದೇ ಹೊಸ ಪ್ರಸ್ತಾಪ ಇಲ್ಲ.

ಅಲ್ಲದೆ, ಮೈಸೂರಿನ ತಂಬಾಕು ಬೆಳೆಗಾರರ ಹಿತರಕ್ಷಣೆ ಹಾಗೂ ಮೈಸೂರು, ಚಾಮರಾಜನಗರ ಭಾಗದ ರೇಷ್ಮೆ ಬೆಳೆಗಾರರಿಗೆ ಪೂರಕವಾಗುವಂತೆ ಸುಸಜ್ಜಿತ ಮಾರುಕಟ್ಟೆ ವ್ಯವಸ್ಥೆ ಕಲ್ಪಿಸುವಿಕೆ ಬಗ್ಗೆಯೂ ಯಾವುದೇ ಘೋಷಣೆ ಆಗಿಲ್ಲ. ರಾಜ್ಯದಲ್ಲಿ ರೈಲ್ವೆ ಮಾರ್ಗ ಹೊಂದಿರದ ಜಿಲ್ಲೆಯಾದ ಕೊಡಗಿಗೆ ರೈಲ್ವೆ ಸಂಪರ್ಕ ಕಲ್ಪಿಸಲು 2019 ರ ಬಜೆಟ್‌ನಲ್ಲಿ 1854.62 ಕೋಟಿ ಘೋಷಣೆ ಮಾಡಲಾಗಿತ್ತು. ಆದರೆ, ಈ ಯೋಜನೆ ನನೆಗುದಿಗೆ ಬಿದ್ದಿದೆ. ಮೈಸೂರಿನಿಂದ ಕುಶಾಲನಗರದವರೆಗೆ ರೈಲು ಮಾರ್ಗಕ್ಕೆ ಯೋಜನೆ ರೂಪಿಸಲಾಗಿತ್ತು.

ಆದರೆ, ಈವರೆಗೂ ಹಣ ಬಿಡುಗಡೆಯಾಗಿಲ್ಲ, ಪರಿಣಾಮ ಭೂ ಸ್ವಾಧೀನ ಪ್ರಕ್ರಿಯೆ ಹಾಗೆಯೇ ಉಳಿದಿದೆ.ಯುನೆಸ್ಕೋ ಮಾನ್ಯತೆ ಪಡೆದಿರುವ ಸೋಮನಾಥೇಶ್ವರ ದೇಗುಲ ಅಭಿವೃದ್ಧಿಗೆ ಯಾವುದೇ ಅನುದಾನ ಬಿಡುಗಡೆಯಾಗಲಿಲ್ಲ. ಅಲ್ಲದೆ, ಹೆಚ್ಚುತ್ತಿರುವ ಪ್ರಾಣಿ -ಮನುಷ್ಯನ ನಡುವಿನ ಸಂಘರ್ಷಕ್ಕೆ ಇತಿಶ್ರೀ ಹಾಕಲು ಶಾಶ್ವತ ಯೋಜನೆಯೂ ಇಲ್ಲ, ಇದು ಸಹಜ ವಾಗಿಯೇ ಜಿಲ್ಲೆಗೆ ನಿರಾಸೆ ಉಂಟು ಮಾಡಿದೆ.

ರಾಷ್ಟ್ರೀಯ ಹೆದ್ದಾರಿ, ರೈಲ್ವೆ ಯೋಜನೆಗಳು, ಹೊಸದಾದ ಕೈಗಾರಿಕೆ ಯೋಜನೆ ಇಲ್ಲವಾಗಿದೆ. ಸಾಂಸ್ಕೃತಿಕ ನಗರಿ ಮೈಸೂರು ದಕ್ಷಿಣ ಕರ್ನಾಟಕದ ಶಿಕ್ಷಣ ಕಾಶಿ ಎಂಬ ಖ್ಯಾತಿಯನ್ನು ಪಡೆದಿದೆ. ವೈದ್ಯಕೀಯ, ಕಾನೂನು, ಎಂಜಿನಿಯರಿಂಗ್ ಸೇರಿದಂತೆ ಹತ್ತಾರು ಕಾಲೇಜುಗಳು ನಗರದಲ್ಲಿವೆ. ಆದರೆ, ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಸಂಸ್ಥೆ ಮೈಸೂರಿಗೆ ಬೇಕು ಎಂಬ ಕೂಗು ಕಳೆದ ಎರಡು ದಶಕಗಳಿಂದ ಕೇಳಿಬರುತ್ತಿದೆ. ಆದರೆ, ಈ ಬಾರಿಯ ಬಜೆಟ್‌ನಲ್ಲಿಮೈಸೂರಿಗೆ ಐಐಟಿಯೂ ಸಿಗಲಿಲ್ಲ.

### ಪ್ರಕ್ರಿಯೆ ನನೆಗುದಿಗೆ

ಮೈಸೂರು ನಗರದ ಮಂಡಕಳ್ಳಿ ವಿಮಾನ ನಿಲ್ದಾಣ ಮೇಲ್ದರ್ಜೆಗೆ ಏರಿಸುವ ಪ್ರಕ್ರಿಯೆ ನನೆಗುದಿಗೆ ಬಿದ್ದಿದ್ದು, ಇದಕ್ಕೆ ಪೂರಕವಾದ ಅನುದಾನ ಘೋಷಿಸಿ, ಎಲ್ಲಾ ತರಹದ ವಿಮಾನ ಸೇವೆ ಲಭ್ಯವಾಗುವಂತೆ ಮಾಡಬೇಕು ಎಂಬ ಕೂಗಿಗೂ ಮನ್ನಣೆ ಸಿಕ್ಕಿಲ್ಲ. ಜತೆಗೆ ಮೈಸೂರು ನೈರುತ್ಯ ರೈಲ್ವೆಯಲ್ಲಿ ಸಂಚರಿಸುವ ಪ್ರಯಾಣಿಕರ ಸಂಖ್ಯೆಯು ವರ್ಷದಿಂದ ವರ್ಷಕ್ಕೆ ಹೆಚ್ಚುತ್ತಿದ್ದು, ರೈಲು ಗಾಡಿಗಳ ಸಂಖ್ಯೆಯನ್ನು ಹೆಚ್ಚಿಸಬೇಕೆಂಬ ಪ್ರಸ್ತಾಪಕ್ಕೂ ಆದ್ಯತೆ ದೊರೆತಿಲ್ಲ.

ಬಿಜೆಪಿ ಸರ್ಕಾರ ಮತ್ತೊಮ್ಮೆ ತನ್ನ ಪ್ರತಿಗಾಮಿ ಬಜೆಟ್ ಮೂಲಕ ಇಡೀ ದೇಶಕ್ಕೆ ಮಂಕುಬೂದಿ ಎರಚಿದೆ. ಕಾರ್ಪೋರೇಟ್ ಪ್ರೇಮ ತೋರುವ ಮತ್ತು ಬಡವರ ತುಳಿತ ಕಾಯಂಗೊಳಿಸುವ ಈ ಬಜೆಟ್ ನಲ್ಲಿ ಅಭಿವೃದ್ಧಿಯ ಯಾವುದೇ ಆಶಾಕಿರಣ ಕಾಣುತ್ತಿಲ್ಲ. ರೈತರು ಮತ್ತು ಕಾರ್ಮಿಕ ವರ್ಗದ ವಿರೋಧಿ ಮತ್ತು ಪ್ರಗತಿ ವಿರೋಧಿ ಬಜೆಟ್ ಎನ್ನುವುದರಲ್ಲಿಯಾವುದೇ ಅನುಮಾನವಿಲ್ಲ -
**ಎಚ್.ಎ.ವೆಂಕಟೇಶ್, ವಕ್ತಾರ, ಕೆಪಿಸಿಸಿ.**

ಕೇಂದ್ರದ ಬಜೆಟ್ ತುಟಿಗೆ ತುಪ್ಪ ಸವರುವ ಬಜೆಟ್ ಆಗಿದೆ. ಕೃಷಿಗೆ ಆದ್ಯತೆ ನೀಡಿಲ್ಲ. ಈ ಮೂಲಕ ಕೃಷಿ ಮತ್ತು ಸಣ್ಣ ಕೈಗಾರಿಕೆ ನಾಶ ಮಾಡಲು ಹೊರಟಿದೆ. ಕೃಷಿ ಕ್ಷೇತ್ರವನ್ನು ಕಾರ್ಪೋರೇಟ್ ಮಾಡಲು ಹೊರಟಿದೆ. ರೈತರಿಗೆ ನೀಡಿದ ಭರವಸೆಯ ಬಗ್ಗೆ ಬಜೆಟ್ ನಲ್ಲಿ ಚಕಾರ ಎತ್ತುತ್ತಿಲ್ಲ. ಇದು ಕೃಷಿ ಕ್ಷೇತ್ರಕ್ಕೆ ನಿರಾಶಾದಾಯಕವಾದ ಬಜೆಟ್ ಆಗಿದೆ. **-ಬಡಗಲಪುರ ನಾಗೇಂದ್ರ, ಅಧ್ಯಕ್ಷ, ಕರ್ನಾಟಕ ರಾಜ್ಯ ರೈತ ಸಂಘ**

ಮೈಸೂರು ಪಾಲಿಗೆ ನೀರಸ ಬಜೆಟ್



## ಶನಿವಾರಸಂತೆಯ ಅರಣ್ಯ ಇಲಾಖೆ ಕಚೇರಿಗೆ ಮುತ್ತಿಗೆ

• ಉದಯವಾಹಿನಿ ಶನಿವಾರಸಂತೆ

ಶನಿವಾರಸಂತೆ, ದುಂಡಳ್ಳಿ, ಚಂಗಡಹಳ್ಳಿ ಮಾರ್ಗವಾಗಿ ಯಸಳೂರುಗೆ ಸಂಪರ್ಕ ಕಲ್ಪಿಸುವ ರಸ್ತೆ ಅಭಿವೃದ್ಧಿ ಕಾಮಗಾರಿಗಾಗಿ ರಸ್ತೆ ಬದಿಯಲ್ಲಿರುವ ಮರಗಳನ್ನು ತೆರವುಗೊಳಿಸಲು ಅರಣ್ಯ ಇಲಾಖೆ ಅಧಿಕಾರಿಗಳು ವಿಳಂಬ ನೀತಿ ಅನುಸರಿಸುತ್ತಿದ್ದಾರೆ ಎಂದು ಆರೋಪಿಸಿ ಸುತ್ತಮುತ್ತಲ ಗ್ರಾಮಸ್ಥರು ಇಲ್ಲಿನ ಅರಣ್ಯ ಇಲಾಖೆ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿದರು.

ಲೋಕಪಯೋಗಿ ಇಲಾಖೆಯಿಂದ ಶನಿವಾರಸಂತೆ, ದುಂಡಳ್ಳಿ ಚಂಗಡಹಳ್ಳಿ ಮಾರ್ಗವಾಗಿ ಯಸಳೂರುಗೆ ಸಂಪರ್ಕ ಕಲ್ಪಿಸುವ ರಸ್ತೆ ಅಭಿವೃದ್ಧಿ ಕಾಮಗಾರಿಗೆ 2023ರಲ್ಲೇ ಚಾಲನೆ ಸಿಕ್ಕಿದೆ.

ಈ ರಸ್ತೆ ಅಭಿವೃದ್ಧಿ ಕಾಮಗಾರಿ ಆರಂಭವಾಗಬೇಕಾದರೆ ಅರಣ್ಯ ಇಲಾಖೆಯವರು ರಸ್ತೆ ಬದಿಯಲ್ಲಿರುವ ಮರಗಳನ್ನು ತೆರವುಗೊಳಿಸಬೇಕಿದೆ. ಆದರೆ, ಇದುವರೆಗೂ ಮರ ತೆರವುಗೊಳಿಸಲು ಮುಂದಾಗದಿರುವುದು ಏಕೆ ಎಂದು ಪ್ರತಿಭಟನಾನಿರತರು ಪ್ರಶ್ನಿಸಿದರು. ಸ್ಥಳಕ್ಕೆ ಬಂದ ವಲಯ ಅರಣ್ಯಾಧಿಕಾರಿ ಪೂಜಾಶ್ರೀ



ಉದಯವಾಹಿನಿ ಚಿತ್ರ

ಮೇಲಾಧಿಕಾರಿಗಳ ಗಮನಕ್ಕೆ ತಂದು ಮರಗಳನ್ನು ತೆರವುಗೊಳಿಸಲು ಕ್ರಮಕೈಗೊಳ್ಳುವುದಾಗಿ ಹೇಳಿದರೂ ಪ್ರತಿಭಟನಾಕಾರರು ಒಪ್ಪಲಿಲ್ಲ. ಈ ಕುರಿತು ಒಂದು ವಾರದಲ್ಲಿ ತೆರವುಗೊಳಿಸಲಾಗುವುದು ಎಂಬ ಲಿಖಿತ ವಾಗ್ದಾನ ಬೇಕು' ಎಂದು ಪಟ್ಟು ಹಿಡಿದರು. ಬಳಿಕ ಲಿಖಿತವಾಗಿ ಭರವಸೆ ಪತ್ರ ನೀಡಿದರಾದರೂ ಅದರಲ್ಲಿ ಒಂದು ವಾರದಲ್ಲಿ ತೆರವುಗೊಳಿಸುವ ಕಾಲಮಿತಿಯನ್ನು ನಮೂದಿಸದೇ ಇದ್ದುದ್ದಕ್ಕೆ ಆಕ್ರೋಶ ವ್ಯಕ್ತಪಡಿಸಿದ ಪ್ರತಿಭಟನಕಾರರು ಕಚೇರಿ ಬೀಗ ಹಾಕಲಾಗುವುದು ಎಂದು ಕಿಡಿಕಾರಿದರು.

ಜಿಲ್ಲೆಮಧ್ಯ ಪ್ರವೇಶಿಸಿದ ಪೊಲೀಸರು ಪ್ರತಿಭಟನಕಾರರ ಮನವೊಲಿಸಲು ಯತ್ನಿಸಿದರು.

## ಫಲಿತಾಂಶ ಹೆಚ್ಚಳಕ್ಕೆ ನಕಲು: ಸಚಿವ ಅಸಮಾಧಾನ

• ಉದಯವಾಹಿನಿ ತುಮಕೂರು

ಪರೀಕ್ಷೆ ಫಲಿತಾಂಶ ಹೆಚ್ಚಳಕ್ಕಾಗಿ ನಕಲು ಮಾಡಿಸಲಾಗುತ್ತಿದೆ. ನಿಮ್ಮ ಮಕ್ಕಳಿಗೆ ನಕಲು ಮಾಡುವುದು ಹೇಳಿಕೊಟ್ಟರೆ ನೀವು ಒಪ್ಪುತ್ತೀರಾ' ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವ ಎಸ್. ಮಧು ಬಂಗಾರಪ್ಪ ಅಧಿಕಾರಿಗಳನ್ನು ಪ್ರಶ್ನಿಸಿದರು.

ನಗರದ ಜಿಲ್ಲಾ ಪಂಚಾಯಿತಿಯಲ್ಲಿ ನಡೆದ ಶಾಲಾ ಶಿಕ್ಷಣ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದರು. ನಕಲು ತಡೆಯುವ ಉದ್ದೇಶದಿಂದ ಕಳೆದ ಬಾರಿ 'ವೆಬ್ ಕಾಸ್ಟಿಂಗ್' ಕಣ್ಗಾವಲಿನಲ್ಲಿ ಪರೀಕ್ಷೆ ನಡೆಸಲಾಯಿತು. ಮಕ್ಕಳ ಕಲಿಕೆ ವಿಷಯದಲ್ಲಿ ನಾವು ಎಲ್ಲಿದ್ದೇವೆ ಎಂಬುವುದು ತಿಳಿಯದಿದ್ದರೆ ಹೇಗೆ ಎಸ್‌ಎಸ್‌ಎಲ್‌ಸಿಯಲ್ಲೇ ನಕಲು ಮಾಡಿಸಿದರೆ ಜೀವನದಲ್ಲಿ ಹೇಗೆ ಸರಿಯಾಗುತ್ತಾರೆ. ಅನುತ್ತೀರ್ಣರಾದರೂ ಪರವಾಗಿಲ್ಲ ಎಂದು ಕಠಿಣ ಕ್ರಮ ಕೈಗೊಳ್ಳಬೇಕಾಯಿತು ಎಂದರು.

ವೆಬ್ ಕಾಸ್ಟಿಂಗ್' ಜಾರಿಯಿಂದಾಗಿ ಶಿಕ್ಷಕರ ಜವಾಬ್ದಾರಿ ಹೆಚ್ಚಾಗಿದೆ. ತುಂಬಾ ಶಾಲೆಯಲ್ಲಿ ಸಂಜೆ ನಂತರ ವಿಶೇಷ ತರಗತಿ ನಡೆಸುತ್ತಿದ್ದಾರೆ. ಶೇ 90ರಷ್ಟು ಫಲಿತಾಂಶ ಸಿಗದಿದ್ದರೆ ಮಕ್ಕಳು



ಉದಯವಾಹಿನಿ ಚಿತ್ರ

ಹೆದರುತ್ತಿದ್ದಾರೆ. ಅವರಲ್ಲಿ ಆತ್ಮಸ್ಥೈರ್ಯ ತುಂಬಬೇಕು. ಅನುತ್ತೀರ್ಣರಾದ ತಕ್ಷಣ ಅವರು ಕೆಟ್ಟವರಲ್ಲ ಎಂಬುವುದನ್ನು ಮನವರಿಕೆ ಮಾಡಿಕೊಡಬೇಕು ಎಂದು ಸಲಹೆ ಮಾಡಿದರು.ಪ್ರತಿ ಮಗುವಿನಲ್ಲಿ ಪ್ರತಿಭೆ ಇರುತ್ತದೆ. ಅವರ ಕೌಶಲ ವೃದ್ಧಿಗೆ ಪೂರಕವಾದ ಕೆಲಸ ನಿರ್ವಹಿಸಬೇಕು. ಸಮವಸ್ತ್ರ, ಪಠ್ಯ ಪುಸ್ತಕ ಎಲ್ಲಾ ಮಕ್ಕಳಿಗೆ ತಲುಪುವಂತೆ ನೋಡಿಕೊಳ್ಳಬೇಕು. ಅವು ಮೂಲೆ ಸೇರಿದರೆ ಸರ್ಕಾರಕ್ಕೆ ಹೊರೆಯಾಗುತ್ತದೆ. ಇಲಾಖೆ ಅಧಿಕಾರಿಗಳು ಶಾಲೆಗಳಿಗೆ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ಖಾಸಗಿ ಶಾಲೆಗೆ ಸೇರಿದ ಮಕ್ಕಳನ್ನು ಮತ್ತೆ ಸರ್ಕಾರಿ ಶಾಲೆಗೆ ಕರೆತರಲು ಶ್ರಮಿಸಬೇಕು ಎಂದು ನಿರ್ದೇಶಿಸಿದರು.

4ರಿಂದ 10ನೇ ತರಗತಿ ಮಕ್ಕಳಿಗೆ ಪಠ್ಯದ ಜತೆಗೆ ಪ್ರಾಯೋಗಿಕ ಕಲಿಕೆಗೆ ಒತ್ತು ನೀಡಲಾಗುತ್ತಿದೆ. ಅನುಭವಾತ್ಮಕ ಕಲಿಕೆಗೆ ಆದ್ಯತೆ ಕೊಡಲಾಗಿದೆ. ಕೃಷಿ, ಆಸ್ಪತ್ರೆ, ಜಲಾಶಯ, ನ್ಯಾಯಾಲಯ ಇತರೆ ಸ್ಥಳಗಳಿಗೆ ಮಕ್ಕಳು ಭೇಟಿ ನೀಡಿ ಪ್ರಾಯೋಗಿಕವಾಗಿ ಕಲಿಯುತ್ತಾರೆ. ಇದು ಅವರ ಬುದ್ಧಿಶಕ್ತಿ ಹೆಚ್ಚಳಕ್ಕೆ ಸಹಾಯಕವಾಗುತ್ತಿದೆ ಎಂದು ತಿಳಿಸಿದರು.

ಗುಣಮಟ್ಟದ ಶಿಕ್ಷಣಕ್ಕಾಗಿ ಜ್ಞಾನ ಸಂವರ್ಧನಾ ಕಾರ್ಯಾಗಾರ ಮಾಡಲಾಗಿದೆ. ಶೈಕ್ಷಣಿಕ ವ್ಯವಸ್ಥೆ ಗಟ್ಟಿಗೊಳಿಸಲು ಅಗತ್ಯ ಕ್ರಮಕೈಗೊಳ್ಳಲಾಗಿದೆ. ಎಲ್ಲಾ ಸರ್ಕಾರಿ ಶಾಲೆಗಳಿಗೆ ಅಗತ್ಯ ಸೌಲಭ್ಯ ಕಲ್ಪಿಸಲಾಗಿದೆ. ಪ್ರತಿ ದಿನ ಎರಡರಿಂದ ಮೂರು ಶಾಲೆಗೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ವೈಯಕ್ತಿಕವಾಗಿ ಮಕ್ಕಳ ಜತೆಗೆ ಸಮಾಲೋಚನ ನಡೆಸುವಂತೆ ಇಲಾಖೆ ಅಧಿಕಾರಿಗಳಿಗೆ ಸೂಚಿಸಲಾಗಿದೆ'
**-ಜಿ.ಪ್ರಭು, ಜಿ.ಪಂ ಸಿಇಒ**

## ಮಿನಿ ನ್ಯೂಸ್

### ರೈಲ್ವೆ ನಿಲ್ದಾಣದೊಳಕ್ಕೆ ಕಾರು ನುಗ್ಗಿಸಿದ ಭೂಪ



ಉದಯವಾಹಿನಿ ಚಿತ್ರ

• ಉದಯವಾಹಿನಿ ಕೋಲಾರ

ಕುಡಿದ ಮತ್ತಿನಲ್ಲಿ ವ್ಯಕ್ತಿಯೊಬ್ಬ ರೈಲ್ವೆ ನಿಲ್ದಾಣದೊಳಕ್ಕೆ ಕಾರು ನುಗ್ಗಿಸಿರುವ ಘಟನೆ ಕೋಲಾರದಲ್ಲಿ ನಡೆದಿದೆ. ಜಿಲ್ಲೆಯ ಟೇಕಲ್ ರೈಲ್ವೆ ನಿಲ್ದಾಣದಲ್ಲಿ ತಡರಾತ್ರಿ ಘಟನೆ ಸಂಭವಿಸಿದೆ. ರೈಲ್ವೆ ಪ್ಲಾಟ್‌ಫಾರ್ಮ್ ಮೇಲಿಂದ ರೈಲ್ವೆ ಹಳಿಗಳ ಮೇಲೆ ಅಪ್ಪಳಿಸಿದೆ. ಪರಿಣಾಮವಾಗಿ ಕಾರು ಮತ್ತು ರೈಲ್ವೆ ಹಳಿಗೆ ಡ್ಯಾಮೇಜ್ ಆಗಿದೆ. ಕಾರು ಮಾಲೀಕ ರಾಕೇಶ್ ಎಂಬಾತ ಕುಡಿದ ಮತ್ತಿನಲ್ಲಿ ಕಾರು ಚಲಾಯಿಸಿ ಈ ಅವಾಂತರ ಸೃಷ್ಟಿಸಿದ್ದಾನೆ. ರೈಲ್ವೆ ಪೊಲೀಸರು ಜೆಸಿಬಿ ಸಹಾಯದಿಂದ ಕಾರು ತೆರವುಗೊಳಿಸಿದ್ದಾರೆ. ಬಂಗಾರಪೇಟೆ ರೈಲ್ವೆ ಪೊಲೀಸರು ಕಾರು ಮಾಲೀಕ ರಾಕೇಶ್‌ನನ್ನು ವಶಕ್ಕೆ ಪಡೆದಿದ್ದಾರೆ. ಈ ಸಂಬಂಧ ಬಂಗಾರಪೇಟೆ ರೈಲ್ವೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಸ್ನೇಹಿತನಿಗೆ ಸಾಲ ಕೊಡಿಸಿದ್ದ ತಪ್ಪಿಗೆ ನೇಣು ಬಿಗಿದು ವ್ಯಕ್ತಿ ಆತ್ಮಹತ್ಯೆ

• ಉದಯವಾಹಿನಿ ಮೈಸೂರು

ಸ್ನೇಹಿತನಿಗೆ ಸಾಲ ಕೊಡಿಸಿದ್ದ ತಪ್ಪಿಗೆ ವ್ಯಕ್ತಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಮೈಸೂರು ತಾಲ್ಲೂಕು ದಂಡಿಕೆರೆ ಗ್ರಾಮದಲ್ಲಿ ನಡೆದಿದೆ. ಮೃತನನ್ನು ನಂಜನಗೂಡು ತಾಲ್ಲೂಕಿನ ಮುಲ್ಲೂಪುರ ಗ್ರಾಮದ ಸಿದ್ದೇಶ್ (40) ಎಂದು ಗುರುತಿಸಲಾಗಿದೆ. ಮೃತ ಸಿದ್ದೇಶ್ ತನ್ನ ಸ್ನೇಹಿತ ಮಣಿಕಂಠ ಎಂಬಾತನಿಗೆ ಖಾಸಗಿ ಬ್ಯಾಂಕ್‌ನಲ್ಲಿ ಕಾರು, ಜೊತೆಗೆ ತನ್ನ ಹೆಸರಿನಲ್ಲಿ 2 ಲಕ್ಷ ರೂ. ಸಾಲ ಕೊಡಿಸಿದ್ದರು. ಆತನ ಸ್ನೇಹಿತ ಕೇವಲ ಎರಡು ಕಂತು ಕಟ್ಟಿ ಸುಮ್ಮನಾಗಿದ್ದ. ನಂತರ ಸಾಲ ತೀರಿಸದಕ್ಕೆ ಬ್ಯಾಂಕ್‌ನವರು ಸಿದ್ದೇಶ್‌ಗೆ ಕರೆ ಮಾಡಿ ಸಾಲ ತೀರಿಸುವಂತೆ ತಿಳಿಸಿದ್ದಾರೆ. ಇದರಿಂದ ಮನನೊಂದು ಸಿದ್ದೇಶ್, ವಿಡಿಯೋ ಮಾಡಿಟ್ಟು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಸದ್ಯ ವರುಣ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ.

ನಾನು ಐಸಿಐಸಿ ಬ್ಯಾಂಕ್‌ನಿಂದ ಕಾರ್ ಲೋನ್ ಮಾಡಿಕೊಟ್ಟಿದ್ದೆ. ಇದರಿಂದ ನನಗೆ, ನನ್ನ ಪತ್ನಿಗೆ ಫೋನ್ ಮಾಡಿ ಸಾಲ ತೀರಿಸುವಂತೆ ಕಿರುಕುಳ ನೀಡಿದ್ದರು. ಆದರೆ ನನಗೆ ಅಂತಾ ಸಾಲ ತೆಗೆದುಕೊಂಡಿರಲಿಲ್ಲ. ಕಳೆದ 5-6 ವರ್ಷಗಳಿಂದ ಮಣಿಕಂಠ ಉಪ್ಪನಹಳ್ಳಿ ನನ್ನ ಸ್ನೇಹಿತ. ವೀರೇಗೌಡನಹುಂಡಿ ಬಳಿ 50 ಸಾವಿರ ರೂ. ಕುಮಾರ್ ಆಳಗಂಜಿ ಬಳಿ 50 ಸಾವಿರ ರೂ. ಕೊಡಿಸಿದ್ದೇನೆ. ಆತ್ಮೀಯ ಸ್ನೇಹಿತ ಟೀ ಅಂಗಡಿ ಇಟ್ಟುಕೊಂಡು ಜೀವನ ನಡೆಸಲಿ ಎಂದು ಸಾಲ ಕೊಡಿಸಿದೆ. ಅವನೂ ಕೂಡ ಉತ್ತಮ ಜೀವನ ನಡೆಸಿದ. ಬಳಿಕ ಕಾರು ಬೇಕು ಎಂದಿದ್ದ. ಅವನ ಸಿವಿಲ್ ಸ್ಕೋರ್ ಕಡಿಮೆ ಇತ್ತು. ಹೀಗಾಗಿ 87 ಸಾವಿರ ರೂ. ಡೌನ್‌ಪೇಮೆಂಟ್ ಮಾಡಿ ಅವನಿಗೆ ನನ್ನ ಕಡೆಯಿಂದ ಆಲ್ಟೋ ಕಾರ್ ಕೊಡಿಸಿದೆ. ಕಾರ್ ನನ್ನ ಹೆಸರಿನಲ್ಲಿದೆ. ಆದರೆ ನಾನು ದಡ್ಡತನದ ಕೆಲಸ ಮಾಡಿದೆ. ಸ್ನೇಹಿತನನ್ನು ನಂಬಿ ನನ್ನ ಹೆಂಡತಿ ಮಕ್ಕಳನ್ನು ಬೀದಿಗೆ ಬರುವಂತೆ ಮಾಡಿದೆ ಎಂದು ಆತ್ಮಹತ್ಯೆಗೂ ಮುಂಚೆ ಮಾಡಿದ ವಿಡಿಯೋದಲ್ಲಿ ತಮ್ಮ ಅಳಲನ್ನು ತೋಡಿಕೊಂಡಿದ್ದರು.

### ಶೆಡ್‌ಗೆ ಆಕಸ್ಮಿಕ ಬೆಂಕಿ 4 ಲಕ್ಷ ಮೌಲ್ಯದ ಗೃಹಪಯೋಗಿ ವಸ್ತುಗಳು ಭಸ್ಮ

• ಉದಯವಾಹಿನಿ ಕೋಲಾರ

ಸೆಕೆಂಡ್ ಹ್ಯಾಂಡ್ ಗೃಹಪಯೋಗಿ ವಸ್ತುಗಳಿದ್ದ ಶೆಡ್‌ನಲ್ಲಿ ಆಕಸ್ಮಿಕವಾಗಿ ಬೆಂಕಿ ಕಾಣಿಸಿಕೊಂಡ ಪರಿಣಾಮ ಸುಮಾರು 4 ಲಕ್ಷ ಮೌಲ್ಯದ ವಸ್ತುಗಳು ಸುಟ್ಟು ಕರಕಲಾಗಿರುವ ಘಟನೆ ಕೋಲಾರದ ಕಾರಂಜಿ ಕಟ್ಟೆಯ ರಾಜಾನಗರದಲ್ಲಿ ನಡೆದಿದೆ. ಅತಾವುಲ್ಲಾ ಎಂಬವರಿಗೆ ಸೇರಿದ ಶೆಡ್‌ನಲ್ಲಿ ಏಕಾಏಕಿ ಬೆಂಕಿ ಕಾಣಿಸಿಕೊಂಡಿದೆ. ಆಕಸ್ಮಿಕ ಬೆಂಕಿಗೆ ಗೃಹಪಯೋಗಿ ವಸ್ತುಗಳು ಸುಟ್ಟು ಭಸ್ಮವಾಗಿದೆ. ಸ್ಥಳಕ್ಕೆ ನಗರಸಭೆ ಅಧ್ಯಕ್ಷೆ ಲಕ್ಷ್ಮೀ ದೇವಮ್ಮ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಅಗ್ನಿ ಶಾಮಕ ದಳದಿಂದ ಬೆಂಕಿ ನಂದಿಸುವ ಕಾರ್ಯ ಮುಂದುವರಿದಿದೆ.

### ಅಂತರರಾಜ್ಯ ಕಳ್ಳರ ಬಂಧನ

• ಉದಯವಾಹಿನಿ ತುಮಕೂರು

ಒಂಟಿ ಮಹಿಳೆಯರನ್ನು ಗುರಿಯಾಗಿಸಿಕೊಂಡು ಚಿನ್ನದ ಸರ ಕಿತ್ತು ಪರಾರಿಯಾಗುತ್ತಿದ್ದ ಇಬ್ಬರು ಅಂತರರಾಜ್ಯ ಕಳ್ಳರನ್ನು ಬಂಧಿಸಿರುವ ಪೊಲೀಸರು, 6.79 ಲಕ್ಷ ಮೌಲ್ಯದ 113 ಗ್ರಾಂ ಚಿನ್ನಾಭರಣ ಜಪ್ತಿ ಮಾಡಿದ್ದಾರೆ. ತಮಿಳುನಾಡಿನ ತಿರುವಣ್ಣಮಲೈ ಜಿಲ್ಲೆಯ ಕ್ಯಾಬ್ ಚಾಲಕ ಭರತ್, ಚೆನ್ನೈನ ಜಮಾಲುದ್ದೀನ್ ಬಂಧಿತರು.

ಕಳ್ಳತನ ಮಾಡಿದ್ದ ಆಭರಣ ಮತ್ತು ಕೃತ್ಯಕ್ಕೆ ಬಳಸಿದ್ದ ಎರಡು ದ್ವಿಚಕ್ರ ವಾಹನ ವಶಕ್ಕೆ ಪಡೆಯಲಾಗಿದೆ. ಜ. 11ರಂದು ವಸಂತಮ್ಮ ನಗರದ ಬಟವಾಡಿಯ ವಾಲ್ಮೀಕಿ ನಗರದಲ್ಲಿ ವಾಯು ವಿಹಾರ ಮಾಡುತ್ತಿದ್ದರು. ಅಪರಿಚಿತ ವ್ಯಕ್ತಿಯೊಬ್ಬರು ಮಹಿಳ ಕುತ್ತಿಗೆಯಲ್ಲಿದ್ದ 4 ಲಕ್ಷ ಮೌಲ್ಯದ 70 ಗ್ರಾಂ ಚಿನ್ನದ ಸರ ಕಿತ್ತುಕೊಂಡು ಹೋಗಿದ್ದರು. ಈ ಕುರಿತು ಹೊಸ ಬಡಾವಣೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಪ್ರಕರಣದ ತನಿಖೆಗೆ ವಿಶೇಷ ತಂಡ ರಚಿಸಲಾಗಿತ್ತು.

ಕಳ್ಳರನ್ನು ಬಂಧಿಸಿ ವಿಚಾರಣೆಗೆ ಒಳಪಡಿಸಿದಾಗ ಹೊಸ ಬಡಾವಣೆ ಠಾಣೆಯಲ್ಲಿ ದಾಖಲಾದ ಪ್ರಕರಣಗಳಲ್ಲಿ 1,80,120 ಮೌಲ್ಯದ 30 ಗ್ರಾಂ ಚಿನ್ನದ ಸರ, 2,88,900 ಬೆಲೆ ಬಾಳುವ 48.150 ಗ್ರಾಂ ಎರಡು ಎಳೆಯ ಚಿನ್ನದ ಸರ, ಚಿತ್ರದುರ್ಗ ಬಡಾವಣೆ ಪೊಲೀಸ್ ಠಾಣಾ ವ್ಯಾಪ್ತಿಯ ಕಳ್ಳತನ ಪ್ರಕರಣದಲ್ಲಿ 2,10,300 ಮೌಲ್ಯದ 35.50ಗ್ರಾಂ ಚಿನ್ನದ ಸರ ಕಳವು ಮಾಡಿದ್ದು ಪತ್ತೆಯಾಗಿದೆ. ತಿಲಕ್‌ಪಾರ್ಕ್ ಠಾಣೆ ಸಿಪಿಐ ಜಿ.ಪುರುಷೋತ್ತಮ, ಇನ್ಸ್‌ಪೆಕ್ಟರ್ ರಮೇಶ್, ಹೊಸ ಬಡಾವಣೆ ಠಾಣೆ ಎಎಸ್‌ಐ ವಿನ್ಸೆಂಟ್, ಹೆಡ್ ಕಾನ್‌ಸ್ಟೇಬಲ್‌ಗಳಾದ ಎಂ.ಎಸ್.ಅಬೀದ್, ಸಿದ್ದಲಿಂಗರಾಧ್ಯ, ಸೈಮನ್ ವಿಕ್ಟರ್, ಮಂಜುನಾಥ ವಾಹನ ಚಾಲಕ ಸಿದ್ದೇಶ್ವರ, ಕಾನ್‌ಸ್ಟೇಬಲ್‌ಗಳಾದ ಲೋಕೇಶ್, ನಿಜಾಮುದ್ದೀನ್ ಷಾ, ಸುನೀಲ್ ಲಮಾಣಿ, ಸುನೀಲ್ ಕುಮಾರ್, ರಾಮಕೃಷ್ಣ ಕಮಾಂಡ್ ಸೆಂಟರ್‌ನ ಸುಷ್ಮಿತಾ ತಂಡ ಕಳ್ಳರ ಪತ್ತೆಗೆ ಕಾರ್ಯಾಚರಣೆ ನಡೆಸಿತ್ತು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ.ಅಶೋಕ್ ತಿಳಿಸಿದ್ದಾರೆ.

## ಅಧಿಕಾರ ಪಡೆಯುವ ತಾಕತ್ತಿದೆ

• ಉದಯವಾಹಿನಿ ಗುಬ್ಬಿ

ಅಧಿಕಾರ ದಾಹದಿಂದ ಪತ್ನಿ ಭಾರತಿಯನ್ನು ತುಮುಲ್ ಚುನಾವಣೆಗೆ ನಿಲ್ಲಿಸಿ ಗೆಲ್ಲಿಸಿಕೊಂಡಿಲ್ಲ. ಅಧಿಕಾರ ಬೇಕಾದಲ್ಲಿ ಅದನ್ನು ಪಡೆಯುವ ತಾಕತ್ತು ನನಗಿದೆ. ಅಧಿಕಾರಕ್ಕಾಗಿ ಯಾರ ಮನೆಯ ಬಾಗಿಲಿಗೂ ಹೋಗಿ ಕೈಕಟ್ಟಿ ನಿಲ್ಲುವ ಅವಶ್ಯಕತೆ ಇಲ್ಲ' ಎಂದು ಶಾಸಕ ಶ್ರೀನಿವಾಸ್ ಗುಡುಗಿದರು. ಪಟ್ಟಣದ ಕೆಎಂಎಫ್ ಆವರಣದಲ್ಲಿ ಶನಿವಾರ ನಡೆದ ತುಮುಲ್ ನಿರ್ದೇಶಕಿ ಭಾರತಿ ಅವರಿಗೆ ಅಭಿನಂದನಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ತುಮುಲ್ ಚುನಾವಣೆಗೆ ಎದುರಾಳಿ ಚಂದ್ರಶೇಖರ್ ಅವರನ್ನು ಬೆಂಗಳೂರಿಗೆ ಕರೆಸಿಕೊಂಡು ಚುನಾವಣೆಗೆ ಸ್ಪರ್ಧಿಸುವಂತೆ ಹೇಳಿದವರು ಯಾರು ಎನ್ನುವುದು ತಿಳಿದಿದೆ. ಮುಂದಿನ ದಿನಗಳಲ್ಲಿ ಇದಕ್ಕೆಲ್ಲ ತಕ್ಕ ಉತ್ತರ ನೀಡಲು ಸಿದ್ದ. ಪತ್ನಿ ಭಾರತಿಯನ್ನು ತುಮುಲ್ ಅಧ್ಯಕ್ಷರನ್ನಾಗಿ ಮಾಡುತ್ತೇನೆ ಎಂದು ಈಗ ಹೇಳಿದರೂ ಅದರ ಅವಶ್ಯಕತೆ ನಮಗೆ ಇಲ್ಲ' ಎಂದರು.

ನನಗೆ ತಾಕತ್ತು ಇರುವುದರಿಂದಲೇ ಐದು ಬಾರಿ ಶಾಸಕನಾಗಿ ಹಾಗೂ ಒಂದು ಬಾರಿ ಜಿಲ್ಲಾ ಪಂಚಾಯಿತಿ ಸದಸ್ಯನಾಗಿ ಆಯ್ಕೆಯಾಗಿದ್ದೇನೆ. ಕ್ಷೇತ್ರದ ಜನರ ಪ್ರೀತಿ ಇರುವವರೆಗೂ ಯಾರು ಏನು ಮಾಡಲು ಸಾಧ್ಯವಾಗುವುದಿಲ್ಲ. ಬೇರೆಯವರಂತೆ ಹಿಂಬಾಗಿಲಿನಿಂದ ಅಧಿಕಾರ ಹಿಡಿಯುವ ಚಾಳಿ ನನಗಿಲ್ಲ. ಚುನಾವಣೆಯನ್ನು ನೇರವಾಗಿ ಎದುರಿಸಿ ಗೆದ್ದು ಜನಸೇವೆ ಮಾಡುತ್ತಿದ್ದೇನೆ' ಎಂದು ಹೇಳಿದರು.

## ಕೇಂದ್ರದಿಂದ ಬೋಗಸ್ ಬಜೆಟ್, ಕನ್ನಡಿಗರು ಎಚ್ಚೆತ್ತುಕೊಳ್ಳುವ ಕಾಲ ಹತ್ತಿರ ಬಂದಿದೆ

• ಉದಯವಾಹಿನಿ ರಾಮನಗರ

ಇದು ಬೋಗಸ್ ಬಂಡಲ್ ಬಜೆಟ್. ಬಿಹಾರಕ್ಕೆ ಬಂಪರ್ ಕೊಟ್ಟು ಕರ್ನಾಟಕಕ್ಕೆ ಬಂಡಲ್ ಕೊಟ್ಟಿದ್ದಾರೆ ಎಂದು ಮಾಜಿ ಸಂಸದ ಡಿಕೆ ಸುರೇಶ್ ಕಿಡಿಕಾರಿದ್ದಾರೆ.

ಚನ್ನಪಟ್ಟಣದಲ್ಲಿ ನಡೆದ ಕಾಂಗ್ರೆಸ್ ಕೃತಜ್ಞತಾ ಸಮಾವೇಶದಲ್ಲಿ ಮಾತನಾಡಿದ ಅವರು, ಇಡೀ ದಕ್ಷಿಣ ಭಾರತಕ್ಕೆ ಅನ್ಯಾಯ ಮಾಡಿದ್ದಾರೆ. ಇದನ್ನು ಸರಿಪಡಿಸದಿದ್ದರೆ ಬಹುಶಃ ಬೇರೆಬೇರೆ ರೀತಿ ಕೂಗೂ ಏಳುತ್ತಾ ಇರುತ್ತದೆ.

ಆಮೇಲೆ ತಡೆಯೋದಕ್ಕೆ ನಿಮಗೆ ಕಷ್ಟ ಆಗುತ್ತದೆ. ಬಿಜೆಪಿಯವರಿಗೆ ಚುನಾವಣಾ ದೃಷ್ಟಿ ಅಷ್ಟೇ. ಅವರಿಗೆ ಅಭಿವೃದ್ಧಿ ಮುಖ್ಯ ವಿಚಾರ ಅಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಮಧ್ಯಮ ವರ್ಗಕ್ಕೆ ಒಂದಿಷ್ಟು ತೆರಿಗೆ ವಿನಾಯಿತಿ ನೀಡಿ ಉಳಿದಂತವರಿಗೆ ರೈತರು, ಮಹಿಳೆಯರು ಯುವಕರಿಗೆ, ದಲಿತರ ಹೆಸರು ಹೇಳಿದ್ದಾರೆ. ನೊಂದ ಜನರಿಗೆ ಯಾವ ರೀತಿ ಯೋಜನೆ ಮಾಡುತ್ತೇವೆ ಎಂದು ಹೇಳಿಲ್ಲ. ಜೊತೆಗೆ ಕರ್ನಾಟಕದ 5 ಲಕ್ಷ ಕೋಟಿ ತೆರಿಗೆ ಹಣ ಕೇಂದ್ರದ ಖಾತೆಗೆ



ಉದಯವಾಹಿನಿ ಚಿತ್ರ

ದಕ್ಷಿಣ ಭಾರತಕ್ಕೆ ಅನ್ಯಾಯ

ಹೋಗುತ್ತಿದೆ. ಇಷ್ಟು ಹಣ ಕೊಟ್ಟರೂ ರಾಜ್ಯದ ಯಾವುದೇ ಯೋಜನೆಗೆ ಅನುಮೋದನೆ ಕೊಟ್ಟಿಲ್ಲ ಎಂದು ವಾಗ್ದಾಳಿ ನಡೆಸಿದರು. ರಾಜ್ಯ ಯಾವ ಮಂತ್ರಿಗಳು ನನ್ನನ್ನು ಸಂಪರ್ಕ ಮಾಡಿಲ್ಲ ಎಂಬ ಹೆಚ್‌ಡಿಕೆ ಹೇಳಿಕೆ ವಿಚಾರವಾಗಿ ಪ್ರತಿಕ್ರಿಯಿಸಿ, ಕುಮಾರಸ್ವಾಮಿ ಮಾಜಿ ಸಿಎಂ. ಯಾರು ಹೇಳಲಿ, ಬಿಡಲಿ ಅವರ ಮೇಲೆ ಜವಾಬ್ದಾರಿ ಇದೆ.

ಅದನ್ನು ಅವರು ಅರ್ಥ ಮಾಡಿಕೊಳ್ಳಬೇಕು. ರಾಜ್ಯದ ಪ್ರತಿ ವಿಚಾರ ಅವರಿಗೆ ಗೊತ್ತಿದೆ. ಕರ್ನಾಟಕದ ಗೌರವ, ಜನರ ರಕ್ಷಣೆ, ಯೋಜನೆ ಬಗ್ಗೆ ಒತ್ತಾಯ ಮಾಡೋದು ಅವರ ಜವಾಬ್ದಾರಿ. ಅವರನ್ನು ಕೇಳಬೇಕು, ಅರ್ಜಿ ಕೊಡಬೇಕು ಎಂದೇನಿಲ್ಲ. ಅದು ನಿಮ್ಮ ಜವಾಬ್ದಾರಿ. ದಯವಿಟ್ಟು ಕನ್ನಡಿಗರಿಗೆ ಅನ್ಯಾಯ ಮಾಡಬೇಡಿ. ಕರ್ನಾಟಕಕ್ಕೆ ಅನ್ಯಾಯ ಮಾಡಬೇಡಿ. ರಾಜಕೀಯವನ್ನು ಚುನಾವಣೆಯಲ್ಲಿ ಮಾಡೋಣ. ಆದರೆ ಕರ್ನಾಟಕ ಅಭಿವೃದ್ಧಿಯನ್ನು ಗಮನದಲ್ಲಿಟ್ಟುಕೊಂಡು ಸಹಕಾರ ನೀಡಿ ಎಂದು ಮನವಿ ಮಾಡಿದರು.

ಕನ್ನಡಿಗರು ಎಚ್ಚೆತ್ತುಕೊಳ್ಳುವ ಕಾಲ ಹತ್ತಿರ ಬಂದಿದೆ. ಇದು ರಾಜಕೀಯ ಹೇಳಿಕೆ ಅಲ್ಲ. ಕನ್ನಡಿಗರು ಮಲಗಿದರೆ ನಮ್ಮನ್ನು ಮುಗಿಸುತ್ತಾರೆ. ಕನ್ನಡಿಗರೇ ದಯವಿಟ್ಟು ಎದ್ದೇಳಿ. ಕರ್ನಾಟಕದ ನಿಮ್ಮ ಮಕ್ಕಳನ್ನು ಬೇರೆಯವರು ಆಳುವ ಸ್ಥಿತಿ, ಬೇರೆಯವರ ಹತ್ರ ಕೂಲಿ ಮಾಡುವ ಪರಿಸ್ಥಿತಿ ಬರುತ್ತದೆ. ತಕ್ಷಣ ಎದ್ದು ಹೋರಾಟ ಮಾಡಿ. ರಾಜ್ಯದ ಏಳೂವರೆ ಕೋಟಿ ಕನ್ನಡಿಗರಿಗೆ ನಾನು ಕರೆ ಕೊಡುತ್ತಿದ್ದೇನೆ
**-ಡಿಕೆ ಸುರೇಶ್, ಮಾಜಿ ಸಂಸದ**

## 8 ವರ್ಷದ ಬಾಲಕಿಯ ಮೇಲೆ ಮೂವರಿಂದ ಗ್ಯಾಂಗ್ ರೇಪ್

• ಉದಯವಾಹಿನಿ ಮಂಡ್ಯ

ರಾಜ್ಯದಲ್ಲಿ ಮತ್ತೊಂದು ಕೀಚಕ ಕೃತ್ಯ ಎನ್ನುವಂತೆ 8 ವರ್ಷದ ಬಾಲಕಿಯ ಮೇಲೆ ಮೂವರು ಗ್ಯಾಂಗ್ ರೇಪ್ ಮಾಡಿರುವಂತ ಘಟನೆ ಮಂಡ್ಯದಲ್ಲಿ ನಡೆದಿದೆ.ಮಂಡ್ಯ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಬಾಲಕಿಯೊಬ್ಬಳಿಗೆ ಕೇಕ್ ಕೊಡಿಸಿ, ಚಾಕು ತೋರಿಸಿ ಶಾಲಾ ಆವರಣದಲ್ಲೇ ಮೂವರು ಕಾಮುಕರು ಗ್ಯಾಂಗ್ ರೇಪ್ ಮಾಡಿದ್ದಾರೆ. ಜನವರಿ 31ರಂದು ನಡೆದಿದ್ದಂತ ಘಟನೆಯ ಬಳಿ 2 ದಿನ ಕಳೆದರೂ 8 ವರ್ಷದ ಬಾಲಕಿಗೆ ಹೊಟ್ಟೆನೋವು, ರಕ್ತಸ್ರಾವ ಕಡಿಮೆಯಾಗದ ಕಾರಣ ಬಾಲಕಿಯ ಚಿಕ್ಕಮ್ಮ ವಿಚಾರಿಸಿದಾಗ ಕೀಚಕ ಕೃತ್ಯ ಹೊರ ಬಂದಿದೆ. ಅಸ್ವಸ್ಥಗೊಂಡ ಬಾಲಕಿಯನ್ನು ಮಂಡ್ಯ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಲಾಗುತ್ತಿದೆ.

ಈ ಸಂಬಂಧ ಮಂಡ್ಯ ಪೊಲೀಸ್ ಠಾಣೆಯಲ್ಲಿ ಪೋಕ್ಸ್ ಕೇಸ್ ದಾಖಲಾಗಿದ್ದು, ಆರೋಪಿಗಳ ಪತ್ತೆಗೆ ಪೊಲೀಸರು ಬಲೆ ಬೀಸಿದ್ದಾರೆ.

## ಸರ್ಕಾರದ ಷರತ್ತು ಮುರಿದ ನಿರಾಣಿ ಕಂಪನಿ ಏಕಾಏಕಿ 45 ಕೆಲಸಗಾರರನ್ನು ತೆಗೆದ ಆಡಳಿತ ಮಂಡಳಿ

• ಉದಯವಾಹಿನಿ ಮಂಡ್ಯ

ಸರ್ಕಾರದ ಷರತ್ತುಗಳನ್ನು ಉಲ್ಲಂಘಿಸಿ ಪಿಎಸ್‌ಎಸ್‌ಕೆ ಕಂಪನಿ 45 ನೌಕರರನ್ನು ಏಕಾಏಕಿ ತೆಗೆದು ಹಾಕಿರುವ ಘಟನೆ ಮಂಡ್ಯದಲ್ಲಿ ನಡೆದಿದೆ.

ಪ್ರತಿಷ್ಠಿತ ಸಕ್ಕರೆ ಕಾರ್ಖಾನೆಯಲ್ಲಿ ಪಾಂಡವಪುರ ಪಿಎಸ್‌ಎಸ್‌ಕೆ ಸಕ್ಕರೆ ಕಾರ್ಖಾನೆಯೂ ಒಂದು. ಆದರೆ, ಈ ಕಾರ್ಖಾನೆ ನಷ್ಟದಲ್ಲಿ ಸಿಲುಕಿದೆ ಎಂಬ ಕಾರಣಕ್ಕೆ ಕಳೆದ ಐದು ವರ್ಷಗಳ ಹಿಂದೆ ಮಾಜಿ ಸಚಿವ ಮುರುಗೇಶ್ ನಿರಾಣಿಯವರ ನಿರಾಣಿ ಶುಗರ್ಸ್ ಕಂಪನಿಗೆ 40 ವರ್ಷಗಳ ಗುತ್ತಿಗೆ ನೀಡಲಾಗಿತ್ತು. ಆ ವೇಳೆ ಒಂದಷ್ಟು ಷರತ್ತು ವಿಧಿಸಲಾಗಿತ್ತು. ಅದರಲ್ಲಿ ಪ್ರಮುಖವಾಗಿ ಪಿಎಸ್‌ಎಸ್‌ಕೆ ಕಂಪನಿ ನೌಕರರನ್ನ ಯಾವುದೇ ಕಾರಣಕ್ಕೂ ಕೆಲಸದಿಂದ ತೆಗೆಯಬಾರದೆಂದು ಒಪ್ಪಂದ ಆಗಿತ್ತು. ಆದರೆ ಈಗ ಸ್ಥಳೀಯ 45 ಮಂದಿ ಕಂಪನಿ ನೌಕರರನ್ನ ಏಕಾಏಕಿ ಕೆಲಸದಿಂದ ತೆಗೆದು ಹಾಕಿ ದಬ್ಬಾಳಿಕೆ ನಡೆಸಿದೆ. ಇದರಿಂದ ಕೆಲಸ ಕಳೆದುಕೊಂಡ ನೌಕರರು ಜೀವನ ಹೇಗಪ್ಪ ಎನ್ನುವ ಪರಿಸ್ಥಿತಿ ನಿರ್ಮಾಣವಾಗಿದೆ.



ಉದಯವಾಹಿನಿ ಚಿತ್ರ

45 ಮಂದಿ ನೌಕರರನ್ನ ಕೆಲಸದಿಂದ ತೆಗೆದು ಹಾಕಿರುವುದರಿಂದ ಆ ನೌಕರರ ಕುಟುಂಬವೂ ಸಂಕಷ್ಟಕ್ಕೆ ಸಿಲುಕಿದೆ. ಅಲ್ಲದೇ ವರ್ಷದ ಹಿಂದೆಯೇ ಇದೇ ರೀತಿ ಈ ನೌಕರರನ್ನ ಕೆಲಸದಿಂದ ವಜಾ ಮಾಡಲಾಗಿತ್ತು. ಆಗ ಹೈಕೋರ್ಟ್‌ನ ಮೆಟ್ಟಿಲು ಸಹ ಏರಿದ್ದರು. ಎಲ್ಲಾ ವಿಚಾರಣೆ ನಡೆಸಿ, ಒಪ್ಪಂದ ಪರಿಶೀಲಿಸಿದ ನ್ಯಾಯಾಲಯ ಕೆಲಸದಿಂದ ತೆಗೆಯದಂತೆ ಸೂಚನೆ ಕೊಟ್ಟಿತ್ತು. ಆದರೆ, ನ್ಯಾಯಾಲಯದ ಆದೇಶವನ್ನೂ ಪರಿಗಣಿಸದೇ ಮುರುಗೇಶ್ ನಿರಾಣಿ ಮಾಲೀಕತ್ವದ ಕಂಪನಿ ಮತ್ತೆ ತನ್ನ ಉದ್ಧಟತನ ಪ್ರದರ್ಶಿಸಿದೆ ಎಂದು ಆರೋಪ ಕೇಳಿಬಂದಿದೆ. 15, 20 ವರ್ಷಗಳಿಂದ ಅಲ್ಪ ಸಂಬಳಕ್ಕೆ ದುಡಿದ ನೌಕರರನ್ನ ಏಕಾಏಕಿ ಕೆಲಸದಿಂದ ವಜಾ ಮಾಡಿ ಇದೀಗ ಬೀದಿಗೆ ತಂದು ನಿಲ್ಲಿಸಿದೆ. ಕಾರ್ಖಾನೆಯ ಶೇ.90 ರಷ್ಟು ಸಿಬ್ಬಂದಿ ಹೊರ ರಾಜ್ಯದವರನ್ನೇ ನೇಮಕ ಮಾಡಿಕೊಂಡಿರುವ ಬಗ್ಗೆ ಮಾಹಿತಿ ಇದೆ.

ಕೆಲಸದಿಂದ ಸ್ಥಳೀಯ ಕಂಪನಿ ನೌಕರರ ವಜಾ ವಿಚಾರ ತಿಳಿಯುತ್ತಿದ್ದಂತೆ ಮೇಲುಕೋಟೆ ಶಾಸಕ ದರ್ಶನ್ ಪುಟ್ಟಣ್ಣಯ್ಯ ಕೂಡ ಕಾರ್ಖಾನೆಗೆ ಭೇಟಿ ಕೊಟ್ಟಿದ್ದರು. ಈ ವೇಳೆ ಒಪ್ಪಂದ ಪತ್ರ, ಕೋರ್ಟ್ ಆದೇಶವನ್ನ ನಿರಾಣಿ ಶುಗರ್ಸ್ ಕಂಪನಿ ವ್ಯವಸ್ಥಾಪಕರಿಗೆ ನೀಡಿ ನೌಕರರನ್ನ ವಾಪಸ್ ಕೆಲಸ ಸೇರಿಸಿಕೊಳ್ಳುವಂತೆ ತಾಕೀತು ಮಾಡಿದರು. ಆದರೆ, ಕಾರ್ಖಾನೆ ವ್ಯವಸ್ಥಾಪಕರು ಅದಕ್ಕೆ ಮನ್ನಣೆ ನೀಡಿಲ್ಲ ಎನ್ನಲಾಗಿದೆ.

## ಯಾರೊಬ್ಬರೂ ಒಂದು ರೂಪಾಯಿ ಲಂಚ ಕೊಡಬೇಡಿ: ಡಿ.ಕೆ. ಶಿವಕುಮಾರ್

### • 600 ಕೋಟಿ ರೂ.ಗೂ ಅಧಿಕ ಅನುದಾನದಲ್ಲಿ ಕ್ಷೇತ್ರ ಅಭಿವೃದ್ಧಿ ಆಗುತ್ತಿದೆ, ನಿಮಗೆ ಮನೆ ಕೊಡುವ ಕೆಲಸ ನಾವು ಮಾಡ್ತೇವೆ

• ಉದಯವಾಹಿನಿ ರಾಮನಗರ

ಸಾರ್ವಜನಿಕರು ಯಾರೂ ಕೂಡ ಒಂದು ರೂಪಾಯಿ ಲಂಚ ಕೊಡಬೇಡಿ. ನಿಮಗೆ ಮನೆ ಕೊಡುವ ಕೆಲಸ ನಾವು ಮಾಡ್ತೇವೆ ಎಂದು ರಾಮನಗರ ಜನತೆಗೆ ಡಿಸಿಎಂ ಡಿ.ಕೆ ಶಿವಕುಮಾರ್ ಭರವಸೆ ನೀಡಿದರು.

ರಾಮನಗರದಲ್ಲಿ ನಡೆದ ಕಾಂಗ್ರೆಸ್ ಕೃತಜ್ಞತಾ ಸಮಾವೇಶದಲ್ಲಿ ಮಾತನಾಡಿ ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ ವಿರುದ್ಧ ವಾಗ್ದಾಳಿ ನಡೆಸಿದರು. ಕುಮಾರಸ್ವಾಮಿ ಎರಡು ಬಾರಿ ಇಲ್ಲಿ ಶಾಸಕರಾಗಿ ಏನು ಸಾಕ್ಷಿ ಇದೆ. ಸರ್ಕಾರಿ ಶಾಲೆಗೆ 1 ಎಕರೆ ಜಾಗ ಕೊಟ್ಟಿದ್ದೀರಾ? ನೀವು ಕ್ಷೇತ್ರಕ್ಕೆ ಏನು ಕೊಡುಗೆ ನೀಡಿದ್ದೀರಿ ಎಂದು ಈಗ ನಾನು ಪ್ರಶ್ನೆ ಮಾಡಲ್ಲ. ಅದು ಜನರಿಗೆ ಗೊತ್ತಿದೆ. ಈ ಜಿಲ್ಲೆಗೆ ಸಾಕ್ಷಿ ಕೊಡುವ ಜವಾಬ್ದಾರಿ ಯೋಗೇಶ್ವರ್, ಬಾಲಕೃಷ್ಣ, ಇಕ್ಬಾಲ್ ಹುಸೇನ್ ಹಾಗೂ ನನ್ನ ಮೇಲೆ ಇದೆ. ಇದನ್ನು ಸವಾಲಾಗಿ ಸ್ವೀಕರಿಸಿ ಕೆಲಸ ಮಾಡಬೇಕು ಎಂದರು.

ಜೆಡಿಎಸ್ ಕಾರ್ಯಕರ್ತರಿಗೆ ಬಹಿರಂಗ ಆಹ್ವಾನ

ಗ್ಯಾರಂಟಿ ಯೋಜನೆ, ಅಭಿವೃದ್ಧಿ ಮೇಲೆ ನಂಬಿಕೆ ಇಟ್ಟು ಜನ ಅಧಿಕಾರ ಕೊಟ್ಟಿದ್ದಾರೆ. 600 ಕೋಟಿ ರೂ.ಗೂ ಅಧಿಕ ಅನುದಾನದಲ್ಲಿ ಕ್ಷೇತ್ರ ಅಭಿವೃದ್ಧಿ ಆಗುತ್ತಿದೆ. ಕಣ್ಣೀರು ಬೇಕೋ ಅಥವಾ ಅಭಿವೃದ್ಧಿ ಬೇಕೋ ಎಂದು ನಾವು ನಿಮ್ಮ ಮುಂದೆ ಬಂದಿದ್ದವು. ನಮಗೆ ಅಭಿವೃದ್ಧಿ ಬೇಕು, ಕಣ್ಣೀರು ಬೇಡ ಅಂತ ನೀವು ತೀರ್ಮಾನ ಮಾಡಿದ್ದೀರಿ. ಬಿಜೆಪಿ, ಜೆಡಿಎಸ್‌ನ ಬ್ಲಾಕ್ ಮೇಲ್ ರಾಜಕಾರಣಕ್ಕೆ ನೀವು ಜಗ್ಗಲಿಲ್ಲ. ನಿಮ್ಮ ತೀರ್ಪನ್ನು ಮರೆಯಲು ಸಾಧ್ಯವಿಲ್ಲ ಎಂದು ಹೇಳಿದರು.

ಇದು ಋಣ ತೀರಿಸುವ ಕಾರ್ಯಕ್ರಮವಾಗಿದೆ. ನೀವು ಕೊಟ್ಟ ಶಕ್ತಿಗೆ ಅಭಿನಂದನೆ ತಿಳಿಸುತ್ತಿದ್ದೇವೆ. 2 ಬಾರಿ ಈ ಕಾರ್ಯಕ್ರಮ ಮುಂದೂಡಲ್ಪಟ್ಟಿತ್ತು. ಇವತ್ತಿನ ಈ ಕಾರ್ಯಕ್ರಮಕ್ಕೆ ಸಿಎಂ ಬರಬೇಕಿತ್ತು. ಬೆಳಿಗ್ಗೆ ಅವರ ಕಾಲಿಗೆ ನೋವಾಗಿದೆ. ಮಣಿಪಾಲ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಂಡಿದ್ದಾರೆ. ವೈದ್ಯರ ಸಲಹೆ ಮೇರೆಗೆ ಮನೆಯಲ್ಲಿ ರೆಸ್ಟ್ ಮಾಡುತ್ತಿದ್ದಾರೆ. ಪಕ್ಷದ ಪರವಾಗಿ, ಜಿಲ್ಲೆಯ ಶಾಸಕನಾಗಿ ನಾನು ಕೃತಜ್ಞತೆ ಸಲ್ಲಿಸಲು ಬಂದಿದ್ದೇನೆ.



ಉದಯವಾಹಿನಿ ಚಿತ್ರ

ಜನತಾದಳದ ಕಾರ್ಯಕರ್ತರು ಪಾಪ, ಟೈಂ ವೇಸ್ಟ್ ಮಾಡಿಕೊಳ್ಳಬೇಡಿ. ರಾಮನಗರ ಅಭಿವೃದ್ಧಿ ಪಥದಲ್ಲಿ ಸಾಗುತ್ತಿದೆ. ಮುಂದೆ ಬೆಂಗಳೂರಿಗೆ ಸೇರುತ್ತಿದೆ. ಅಲ್ಲಿ ಒಬ್ಬ ವ್ಯಕ್ತಿಗಾಗಿ ಪಕ್ಷ ಬಲಿ ಕೊಡುವ ಕೆಲಸ ಆಗಿದೆ. ಇದರ ಬಗ್ಗೆ ಹೆಚ್ಚು ಮಾತನಾಡಲ್ಲ, ನೀವೇ ಯೋಚನೆ ಮಾಡಿ ಎಂದು ಜೆಡಿಎಸ್ ಕಾರ್ಯಕರ್ತರಿಗೆ ಬಹಿರಂಗ ಆಹ್ವಾನ ನೀಡಿದರು.

### ಹಾಲಿನ ದರ ಏರಿಕೆ ಆಗಬೇಕು

ನೀರು, ಹಾಲಿನ ಬೆಲೆ ಎರಡೂ ಒಂದೇ ಆಗಿದೆ. ಹಾಲಿನ ದರ ಏರಿಕೆ ಆಗಬೇಕು ಅಂತ ಮನವಿ ಮಾಡಿದ್ದೀರಿ. ಮುಂದಿನ ದಿನಗಳಲ್ಲಿ ಈ ಕಾರ್ಯವು ಆಗುತ್ತದೆ. ರಾಮನ ತಂದೆ ದಶರಥ. ರಾಮನ ಬಂಟ ಆಂಜನೇಯ. ದಶರಥನ ದೇವಾಲಯ ಎಲ್ಲೂ ಇಲ್ಲ. ಆದರೆ ಆಂಜನೇಯನ ದೇವಾಲಯ ಎಲ್ಲಾ ಕಡೆ ಇದೆ. ಯಾಕಂದ್ರೆ, ಆಂಜನೇಯ ಪ್ರಾಮಾಣಿಕ ಸೇವಕ. ಜನರು ಸಹ ಸೇವೆ ಮಾಡುವವರನ್ನು ಗುರುತಿಸೋದು. ನಿಮ್ಮ ಸೇವೆಯನ್ನು ಮಾಡುವ ಕೆಲಸ ನಾವು ಮಾಡುತ್ತೇವೆ ಎಂದರು.

ಚುನಾವಣೆ ಸಮಯದಲ್ಲಿ ಸಾಕಷ್ಟು ಸಮೀಕ್ಷೆ ಬರುತ್ತಿದ್ದವು. ನಾನು ಮೊದಲೇ 138 ನಮ್ಮ ನಂಬರ್ ಅಂತ ಹೇಳಿದ್ದೆ. ಉಪಚುನಾವಣೆಗೂ ಮುಂಚೆಯೇ ಹೇಳಿದ್ದೆ. ಮೂರು ಕ್ಷೇತ್ರದಲ್ಲೂ ಗೆಲ್ಲುತ್ತೇವೆ ಅಂದಿದ್ದೆ. ಎರಡೂ ಕಡೆ ಮಾಜಿ ಸಿಎಂ ಪುತ್ರರಿದ್ದರೂ ಸಹ ನಮ್ಮನ್ನ ಬೆಂಬಲಿಸಿದ್ದೀರಿ. ಮಾಧ್ಯಮಗಳ ಸಮೀಕ್ಷೆ ಉಲ್ಟಾ ಆಯ್ತು. ಇದು ನಿಮ್ಮ ಮೇಲೆ ನನಗಿದ್ದ ನಂಬಿಕೆ ಎಂದು ನುಡಿದರು.

ಕಾರ್ಯಕರ್ತರು ಯಾರು ಚಿಂತೆ ಮಾಡಬೇಕಾಗಿಲ್ಲ. ನಿಮ್ಮೆಲ್ಲರನ್ನು ರಕ್ಷಣೆ ಮಾಡುವ ಜವಾಬ್ದಾರಿ ನಮ್ಮದು. ಮಹಿಳೆಯರು ನಮಗೆ ಹೆಚ್ಚು ಬೆಂಬಲ ಕೊಟ್ಟಿದ್ದಾರೆ. ಕಾರ್ಯಕರ್ತರು ಒಗ್ಗಟ್ಟಾಗಿ ಕೆಲಸ ಮಾಡಿದ್ದಾರೆ. ಇದನ್ನು ಹೀಗೆ ಮುಂದುವರೆಸಿಕೊಂಡು ಹೋಗಬೇಕು, ಗೊಂದಲಕ್ಕೆ ಅವಕಾಶ ಕೊಡಬೇಡಿ. ನಾನು, ಸುರೇಶ್ ಎಲ್ಲರೂ ನಿಮ್ಮ ಜೊತೆ ಇರುತ್ತೇವೆ. ಕ್ಷೇತ್ರದ ಇತಿಹಾಸದಲ್ಲಿ ದೊಡ್ಡ ಬಹುಮತ ಕೊಟ್ಟಿದ್ದೀರಿ. ನಿಮ್ಮ ಋಣವನ್ನ ತೀರಿಸುವ ಕೆಲಸ ಮಾಡುತ್ತೇವೆ ಎಂದು ಕೃತಜ್ಞತೆ ವ್ಯಕ್ತಪಡಿಸಿದರು.

## ಅಂತರಾಳದಿಂದ... EDITORIAL

# ಶೈಕ್ಷಣಿಕ ಸ್ಥಿತಿ ಕುರಿತ ವರದಿ

## ಸರ್ಕಾರಕ್ಕೆ ಎಚ್ಚರಿಕೆಯ ಗಂಟೆ



ಶಿಕ್ಷಣದ ಸ್ಥಿತಿಗತಿ ಕುರಿತ ವಾರ್ಷಿಕ ವರದಿ (ಎಎಸ್‌ಇಆರ್)– 2024 ಪ್ರಕಟವಾಗಿದ್ದು, ಕರ್ನಾಟಕದಲ್ಲಿ ಕಲಿಕೆಯ ಸ್ಥಿತಿ ಹೇಗಿದೆ ಎಂಬ ಬಗ್ಗೆ ಇದು ಗಂಭೀರ ವಿಚಾರಗಳನ್ನು ತೆರೆದಿಟ್ಟಿದೆ. ವರದಿಯಲ್ಲಿ ಉಲ್ಲೇಖವಾಗಿರುವ ವಿಷಯಗಳ ಬಗ್ಗೆ ಸಂಬಂಧಪಟ್ಟವರು ತುರ್ತಾಗಿ ಗಮನಹರಿಸಬೇಕಾದ ಅಗತ್ಯ ಇದೆ. ಮೂರನೇ ತರಗತಿಯ ಶೇಕಡ 7.1ರಷ್ಟು ಮಕ್ಕಳು ಒಂದು ಅಕ್ಷರವನ್ನೂ ಓದುವ ಸಾಮರ್ಥ್ಯ ಪಡೆದಿಲ್ಲ. ಶಿಕ್ಷಣ ವ್ಯವಸ್ಥೆಯು ಹಳಿ ತಪ್ಪಿದೆ ಎಂದು ವರದಿಯು ಹೇಳುತ್ತಿದೆ. ಅದರಲ್ಲೂ ಮುಖ್ಯವಾಗಿ, ಗ್ರಾಮಾಂತರ ಪ್ರದೇಶಗಳಲ್ಲಿ ಪರಿಸ್ಥಿತಿ ಬಹಳ ಕೆಟ್ಟಿದೆ. ಈ ವರದಿಯಲ್ಲಿ ಇರುವುದು ಅಂಕಿ ಅಂಶಗಳು ಮಾತ್ರವೇ ಅಲ್ಲ. ಕಲಿಕಾ ಅವಕಾಶಗಳ ಕೊರತೆಯ ಕಾರಣದಿಂದಾಗಿ ಅಸಂಖ್ಯ ಮಕ್ಕಳ ಭವಿಷ್ಯ ಕಮರುತ್ತಿದೆ ಎಂಬುದನ್ನು ಕೂಡ ವರದಿಯು ಹೇಳುತ್ತಿದೆ. ಕಲಿಕಾ ಮಟ್ಟವು ಬಹಳ ಕಡಿಮೆ ಇರುವುದಕ್ಕೆ ಒಂದು ಮುಖ್ಯ ಕಾರಣ ಶಿಕ್ಷಕರಿಗೆ ಅಗತ್ಯ ಪ್ರಮಾಣದಲ್ಲಿ ತರಬೇತಿ ಸಿಗದಿರುವುದು. ಹಲವು ಶಾಲೆಗಳಲ್ಲಿ ಶಿಕ್ಷಕರಿಗೆ ಸರಿಯಾದ ಅರ್ಹತೆ ಇಲ್ಲ, ಅವರಿಗೆ ಪ್ರೇರಣೆ ಇಲ್ಲ ಅಥವಾ ಮಕ್ಕಳಿಗೆ ಪರಿಣಾಮ ಕಾರಿಯಾಗಿ ಕಲಿಸಲು ಅಗತ್ಯವಿರುವ ಸೌಲಭ್ಯಗಳು ಇಲ್ಲ. ಇದರ ಪರಿಣಾಮವಾಗಿ ಮಕ್ಕಳಿಗೆ ಸಿಗುತ್ತಿರುವ ಶಿಕ್ಷಣದ ಗುಣಮಟ್ಟವು ಕಡಿಮೆ ಆಗಿದೆ. ಮಕ್ಕಳು ಮುಂದೆ ಶೈಕ್ಷಣಿಕವಾಗಿ ಹೆಚ್ಚಿನ ಸಾಧನೆ ತೋರುವುದಕ್ಕೆ ಅಡ್ಡಿ ಸೃಷ್ಟಿಯಾಗಿದೆ.

**ಸರ್ಕಾರಿ ಹಾಗೂ ಖಾಸಗಿ ಶಾಲೆಗಳ ಬಹಳ ಕಡಿಮೆ ಪ್ರಮಾಣದಷ್ಟು ವಿದ್ಯಾರ್ಥಿಗಳು ಕೂಡಿಸುವ, ಕಳೆಯುವ, ಗುಣಿಸುವ ಹಾಗೂ ಭಾಗಿಸುವ ಕೌಶಲವನ್ನು ಪಡೆದುಕೊಂಡಿದ್ದಾರೆ ಎಂಬುದನ್ನು ವರದಿಯು ಹೇಳಿದೆ. ಸಾಹಿತ್ಯಕ ಕೌಶಲವನ್ನು ಪಡೆದುಕೊಂಡಿರುವ ಮಕ್ಕಳ ಪ್ರಮಾಣ ಕೂಡ ಬಹಳ ಕಡಿಮೆ ಎಂದು ಹೇಳಿದೆ.**

ಈ ಸಮಸ್ಯೆಯನ್ನು ಪರಿಹರಿಸಬೇಕು ಎಂದಾದರೆ ಸರ್ಕಾರವು ಶಿಕ್ಷಕರಿಗೆ ಹೆಚ್ಚಿನ ತರಬೇತಿ ನೀಡುವುದನ್ನು ಹಾಗೂ ವೃತ್ತಿಯಲ್ಲಿ ಅವರು ಬೆಳೆಯುವುದನ್ನು ತನ್ನ ಆದ್ಯತೆಯ ಕೆಲಸವಾಗಿ ಪರಿಗಣಿಸಬೇಕು. ತಮ್ಮ ಜ್ಞಾನದ ಮಟ್ಟ ಹೇಗಿದೆ ಹಾಗೂ ತಾವು ಬೋಧಿಸುತ್ತಿರುವುದು ಎಷ್ಟರಮಟ್ಟಿಗೆ ಪರಿಣಾಮಕಾರಿಯಾಗಿ ಇದೆ ಎಂಬುದನ್ನು ಶಿಕ್ಷಕರು ಕಾಲಕಾಲಕ್ಕೆ ಮೌಲ್ಯಮಾಪನಕ್ಕೆ ಒಳಪಡಿಸಿಕೊಳ್ಳಬೇಕು. ಶಿಕ್ಷಕರಿಗೆ ನಿರಂತರವಾಗಿ ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸಬೇಕು. ಆಧುನಿಕ ಬೋಧನಾ ಕ್ರಮಗಳ ಬಗ್ಗೆ ಹಾಗೂ ಶೈಕ್ಷಣಿಕ ಪರಿಕರಗಳ ಬಳಕೆಯ ಬಗ್ಗೆ ಗಮನ ನೀಡಬೇಕು. ವಿದ್ಯಾರ್ಥಿಗಳ ವೈಯಕ್ತಿಕ ಅಗತ್ಯಗಳಿಗೆ ಅನುಗುಣವಾಗಿ ಪಾಠಗಳಲ್ಲಿ ತುಸು ಬದಲಾವಣೆ ತಂದುಕೊಳ್ಳುವ, ಶಿಕ್ಷಕರಲ್ಲಿನ ಕೊರತೆಯ ಕಾರಣದಿಂದಾಗಿ ಯಾವುದೇ ಮಗು ಕಲಿಕೆಯಲ್ಲಿ ಹಿಂದೆ ಉಳಿಯದಂತೆ ನೋಡಿಕೊಳ್ಳುವ ಕೆಲಸವು ಇಂತಹ ತರಬೇತಿ ಕಾರ್ಯಕ್ರಮಗಳ ಮೂಲಕ ಆಗಬೇಕು. ಪಾಠಗಳನ್ನು ದೃಶ್ಯ ಮಾಧ್ಯಮದ ಮೂಲಕ ಹೇಳಿಕೊಡಲು ಬೇಕಿರುವ ಸೌಲಭ್ಯ, ಅಗತ್ಯವಾದ ಚಿತ್ರಪಟಗಳು, ಮಾಹಿತಿ ಮತ್ತು ಸಂವಹನ ತಂತ್ರಜ್ಞಾನ ಆಧಾರಿತ ಪರಿಕರಗಳು ಶಾಲೆಗಳಲ್ಲಿ ಲಭ್ಯವಿರುವಂತೆ ಸರ್ಕಾರ ಮಾಡಬೇಕು. ಹೀಗೆ ಆದಾಗ ಕಲಿಕಾ ಪ್ರಕ್ರಿಯೆಯು ಮಕ್ಕಳ ಪಾಲಿಗೆ ಚೇತೋಹಾರಿಯೂ ಆಗುತ್ತದೆ.

ವಿದ್ಯಾರ್ಥಿಗಳ ಸಾಮಾಜಿಕ ಹಾಗೂ ಶೈಕ್ಷಣಿಕ ಹಿನ್ನೆಲೆ ಏನು ಎಂಬುದು ಅವರ ಕಲಿಕಾ ಮಟ್ಟದ ಮೇಲೆ ದೊಡ್ಡ ಮಟ್ಟದಲ್ಲಿ ಪರಿಣಾಮ ಉಂಟುಮಾಡುತ್ತದೆ. ಬಡ ಕುಟುಂಬಗಳಿಂದ ಬರುವ ವಿದ್ಯಾರ್ಥಿಗಳ ತಂದೆ ತಾಯಿ ಹೆಚ್ಚಿನ ವಿದ್ಯಾರ್ಹತೆ ಹೊಂದಿರುವುದಿಲ್ಲ, ಮಕ್ಕಳಿಗೆ ಅಗತ್ಯವಿರುವ ಕಲಿಕಾ ಪರಿಸರವನ್ನು ಮನೆಯಲ್ಲಿ ರೂಪಿಸಿಕೊಡಲು ಅವರಿಗೆ ಆಗುವುದಿಲ್ಲ. ಇಂತಹ ಸಮಸ್ಯೆಯನ್ನು ಪರಿಹರಿಸಲು ಶಾಲೆಗಳಲ್ಲಿ ನಿಗದಿತ ಅವಧಿಯ ನಂತರ ವಿಶೇಷ ತರಗತಿಗಳನ್ನು ನಡೆಸುವುದು ಅಗತ್ಯವಾಗಬಹುದು. ಹೀಗೆ ಮಾಡಿದಾಗ ಕಲಿಕೆಯಲ್ಲಿ ಎಲ್ಲರನ್ನೂ ಒಳಗೊಳ್ಳಲು ಹಾಗೂ ಸಮಾನತೆಯನ್ನು ತರಲು ಸಾಧ್ಯವಾಗು ತ್ತದೆ. ಶಿಕ್ಷಣದ ಗುಣಮಟ್ಟವನ್ನು ಹೆಚ್ಚು ಮಾಡಲು ಸರ್ಕಾರವು ಗಟ್ಟಿ ತೀರ್ಮಾನಗಳನ್ನು ತೆಗೆದುಕೊಳ್ಳಬೇಕಾಗುತ್ತದೆ. ಶಾಲೆಗಳಿಗೆ ಅಗತ್ಯ ಪ್ರಮಾಣದಲ್ಲಿ ಅನುದಾನದ ಖಾತರಿ ನೀಡುವುದು. ಸ್ಥಳೀಯ ಸಮುದಾಯಗಳ ನೆರವು ಪಡೆದುಕೊಳ್ಳುವುದು. ಸ್ವಯಂಸೇವಾ ಸಂಸ್ಥೆಗಳನ್ನು ಪಾಲುದಾರರನ್ನಾಗಿ ಮಾಡಿಕೊಳ್ಳುವುದು. ಶಿಕ್ಷಕರಿಗೆ ತರಬೇತಿ ಒದಗಿಸುವ ವ್ಯವಸ್ಥೆಯನ್ನು ಬಲಪಡಿಸುವುದು, ಶೈಕ್ಷಣಿಕ ಮೂಲಸೌಕರ್ಯವನ್ನು ಹೆಚ್ಚಿಸುವುದು ಆ ತೀರ್ಮಾನಗಳಲ್ಲಿ ಕೆಲವು. ಈ ಕ್ರಮಗಳನ್ನು ಸರ್ಕಾರವು ಕೈಗೊಳ್ಳದೇ ಇದ್ದರೆ ಉತ್ತಮ ಕಲಿಕಾ ಮಟ್ಟವನ್ನು ತಲುಪುವುದು ಸಾಧ್ಯವಾಗುವುದಿಲ್ಲ. ಗ್ರಾಮೀಣ ಪ್ರದೇಶಗಳಲ್ಲಿ ಹಾಗೂ ಅಗತ್ಯವಿರುವ ಇತರ ಪ್ರದೇಶಗಳಲ್ಲಿ ಶಿಕ್ಷಣ ವ್ಯವಸ್ಥೆಯನ್ನು ಸರಿಪಡಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಈ ವರದಿಯು ಸರ್ಕಾರಕ್ಕೆ ಒಂದು ಎಚ್ಚರಿಕೆಯ ಗಂಟೆ. ಅಂತಹ ಕ್ರಮಗಳನ್ನು ಕೈಗೊಂಡಾಗ ಮಾತ್ರ, ಸರ್ಕಾರವು ಪ್ರತಿ ಮಗುವಿನ ಅಗತ್ಯಗಳಿಗೂ ಸ್ಪಂದಿಸುವ ಶಿಕ್ಷಣ ವ್ಯವಸ್ಥೆಯನ್ನು ರೂಪಿಸಲು ಸಾಧ್ಯವಾಗುತ್ತದೆ.



# ರಾಮಾಯಣ

## ಶ್ರೀ ರಾಮನು ಪಟ್ಟಾಭಿಷೇಕಕ್ಕಾಗಿ ಪ್ರತವನ್ನಾಚರಿಸಿದ್ದು

• ಹಿಂದಿನ ಸಂಚಿಕೆಯಿಂದ **78 ನೆಯ ಅಧ್ಯಾಯ**

ಆ ಪಟ್ಟಣವು ಮೇಲ್ಕಟ್ಟುಗಳೂ ತೋರಣಗಳೂ ಪರಿಮಳೋದಕ ರಂಗವಲ್ಲಿ ಪುಷ್ಪಮಾಲಿಕೆಗಳೂ ಉಳ್ಳದ್ದಾಗಿ ಅತ್ಯಂತ ಮನೋಹರವಾಗಿ ಒಪ್ಪುತ್ತಿತ್ತು, ಅಲ್ಲಿದ್ದ ಜನ ಪರಿಜನ ಪುರಜನಗಳು ಮೊದಲಾದ ಸಮಸ್ತ ಪ್ರಜೆಗಳೂ ಯಾವಾಗ ಸೂರೋದಯವಾಗುವುದೊ ಯಾವಾಗ ಶ್ರೀ ರಾಮನು ಪಟ್ಟಾಭಿಷಿಕ್ತನಾಗಿ ಸರ್ವಾಭರಣಭೂಷಿತನಾಗಿ ಬರುವನೊ ಯಾವಾಗ ಆತನನ್ನು ಕಣ್ಣುಗಳೂ ಮನಸೂ ದಣಿಯುವಂತೆ ನೋಡುವೆವೊ ಎಂದು ಅತ್ಯಂತ ಲವಲವಿಕೆಯಿಂದ ಕಾಯುತ್ತಿದ್ದರು. ಹೀಗೆ ಇಟ್ಟಣಿಸಿದ್ದ ರಾಜಮಾರ್ಗಗಳಿಂದ ಅಯೋಧ್ಯಾಪಟ್ಟಣವು ಅತ್ಯಂತ ಮನೋಹರವಾಗಿರಲು, ವಸಿಷ್ಠ ಮುನೀಶ್ವರನು ಆ ಜನಸಮೂಹಗಳಲ್ಲಿ ದಾರಿಮಾಡಿಕೊಂಡು ದಶರಥರಾಯನ ಅರಮನೆಗೆ ಬಂದು ಕೈಲಾಸಪರ್ವತದ ಕೋಡುಗಲ್ಲಿನಂತೆ ಬಹಳ ಉನ್ನತವಾಗಿ ಹಾಲುಗಾರೆಯಿಂದ ಅತ್ಯಂತ ಬಿಳುಪಾಗಿದ್ದ ಉಪ್ಪರಿಗೆಯನ್ನು ಹತ್ತಿ ಆ ರಾಯನನ್ನು ಕಂಡನು. ದೇವೇಂದ್ರನು ತನ್ನ ಗುರುವಾದ ಬೃಹಸ್ಪತಿಯನ್ನು ಕಂಡು ಪ್ರತ್ಯುತ್ಥಾನಾದಿಗಳನ್ನೂ ಮದನೆಯನ್ನೂ ಮಾಡುವಂತೆ ದಶರಥನು ವಸಿಷ್ಠ ಮುನೀಶ್ವರನನ್ನು ಕಂಡು ನಮಸ್ಕರಿಸಿ ಮುನೀಶ್ವರರೆ, ಶ್ರೀ ರಾಮನಿಗೆ ಪಟ್ಟಾಭಿಷೇಕಾಂಗವಾದ ವ್ರತನಿಯಮವನ್ನೂ ಉಪವಾಸವನ್ನೂ ಮಾಡಿಸಿದಿರಾ ಎಂದು ಆತನನ್ನು ಕೇಳಿದನು. ಆ ಮುನೀಶ್ವರನು ಎಲೈ ರಾಯನೆ, ಶ್ರೀರಾಮನಿಗೆ ಸಾಂಗವಾಗಿ ಪ್ರತೋಪವಾಸನಿಯಮ ವನ್ನು ಉಪದೇಶಮಾಡಿ ಬಂದೆನು ಎಂದು ಹೇಳಿದನು.

ದಶರಥನು ಅತ್ಯಂತ ಹರ್ಷದಿಂದ ವಸಿಷ್ಠಮುನೀಶ್ವರನಿಗೆ ಆಸನವನ್ನು ಕೊಟ್ಟು ಕುಳ್ಳಿರಿಸಿ ತಾನೂ ಸಿಂಹಾಸನಾರೂಢನಾಗಿರಲು, ಆ ಆಸ್ಥಾನಮಂಟಪದಲ್ಲಿದ್ದ ಸಮಸ್ತ ದೊರೆಗಳೂ ಒಬ್ಬೊಬ್ಬರಾಗಿ ವಸಿಷ್ಠ ಮುನೀಶ್ವರನಿಗೆ ಅಭಿನಂದಿಸಿದರು. ಆಮೇಲೆ ದಶರಥರಾಯನು ಆ ದೊರೆಗಳನ್ನೂ ಸಮಸ್ತ ಪುರಜನ ಪರಿಜನರನ್ನೂ ಕಳುಹಿಸಿ ಗುರುಗಳ ಅಪ್ಪಣೆಯಿಂದ, ಸಿಂಹರಾಜನು ತನ್ನ ಪರ್ವತದ ಗುಹೆಯನು ಪ್ರವೇಶಿಸುವ ಹಾಗೆಯೂ ನಕ್ಷತ್ರಸಮೂಹದಿಂದಿಟ್ಟಣಿಸಿರುವ ಅಂತರಿಕ್ಷಮಾರ್ಗವನ್ನು ಚಂದ್ರನು ಪ್ರವೇಶಿಸುವ ಹಾಗೆಯೂ ಸಮಸ್ತಾಭರಣಭೂಷಿತೆಯರಾದ ಸ್ತ್ರೀಜನರಿಂದ ಇಟ್ಟಣಿಸಿ ದೇವೇಂದ್ರನ ಅರಮನೆಗೆ ಸಮಾನವಾಗಿ ಮನೋಹರವಾದ ತನ್ನ ಅಂತಃಪುರವನ್ನು ಪ್ರವೇಶಿಸಿದನು. ಅಯೋಧ್ಯಾ ಪಟ್ಟಣವನ್ನು ಅಲಂಕರಿಸಿದ್ದು ಪುರೋಹಿತನಾದ ವಸಿಷ್ಠಮಹಾಮುನಿಯು ಹೊರಟು ಹೋದ ಬಳಿಕ ರಘುನಂದನನು ಕಾಯಶುದ್ಧಿಗೋಸುಗ ಸ್ನಾನವನ್ನು ಮಾಡಿ ವಿಶಾಲಾಕ್ಷಿಯಾದ ಸೀತಾದೇವಿಯೊಡನೆ ಶ್ರೀಮನ್ನಾರಾಯಣನನ್ನು ಉಪಾಸಿಸಿದನು. ದಶರಥನಂದನನಾದ ಶ್ರೀ ರಾಮನು ಆ ವೇಳೆಯಲ್ಲಿ ಹವಿಸ್ಸಿನ ಪಾತ್ರೆಯನ್ನು ತಿರಸ್ಸಿನಲ್ಲಿ ಧರಿಸಿ ಮಹಾಮಹಿಮೆಯುಳ್ಳ ಶ್ರೀ ಮನ್ನಾರಾಯಣನನ್ನು ಕುರಿತು ಪ್ರಜ್ವಲಿಸುವ ಅಗ್ನಿಯಲ್ಲಿ ಯಥಾವಿಧಿಯಾಗಿ ಹೋಮಮಾಡಿ, ಆ ಹವಿಃಶೇಷವನ್ನು ಭುಜಿಸಿ ಶ್ರೀಮನ್ನಾರಾಯಣನನ್ನು ಧ್ಯಾನಿಸುತ್ತಾ ಮೌನವ್ರತವುಳ್ಳವನಾಗಿಯೂ ನಿಶ್ಚಂಚಲವಾದ ಮನಸ್ಸುಳ್ಳವನಾಗಿಯೂ ಜಿತೇಂದ್ರಿಯನಾಗಿಯೂ ದರ್ಭಾಸನದಲ್ಲಿ ಸೀತಾದೇವಿಯೊಡನೆ ದೇವರ ಮನೆಯಲ್ಲಿ ಮಲಗಿದ್ದನು.

**ಮುಂದುವರಿಯುವುದು...**

# ಮೆದುಳಿನ ನರ ಸಿಡಿಯುತ್ತಂತೆ ಗೊತ್ತಾ?



• **ಉದಯವಾಹಿನಿ, ಬೆಂಗಳೂರು**

ಅಧಿಕ ರಕ್ತದೊತ್ತಡವು ಹೃದಯ, ಮೆದುಳು, ಮೂತ್ರ ಪಿಂಡಗಳು, ಕಣ್ಣುಗಳಂತಹ ಅಂಗಗಳಿಗೆ ಹಾನಿಯನ್ನುಂಟು ಮಾಡುತ್ತದೆ. ರಕ್ತದೊತ್ತಡ ಹೆಚ್ಚಾದಾಗ ಮೆದುಳಿನ ನರ ಒಡೆಯುವ ಸಾಧ್ಯತೆ ಇದೆ. ಹಾಗಾಗಿ ಅಧಿಕ ರಕ್ತದೊತ್ತಡವನ್ನು ನಿಯಂತ್ರಣದಲ್ಲಿಡಬೇಕಾಗಿರುವುದು ಮುಖ್ಯ. ಅಧಿಕ ರಕ್ತದೊತ್ತಡವು ಒಂದು ಅಪಾಯಕಾರಿ ಕಾಯಿಲೆಯಾಗಿದ್ದು, ಅದರಿಂದಾಗಿ ಮೆದುಳಿನ ನರಗಳು ದುರ್ಬಲಗೊಳ್ಳಬಹುದು. ಕೆಲವೊಮ್ಮೆ ಅತಿಯಾದ ಒತ್ತಡದಿಂದಾಗಿ ಮೆದುಳಿನ ನರಗಳು ಸಹ ಸಿಡಿಯುತ್ತವೆ. ಇದು ನಂತರ ಮೆದುಳಿನೊಳಗೆ ರಕ್ತಸ್ರಾವ, ಹೆಪ್ಪುಗಟ್ಟುವಿಕೆ ಮತ್ತು ಪಾರ್ಶ್ವವಾಯುವಿನ ಅಪಾಯವನ್ನು ಹೆಚ್ಚಿಸುತ್ತದೆ. ಆದ್ದರಿಂದ ಅಧಿಕ ರಕ್ತದೊತ್ತಡವನ್ನು ಆದಷ್ಟು ಕಂಟ್ರೋಲ್‌ನಲ್ಲಿಡುವುದು ಮುಖ್ಯ.

**ಅಧಿಕ ರಕ್ತದೊತ್ತಡದ ಲಕ್ಷಣಗಳು:** ಹೆಚ್ಚಿನ ರಕ್ತದೊತ್ತಡ ಹೊಂದಿರುವ ಪ್ರತಿಯೊಬ್ಬ ವ್ಯಕ್ತಿಯು ಮೆದುಳಿನ ರಕ್ತಸ್ರಾವದ ಅಪಾಯವನ್ನು ಎದುರಿಸುತ್ತಾರೆ . ಅಧಿಕ ರಕ್ತದೊತ್ತಡ ಇದ್ದಾಗ, ತೀವ್ರ ತಲೆನೋವು, ವಾಕರಿಕೆ, ವಾಂತಿ, ದೃಷ್ಟಿಯಲ್ಲಿ ಬದಲಾವಣೆ, ಗೊಂದಲ ಅಥವಾ ಮರಗಟ್ಟುವಿಕೆ ಮುಂತಾದ ಹಲವು ರೀತಿಯ ಲಕ್ಷಣಗಳು ಕಂಡುಬರುತ್ತವೆ.

**ಅಧಿಕ ರಕ್ತದೊತ್ತಡವನ್ನು ಅಳೆಯುವುದು ಹೇಗೆ**

**ಅಧಿಕ ರಕ್ತದೊತ್ತಡ:** 130/80 ಮಿಲಿಮೀಟರ್ ಪಾದರಸ (mm Hg) ಅಥವಾ ಅದಕ್ಕಿಂತ ಹೆಚ್ಚಿದ್ದರೆ ಅದನ್ನು ಅಧಿಕ ರಕ್ತದೊತ್ತಡ ಎಂದು ಕರೆಯಲಾಗುತ್ತದೆ.

**ರಕ್ತದೊತ್ತಡ ಮತ್ತು ಅದರ ವ್ಯಾಪ್ತಿಯನ್ನು ಅಳೆಯುವ ವಿಧಾನ ಹೀಗಿದೆ:** ಸಾಮಾನ್ಯ ರಕ್ತದೊತ್ತಡ: 120/80 mmHg ಗಿಂತ ಕಡಿಮೆ

**ಹೆಚ್ಚಿದ ರಕ್ತದೊತ್ತಡ:** 120–129 ಸಿಸ್ಟೊಲಿಕ್ ಮತ್ತು 80 ಕ್ಕಿಂತ ಕಡಿಮೆ ಡಯಾಸ್ಟೊಲಿಕ್

**ಮೊದಲ ಹಂತದ ಅಧಿಕ ರಕ್ತದೊತ್ತಡ:** 130–139 ಸಿಸ್ಟೊಲಿಕ್ ಅಥವಾ 80–89 ಡಯಾಸ್ಟೊಲಿಕ್



**ಎರಡನೇ ಹಂತದ ಅಧಿಕ ರಕ್ತದೊತ್ತಡ:** 140 ಅಥವಾ ಹೆಚ್ಚಿನ ಸಿಸ್ಟೊಲಿಕ್ ಅಥವಾ 90 ಅಥವಾ ಹೆಚ್ಚಿನ ಡಯಾಸ್ಟೊಲಿಕ್ 40 ವರ್ಷಕ್ಕಿಂತ ಮೇಲ್ಪಟ್ಟ ಜನರಲ್ಲಿ ಅಧಿಕ ರಕ್ತಸ್ರಾವ ಶೇಕಡ 95 ರಷ್ಟು ಮೆದುಳಿನ ರಕ್ತಸ್ರಾವ ಪ್ರಕರಣಗಳು ಅಧಿಕ ರಕ್ತದೊತ್ತಡದಿಂದ ಉಂಟಾಗುತ್ತವೆ. ಹಾಗಾಗಿ ಪ್ರತಿಯೊಬ್ಬರು ಯಾವಾಗಲೂ ತಮ್ಮ ರಕ್ತದೊತ್ತಡವನ್ನು ಪರೀಕ್ಷಿಸಿಕೊಳ್ಳಬೇಕು.

ಆದ್ದರಿಂದ ಅತಿಯಾದ ರಕ್ತದೊತ್ತಡ ದೇಹಕ್ಕೆ ಅಪಾಯಕಾರಿ ಎಂದು ಸಾಬೀತುಪಡಿಸಬಹುದು. 40 ವರ್ಷಕ್ಕಿಂತ ಮೇಲ್ಪಟ್ಟ ಜನರು ತಮ್ಮ ರಕ್ತದೊತ್ತಡದ ಬಗ್ಗೆ ವಿಶೇಷ ಕಾಳಜಿ ವಹಿಸಬೇಕು, ಇಲ್ಲದಿದ್ದರೆ ರಕ್ತದೊತ್ತಡದ ಜೊತೆಗೆ ಕೊಲೆಸ್ಟ್ರಾಲ್ ಮತ್ತು ಸಕ್ಕರೆಯ ಮಟ್ಟವೂ ಹೆಚ್ಚಾದರೆ ಅದು ಅಪಾಯಕಾರಿಯಾಗಿದೆ.

### ಮೆದುಳಿನ ರಕ್ತಸ್ರಾವ

**ಹಲವು ಬಾರಿ ಅಧಿಕ ರಕ್ತದೊತ್ತಡದಿಂದಾಗಿ ಮೆದುಳಿನ ರಕ್ತಸ್ರಾವ ಸಂಭವಿಸುತ್ತದೆ. ಇದರಿಂದಾಗಿ ವ್ಯಕ್ತಿಯ ಜೀವ ಕಳೆದುಕೊಳ್ಳುವ ಅಪಾಯವಿದೆ. ಮೆದುಳಿನ ರಕ್ತಸ್ರಾವವನ್ನು ನೀವು ಒಂದು ರೀತಿಯ ಪಾರ್ಶ್ವವಾಯು ಎಂದು ಪರಿಗಣಿಸಬಹುದು. ಮೆದುಳಿನ ರಕ್ತಸ್ರಾವದಲ್ಲಿ ಮೆದುಳಿನ ಒಳಗೆ ರಕ್ತಸ್ರಾವ ಪ್ರಾರಂಭವಾಗುತ್ತದೆ. ಅಧಿಕ ರಕ್ತದೊತ್ತಡವು ಕ್ರಮೇಣ ರಕ್ತನಾಳಗಳನ್ನು ದುರ್ಬಲಗೊಳಿಸುತ್ತದೆ. ಯಾರದ್ದಾದರೂ ರಕ್ತದೊತ್ತಡ ನಿರಂತರವಾಗಿ ಹೆಚ್ಚಿದ್ದರೆ, ರಕ್ತನಾಳಗಳ ಮೇಲಿನ ಒತ್ತಡ ಹೆಚ್ಚಾಗಲು ಪ್ರಾರಂಭಿಸುತ್ತದೆ.**

## ಬ್ರಿಕ್ಸ್ ಆಂಡ್ ಮೈಲ್ ಸ್ಟೋನ್ಸ್ ಸಿಇಓ ಕಿರಣ್ ರೆಡ್ಡಿ ಅವರ ಅಭಿಪ್ರಾಯ

• **ಉದಯವಾಹಿನಿ, ಬೆಂಗಳೂರು**




2025ರ ಕೇಂದ್ರ ಬಜೆಟ್ ರಿಯಲ್ ಎಸ್ಟೇಟ್ ಕ್ಷೇತ್ರಕ್ಕೆ ತುಂಬಾ ಸಕಾರಾತ್ಮಕವಾಗಿ ಮೂಡಿ ಬಂದಿದೆ. ನಗರದ ಅಭಿವೃದ್ಧಿ ಮತ್ತು ಕೈಗೆಟುಕುವ ದರದಲ್ಲಿ ವಸತಿ ವ್ಯವಸ್ಥೆ ದೊರಕುವಂತೆ ಮಾಡುವ ನಿಟ್ಟಿನಲ್ಲಿ ಸೂಕ್ತ ಕ್ರಮಗಳನ್ನು ಕೈಗೊಳ್ಳಲಾಗಿದೆ. ನಗರಗಳನ್ನು ಬೆಳವಣಿಗೆಯ ಕೇಂದ್ರಗಳಾಗಿ ಅಭಿವೃದ್ಧಿಪಡಿಸಲು ರೂ. 1–ಲಕ್ಷ ಕೋಟಿಗಳನ್ನು ನಿಗದಿಪಡಿಸಿರುವುದು ಶ್ಲಾಘನೀಯ. ಕ್ರಿಯಾಶೀಲ ಪುನರಾಭಿವೃದ್ಧಿಗೆ ಒತ್ತು ನೀಡಿರುವುದು ಕೂಡ ಗಮನಾರ್ಹ. ಇದರಿಂದ ಹೆಚ್ಚು ಸುಸ್ಥಿರ, ಭವಿಷ್ಯಕ್ಕೆ ಪೂರಕವಾಗಿರುವ ನಗರಗಳ ನಿರ್ಮಾಣ ಸಾಧ್ಯವಾಗಬಹುದಾಗಿದೆ. ಜೊತೆಗೆ ತೆರಿಗೆ ಸುಧಾರಣೆಗಳ ಮೂಲಕ ಮತ್ತು ಬಾಡಿಗೆಗೆ ಟಿಡಿಎಸ್ ಮಿತಿಯನ್ನು ಹೆಚ್ಚಿಸುವ ಮೂಲಕ ಒಳಿತು ಮಾಡಲಾಗಿದೆ ಮತ್ತು ಸ್ವಂತ ವಸತಿ ಹೊಂದಲು ಉತ್ತೇಜನ ನೀಡಲಾಗಿದೆ.

2ನೇ ಹಂತದ ನಗರಗಳನ್ನು ಜಾಗತಿಕ ಸಾಮರ್ಥ್ಯ ಕೇಂದ್ರಗಳಾಗಿ ರೂಪಿಸಲು ಮುಂದಾಗಿರುವುದು ಮತ್ತು 50 ಪ್ರವಾಸಿ ತಾಣಗಳನ್ನು ಅಭಿವೃದ್ಧಿಪಡಿಸುವುದರ ಕಡೆಗೆ ಗಮನ ಹರಿಸಿರುವುದು ಮುಂತಾದ ಕಾರಣಗಳಿಂದ ಹಾಸ್ಪಿಟಾಲಿಟಿ ರಿಯಲ್ ಎಸ್ಟೇಟ್, ಹೋಟೆಲ್ ಗಳು, ರೆಸಾರ್ಟ್ ಗಳು ಮತ್ತು ಸರ್ವೀಸ್ ಅಪಾರ್ಟ್ಮೆಂಟ್ ಗಳಿಗೆ ಅಭಿವೃದ್ಧಿ ಹೊಂದುವ ಅವಕಾಶ ಜಾಸ್ತಿಯಾಗಿದೆ. ಈ ವಲಯದಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳು ವಾಣಿಜ್ಯ, ವಸತಿ ರಿಯಲ್ ಎಸ್ಟೇಟ್ ಎರಡೂ ವಿಭಾಗದಲ್ಲಿ ಬೆಳವಣಿಗೆಗೆ ಕಾರಣವಾಗಲಿದೆ. ಇದರ ಹೊರತಾಗಿ ರಸ್ತೆ ಅಭಿವೃದ್ಧಿ ಯೋಜನೆಗಳನ್ನು ಕೈಗೊಳ್ಳುವ ಕಡೆಗೆ ಗಮನ ಹರಿಸಬೇಕಾಗಿದೆ.

ಜೊತೆಗೆ ನೀರು, ಮಾಲಿನ್ಯ ಸಮಸ್ಯೆಯನ್ನು ಸೂಕ್ತವಾಗಿ ನಿರ್ವಹಿಸಲು ಕ್ರಮಕೈಗೊಳ್ಳುವ ಅವಶ್ಯಕತೆ ಇದೆ.

## ದಿನಕ್ಕೊಂದು ಮುಕ್ತಕ :80



### ಸಾಮಾಜಿಕ ಕಳಕಳಿ

**ಹೆಚ್.ಎಸ್.ಪ್ರತಿಮಾ ಹಾಸನ್**
**ಸಾಹಿತಿ,ಶಿಕ್ಷಕಿ,ಸಾಮಾಜಿಕ ಚಿಂತಕಿ.ಹಾಸನ**

• **ಉದಯವಾಹಿನಿ, ವಿಶೇಷ**

**ನಾಟಕವ ಮಾಡುವರು ಜನ ನೋಡಬೇಕೆಂದು**
**ತೋಟದಲಿ ಹೂವರಳಿ ಸೆಳೆಯುವಂತೆ**
**ನೋಟುಗಳ ನೀಡುತ್ತ ವೀಕ್ಷಿಸುತ ಮೆಚ್ಚುವರು**
**ಸಾಟಿಯಿರದಭಿನಯವ ಲಕ್ಷ್ಮಿದೇವಿ**

**ಭಾವಾರ್ಥ:** ನಾಟಕಗಳನ್ನ ನೋಡುವುದೆಂದರೆ ಚೆಂದ ಅದರ ಅಭಿನಯವನ್ನು ಆನಂದಿಸುವುದೇ ಚೆಂದ ಕೆಲವೊಮ್ಮೆ ನಾಟಕದ ಕೆಲವು ಪಾತ್ರಗಳು ಮನಸ್ಸಿಗೆ ನಾಟಿ ಬಿಡುತ್ತವೆ. ಅವರ ಅಭಿನಯಕ್ಕೆ ಸರಿಸಾಟಿ ಯಾವುದೂ ಇಲ್ಲವೆನಿಸಿಬಿಡುತ್ತದೆ. ಅದು ಹೇಗೆ ಭಾಸವಾಗುತ್ತದೆ ಎಂದರೆ ತೋಟದಲ್ಲಿ ಅರಳಿದ ಹೂವಿನ ಸೌಂದರ್ಯದಂತಿರುತ್ತದೆ. ಹಾಗೆ ನಾಟಕಗಳನ್ನು ನೋಡಲು ಹಣ ಪಾವತಿಸಿ ಹೋಗುತ್ತೇವೆ. ಏಕೆಂದರೆ ನಾಟಕದ ಅಭಿನಯವು ಅಷ್ಟು ಮನಮುಟ್ಟುವಂತಿರುತ್ತದೆ.



## 108 ಶ್ರೀ ಸುಜಯೀಂದ್ರ ತೀರ್ಥ ಶ್ರೀಪಾದರ ಆರಾಧನಾ ಮಹೋತ್ಸವವು

• **ಉದಯವಾಹಿನಿ, ಬೆಂಗಳೂರು**

ಪರಮಪೂಜ್ಯ ಶ್ರೀ ಸುಜಯೀಂದ್ರ ತೀರ್ಥ ಶ್ರೀ ಪಾದಂಗಳವರ ಅಮೃತ ಹಸ್ತಗಳಲ್ಲಿ ಪ್ರತಿಷ್ಠಾಪನೆಗೊಂಡ ಬೆಂಗಳೂರಿನ ಜಯನಗರ 5ನೇ ಬಡಾವಣೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರಸ್ವಾಮಿಗಳವರ ಮಠದಲ್ಲಿ ಪರಮಪೂಜ್ಯ ಶ್ರೀ 108 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶ ದೊಂದಿಗೆ ಶ್ರೀ ಮಠದ ಹಿರಿಯ ವ್ಯವಸ್ಥಾಪಕರಾದ ಆರ್. ಕೆ.



ಉದಯವಾಹಿನಿ ಚಿತ್ರ

ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ಪರಮ ಪೂಜ್ಯ ಶ್ರೀ108 ಶ್ರೀ ಸುಜಯೀಂದ್ರ ತೀರ್ಥ ಶ್ರೀಪಾದಂಗಳವರ ಆರಾಧನಾ ಪ್ರಯುಕ್ತ ವಿಶೇಷ ಉತ್ಸವಗಳು ಮತ್ತು ವಿದ್ವಾಂಸರಾದ ವಿದ್ವಾನ್ ಗಯಾ ರಾಮಾಚಾರ್ಯರಿಂದ ಪ್ರವಚನ ನೆರವೇರಿತು ಹಾಗೂ ಭಜನಾ ಮಂಡಳಿಯಿಂದ ಶ್ರೀ ಹರಿ ಭಜನೆ ಸನ್ನಿಧಿಗೆ ಆಗಮಿಸಿದ ಭಕ್ತರಿಗೆ ಅನ್ನ ಸಂತರ್ಪಣೆ ನೆರವೇರಿತು ಎಂದು ಶ್ರೀ ನಂದಕಿಶೋರಾಚಾರ್ಯರು ತಿಳಿಸಿದರು. ಈ ಸಂದರ್ಭದಲ್ಲಿ ನೂರಾರು ಭಕ್ತರು ಈ ಆರಾಧನಾ ಉತ್ಸವದ ಕಾರ್ಯಕ್ರಮದಲ್ಲಿ ಭಾಗವಹಿಸಿ ಶ್ರೀ ಹರಿ ವಾಯು ಗುರುಗಳ ಅನುಗ್ರಹಕ್ಕೆ ಪಾತ್ರರಾದರು.

## ಮನ ಪ್ರಾಜೆಕ್ಟ್ಸ್ ಸಿಎಂಡಿ ಕಿಶೋರ್ ರೆಡ್ಡಿ ಅವರ ಅಭಿಪ್ರಾಯ




• **ಉದಯವಾಹಿನಿ, ಬೆಂಗಳೂರು**

2025ರ ಕೇಂದ್ರ ಬಜೆಟ್ ಮನ ಪ್ರಾಜೆಕ್ಟ್ಸ್ ಸಿಎಂಡಿ ಕಿಶೋರ್ ರೆಡ್ಡಿ ಅವರ ಅಭಿಪ್ರಾಯ ವ್ಯಕ್ತಪಡಿಸಿದ್ದರು. ಕೇಂದ್ರ ಬಜೆಟ್ ಭಾರತದಾದ್ಯಂತ ಸುಸ್ಥಿರ ನಗರಾಭಿವೃದ್ಧಿ ಮತ್ತು ಆರ್ಥಿಕ ಅಭಿವೃದ್ಧಿ ಕಡೆಗೆ ಗಮನ ನೆಟ್ಟಿದೆ. ನಗರಾಭಿವೃದ್ಧಿ ಯೋಜನೆಗಳಿಗೆ ರೂ.1 ಲಕ್ಷ ಕೋಟಿ ಬಜೆಟ್ ಹಂಚಿಕೆ ಮಾಡಿರುವುದು, ನಗರಗಳನ್ನು ಅಭಿವೃದ್ಧಿ ಕೇಂದ್ರಗಳಾಗಿ ರೂಪಿಸಲು ಗಮನ ನೀಡಿರುವುದು, ಕ್ರಿಯಾಶೀಲ ಪುನರಾಭಿವೃದ್ಧಿ ಆಲೋಚನೆ ಮಾಡಿರುವುದು ಗಮನಾರ್ಹವಾಗಿದೆ. ನಗರಗಳ ಅಭಿವೃದ್ಧಿಗೆ ಸರ್ಕಾರವು ಹೊಂದಿರುವ ಬದ್ಧತೆಗೆ ಸಾಕ್ಷಿಯಾಗಿದೆ. ನಗರಗಳಲ್ಲಿನ ಜನ ಜೀವನ ಸುಧಾರಿಸಲು ಈ ಅಂಶಗಳು ಬಹಳ ಪ್ರಮುಖ ಕೊಡುಗೆ ನೀಡಲಿವೆ. ಎರಡನೇ ಶ್ರೇಣಿಯ ನಗರಗಳಲ್ಲಿ ಜಾಗತಿಕ ಸಾಮರ್ಥ್ಯ ಕೇಂದ್ರಗಳನ್ನು ಸ್ಥಾಪಿಸುವ ಯೋಜನೆಯಿಂದ ರಿಯಲ್ ಎಸ್ಟೇಟ್ ಕ್ಷೇತ್ರಕ್ಕೆ ಆಶಾದಾಯಕವಾಗಿದೆ. ಈ ಯೋಜನೆಯು ಆರ್ಥಿಕ ಬೆಳವಣಿಗೆಗೆ ಕಾರಣವಾಗಲಿದ್ದು, ಅಭಿವೃದ್ಧಿಶೀಲ ನಗರ ಗಳಲ್ಲಿ ಹೊಸ ಮಾರುಕಟ್ಟೆಗಳನ್ನು ಸೃಷ್ಟಿಸಲಿದೆ. ಜಾಗತಿಕ ಸಾಮರ್ಥ್ಯ ಕೇಂದ್ರ ಸ್ಥಾಪನೆಯಿಂದ ಉದ್ಯೋಗಾವಕಾಶ ಸೃಷ್ಟಿ ಆಗಲಿದೆ. ವಾಣಿಜ್ಯ ಮತ್ತು ವಸತಿ ರಿಯಲ್ ಎಸ್ಟೇಟ್ ಕ್ಷೇತ್ರದ ಬೆಳವಣಿಗೆ ಸಾಧ್ಯವಾಗಲಿದೆ. ಬಜೆಟ್‌ನಲ್ಲಿ ಕಾರ್ಮಿಕ ಆಧರಿತ ವಲಯಗಳ ಕಡೆಗೆ ಹೆಚ್ಚಿನ ಗಮನ ಹರಿಸಲಾಗಿದ್ದು, ಅದು ನಮ್ಮ ಉದ್ಯಮದ ಅಗತ್ಯಗಳ ಜೊತೆಗೆ ಸಂಪೂರ್ಣವಾಗಿ ಹೊಂದಿಕೆಯಾಗುತ್ತದೆ. 2025–2026ರ ಬಜೆಟ್ ಪರಿಣಾಮಕಾರಿಯಾಗಿಗೆ ಮತ್ತು ಸಮತೋಲಿತವಾಗಿದೆ.

# ನಿಮ್ಮ ಕೂದಲು ತುಂಬಾ ತೆಳುವಾಗಿದೆಯಾ?

**ನೆತ್ತಿಯ ಮೇಲೆ ಮಸಾಜ್ ಮಾಡಿದಾಗ, ಹರಳೆಣ್ಣೆ ಕೂದಲಿನ ಕಿರುಚೀಲಗಳಿಗೆ ರಕ್ತದ ಹರಿವನ್ನು ಉತ್ತೇಜಿಸಲು ಸಹಾಯ**

## ಚಿಂತಿಸಬೇಡಿ ಈ ರೀತಿ ಹರಳೆಣ್ಣೆ ಹಚ್ಚಿ

• **ಉದಯವಾಹಿನಿ, ಬೆಂಗಳೂರು**



ನಿಮ್ಮ ಕೂದಲು ತೆಳುವಾಗುತ್ತಿದೆಯೇ ಕೂದಲು ದಟ್ಟವಾಗಿ ಬೆಳೆಯಲು ಯಾವ ಎಣ್ಣೆ ಹಚ್ಚಬೇಕು ಎಂದು ಯೋಚಿಸುತ್ತಿದ್ದೀರಾ ನಿಮ್ಮ ಕೂದಲ ಬೆಳವಣಿಗೆಗೆ ಹರಳೆಣ್ಣೆ ಉತ್ತಮ ಆಯ್ಕೆ. ಇದು ಕೂದಲನ್ನು ಬುಡದಿಂದ ಪೋಷಿಸುತ್ತದೆ ಮತ್ತು ದಟ್ಟವಾಗಿ ಬೆಳೆಯಲು ಸಹಕರಿಸುತ್ತದೆ.

ಬಿಡುವಿಲ್ಲದ ಜೀವನ ಶೈಲಿಯಲ್ಲಿ ಕೂದಲ ಆರೈಕೆಗೆ ಹೆಚ್ಚು ಸಮಯ ಕೊಡಲಾಗುತ್ತಿಲ್ಲವೇ. ಆದರೆ ನೀವು ತಡಮಾಡಿದರೆ ನಿಮ್ಮ ಕೂದಲು ಹೆಚ್ಚು ದುರ್ಬಲವಾಗಬಹುದು. ನಿಮ್ಮ ಕೂದಲು ಉದುರುತ್ತಿದ್ದರೆ ಅಥವಾ ತೆಳುವಾಗುತ್ತಿದ್ದರೆ ಈಗಲೇ ನಿಮ್ಮ ಕೂದಲ ಆರೈಕೆಗೆ ಸ್ವಲ್ಪ ಸಮಯ ಮೀಸಲಿಡಿ. ಸರಿಯಾದ ಆರೈಕೆಯಿಂದ ಸುಂದರವಾದ ಕೂದಲನ್ನು ನಿಮ್ಮದಾಗಿಸಿಕೊಳ್ಳಬಹುದು. ಕೂದಲ ಆರೈಕೆಗೆ ಉತ್ತಮ ಎಣ್ಣೆಯನ್ನು ಆಯ್ಕೆ ಮಾಡಿಕೊಳ್ಳುವುದು ಮುಖ್ಯವಾಗುತ್ತದೆ. ಇದು ನೆತ್ತಿಯನ್ನು ಪೋಷಿಸಲು, ಕೂದಲಿನ ಕಿರುಚೀಲಗಳನ್ನು ಬಲಪಡಿಸಲು ಮತ್ತು ಆರೋಗ್ಯಕರ ಕೂದಲಿನ ಬೆಳವಣಿಗೆಯನ್ನು ಉತ್ತೇಜಿಸಲು ಸಹಾಯ ಮಾಡುತ್ತದೆ.

**ರಕ್ತ ಪರಿಚಲನೆಯನ್ನು ಹೆಚ್ಚಿಸುತ್ತದೆ:** ನೆತ್ತಿಯ ಮೇಲೆ ಮಸಾಜ್ ಮಾಡಿದಾಗ, ಹರಳೆಣ್ಣೆ ಕೂದಲಿನ ಕಿರುಚೀಲಗಳಿಗೆ ರಕ್ತದ ಹರಿವನ್ನು ಉತ್ತೇಜಿಸಲು ಸಹಾಯ ಮಾಡುತ್ತದೆ. ಇದರಿಂದ ಕೂದಲಿನ ಕಿರುಚೀಲಗಳು ಹೆಚ್ಚಿನ ಆಮ್ಲಜನಕ ಮತ್ತು ಪೋಷಕಾಂಶಗಳನ್ನು ಪಡೆಯುತ್ತವೆ, ಇದು ಕೂದಲಿನ ಬೆಳವಣಿಗೆಯನ್ನು ಉತ್ತೇಜಿಸುತ್ತದೆ ಮತ್ತು ದುರ್ಬಲ ಅಥವಾ ತೆಳುವಾಗುವ ಕೂದಲನ್ನು ಬಲಪಡಿಸುತ್ತದೆ. ರಿಕಿನೋಲಿಕ್ ಆಮ್ಲಹರಳೆಣ್ಣೆಯಲ್ಲಿ ರಿಕಿನೋಲಿಕ್ ಆಮ್ಲವು ಹೇರಳವಾಗಿದೆ, ಇದು ಉರಿಯೂತದ ಮತ್ತು ಆಂಟಿಮೈಕ್ರೊಬಿಯಲ್ ಗುಣಲಕ್ಷಣಗಳನ್ನು ಹೊಂದಿರುವ ವಿಶಿಷ್ಟ ಕೊಬ್ಬಿನಾಮ್ಲವಾಗಿದೆ. ಇದು ಉರಿಯೂತವನ್ನು ಕಡಿಮೆ ಮಾಡಿ, ರಕ್ತಪರಿಚಲನೆಯನ್ನು ಉತ್ತೇಜಿಸುವ ಮೂಲಕ ಮತ್ತು ನೆತ್ತಿಯ ಸೋಂಕುಗಳನ್ನು ತಡೆಗಟ್ಟುತ್ತದೆ. ಮತ್ತು ನೆತ್ತಿಯ ಆರೋಗ್ಯವನ್ನು ಸುಧಾರಿಸಲು ಸಹಾಯ ಮಾಡುತ್ತದೆ.

**ಕೂದಲಿನ ಕಿರುಚೀಲಗಳನ್ನು ಪೋಷಿಸುತ್ತದೆ:** ಹರಳೆಣ್ಣೆಯಲ್ಲಿ ಒಮೆಗಾ –6 ಮತ್ತು ಒಮೆಗಾ –9 ಸೇರಿದಂತೆ ಅಗತ್ಯ ಕೊಬ್ಬಿನಾಮ್ಲಗಳು ಸಮೃದ್ಧವಾಗಿವೆ, ಇದು ಕೂದಲಿನ ಕಿರುಚೀಲಗಳನ್ನು ಪೋಷಿಸುತ್ತದೆ. ಈ ಎಣ್ಣೆ ನೆತ್ತಿಗೆ ತೇವಾಂಶವನ್ನು ಒದಗಿಸುತ್ತದೆ, ಕೂದಲು ಉದುರುವಿಕೆಗೆ ಕಾರಣವಾಗುವ ಶುಷ್ಕತೆಯನ್ನು ತಡೆಯುತ್ತದೆ. ಬ್ಯಾಕ್ಟೀರಿಯಾ ವಿರೋಧಿ ಗುಣಲಕ್ಷಣಗಳು ಹರಳೆಣ್ಣೆ ನೆತ್ತಿಯ ಮೇಲೆ ಶಿಲೀಂಧ್ರಗಳ ಸೋಂಕು ಅಥವಾ ತಲೆಹೊಟ್ಟನ್ನು ತಡೆಯುತ್ತದೆ. ಆರೋಗ್ಯಕರ, ಸ್ವಚ್ಛವಾದ ನೆತ್ತಿಯಿಂದ ಕೂದಲು ಬೆಳೆಯಲು ಅನುಕೂಲವಾಗುತ್ತದೆ. ಕೂದಲಿನ ಶಕ್ತಿ ಮತ್ತು ಸ್ಥಿತಿಸ್ಥಾಪಕತ್ವವನ್ನು ಸುಧಾರಿಸುತ್ತದೆ ಹರಳೆಣ್ಣೆ ಕೂದಲಿಗೆ ಹೊಳಪು,



### ಕೂದಲಿಗೆ ಉತ್ತಮವಾದ ಎಣ್ಣೆ

**ಸಾಮಾನ್ಯವಾಗಿ ತೆಂಗಿನೆಣ್ಣೆಯನ್ನು ಕೂದಲಿಗೆ ಹಚ್ಚುತ್ತೇವೆ, ಇದು ಕೂದಲ ಆರೈಕೆಗೆ ಉತ್ತಮವಾಗಿದ್ದರೂ ಹರಳೆಣ್ಣೆ ಅದಕ್ಕಿಂತಲೂ ಹೆಚ್ಚು ಪರಿಣಾಮಕಾರಿಯಾಗಿ ಕೂದಲನ್ನು ಪೋಷಿಸುತ್ತದೆ. ಆರೋಗ್ಯವಂತ ಕೂದಲು ಪಡೆಯಲು ಸಹಾಯವಾಗುತ್ತದೆ. ಶತಮಾನಗಳಿಂದಲೂ ಕೂದಲಿನ ಆರೈಕೆಯಲ್ಲಿ ಇದನ್ನು ಬಳಸಲಾಗುತ್ತದೆ.**

ಮೃದುತ್ವ ಮತ್ತು ಶಕ್ತಿಯನ್ನು ನೀಡುತ್ತದೆ. ಇದು ಕೂದಲು ಒಡೆಯುವಿಕೆ ಮತ್ತು ತುದಿಗಳನ್ನು ಒಡೆಯುವುದನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ ಮತ್ತು ಕೂದಲು ದಪ್ಪವಾಗಿ ಕಾಣುವಂತೆ ಮಾಡುತ್ತದೆ. ನಿಧಾನವಾಗಿ ಮಸಾಜ್ ಮಾಡಿ ನಿಮ್ಮ ಬೆರಳುಗಳು ಅಥವಾ ಹತ್ತಿ ಉಂಡೆಯನ್ನು ಬಳಸಿ, ಬೆಚ್ಚಗಿನ ಹರಳೆಣ್ಣೆಯನ್ನು ನಿಮ್ಮ ನೆತ್ತಿಗೆ ನಿಧಾನವಾಗಿ ಮಸಾಜ್ ಮಾಡಿ. ನಿಮ್ಮ ಕೂದಲು ತೆಳುವಾಗುತ್ತಿರುವ ಜಾಗಕ್ಕೆ ಅಥವಾ ನೀವು ಕೂದಲು ಉದುರುವಿಕೆಯನ್ನು ಅನುಭವಿಸುತ್ತಿರುವ ಜಾಗದ ಮೇಲೆ ಹಚ್ಚಿ. ನಿಮ್ಮ ನೆತ್ತಿಯನ್ನು ಮಸಾಜ್ ಮಾಡುವುದರಿಂದ ರಕ್ತ ಪರಿಚಲನೆಯನ್ನು ಸುಧಾರಿಸಲು ಸಹಾಯ ಮಾಡುತ್ತದೆ. ಶಾಂಪೂವಿನಿಂದ ಕೂದಲನ್ನು ತೊಳೆಯಿರಿ ನಿಮ್ಮ ಕೂದಲಿನಲ್ಲಿ ಕನಿಷ್ಠ 30 ನಿಮಿಷಗಳಿಂದ ಒಂದು ಗಂಟೆಯವರೆಗೆ ಬಿಡಿ ಅಥವಾ ರಾತ್ರಿಯಿಡೀ ಬಿಟ್ಟು ಬೆಳಗ್ಗೆ ತೊಳೆಯಬಹುದು. ಹರಳೆಣ್ಣೆ ದಪ್ಪವಾಗಿರುವುದರಿಂದ ಎಣ್ಣೆಯಂಶವನ್ನು ಕೂದಲಿನಿಂದ ತೆಗೆಯಲು ಶಾಂಪೂವಿನಿಂದ ಚೆನ್ನಾಗಿ ತೊಳೆಯಬೇಕಾಗುತ್ತದೆ.

# ಬಡ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಉಚಿತ ಶಿಕ್ಷಣ ಮುಂದುವರಿಕೆ

## ಟಾಪ್ 20 ವಿದ್ಯಾರ್ಥಿಗಳಿಗೆ 2 ವರ್ಷ ಉಚಿತ ಶಿಕ್ಷಣ ಹಾಗೂ ಇದರಲ್ಲಿ ಮೊದಲ 5 ವಿದ್ಯಾರ್ಥಿಗಳಿಗೆ ನಗದು ಬಹುಮಾನ

• **ಉದಯವಾಹಿನಿ, ಮುದ್ದೇಬಿಹಾಳ**

ಈ ಬಾರಿಯ ಅಹಿಲ್ಯಾದೇವಿ ಹೂಳ್ಕರ್ ಸ್ಕಾಲರ್ಶಿಪ್ ಎಕ್ಸಾಂನಲ್ಲಿ 1300 ವಿದ್ಯಾರ್ಥಿಗಳು ಪರೀಕ್ಷೆ ಬರೆಯುವ ಮೂಲಕ ನಮ್ಮ ಶಿಕ್ಷಣ ಸಂಸ್ಥೆಯ ಮೇಲೆ ಹೆಚ್ಚಿನ ನಂಬಿಕೆಯನ್ನು ಇರಿಸಿದ್ದಾರೆ ಎಂದು ಸಂಸ್ಥೆಯ ಕಾರ್ಯದರ್ಶಿ ಸಮಾಜ ಸೇವಕ ಮಲ್ಲಿಕಾರ್ಜುನ ಮದರಿ ಹೇಳಿದರು. ರವಿವಾರ ಅಭ್ಯುದಯ ಶಿಕ್ಷಣ ಸಂಸ್ಥೆಯಲ್ಲಿ ಅಭ್ಯಯದಯ ಪಿಯು ಸಾಯಿನ್ಸ ಕಾಮರ್ಸ್ ಕಾಲೇಜಿನಲ್ಲಿ ಅಹಿಲ್ಯಾದೇವಿ ಹೂಳ್ಕರ್ ಸ್ಕಾಲರ್ಶಿಪ್ ಪ್ರಥಮ ಪಿಯುಸಿ ಪ್ರವೇಶ ಪರೀಕ್ಷಾ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿದರು ನಮ್ಮ ಶಿಕ್ಷಣ ಸಂಸ್ಥೆಗಳಲ್ಲಿ ಭದ್ರವಾದ ಬುನಾದಿಯನ್ನು ಕಲ್ಪಿಸಿಕೊಡಲಾಗಿದೆ.

ಪ್ರಾಥಮಿಕ ಶಿಕ್ಷಣದಿಂದ ಹಿಡಿದು ಉನ್ನತ ಶಿಕ್ಷಣದವರೆಗೂ ನಮ್ಮ ದೇಶದ ಶಿಕ್ಷಣ ವ್ಯವಸ್ಥೆ ಉತ್ತಮವಾಗಿದೆ ಈಗಾಗಲೇ ಬಿಎಸ್ಸಿ ಬಿಕಾಂ ಕೋರ್ಸುಗಳು ಇದ್ದು ಬರಲಿರುವ ದಿನಗಳಲ್ಲಿ ಬಿಇಡ್ ಆರಂಭಿಸಲಾಗುತ್ತಿದೆ ಎಂದರು. ಈ ಸ್ಕಾಲರ್ಶಿಪ್ ಪರೀಕ್ಷೆ ಪಾರದರ್ಶಕವಾಗಿ ಮಾಡಲಾಗಿದೆ ಈ ಪರೀಕ್ಷೆಯಲ್ಲಿ ನಮ್ಮ ಶಾಲಾ ವಿದ್ಯಾರ್ಥಿಗಳು ಹೆಚ್ಚಿನ ಅಂಕಗಳನ್ನು ಪಡೆದಿದ್ದರು ಅವರಿಗೆ ಯಾವುದೇ ಬಹುಮಾನ ನೀಡಿಲ್ಲ ಬೇರೆ ತಾಲ್ಲೂಕ ಜಿಲ್ಲೆಗಳಿಂದ ಆಗಮಿಸಿ ಪರೀಕ್ಷೆ ಬರೆದು ಹೆಚ್ಚಿನ ಅಂಕಗಳನ್ನು ಪಡೆದ ವಿದ್ಯಾರ್ಥಿಗಳಿಗೆ ಶಿಷ್ಯ ವೇತನ ನೀಡಲಾಗುತ್ತಿದೆ. ಟಾಪ್ 20 ವಿದ್ಯಾರ್ಥಿಗಳಿಗೆ 2 ವರ್ಷ ಉಚಿತ ಶಿಕ್ಷಣ ಹಾಗೂ ಇದರಲ್ಲಿ ಮೊದಲ 5 ವಿದ್ಯಾರ್ಥಿಗಳಿಗೆ ನಗದು ಬಹುಮಾನ ಮತ್ತು ಶೈಕ್ಷಣಿಕ ಶಿಷ್ಯವೇತನ ನೀಡುತ್ತಿದ್ದೇವೆ ಹಾಗೂ ಬರಲಿರುವ ದಿನ ಗಳಲ್ಲಿ ನಮ್ಮ ಸಂಸ್ಥೆಯ ಎಲ್ಲಾ ಶಾಲೆಗಳಲ್ಲಿ ಅಹಿಲ್ಯಾದೇವಿ ಹೂಳ್ಕರ್ ಉತ್ಸವ ನಡಿ ಸಲಾಗುತ್ತದೆ ಎಂದರು.

ಪ್ರಾಸ್ತಾವಿಕವಾಗಿ ಸಂಸ್ಥೆಯ ಆಡಳಿತಾಧಿಕಾರಿ ಬಿ ಜಿ ಬಿರಾದಾರ ಮಾತನಾಡಿ ಅಭ್ಯೂದಯ ಶಿಕ್ಷಣ ಸಂಸ್ಥೆ ನಡೆದಯ ಬಂದ ದಾರಿ ಕುರಿತು ವಿವರಿಸಿದರು. ಈ ವೇಳೆ ಶ್ರೀಮತಿ ಶ್ರೀದೇವಿ ಮದರಿ ಸಂಸ್ಥೆ ನಿರ್ದೇಶಕ ಕಿರಣ್ ಮದರಿ ಹಾಗೂ ಭೋದಕವೃಂದದ ಆರ್ ಎಸ್ ಜಡಗಿ, ಹೆಚ ಬಿ ಜಾಯವಾಡಗಿ, ರಮೇಶ ಹರನಾಳ, ಭೀಮಣ್ಣ ಪೂಜಾರಿ, ಗೀತಾ ಹುರಕಡ್ಲಿ, ಪ್ರಶಾಂತ ಬಿರಾದಾರ ಸೇರಿದಂತೆ ವಿವಿಧ ಶಾಲೆಗಳಿಂದ ಸಾವಿರಾರು ವಿದ್ಯಾ ರ್ಥಿಗಳು ಪಾಲಕರು ಭಾಗವಹಿಸಿದ್ದರು.



ಉದಯವಾಹಿನಿ ಚಿತ್ರ

**ಅಹಿಲ್ಯಾದೇವಿ ಹೂಳ್ಕರ್ ಸ್ಕಾಲರ್ಶಿಪ್ ಎಕ್ಸಾಂ 2025**

**52 ವಿದ್ಯಾರ್ಥಿಗಳಿಗೆ ಪ್ರವೇಶಾತಿ ಪೀಸ್ ನಲ್ಲಿ 20% ರಿಯಾಯಿತಿ**

**ಪರೀಕ್ಷೆ ಬರೆದ ಟಾಪ್ 20 ವಿದ್ಯಾರ್ಥಿಗಳಿಗೆ 2 ವರ್ಷ ಉಚಿತ ಶಿಕ್ಷಣ ನೀಡಲಾಗುತ್ತದೆ ಇದರಲ್ಲಿ ಮೊದಲ 5 ವಿದ್ಯಾರ್ಥಿಗಳಿಗೆ ನಗದು ಬಹುಮಾನ ಹಾಗೂ ಶೈಕ್ಷಣಿಕ ಶಿಷ್ಯವೇತನ ಪರೀಕ್ಷಾ ನಿಯಮಾನುಸಾರ ನೀಡಲಾಗುತ್ತಿದ್ದು ಹೆಚ್ಚು ಅಂಕಗಳನ್ನು ಪಡೆದ 52 ವಿದ್ಯಾರ್ಥಿಗಳಿಗೆ ಪ್ರವೇಶಾತಿ ಪೀಸ್ ನಲ್ಲಿ 20% ರಿಯಾಯಿತಿ ಪರೀಕ್ಷೆ ಬರೆದ ಎಲ್ಲಾ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಪೀ ನಲ್ಲಿ 10% ರಿಯಾಯಿತಿ ನೀಡಲಾಗುತ್ತದೆ**

**ಟಾಪ್ 5 ವಿದ್ಯಾರ್ಥಿಗಳಿಗೆ ನಗದು ಬಹುಮಾನ ಟಾಪ್ 1 ಮಹ್ಮದ ಜಾಹೀನ್ ನಗದು 10 ಸಾವಿರ ಹಾಗೂ 55 ಸಾವಿರ ಶಿಷ್ಯವೇತನ ಟಾಪ್ 2 ಜೀವನ್ ಹುಡೇದ ನಗದು 7 ಸಾವಿರ 55 ಸಾವಿರ ಶಿಷ್ಯವೇತನ, ಟಾಪ್ 3 ರೋಹಿತ್ ಕುಂಬಾರ ನಗದು 5 ಸಾವಿರ ಶಿಷ್ಯವೇತನ 55 ಸಾವಿರ ಟಾಪ್ 4 ಸಾಗರ ಪಡೆಕನೂರ 3 ಸಾವಿರ ನಗದು 55 ಸಾವಿರ ಶಿಷ್ಯವೇತನ ಟಾಪ್ 5 ರಶ್ಮೀ ನಾಡಗೌಡರ ನಗದು 2 ಸಾವಿರ ಶಿಷ್ಯವೇತನ 55 ಸಾವಿರ ರೂ.**

**ಕೋವಿಡ್ ಸಂದರ್ಭದಲ್ಲಿ ನಮ್ಮ ಸಂಸ್ಥೆಯಲ್ಲಿ ಎಲ್ಲಾ ವಿದ್ಯಾರ್ಥಿಗಳಿಗೆ ಉಚಿತ ಶಿಕ್ಷಣ ನೀಡಿದೆ ಮತ್ತು ಬಡ ಅನಾಥ ಮಕ್ಕಳಿಗೆ ಉಚಿತ ಶಿಕ್ಷಣವನ್ನು ಈಗಲೂ ಮುಂದುವರೆಸುತ್ತೇವೆ ಬಿಪಿಎಲ್ ಕಾರ್ಡ್ ಹೊಂದಿದ ವಿದ್ಯಾರ್ಥಿಗಳಿಗೆ ವಿಶೇಷ ರಿಯಾಯಿತಿ ನೀಡಲಾಗುತ್ತದೆ**

**-ಎಂ.ಎನ್ ಮದರಿ, ಕಾರ್ಯದರ್ಶಿಗಳು**

## ಭಕ್ತಿ, ನಿಷ್ಠೆಯಿಂದ ಕಾಯಕದಲ್ಲಿ ನಿರತರಾದರೆ ದೇವರು ಒಲಿಯುವನು

• **ಉದಯವಾಹಿನಿ, ಹುಣಸಗಿ**

12ನೇ ಶತಮಾನದ ಶರಣ ಮಡಿವಾಳ ಮಾಚಿದೇವರು ತಮ್ಮ ವಚನಗಳಲ್ಲಿ ಕಾಯಕಕ್ಕೆ ಅತ್ಯಂತ ಪ್ರಾಮುಖ್ಯತೆ ನೀಡಿದ್ದು ಭಕ್ತಿ, ನಿಷ್ಠೆ ಯಿಂದ ಕಾಯಕದಲ್ಲಿ ನಿರತರಾದರೆ ದೇವರು ಸಹ ಒಲಿಯವನು ಎಂದು ಸಾರಿದ್ದಾರೆ.

ತತ್ವ ಸಿದ್ಧಾಂತವನ್ನು ಅನುಸರಿಸಿ ನಮ್ಮ ವ್ಯಕ್ತಿತ್ವವನ್ನು ಉನ್ನತಿಗೋಳಿಸಿಕೊಳ್ಳಬೇಕೆಂದು ತಮ್ಮ ವಚನ ಗಳಲ್ಲಿ ಸಾರಿದ್ದಾರೆ ಎಂದು ನಿವೃತ್ತ ಶಿಕ್ಷಕ ಯಲ್ಲಪ್ಪ ಚಂದ ನಕೇರಿ ಹೇಳಿದರು.

ಪಟ್ಟಣದ ಮಡಿವಾಳ ಮಾಚಿದೇವರ ವೃತ್ತದಲ್ಲಿ ಭಾವ ಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು. ಇದೆ ವೇಳೆ ಸೃಷ್ಟಿ ಗುರು ಮಡಿವಾಳರ ವಚನಗಳನ್ನು ಹೇಳಿದರು. ಈ ಸಂದರ್ಭದಲ್ಲಿ ಸಮಿತಿಯ ಗೌರವಾಧ್ಯಕ್ಷ ಚಂದ್ರಶೇಖರ ಮಡಿವಾಳರ, ಅಧ್ಯಕ್ಷ ರುದ್ರಪ್ಪ ಮಡಿವಾಳರ, ಪ್ರಧಾನ ಕಾರ್ಯದರ್ಶಿ ಗುರು ಮಡಿವಾಳರ, ಮನಪ್ಪ, ಹೊನ್ನಯ್ಯ, ದೇವಣ್ಣ, ಮರೆಪ್ಪ,ಲೋಹಿತ್, ಹುಸನಪ್ಪ, ಪ್ರವೀಣ್ ಬಾಬು ಬಳಶೆಟ್ಟಿಹಾಳ, ಮೌನೇಶ್, ಹಣಮಂತ, ಅಭಿ, ಯಂಕಪ್ಪ ಸೇರಿದಂತೆ ಇತರರು ಇದ್ದರು.

**ಸರಕಾರಿ ಬಾಲಕಿಯರ ಪ್ರೌಢ ಶಾಲೆ ಹುಣಸಗಿ:** ಸರಕಾರಿ ಬಾಲಕಿಯರ ಪ್ರೌಢಶಾಲೆಯಲ್ಲಿ ಶರಣ ಮಡಿವಾಳ ಮಾಚಿದೇವರ ಜಯಂತಿಯನ್ನು ಆಚರಿಸಲಾಯಿತು 12ನೇ ಶತಮಾನದಲ್ಲಿ ಇರುವಂತಹ ಎಲ್ಲಾ ಶರಣರು ಸಮಾನತೆಗಾಗಿ ಹೋರಾಡಿದರು ಮತ್ತು ಕಾಯಕ ಮಾಡುವುದರ ಜೊತೆಗೆ ನಾಡಿಗೆ ತಮ್ಮ ಸೇವೆಯನ್ನು ಸಲ್ಲಿಸಿ ಮಹಾನ ಶರಣರಾದರು.

ಮನದ ಮೈಲಿಗೆ ತೊಳೆದುಕೊಂಡಾಗ ಮಾತ್ರ ಬದುಕು ಹಸನಾ ಗುತ್ತದೆ ಎಂದು ಶಿಕ್ಷಕ ವೆಂಕನಗೌಡ ಅರಿಕೇರಿ ಹೇಳಿದರು. ನಂತರ ಮುಖ್ಯೋಪಾಧ್ಯಯರಾದ ವಿಠಲ್ ಬಿ ಚೌಹಾಣ್ ಮಾತನಾಡಿ, ಶರಣರ ಆದರ್ಶ ತತ್ವ ವಿಚಾರಗಳನ್ನು ಮಕ್ಕಳೆಲ್ಲರೂ ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಶಿಕ್ಷಕರಾದ ನಾಗನಗೌಡ ಪಾಟೀಲ್, ಬಸವರಾಜ್ ಕೋ ಳ್ಳೂರ್, ಬಸವರಾಜ ತೆಗ್ಗೆಳ್ಳಿ, ವಿಜಯ ಲಕ್ಷ್ಮಿ ಕುಂಬಾರ್ಲ, ಲಲಿತಾ ಬಾಯಿ ಮಠ, ಲಾಲಬಿ ಎಂ ಕಾಜಿ, ಸೋಮ ನಗೌಡ ಬಳವಾಟ, ಯುನುಸ್ ಕೊತ್ವಾಲ್ ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ವಜ್ಜಲ್ ಶಾಂತಗೌಡ ಪಾಟೀಲ ಮೆಮೋರಿಯಲ್ ಕೈಗಾ ರಿಕಾ ತರಬೇತಿ ಸಂಸ್ಥೆ ಮತ್ತು ಸ್ವಾಮಿ ವಿವೇಕಾ ನಂದ ಪದವಿ ಮಹಾವಿದ್ಯಾಲಯದಲ್ಲಿ 12ನೇ ಶತಮಾನದ ಶರಣ ಮಡಿವಾಳ ಮಾಚಿದೇವರ ಜಯಂತಿಯನ್ನು ಭಾವ ಚಿತ್ರಕ್ಕೆ ಪೂಜೆ ಸಲ್ಲಿಸಿ ಆಚರಣೆ ಮಾಡಿದರು. ಈ ಸಂದರ್ಭದಲ್ಲಿ ಪ್ರಾಚಾರ್ಯರು ವಿದ್ಯಾರ್ಥಿಗಳು ಇದ್ದರು.



ಉದಯವಾಹಿನಿ ಚಿತ್ರ

**ಕಾಯಕಕ್ಕೆ ಅತ್ಯಂತ ಪ್ರಾಮುಖ್ಯತೆ**

## ಶ್ರೀಯಾಜ್ಞವಲ್ಕ್ಯ ಭವನದಲ್ಲಿ ಮಹರ್ಷಿ ಕಣ್ವರ ಜಯಂತಿ

• **ಉದಯವಾಹಿನಿ, ಕಲಬುರಗಿ**

ಮಹರ್ಷಿ ಕಣ್ವರು ಶ್ರೇಷ್ಠ ಮಂತ್ರದೃಷ್ಟಾರರು, ಶ್ರೀ ಯಾಜ್ಞವಲ್ಕ್ಯ ಗುರುಗಳ ಪ್ರಥಮ ಶಿಷ್ಯರಾದ ಕಣ್ವರು ಶುಕ್ಲಯಜುರ್ವೇದವನ್ನು ಅಧ್ಯಯನ ಮಾಡಿದ್ದರು. ದಕ್ಷಿಣ ಭಾರತದಲ್ಲಿ ಶುಕ್ಲಯಜುರ್ವೇದವನ್ನು ಪ್ರಚಾರಪಡಿಸಿದ್ದರು. ಮಹರ್ಷಿ ಕಣ್ವರಿಂದ ಪ್ರವರ್ತನಗೊಂಡ ಶಾಖೆ ಕಣ್ವಶಾಖೆ ಎಂದು ಕರೆಯಲ್ಪಡುತ್ತದೆ ಎಂದು ಪಾರಾಯಣ ಸಂಘದ ವಿನುತ ಜೋಶಿ ಮಾತನಾಡಿದರು.

ಕಲಬುರಗಿಯ ಸಂಗಮೇಶ್ವರ ಬಡಾವಣೆಯ ಶ್ರೀಸೂರ್ಯನಾರಾಯಣ ದೇವಸ್ಥಾನದ ಶ್ರೀಯೋಗೀಶ್ವರ ಯಾಜ್ಞವಲ್ಕ್ಯ ಭವನದಲ್ಲಿ ಮಾಘ ಶುದ್ಧ ಪಂಚಮಿ ವಸಂತ ಪಂಚಮಿ 02-02-2025 ರವಿವಾರ ದಂದು ಮಹರ್ಷಿ ಕಣ್ವ ಜಯಂತಿ ಅಂಗವಾಗಿ ಹಮ್ಮಿಕೊಂಡಿದ್ದ ಶ್ರೀಯೋಗೀಶ್ವರ ಯಾಜ್ಞವಲ್ಕ್ಯ ಗುರುಗಳ ಅಷ್ಟೋತ್ತರ ಮತ್ತು ಮಹರ್ಷಿ ಕಣ್ವ ಶತನಾಮ ಪಾರಾಯಣ ನಂತರ ಮಾತನಾಡಿ ಪ್ರಸ್ತುತ ಹುಣಸಗಿ ತಾಲ್ಲೂಕಿನ ಆಡು ಭಾಷೆಯಲ್ಲಿ ಕಾನಗಂಡನಹಳ್ಳಿ ಎಂದು ಕರೆಯುವ ಕಣ್ವ ಗೊಂಡನ ಹಳ್ಳಿ ಬೆಟ್ಟದಲ್ಲಿ ಮಹರ್ಷಿ ಕಣ್ವರು ತಪಸ್ಸನ್ನಾಚರಿಸಿದ್ದ ತಪೋಭೂಮಿ ಇದೆ ಎಂದು ರಾಯಚೂರಿನ ಸಾಹಿತಿ ಸಂಶೋಧಕರಾದ ಶ್ರೀಸತ್ಯನಾರಾಯಣ ಮುಜುಮದಾರ ಸಂಶೋಧನಾ ಕೃತಿಯಲ್ಲಿ ಉಲ್ಲೇಖಿಸಿದ್ದಾರೆ. ಶ್ರೀಮನ್ ಮಾದವತೀರ್ಥರು ಕಣ್ವ ಶಾಖಿಯರಿಗಾಗಿ, ಕಣ್ವರ ತಪೋಭೂಮಿಯಲ್ಲಿ ಮಾಘ ಶುದ್ಧ ಪಂಚಮಿ, ಮಹರ್ಷಿ ಕಣ್ವರ ಜಯಂತಿಯಂದು ಶ್ರೀಮತ್ ಕಣ್ವ ಮಠವನ್ನು ಸ್ಥಾಪಿಸಿದ್ದರು ಎಂದರು.

ಬೆಂಗಳೂರಿನ ಚಾಮರಾಜಪೇಟೆಯ ಶುಕ್ಲಯಜು ಶಾಖಾಯ ಹತ್ತಿರ ಶ್ರೀ ಯಾಜ್ಞವಲ್ಕ್ಯ ವೃತ್ತ, ರಾಯಚೂರಿನ ಎಲ್ ವಿ ಡಿ ಕಾಲೇಜಿನ ಹತ್ತಿರ ಮಹರ್ಷಿ ಕಣ್ವರ ವೃತ್ತ, ಮಹರ್ಷಿ ಕಣ್ವ ರಸ್ತೆ ನಾಮಕರಣ ಮಾಡಿದ ಹಾಗೆ ಕಲಬುರ್ಗಿಯಲ್ಲೂ ಸಹ ಮಹರ್ಷಿ ಕಣ್ವರ ರಸ್ತೆ, ಶ್ರೀ ಯಾಜ್ಞವಲ್ಕ್ಯ ವೃತ್ತ ನಾಮಕರಣವಾಗಬೇಕೆಂದು ಮಹಾನಗರ ಪಾಲಿಕೆಯನ್ನು ಆಗ್ರಹಿಸಿದರು.



ಉದಯವಾಹಿನಿ ಚಿತ್ರ

**ಕಣ್ವ ಮಠದ ಸಂಸ್ಥಾಪಕ ಶ್ರೀಮನ್ ಮಾಧವತೀರ್ಥರು, ಮುರುಗೋಡದ ಶ್ರೀಚಿದಂಬರೇಶ್ವರ ಮಹಾಸ್ವಾಮಿಗಳು, ತುರಡಗಿಯ ಸಾಧ್ವಿ ಶಿರೋಮಣಿ ತಿಮ್ಮಮ್ಮನವರು ಹಾಗೂ ಅಕ್ಕಲಕೋಟದ ಮಹಾರಾಜರು ಕಲಿಯುಗದಲ್ಲಿ ಕಣ್ವ ಶಾಖೆಯ ಧ್ರುವತಾರೆಗಳಾಗಿದ್ದಾರೆ.**

# ಕೇಂದ್ರ ಬಜೆಟ್ ಬಗ್ಗೆ ಗಿರಿಜಿಲ್ಲೆಯ ಜನಾಭಿಪ್ರಾಯ

• **ಉದಯವಾಹಿನಿ, ಯಾದಗಿರಿ**

**ಸಬ್ ಕಾ ಸಾಥ್ ಸಬ್ ಕಾ ವಿಕಾಸ್ ಇದು ಸುಳ್ಳು ಎಂದು ಮೋದಿ ಸರ್ಕಾರ ತೋರಿಸಿಕೊಟ್ಟಿದೆ ಕರ್ನಾಟಕ ರಾಜ್ಯಕ್ಕೆ ವಿಶೇಷ ಅನುದಾನ ನಿರೀಕ್ಷೆಯಲ್ಲಿದ್ದ ಜನರ ಮೂಗಿಗೆ ತುಪ್ಪ ಒರೆಸುವ ಕೆಲಸ ಕೇಂದ್ರ ಸರ್ಕಾರ ಮಾಡಿದೆ ರಾಜ್ಯದಲ್ಲಿ ಬಿಜೆಪಿ ಸೋಲಿನ ಸೇಡನ್ನು ಈ ರೀತಿಯಾಗಿ ತೀರಿಸಿಕೊಂಡಂತೆ ಕಾಣುತ್ತಿದೆ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿಗೆ ವಿಶೇಷ ಅನುದಾನ ನೀಡಿಲ್ಲ ಹಾಗೂ ನೆರಗಾ ಯೋಜನೆ ಕೃಷಿ ನೀರಾವರಿ ಇನ್ನಿತರ ಮಹತ್ವದ ಯೋಜನೆಗಳಿಗೆ ಆದ್ಯತೆ ನೀಡಿಲ್ಲ ಕೇಂದ್ರ ಬಜೆಟ್ ನಲ್ಲಿ ರಾಜ್ಯಕ್ಕೆ ಮಲತಾಯಿ ಧೋರಣೆ ತೋರಿದ್ದಾರೆ**

**-ಸಂಜೀವ್ ಐ.ರೆಡ್ಡಿ**
**ಕಾಂಗ್ರೇಸ್ ಮುಖಂಡರು**

**ಕೇಂದ್ರಕ್ಕೆ ಹೆಚ್ಚು ತೆರಿಗೆ ನಿಡುವ ಎರಡನೇ ಸ್ಥಾನದ ರಾಜ್ಯ ನಮ್ಮದು ಆದರೆ ಈ ಬಜೆಟ್ ನಲ್ಲಿ ಕರ್ನಾಟಕಕ್ಕೆ ಮಲತಾಯಿ ಧೋರಣೆ ಅನುಸರಿಸಿ ಬಿಹಾರ್ ಆಂಧ್ರಪ್ರದೇಶಕ್ಕೆ ಹೆಚ್ಚಿನ ಅನುದಾನ ನೀಡಿ ನಮ್ಮ ರಾಜ್ಯಕ್ಕೆ ಅನ್ಯಾಯ ಮಾಡಿದ್ದಾರೆ ಮತ್ತು ಮಹಿಳಾ ಸಬಲೀಕರಣಕ್ಕಾಗಿ ಹೇಳಿಕೊಳ್ಳುವಂತೆ ಯಾವುದೇ ಯೋಜನೆಗಳನ್ನು ಜಾರಿಗೆ ತಂದಿಲ್ಲ ರಾಜ್ಯದ ಹಲವು ಪ್ರಮುಖ ಬೇಡಿಕೆಗಳಾದ ಮಹಾದಾಯಿ ಮೇಕೆದಾಟು ಯೋಜನೆ ಜಾರಿಗೊಳಿಸಿಲ್ಲ ಕಲ್ಯಾಣ ಕರ್ನಾಟಕವನ್ನು ಸಂಪೂರ್ಣವಾಗ ನಿರ್ಲಕ್ಷ್ಯ ಮಾಡಿದ್ದಾರೆ ರೈತರ ಬೆಳೆವಿಮೆ ಹಣ ಕಡಿತಗೊಳಿಸಿದೆ ಇದು ಕಾರ್ಪೊರೇಟರ್ ಪರ ಬಜೆಟ್ ಆಗಿದೆ**

**-ರುದ್ರಾಂಬಿಕ ಆರ್ ಪಾಟೀಲ್**
**ಮಾಹಿಳಾ ಮುಖಂಡರು**




**ಕೇಂದ್ರದ ಬಜೆಟ್ ಇದು ಒಂದು ಬಿಹಾರ್ ಚುನಾವಣೆಯ ಗಿಫ್ಟ್ ಆಗಿದೆ ಹಾಗಾಗಿ ಈ ಬಜೆಟ್ಟನಲ್ಲಿ ಕರ್ನಾಟಕಕ್ಕೆ ಮತ್ತೆ ಅನ್ಯಾಯ ಆಗಿರೋದು ಅವರು ಕೇಂದ್ರ ಸಚಿವರು ಆದಮೇಲೆ ಸೀತಾರಾಮ್ ನಿರ್ಮಲ್ ಅವರು ಕರ್ನಾಟಕಕ್ಕೆ ಯಾಕೆ ಇಷ್ಟು ಮಲತಾಯಿದ್ಯು ಮಾಡ್ತಾರೆ ಗೊತ್ತಿಲ್ಲ ಹಾಗಾಗಿ ನಮ್ಮ ರಾಜ್ಯಕ್ಕೆ ಈ ಬಜೆಟ್ ತೃಪ್ತಿ ಆಗಿರುವುದಿಲ್ಲ**

**-ಬಸವರಾಜ ಯಮನೂರ್**

**ಭಾರತದ ಎಲ್ಲಾ ವರ್ಗದವರನ್ನು ಒಳಗೊಂಡ ಎಲ್ಲಾ ಕ್ಷೇತ್ರಗಳ ಏಳಿಗೆಯ ದೃಷ್ಟಿ ಹೊಂದಿದ ಬಜೆಟ್ ಇದಾಗಿದ್ದು, ದೇಶದ ಪ್ರಗತಿಯ ಪಥಕ್ಕೆ ವೇಗ ನೀಡಲಿದೆ. ರೈತರ ಪರ ಯೋಜನೆ, ಪಜಾ ಮತ್ತು ಪಪಂದ 5 ಲಕ್ಷ ಮಹಿಳೆಯರಿಗೆ ಹೊಸ ಉದ್ಯಮ ಸ್ಥಾಪನೆಗೆ ವಿಶೇಷ ಯೋಜನೆ ಕಲ್ಪಿಸಿರುವುದು ಸ್ವಾಗತಾರ್ಹ**

**-ಉಮೇಶ್ ರೆಡ್ಡಿ ಎಲೇರಿ**
**ಕೆಂಭಾವಿ**

**ದೇಶದ ಸರ್ವಾಂಗೀಣ ಅಭಿವೃದ್ಧಿಯ ದೃಷ್ಟಿಯಿಂದ ಮಂಡಿಸಬೇಕಿದ್ದ ಕೇಂದ್ರ ಸರ್ಕಾರದ ಬಜೆಟ್ ಕೇವಲ ಅಂಧ್ರ ಪ್ರದೇಶ ಮತ್ತು ಬಿಹಾರಕ್ಕೆ ಸೀಮಿತವಾದ ಬಜೆಟ್ ನಂತೆ ಇದ್ದು ಬಿಹಾರದ ಚುನಾವಣೆ ಮೇಲೆ ಗಮನ ಹರಿಸಿದ ಹಾಗಿದೆ. ಇನ್ನು ಕರ್ನಾಟಕ ರಾಜ್ಯಕ್ಕೆ ಯಾವ ಕೊಡುಗೆಯನ್ನೂ ನೀಡದ ಬಜೆಟ್‌ನಲ್ಲಿ ರಾಜ್ಯದ ಏಳಿಗೆಗೆ ಪೂರಕವಾದ ಯಾವ ಅಂಶಗಳ ಪ್ರಸ್ತಾಪವೂ ಇಲ್ಲ, ಇದೊಂದು ಕರ್ನಾಟಕ ವಿರೋಧಿ ಬಜೆಟ್ ಆಗಿದೆ.**

**-ಬಂದೇನವಾಜ್ ನಾಲತವಾಡ**
**ಟಿಪ್ಪುಸುಲ್ತಾನ್ ಅಧ್ಯಕ್ಷರು**

**ಕೇಂದ್ರ ಸರ್ಕಾರದ ಬಜೆಟ್ ನಲ್ಲಿ ಯುವಕರಿಗೆ ಉದ್ಯೋಗ ಹಾಗೂ ರೈತರಿಗೆ ಯಾವುದೇ ಹೊಸ ಯೋಜನೆಗಳು ಇಲ್ಲ. ಕರ್ನಾಟಕಕ್ಕೆ ಸಂಪೂರ್ಣ ದ್ರೋಹವಾಗಿದೆ. ನಮ್ಮ ರಾಜ್ಯಕ್ಕೆ ಯಾವುದೇ ಹೊಸ ಯೋಜನೆ ನೀಡಿಲ್ಲ. ಬಿಹಾರ ಮತ್ತು ಉತ್ತರ ಪ್ರದೇಶ ಇತರೆ ರಾಜ್ಯಗಳಿಗೆ ಚುನಾವಣೆ ಅನುಕೂಲಕ್ಕಾಗಿ ಬಜೆಟ್‌ನಲ್ಲಿ ಘೋಷಣೆ ಮಾಡಲಾಗಿದೆ.**

**-ಆರೀಫ್ ಸಾಸನೂರ್**
**ಯುವ ಮುಖಂಡರು**

**ಉದ್ಯೋಗ ಖಾತ್ರಿ ಯೋಜನೆಯಲ್ಲಿ ಕಳೆದ ಸಾಲಿನಲ್ಲಿ 89,000 ಕೋಟಿ ರು. ಮೀಸಲಿಟ್ಟಿದ್ದರು. ಆದರೆ, ಈಗ 9 ಸಾವಿರ ಕೋಟಿಯನ್ನು ಕಡಿತ ಮಾಡಿ 80,000 ಕೋಟಿಗೆ ಸೀಮಿತಗೊಳಿಸಿದ್ದಾರೆ. ವರ್ಷದಿಂದ ವರ್ಷಕ್ಕೆ ನರೇಗಾದಲ್ಲಿ ಉದ್ಯೋಗ ಆಕಾಂಕ್ಷಿಗಳ ಸಂಖ್ಯೆ ಹೆಚ್ಚಾಗುತ್ತಿದೆ. ನಗರ ಪ್ರದೇಶಗಳಿಗೂ ಯೋಜನೆ ವಿಸ್ತರಿಸಲು ಬಜೆಟ್ ನಲ್ಲಿ ಹಣ ಮೀಸಲಿಡುವ ಬದಲು ಈ ರೀತಿ ಕಡಿತ ಮಾಡಿರುವುದು ಮತ್ತಷ್ಟು ನಿರುದ್ಯೋಗ ಸಮಸ್ಯೆಗೆ ಕಾರಣವಾಗುತ್ತದೆ.**

**-ಎಚ್. ಆರ್. ಬಡಿಗೇರ್ ರೈತ ಸಂಘದ ಜಿಲ್ಲಾಧ್ಯಕ್ಷರು**

**ಜನವಿರೋಧಿ ಬಜೆಟ್ ಆಗಿದೆ. ಬಡ ಹಾಗೂ ಮಧ್ಯಮ ವರ್ಗದವರನ್ನು ಮುಖ್ಯ ವಾಹಿನಿಗೆ ತರಲು ಯಾವುದೇ ಯೋಜನೆಗಳನ್ನು ಘೋಷಣೆ ಮಾಡಿಲ್ಲ. ಇದೊಂದು ಉದ್ಯಮಿಗಳ ಪರವಾದ ಬಜೆಟ್ ಆಗಿದೆ. ದೇಶದಲ್ಲಿ ಯಾದಗಿರಿ ಜಿಲ್ಲೆ ಸೇರಿದಂತೆ 117 ಮಹತ್ವಾಕಾಂಕ್ಷೆ ಜಿಲ್ಲೆಗಳನ್ನು ಕೇಂದ್ರ ಸರಕಾರವೇ ಹಲವು ವರ್ಷಗಳಿಂದ ಘೋಷಣೆ ಮಾಡಿದೆ. ಆದರೆ, ಈ ಹಿಂದುಳಿದ ಜಿಲ್ಲೆಗಳ ಪ್ರಗತಿಗೆ ಯಾವುದೇ ರೀತಿಯಿಂದ ಅನುದಾನ ಮೀಸಲು ಇಟ್ಟಿಲ್ಲ**

**- ಆರ್ ಬಿ ಕನ್ನಡಿಗ**

### ಮಡಿವಾಳ ಮಾಚಿದೇವ ಜಯಂತಿಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ

## ವಚನ ಸಾಹಿತ್ಯ ಸಂರಕ್ಷಕ ಮಡಿವಾಳ ಮಾಚಿದೇವ

• **ಉದಯವಾಹಿನಿ, ಚಿತ್ರದುರ್ಗ**

ವಚನ ಸಾಹಿತ್ಯದ ಸಂರಕ್ಷಕ ಮಡಿವಾಳ ಮಾಚಿದೇವರು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾ ರಸ್ವಾಮಿ ಹೇಳಿದರು. ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾ ಯತ್, ಕನ್ನಡ, ಸಂಸ್ಕೃತಿ ಇಲಾಖೆ, ನಗರ ಸಭೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಮಡಿವಾಳ ಮಾಚಿದೇವ ಜಯಂತಿ ಆಚರಣೆ ಸಮಾರಂಭದಲ್ಲಿ ಮಡಿವಾಳ ಮಾಚಿದೇವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

12ನೇ ಶತಮಾನದ ಬಸವಾದಿ ಶರಣರ ವಚನಗಳನ್ನು ಮಡಿವಾಳ ಮಾಚಿದೇವರು ಸಂರಕ್ಷಣೆ ಮಾಡಿದರ ಫಲವಾಗಿ ನಾವುಗಳು ಶಿವಶರಣರ ವಚನ ಗಳನ್ನು ಓದಲಿಕ್ಕೆ ಸಾಧ್ಯವಾಗಿದೆ. ಇದರ ಜೊತೆಗೆ ಮಡಿವಾಳ ಮಾಚಿದೇವರು ಸಹ ವಚನಗಳನ್ನು ರಚನೆ ಮಾಡುವ ಮೂಲಕ ಸಮಾಜದಲ್ಲಿನ ಅಂಕುಡೊಂಕು, ಮೌಢ್ಯ, ಕಂದಾಚಾರಗಳನ್ನು ತಿದ್ದಿ, ನೇರ-ನಿಷ್ಠುರವಾಗಿ ಹೇಳಿ ಸಮಾಜಕ್ಕೆ ಅಮೂಲ್ಯವಾದ ಸಂದೇಶ ನೀಡಿದ್ದಾರೆ. ಹಾಗಾಗಿ ಮಡಿವಾಳ ಮಾಚಿದೇವರ ತತ್ವಾದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡು, ಅವರ ದಾರಿಯಲ್ಲಿ ಸಾಗೋಣ ಎಂದು ಹೇಳಿದರು.

ಇತಿಹಾಸ ಸಂಶೋಧಕ ಹಾಗೂ ಪ್ರಾಧ್ಯಾಪಕ ಡಾ. ಎನ್.ಎಸ್.ಮಹಂತೇಶ್ ಉಪನ್ಯಾಸ ನೀಡಿ, ವಚನ ಸಾಹಿತ್ಯದಲ್ಲಿ ನೆಲಮೂಲ ಮಣ್ಣಿನ ಸಂಸ್ಕೃತಿ, ಸೊಗಡು, ಚರಿತ್ರೆ, ಸಮಾಜದ ಬದುಕು ಸೇರಿಕೊಂಡಿರುವುದರಿಂದ ವಚನ ಸಾಹಿತ್ಯ ಪ್ರಸ್ತುತ ಹಾಗೂ ನಾಡಿನಲ್ಲಿ ಪ್ರಭಾವ ಬೀರಿದೆ. ವಚನ ಸಾಹಿತ್ಯದ ಆದ್ಯ ವಚನಕಾರ ಜೇಡರ ದಾಸಿಮಯ್ಯ, ವಚನ ಸಾಹಿತ್ಯ ಸಮೃದ್ಧಿ ಮಾಡಿದ ಬಸವಣ್ಣ ಹಾಗೂ ವಚನ ಸಾಹಿತ್ಯದ ಸಂರಕ್ಷಕ ಮಡಿವಾಳ ಮಾಚಿದೇವ ಅವರು ಬಹಳ ಮುಖ್ಯರಾಗುತ್ತಾರೆ ಎಂದು ಹೇಳಿದರು.

12ನೇ ಶತಮಾನದಲ್ಲಿ ಮಡಿವಾಳ ಮಾಚಿದೇವರು ವಿಶೇಷವಾದ ವ್ಯಕ್ತಿತ್ವ ಹೊಂದಿದ್ದರು. ವಚನ ಸಾಹಿತ್ಯದಲ್ಲಿ ವಿಚಾರ ಸಿದ್ದಾಂತ, ಆಚಾರ ಸಿದ್ದಾಂತ, ಅಕ್ಷರ ಸಿದ್ದಾಂತ ಮೂರು ವಿಭಾಗಗಳಿವೆ. ವಿಚಾರ ಸಿದ್ದಾಂತವನ್ನು ಷಟ್ ಸ್ಥಲ ಸಿದ್ದಾಂತವೆಂತಲೂ ಕರೆಯುತ್ತೇವೆ. ಷಟ್‌ಸ್ಥಲದಲ್ಲಿ ವಿಶೇಷವಾದ ಸ್ಥಾನವನ್ನು ಮಾಚಯ್ಯನವರು ಹೊಂದಿದ್ದರು. ಆದರೆ ಮಡಿವಾಳ ಮಾಚಿದೇವರ ಇತಿಹಾಸ ಮತ್ತು ವಚನ ಸಾಹಿತ್ಯದ ವಿಚಾರಗಳು ಷಟ್‌ಸ್ಥಲ ಸಾಹಿತ್ಯದಲ್ಲಿ ಬಂದಾಗ ಮೂಲೆ ಗುಂಪಾಗಿವೆ ಎಂದು ವಿಷಾದ ವ್ಯಕ್ತಪಡಿಸಿದರು.

ಚಿತ್ರದುರ್ಗ ತಾಲ್ಲೂಕು ಪಂಡರಹಳ್ಳಿಯ ಗಂಜಿಗಟ್ಟೆ ಆರ್.ಕೃಷ್ಣಮೂರ್ತಿ ಮತ್ತು ತಂಡ ದವರು ಗೀತಗಾಯನ ನಡೆಸಿಕೊಟ್ಟರು. ಕಾರ್ಯ ಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಿ.ಎಂ. ಗುರುನಾಥ, ನಗರಸಭೆ ಪೌರಾಯುಕ್ತೆ ಎಂ.ರೇಣುಕಾ, ಜಿಲ್ಲಾ ಮಡಿವಾಳರ ಸಂಘದ ಅಧ್ಯಕ್ಷ ಬಿ.ರಾಮಪ್ಪ, ಕಾರ್ಯದರ್ಶಿ ಕೆ.ಆರ್.ಮಂಜುನಾಥ್, ನಿರ್ದೇಶಕರಾದ ಲಕ್ಷ್ಮಣ್, ರಂಗಸ್ವಾಮಿ, ಮಡಿವಾಳ ಮಾಚಿದೇವರ ದೇವಸ್ಥಾನ ಅಭಿವೃದ್ಧಿ ಸಮಿತಿ ಗೌರವ ಅಧ್ಯಕ್ಷ ಶಿವಲಿಂಗಪ್ಪ, ಅಧ್ಯಕ್ಷ ಟಿ.ರುದ್ರೇಶ್, ಮುಖಂಡರಾದ ರಂಗಸ್ವಾಮಿ, ಪರಶುರಾಮ್, ಪ್ರಕಾಶ್ ಸೇರಿದಂತೆ ಮಡಿವಾಳ ಸಮಾಜದ ಮುಖಂಡರು ಇದ್ದರು.



ಉದಯವಾಹಿನಿ ಚಿತ್ರ

**ಮಡಿವಾಳ ಸಮಾಜದವರು ಕಾಯಕ ಬಂಧುಗಳು. ಕಲ್ಮಷ ತೊಳೆದು ಶುಭ್ರತೆ ಕೊಡುವ ಸಮಾಜವಾಗಿದ್ದು, ಅವರ ಮನಸ್ಸು ಸಹ ಅಷ್ಟೇ ಶುಭ್ರತೆ ಹೊಂದಿದೆ ಎಂದು ತಿಳಿಸಿದ ಅವರು, ಮಡಿವಾಳ ಸಮಾಜ ಸರ್ಕಾರದ ಮೀಸಲಾತಿ, ಸೌಲಭ್ಯ ಸದ್ಬಳಕೆ ಮಾಡಿಕೊಳ್ಳಬೇಕು. ಬಹಳ ಮುಖ್ಯವಾಗಿ ಮಕ್ಕಳನ್ನು ಶೈಕ್ಷಣಿಕವಾಗಿ ಮುಖ್ಯವಾಹಿನಿಗೆ ತರಬೇಕು. ಹಾಗಾಗಿ ಮಕ್ಕಳಿಗೆ ಉತ್ತಮ ಶಿಕ್ಷಣ ಹಾಗೂ ಸಂಸ್ಕಾರ ಕೊಡಬೇಕು. ಶಿಕ್ಷಣದಿಂದ ಮಾತ್ರ ಸಮಾಜ ಸುಧಾರಣೆ ಆಗಲು ಸಾಧ್ಯ ಎಂದು ಹೇಳಿದರು.**

### ಸಮಯ, ಮನಸ್ಸು, ಆಲೋಚನೆಗಳೇ ನಮ್ಮ ಭವಿಷ್ಯದ ಅಡಿಗಲ್ಲು: ಜಗನ್ನಾಥ ದೇಶಮುಖ

## ಹತ್ತನೇ ತರಗತಿ ವಿದ್ಯಾರ್ಥಿಗಳಿಗೆ ಸುಲಭ ಕಲಿಕಾ ಕಾರ್ಯಾಗಾರ

• **ಉದಯವಾಹಿನಿ, ಔರಾದ್**

ವಿದ್ಯಾರ್ಥಿಗಳು ಬೋಧನಾ ಕೊಠಡಿಯಲ್ಲಿ ಕುಳಿತರೆ ಮನಸ್ಸು ಬೇರೆಲ್ಲೋ ಇರುತ್ತೆ. ಇಂತಹ ಮನೋಭಾವದ ಭಾವನೆಯನ್ನು ಬದಲಾವಣೆ ಮಾಡುವ ಈ ಕಾರ್ಯಾಗಾರವು ಮಕ್ಕಳಲ್ಲಿ ಸ್ಫೂರ್ತಿ ತುಂಬುವ ಕೆಲಸ ಮಾಡಲಿದೆ. ಸಮಯ, ಮನಸ್ಸು, ಆಲೋಚನೆಗಳೇ ನಮ್ಮ ಭವಿಷ್ಯದ ಅಡಿಗಲ್ಲು ಎಂದು ಸಂಪನ್ಮೂಲ ಶಿಕ್ಷಕ ಜಗನ್ನಾಥ ದೇಶ ಮುಖ ಹೇಳಿದರು.

ಸಂತಪೂರಿನ ಸಿದ್ದರಾಮೇಶ್ವರ ಪದವಿ ಪೂರ್ವ ಕಾಲೇಜಿನಲ್ಲಿ ಶನಿವಾರ ಹತ್ತನೇ ತರಗತಿ ವಿದ್ಯಾರ್ಥಿಗಳ ವಿಶೇಷ ಶೈಕ್ಷಣಿಕ ಕಾರ್ಯಗಾರ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳ ಸನ್ಮಾನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು ಕಬ್ಬಿಣದ ಕಡಲೆ ಎಂದು ಕರೆಯುವ ಇಂಗ್ಲೀಷ್ ವಿಷಯ ಅರ್ಥೈಸಿಕೊಂಡರೆ ಸುಲಭವಾದ ವಿಷಯ ಮತ್ತೊಂದಿಲ್ಲ, ಹಳೆಯ ಪ್ರಶ್ನೆ ಪತ್ರಿಕೆ ಪರಿಶೀಲಿಸಿ, ಪಠ್ಯಕ್ರಮ ಆಧಾರಿತ ಅಧ್ಯಯನ ಮೂಲಕ ಹೆಚ್ಚು ಅಂಕ ಪಡೆಯಬಹುದು ಎಂದರು.

ಎಕಲಾರ ಸರ್ಕಾರಿ ಪ್ರೌಢಶಾಲೆಯ ಮುಖ್ಯ ಗುರುಗಳಾದ ಜ್ಞಾನದೇವ ಪಾಂಚಾಳ ಮಾತನಾಡಿ ವಿಜ್ಞಾನ ಭಾಗದ ಚಿತ್ರಗಳನ್ನು ಬಿಡಿಸುವ ಮೂಲಕ ಸರಳ ಅಂಕ ಪಡೆಯಬಹುದು ಎಂದರು. ಸುಭಾಷ್ ಚಂದ್ರ ಬೋಸ್ ಪ್ರೌಢಶಾಲೆಯ ಮುಖ್ಯ ಗುರುಗಳಾದ ಮನೋಹರ ಬಿರಾದರ್ ಮಾತನಾಡಿ ಸರಳೀಕೃತವಾದ ಸೂತ್ರ, ಪ್ರಮೇಯ ಮತ್ತು ನಿಶ್ಚಿತವಾಗಿ ಬರುವ ಅಂಕಗಳು ಪಡೆದು ಹೆಚ್ಚು ಪ್ರತಿಶತ ಪಡೆಯಬಹುದು ಎಂದರು.

ಈ ಕಾರ್ಯಾಗಾರದಲ್ಲಿ 15 ಪ್ರೌಢಶಾಲೆಗಳ 502 ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಶಾಲಾವಾರು ಪ್ರಥಮ, ದ್ವಿತೀಯ ಮತ್ತು ತೃತೀಯ ಕ್ರಮದಂತೆ ಒಟ್ಟು 50 ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಯಿತು.ಮುಖ್ಯ ಗುರುಗಳಾದ ಶಿವಕುಮಾರ ಹಿರೇಮಠ, ಪ್ರಾಂಶುಪಾಲೆ ಗುರ್ಪ್ರೀತ್ ಕೌರ್, ಶಿಕ್ಷಕರಾದ ಅನಿಲಕುಮಾರ, ಜಗನ್ನಾಥ ಕಟ್ಟೆ, ರೂಪಾ ಮೇತ್ರೆ, ಬಸವರಾಜ ಮಾಳಿಗೆ, ಮಲ್ಲಿಕಾರ್ಜುನ, ಸಾಯಿನಾಥ, ವಿಜಯಕುಮಾರ ಜೋಜನೆ,

ಉಪನ್ಯಾಸಕರಾದ ಶಿವಪುತ್ರ ಧರಣಿ, ರಾಜಕುಮಾರ ಹಳ್ಳಿಕರ್, ವನದೇವಿ ಎಕ್ಕಳೆ, ಅಶ್ವಿನಿ ಹಿಂದೊಡ್ಡಿ, ಸುಧಾ ಕೌಟಿಗೆ, ಪ್ರಿಯಾಂಕಾ ಗೊನ್ನಳ್ಳಿಕರ್, ನಿರ್ಮಲಾ ಜಮಾದಾರ, ಸುಧೀರ್ ಆಲೂರೆ, ಜಿತೇಂದ್ರ ಡಿಗ್ಗಿ, ಸಂತೋಷ ಧೂಳಗಂಡೆ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.



ಉದಯವಾಹಿನಿ ಚಿತ್ರ

**ಈ ಕಾರ್ಯಗಾರವು ವಿದ್ಯಾರ್ಥಿಗಳಿಗೆ ಪ್ರೇರಣಾದಾಯಕ, ಕಲಿಕೆಯಲ್ಲಿ ಹೊಸ ವಿಧಾನಗಳನ್ನು ಕಲಿಯಲು ಮತ್ತು ಪರೀಕ್ಷಾ ಭಯವನ್ನು ಕಡಿಮೆ ಮಾಡಲು ಆಯೋಜಿಸಲಾಗಿದೆ, ಅವರಿಗೆ ಮಾರ್ಗದರ್ಶನ, ಸುಲಭ ದಾರಿ, ಕಲಿಕೆಯ ದಿಕ್ಕು ಕಾಣಬೇಕು. ಆದ್ದರಿಂದ ವಿದ್ಯಾರ್ಥಿಗಳ ಮೆದುಳು ಚುರುಕಾಗಲು, ನಿತ್ಯದ ಕಾರ್ಯಗಳು ಪಕ್ವವಾಗಬೇಕು.**

**-ನವೀಲಕುಮಾರ ಉತ್ಕಾರ್**
**ಪ್ರಾಂಶುಪಾಲರು**

## ಮಿನಿ ನ್ಯೂಸ್

### ಚಿತ್ರದುರ್ಗ ನಗರಸಭೆ: ಅರ್ಜಿ ಆಹ್ವಾನ

• **ಉದಯವಾಹಿನಿ, ಚಿತ್ರದುರ್ಗ**

2025-26ನೇ ಸಾಲಿಗೆ ದೀನದಯಾಳ್ ಅಂತ್ಯೋದಯ ರಾಷ್ಟ್ರೀಯ ನಗರ ಜೀವನೋಪಾಯ ಅಭಿಯಾನ ಯೋಜನೆಯಡಿಯಲ್ಲಿ ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಆಸ್ತಿತೆರಿಗೆ ಹಾಗೂ ನೀರಿನ ಶುಲ್ಕ ಸಮರ್ಪಕ ವಸೂಲಾತಿಗಾಗಿ ನಗರಸಭೆ ಕಾರ್ಯಾಲಯ ವ್ಯಾಪ್ತಿಯಲ್ಲಿ ರಚಿಸಲಾಗಿರುವ ಅರ್ಹ ಮಹಿಳಾ ಸ್ವ-ಸಹಾಯ ಸಂಘಗಳನ್ನು ಆಯ್ಕೆ ಮಾಡಲು ಅರ್ಜಿ ಆಹ್ವಾನಿಸಲಾಗಿದೆ.

ಅರ್ಹ ಮಹಿಳಾ ಸ್ವ-ಸಹಾಯ ಸಂಘವು ಈಗಾಗಲೇ ಡೇ-ನಲ್ಮ್ ಅಭಿಯಾನದಡಿ ನೋಂದಾಯಿಸಿರಬೇಕು ಹಾಗೂ ಪಂಚಸೂತ್ರಗಳನ್ನು ಅನುಸರಿಸುತ್ತಿರಬೇಕು. ಸಂಘದ ಸದಸ್ಯರು ಕನಿಷ್ಠ 7ನೇ ತರಗತಿಯವರೆಗೆ ಶಿಕ್ಷಣ ಹಾಗೂ ಎಲೆಕ್ಟ್ರಾನಿಕ್ ಪರಿಕರಗಳ ಬಳಕೆ ಗೊತ್ತಿರಬೇಕು. ಸಂಘದ ಹೆಸರಿನಲ್ಲಿ ಸಕ್ರಿಯ ಬ್ಯಾಂಕ್‌ಖಾತೆ ಹೊಂದಿರಬೇಕು ಹಾಗೂ ಬ್ಯಾಂಕಿನಲ್ಲಿ ತಮ್ಮ ಖಾತೆಯಲ್ಲಿ ಸಾಲ ಪಡೆದು ನಿಯಮಿತವಾಗಿ ಮರು ಪಾವತಿ ಮಾಡಿರಬೇಕು. ಆಸಕ್ತ ಮಹಿಳಾ ಸ್ವ-ಸಹಾಯ ಸಂಘಗಳು ನಗರಸಭಾ ಕಾರ್ಯಾಲಯ ಚಿತ್ರದುರ್ಗ ಕಚೇರಿಯಲ್ಲಿ ಡೇ-ನಲ್ಮ್ ಶಾಖೆಗೆ ಸಂಪರ್ಕಿಸಬೇಕು ಎಂದು ಚಿತ್ರದುರ್ಗ ನಗರಸಭೆ ಪೌರಾಯುಕ್ತರು ತಿಳಿಸಿದ್ದಾರೆ.

### ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಸಭೆ

• **ಉದಯವಾಹಿನಿ, ಚಿತ್ರದುರ್ಗ**

ಇತ್ತೀಚಿಗೆ ಮೈಕ್ರೋಫೈನಾನ್ಸ್, ಲೇವಾದೇವಿ, ಗಿರವಿ ಹಣಕಾಸು ಸಂಸ್ಥೆಗಳಿಂದ ತನ್ನ ಸಾಲಗಾರರಿಗೆ ಅತಿಯಾಗಿ ಬಡ್ಡಿ ವಿಧಿಸುತ್ತಿರುವುದು ಹಾಗೂ ಸಾಲ ವಸೂಲಾತಿ ಸಮಯದಲ್ಲಿ ಸಾಲಗಾರರಿಗೆ ಕಿರುಕುಳ ನೀಡುತ್ತಿರುವುದು ಕಂಡುಬಂದಿರುವುದರಿಂದ, ಈ ಬಗ್ಗೆ ಕ್ರಮ ಕೈಗೊಳ್ಳಲು ಫೆ. 04 ರಂದು ಸಂಜೆ 4ಕ್ಕೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮೈಕ್ರೋಫೈನಾನ್ಸ್ ಸಂಸ್ಥೆಗಳ ಸಭೆ ನಿಗಧಿಪಡಿಸಲಾಗಿದೆ.

ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸಭೆಯ ಅಧ್ಯಕ್ಷತೆ ವಹಿಸುವರು. ಸಭೆಗೆ ಚಿತ್ರದುರ್ಗ ಜಿಲ್ಲೆಯಲ್ಲಿನ ಮೈಕ್ರೋಫೈನಾನ್ಸ್, ಲೇವಾದೇವಿ, ಗಿರವಿ ಹಣಕಾಸು ಸಂಸ್ಥೆಗಳ ವ್ಯವಸ್ಥಾಪಕರು ಸಂಪೂರ್ಣ ಮಾಹಿತಿಯೊಂದಿಗೆ ಹಾಜರಾಗಬೇಕು ಎಂದು ಜಿಲ್ಲಾ ಸಹಕಾರ ಸಂಘಗಳ ಉಪ ನಿಬಂಧಕ ಆರ್.ಎಸ್.ದಿಲೀಪ್ ಕುಮಾರ್ ತಿಳಿಸಿದ್ದಾರೆ.

### ಕೆರೆಗೆ ಈಜಲು ತೆರಳಿದ್ದ ಇಬ್ಬರು ಬಾಲಕರು ನೀರುಪಾಲು

• **ಉದಯವಾಹಿನಿ, ದಾವಣಗೆರೆ**

ಜಿಲ್ಲೆಯಲ್ಲಿ ರಜೆ ಇದ್ದ ಕಾರಣ ಕೆರೆಗೆ ಈಜಲು ತೆರಳಿದ್ದಂತ ಇಬ್ಬರು ಬಾಲಕರು ನೀರುಪಾಲಾಗಿರುವಂತ ಧಾರುಣ ಘಟನೆ ಕುರ್ಕಿ ಗ್ರಾಮದ ಬಳಿಯಲ್ಲಿ ನಡೆದಿದೆ. ದಾವಣಗೆರೆಯ ಗುರುಕುಲ ಶಾಲೆಯ ಇಬ್ಬರು ವಿದ್ಯಾರ್ಥಿಗಳು ಭಾನುವಾರದ ಕಾರಣ ಈಜಾಡಲು ಕುರ್ಕಿ ಗ್ರಾಮದ ಕೆರೆಯ ಬಳಿಗೆ ತೆರಳಿದ್ದರು. ನೀರಲ್ಲಿ ಮುಳುಗಿ ಇಬ್ಬರು ಸಾವನ್ನಪ್ಪಿದ್ದಾರೆ. ಮೃತರನ್ನು ಯತೀಂದ್ರ(16) ಮತ್ತು ಪಾಂಡು(16) ಎಂಬುದಾಗಿ ಗುರುತಿಸಲಾಗಿದೆ.ಮೃತ ವಿದ್ಯಾರ್ಥಿಗಳು ತುರ್ಚಘಟ್ಟದ ಗುರುಕುಲ ಶಾಲೆಯ ವಿದ್ಯಾರ್ಥಿಗಳು ಆಗಿದ್ದಾರೆ. ಶಾಲೆಗೆ ರಜೆ ಇದ್ದಿದ್ದರಿಂದ ಈಜಾಡಲು ತೆರಳಿದ್ದರು. ಮೃತ ವಿದ್ಯಾರ್ಥಿಗಳಲ್ಲಿ ಒಬ್ಬರ ಶವ ದೊರೆತಿದೆ. ಇನ್ನೊಬ್ಬನ ಶವಕ್ಕಾಗಿ ಶೋಧಕಾರ್ಯಾಚರಣೆಯನ್ನು ಅಗ್ನಿಶಾಮಕ ಸಿಬ್ಬಂದಿ ಮುಂದುವರೆಸಿದ್ದಾರೆ. ಈ ಸಂಬಂಧ ಮಾಯಕೊಂಡ ಪೋಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಹುತಾತ್ಮರ ದಿನ; ಶಾಂತಿಯಿಂದ ವರ್ತಿಸಿ

• **ಉದಯವಾಹಿನಿ, ಹರಪನಹಳ್ಳಿ**

ಹುತಾತ್ಮರ ದಿನದಂದು ನಾವು ನೀವು ಎಲ್ಲಾರೂ ಮಹಾತ್ಮರನ್ನು ಗೌರವಿಸುವ ಶುಭಾ ದಿನವಾಗಿದ್ದು, ದೇಶದ ಸ್ವತಂತ್ರಕ್ಕಾಗಿ ಹೋರಾಡಿದ ಮಹನೀಯರ ಆದರ್ಶಗಳನ್ನು ಮೈಗೂಡಿಸಿ ಕೊಳ್ಳಬೇಕಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರಾದ ಉಷಾರಾಣಿ ಆರ್. ಹೇಳಿದರು. ಪಟ್ಟಣದ ನ್ಯಾಯಾಲಯದ ಆವರಣದಲ್ಲಿ ತಾಲ್ಲೂಕು ಕಾನೂನು ಸೇವಾ ಸಮಿತಿ ವಕೀಲರ ಸಂಘ ಮತ್ತು ಪುರಸಭೆ ಕಾರ್ಯಾಲಯ ಹರಪನಹಳ್ಳಿ ಇವರ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಲಾಗಿದ್ದ ಮಹಾತ್ಮ ಗಾಂಧಿಜಿಯವರ ಹುತಾತ್ಮ ದಿನಾಚರಣೆಯ ಅಂಗವಾಗಿ ಉಭಯ ನ್ಯಾಯಾಲಯದ ನ್ಯಾಯಾಧೀಶರು ನ್ಯಾಯಾಲಯದ ಆವರಣದಲ್ಲಿ ಕಾರ್ಮಿಕರ ಜೊತೆ ಸ್ವಚ್ಚತಾ ಅಭಿಯಾನಕ್ಕೆ ಚಾಲನೆ ನೀಡಿ ಬಳಿಕ ಮಾತನಾಡಿದರು.ಆರೋಗ್ಯ ನಿರೀಕ್ಷಕರಾದ ಮಂಜುನಾಥ್ ಬಿ. ಮಾತನಾಡಿ, ಕಸವನ್ನು ಏಕ ಬಳಿಕ ನಿರ್ಮಿತ ಕಸವನ್ನು ವಿಲೀನ ಮಾಡುವುದರ ಮೂಲಕ ಪಟ್ಟಣ ಮತ್ತು ನಗರವನ್ನು ಪೌರ ಕಾರ್ಮಿಕರು ಗಾಂಧಿಯವರ ಕನಸನ್ನು ನನಸು ಮಾಡುತ್ತಿದ್ದಾರೆ ಇಂತಹ ದಿನದಂದು ಕಾರ್ಯನಿರ್ವಹಿಸುವುದು ಉತ್ತಮ ಎಂದರು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 07:30 ರಿಂದ 09:00 |
| ಗುಳಿಕ ಕಾಲ | ಮಧ್ಯಾಹ್ನ | 01:30 ರಿಂದ 03:00 |
| ಯಮಗಂಡ ಕಾಲ | ಬೆಳಿಗ್ಗೆ | 10:30 ರಿಂದ 12:00 |

**ಮೇಷ** ಹೆಚ್ಚಿನ ಕ್ಯಾಲೊರಿ ಆಹಾರವನ್ನು ತಪ್ಪಿಸಿ ಮತ್ತು ನಿಮ್ಮ ವ್ಯಾಯಾಮವನ್ನು ಕೈಬಿಡಬೇಡಿ. ನಿಮ್ಮ ತಾಯಿ ಅಥವಾ ತಂದೆಯ ಆರೋಗ್ಯಕ್ಕಾಗಿ ನೀವು ಇಂದು ಸಾಕಷ್ಟು ಹಣವನ್ನು ಖರ್ಚು ಮಾಡಬೇಕಾಗಬಹುದು.

**ವೃಷಭ** ಮನರಂಜನೆ ಮತ್ತು ಮೋಜಿನ ಒಂದು ದಿನ. ನೀವು ಸಾಕಷ್ಟು ಸಕಾರಾತ್ಮಕತೆಯೊಂದಿಗೆ ಮನೆಯಿಂದ ಹೊರಬರುತ್ತೀರಿ, ಆದರೆ ಕೆಲವು ಅಮೂಲ್ಯ ವಸ್ತುವಿನ ಕಳ್ಳತನದಿಂದಾಗಿ, ನಿಮ್ಮ ಮನಸ್ಥಿತಿಗೆ ತೊಂದರೆಯಾಗಬಹುದು.

**ಮಿಥುನ** ನಿಮ್ಮ ಸಂಗಾತಿಯ ಜೊತೆಗಿನ ಸಂಬಂಧ ನಿಮ್ಮ ಕಚೇರಿ ಕೆಲಸದ ಕಾರಣ ಹಾಳಾಗಬಹುದು. ಇಂದು ಪ್ರಣಯದ ಭಾವನೆಗಳಿಗೆ ಪ್ರತಿಕ್ರಿಯೆ ದೊರಕುತ್ತದೆ. ವೃತ್ತಿ ಅವಕಾಶಗಳನ್ನು ಹೆಚ್ಚಿಸಲು ನಿಮ್ಮ ವೃತ್ತಿಪರ ಶಕ್ತಿಯನ್ನು ಬಳಸಿ.

**ಕರ್ಕಾಟಕ** ಸ್ನೇಹಿತರೊಂದಿಗಿನ ಸಂಜೆ ಆಹ್ಲಾದಕರವಾಗಿದ್ದರೂ ವಿಪರೀತ ತಿನ್ನುವುದು ಮತ್ತು ಹಾರ್ಡ್ ಡ್ರಿಂಕ್ ಗಳ ಬಗ್ಗೆ ಎಚ್ಚರಿಕೆಯಿಂದಿರಿ. ನೀವು ಪ್ರಯಾಣ ಮಾಡುವ ಮತ್ತು ಹಣ ಖರ್ಚು ಮಾಡುವ ಮನಸ್ಥಿತಿಯಲ್ಲಿರುತ್ತೀರಿ.

**ಸಿಂಹ** ನೀವು ಹೇರಳ ಶಕ್ತಿಯನ್ನು ಹೊಂದಿರುತ್ತೀರಿ – ಆದರೆ ಕೆಲಸದ ಒತ್ತಡ ನಿಮ್ಮನ್ನು ಉದ್ವಿಗ್ನಗೊಳಿಸುವಂತೆ ತೋರುತ್ತದೆ. ನಿಮ್ಮ ಹಣವನ್ನು ಸಂಗ್ರಹಿಸಿದಾಗ ಮಾತ್ರ ಹಣ ನಿಮ್ಮ ಕೆಲಸಕ್ಕೆ ಬರುತ್ತದೆ.

**ಕನ್ಯಾ** ನಿಮ್ಮಲ್ಲಿ ಕೆಲವರು ಇದು ಇಂದು ಬಲವಂತವಾಗಿ ಪ್ರಮುಖ ನಿರ್ಧಾರಗಳನ್ನು ಕೈಗೊಳ್ಳಬೇಕಾಗಬಹುದು ಹಾಗೂ ಇದು ನಿಮ್ಮನ್ನು ಉದ್ವೇಗಭರಿತರನ್ನಾಗಿಯೂ ಹಾಗೂ ಗಾಬರಿಯಿರುವವರನ್ನಾಗಿಯೂ ಮಾಡಬಹುದು.

**ತುಲಾ** ನೀವು ಹೇರಳ ಶಕ್ತಿಯನ್ನು ಹೊಂದಿರುತ್ತೀರಿ – ಆದರೆ ಕೆಲಸದ ಒತ್ತಡ ನಿಮ್ಮನ್ನು ಉದ್ವಿಗ್ನಗೊಳಿಸುವಂತೆ ತೋರುತ್ತದೆ. ನಿಮ್ಮ ಹಣವನ್ನು ಸಂಗ್ರಹಿಸಿದಾಗ ಮಾತ್ರ ಹಣ ನಿಮ್ಮ ಕೆಲಸಕ್ಕೆ ಬರುತ್ತದೆ.

**ವೃಶ್ಚಿಕ** ನಿಮ್ಮ ಆಹಾರವನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ ಮತ್ತು ಫಿಟ್ ಆಗಿ ಉಳಿಯಲು ವ್ಯಾಯಾಮ ಮಾಡಿ. ಇಂದು ನೀವು ಯಾವುದೇ ಅಜ್ಞಾತ ಮೂಲಗಳಿಂದ ಹಣವನ್ನು ಪಡೆಯಬಹುದು.

**ಧನಸ್ಸು** ಬಸುರಿಯು ನೆಲದ ಮೇಲೆ ನಡೆದುಕೊಂಡು ಹೋಗುವಾಗ ವಿಶೇಷ ಕಾಳಜಿ ವಹಿಸಬೇಕು. ಇಂದು ನೀವು ಹಣಕ್ಕೆ ಸಂಬಂಧಿಸಿದ ಸಮಸ್ಯೆಯ ಕಾರಣದಿಂದ ತೊಂದರೆಗೊಳಗಾಗಬಹುದು.

**ಮಕರ** ನಿಮ್ಮ ಪ್ರಚಂಡ ಪ್ರಯತ್ನ ಹಾಗೂ ಕುಟುಂಬದ ಸದಸ್ಯರ ಸಕಾಲಿಕ ಬೆಂಬಲ ಬಯಸಿದ ಫಲಿತಾಂಶಗಳು ತರುತ್ತದೆ. ಆದರೆ ಪ್ರಸ್ತುತ ಚೇತನವನ್ನು ಕಾಯ್ದುಕೊಳ್ಳಲು ಶ್ರಮಿಸುತ್ತಿರಿ.

**ಕುಂಭ** ನೀವು ಪರಿಸ್ಥಿತಿಯ ನಿಯಂತ್ರಣ ಹೊಂದುತ್ತಿದ್ದಂತೆ ನಿಮ್ಮ ಆತಂಕ ಕಣ್ಮರೆಯಾಗುತ್ತದೆ. ಇದು ಧೈರ್ಯದ ಮೊದಲ ಸ್ಪರ್ಶದಲ್ಲಿ ಕುಸಿದುಹೋಗುವ ಸಾಬೂನಿನ ಗುಳ್ಳೆಯಷ್ಟೇ ಗಟ್ಟಿಯೆಂದು ನೀವು ಅರ್ಥ ಮಾಡಿಕೊಳ್ಳುತ್ತೀರಿ.

**ಮೀನ** ತುಂಬಾ ಚಿಂತೆ ಮತ್ತು ಒತ್ತಡ ನಿಮ್ಮ ಆರೋಗ್ಯವನ್ನು ನಾಶಮಾಡಬಹುದು. ನೀವು ಮಾನಸಿಕ ಸ್ಪಷ್ಟತೆಯನ್ನು ಕಾಯ್ದುಕೊಳ್ಳಲು ಗೊಂದಲ ಮತ್ತು ಹತಾಶೆಯನ್ನು ತಡೆಗಟ್ಟಬೇಕು.

## ದೇಶಭಕ್ತರಿಂದ ರಾಷ್ಟ್ರಮಾತೆಯ ಪುಣ್ಯಸ್ಮರಣೆ



ಉದಯವಾಹಿನಿ ಚಿತ್ರ

• ಉದಯವಾಹಿನಿ ಬೆಳಗಾವಿ

ಬ್ರಿಟೀಷ ಸಾಮ್ರಾಜ್ಯಕ್ಕೆ ದೇಶದಲ್ಲಿಯೆ ಪ್ರಥಮ ಸೋಲಿನ ರುಚಿ ತೋರಿಸಿದ ಸ್ವಾತಂತ್ರ್ಯ ಹೊರಟಗಾರ್ತಿ ವೀರರಾಣಿ ಕಿತ್ತೂರು ಚೆನ್ನಮ್ಮನವರ ಪುಣ್ಯಸ್ಮರಣೊತ್ಸವವನ್ನು, ನಗರದ ಕಿತ್ತೂರ ಚನ್ನಮಮಹಾದ್ವಾರದಲ್ಲಿ ಪಂಚಮಸಾಲಿ ಸಮಾಜಬಾಂಧವುರು ದೇಶಾಭಿಮಾನಿಗಳು ಮತ್ತು ಸಂಘಟನಾಕಾರಿಂದ ಚನ್ನಮಾಜಿಗೆ ಪೂಜೆ ಸಲಿಸಿ ಪುಷ್ಪ ನಮನದ ಮೂಲಕ ಗೌರವ ಪೂರ್ವಕವಾಗಿ ನಮನ ಸಲಿಸಲಾಯಿತು. ಸ್ಮರಣೋತ್ಸವದಲ್ಲಿ ಪಂಚಮಸಾಲಿ ಅಧ್ಯಕ್ಷ ಅಮರೇಶ ಗೂಳಿ ಕ,ಸಾ,ಪ ಅಧ್ಯಕ್ಷ ಕಾಮರಾಜ ಬಿರಾದಾರ ಭಾಜಪಾ ಅದ್ಯಕ್ಷ ಜಗದೀಶ್ ಪಂಪಣ್ಣವರ ಭಾಜಪಾ ಉಪಾಧ್ಯಕ್ಷ ರಾಜು ಬಳ್ಳೊಳ್ಳಿ ಕಾರ್ಗಿಲ್ ಸ್ಮಾರಕ ಸಮಿತಿ ಕಿರಣ ಪಾಟೀಲ್, ಪಂಚಮಸಾಲಿ ಯುವ ನಾಯಕ ಶರಣಗೌಡ ಸಾಲವಾಡಗಿ ,ಅನಿಲ್ ಪಾಟೀಲ ,ವೀರೇಶ ಹುನಗುಂದ ,ರಮೇಶ ಢವಳಗಕ, ಕಾರ್ಮಿಕ ಅಧ್ಯಕ್ಷ ರಾಜಶೇಖರ ಮ್ಯಾಗೇರಿ ,ಸಂಜು ಬಾಗೇವಾಡಿ ಅಪ್ಪು ಸಂಗಮ ಇನ್ನು ಮುಂತಾದವರು ಭಾಗವಹಿಸಿ ರಾಣಿ ಚನ್ನಮ್ಮನ ತ್ಯಾಗ ಬಲಿದಾನವನ್ನು ಮುಂದಿನ ಪಿಳಿಗೆಗೆ ಒಯ್ಯುವ ಜವಾಬ್ದಾರಿ ನಮ್ಮ ಮೆಲಿದೆ, ಅವರ ಪುಣ್ಯಸ್ಮರಣೆಯನು ಯಾವುದೆ ಜಾತಿ ಜನಾಂಗ ಬೇದವಿಲ್ಲದೆ, ಒಗ್ಗಟ್ಟಿನಿಂದ ಆಚರಿಸಿದರು.

# ವಿಮಾನ ನಿಲ್ದಾಣ ನಿರ್ಮಾಣಕ್ಕೆ ಕೇಂದ್ರದಿಂದ ಸಕಾರಾತ್ಮಕ ಸ್ಪಂದನೆ

## ಬಜೆಟ್‌ನಲ್ಲಿ ಬರದೇ ಇರಬಹುದು, ಹಾಸನ ವಿಮಾನ ನಿಲ್ದಾಣ ವಿಚಾರವನ್ನು ಸಂಬಂಧ ಪಟ್ಟ ಸಚಿವರ ಜೊತೆ ಮಾತನಾಡಿದ್ದೇನೆ: ಎಚ್‌ಡಿಕೆ

• ಉದಯವಾಹಿನಿ ಹಾಸನ

ಶಾಸಕ ಜಿ.ಟಿ.ದೇವೇಗೌಡ ಅಸಮಾಧಾನ ವಿಚಾರವಾಗಿ ಕೇಂದ್ರ ಸಚಿವ ಎಚ್ ಡಿ ಕುಮಾರಸ್ವಾಮಿ ಪ್ರತಿಕ್ರಿಯಿಸಿದ್ದಾರೆ. ನಮ್ಮ ಪಕ್ಷದಲ್ಲಿ ಏನಾಗಿದೆ ಅವರನ್ನು ಹದಿನೈದು ವರ್ಷದಿಂದ ನೋಡಿದ್ದೇನೆ.

ಅದಕ್ಕೆ ತಲೆ ಏಕೆ ಕೆಡಿಸಿಕೊಳ್ಳೋಣ, ಅವರು ಹೊಗೊಳೋದು ಎಷ್ಟೊತ್ತು, ಬೈಯ್ಯೋದು ಎಷ್ಟೊತ್ತು, ನಮ್ಮ ಪಕ್ಷದಲ್ಲಿ ಯಾವುದೇ ಗೊಂದಲಗಳಿಲ್ಲ. ಅವರಿಗೆ ವೈಯುಕ್ತಿಕವಾದ ಸಮಸ್ಯೆಗಳಿರಬಹುದು. ಅದು ಪಕ್ಷದ ಸಮಸ್ಯೆ ಅಲ್ಲ. ಅವರ ವೈಯಕ್ತಿಕ ಸಮಸ್ಯೆ, ಪರ್ಸನಲ್ ಅಜೆಂಡಾಗಳಿರಬಹುದು. ನಮ್ಮಲ್ಲಿ ಯಾವುದೇ ಗೊಂದಲ, ಗುಂಪುಗಾರಿಕೆ ಇಲ್ಲ ಎಂದು ಸ್ಪಷ್ಟನೆ ನೀಡಿದರು.

ಬೇರೆ ಪಕ್ಷದ ಗೊಂದಲದ ಬಗ್ಗೆ ನಾನು ಉತ್ತರ ಕೊಡುವುದು ತಪ್ಪಾಗುತ್ತದೆ. ಬಿಜೆಪಿ ಹೈಕಮಾಂಡ್ ಇದೆ ಅವರು ಸರಿಪಡಿಸಿಕೊಳ್ಳುತ್ತಾರೆ ಎಂದರು. ಸಿಎಂ ಬದಲಾವಣೆ ವಿಚಾರವಾಗಿ, ಅದು ನನಗೆ ಸಂಬಂಧ ಇಲ್ಲ, ಕಾಂಗ್ರೆಸ್‌ನವರು ತೀರ್ಮಾನ ಮಾಡಿಕೊಳ್ಳಬೇಕು ಎಂದರು.

ಬಜೆಟ್‌ನಲ್ಲಿ ಬರದೇ ಇರಬಹುದು. ಹಾಸನ ವಿಮಾನ ನಿಲ್ದಾಣ ವಿಚಾರವನ್ನು ಸಂಬಂಧ ಪಟ್ಟ ಸಚಿವರ ಜೊತೆ ಮಾತನಾಡಿದ್ದೇನೆ. ಅಲ್ಲಿಂದಲೇ ಹೆಚ್ಚಿನ ನೆರವು ಪಡೆಯಲು ಪ್ರಯತ್ನಪಡುತ್ತಿದ್ದೇವೆ. ಅವರು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ. ಅದಕ್ಕೆ ರಾಜ್ಯ ಸರ್ಕಾರ ಸ್ಪಂದಿಸಬೇಕು. ಇವತ್ತು ಅಲ್ಲಿ ಏನೇನು ನಡೆದಿದೆ, ಯಾರ್‍ಯಾರು ಸೇರಿಕೊಂಡು ಭೂಮಿ ಲಪಟಾಯಿಸಿ ಬಡಾವಣೆ ರಚನೆ ಮಾಡುತ್ತಿದ್ದಾರೆ ಎಲ್ಲವೂ ನಮಗೆ ಗೊತ್ತಿದೆ ಎಂದರು. ವಿಮಾನ ನಿಲ್ದಾಣ ಮಾಡಬೇಕೆನ್ನುವುದು ದೇವೇಗೌಡರ ಕನಸು. ಜನರು ಓಡಾಡಲು ವಿಮಾನ ನಿಲ್ದಾಣ ಮಾಡುತ್ತಿಲ್ಲ. ರೈತರು ಬೆಳೆದಂತಹ ಬೆಳೆಗೆ ಒಂದು ಹೊಸ ಪದ್ದತಿಯಲ್ಲಿ ವಿದೇಶಗಳಿಗೆ ಏರ್ ಕಾರ್ಗೋದಲ್ಲಿ ಎಕ್ಸ್‌ಪರ್ಟ್ ಮಾಡಿ ರೈತರ ಆರ್ಥಿಕ ಶಕ್ತಿ ಸದೃಢಗೊಳಿಸಬೇಕೆಂದು ದೇವೇಗೌಡರ ಕನಸಿದೆ.

ಇಪ್ಪತ್ತೈದು ವರ್ಷದಿಂದ ದೇವೇಗೌಡರಿಗೆ ಅದೇ ಚಿಂತೆ. ಅದಕ್ಕೆ ಇವರು ಎಷ್ಟರಮಟ್ಟಿಗೆ ಬೆಂಬಲ ಕೊಡ್ತಾ ಇದ್ದಾರೆ ಎಂದು ಎಲ್ಲರ ಕಣ್ಣೆದುರೇ ಇದೆ ಎಂದರು.ಹಾಸನದಲ್ಲಿ ವಾಸ್ತವ್ಯ ಹೂಡಿ ಪಕ್ಷ ಕಟ್ಟುತ್ತೇನೆ ಎಂಬ ಮಾಜಿಪ್ರಧಾನಿ ಎಚ್.ಡಿ.ದೇವೇಗೌಡರ ಹೇಳಿಕೆ ವಿಚಾರವಾಗಿ, ರಾಜ್ಯದಲ್ಲೇ ಅವರು ಹೋರಾಟ ಮಾಡಬೇಕು ಅನ್ನೋದು ಇದೆ. ನನಗೆ ಹೆಚ್ಚಿನ ಜವಾಬ್ದಾರಿಯನ್ನು ಪ್ರಧಾನಮಂತ್ರಿಗಳು ಕೊಟ್ಟಿದ್ದಾರೆ. ಪಕ್ಷ ಸಂಘಟನೆಗೆ ವಯಸ್ಸಿನ ಸಮಸ್ಯೆ ಇದ್ದರೂ ಪಕ್ಷದ ಕಾರ್ಯಕರ್ತರಿಗೆ ಶಕ್ತಿ ತುಂಬಲು ಹೋರಾಟ ಮಾಡುತ್ತೇನೆ ಎಂದು ಘೋಷಣೆ ಮಾಡಿದ್ದಾರೆ. ನನಗೆ ಬೇರೆ ಬೇರೆ ರೀತಿಯ ಒತ್ತಡಗಳಿದೆ ಎಂದು ತೀರ್ಮಾನಿಸಿದ್ದಾರೆ.

ನಾನು ನಮ್ಮ ರಾಷ್ಟ್ರೀಯ ಅಧ್ಯಕ್ಷರಲ್ಲಿ ಮನವಿ ಮಾಡುತ್ತೇನೆ. ನಮ್ಮ ಮುಂದೆ ಅವರು ಇನ್ನು ಇರಬೇಕು. ಈ ರಾಜ್ಯದ ಬಗ್ಗೆ ಅವರ ಕನಸುಗಳಿದ್ದವು, ಅದನ್ನು ನನಸು ಮಾಡುವ ಒಂದು ಕಾಲವನ್ನು ಈ ನಾಡಿನ ಜನ ಕೊಡ್ತಾರೆ ಎನ್ನುವ ನಂಬಿಕೆ ಇಟ್ಟುಕೊಂಡಿದ್ದೇನೆ. ಅದರನ್ನು ಅವರು ಕಣ್ಣಾರೆ ನೋಡಬೇಕು.

ಈ ರಾಜ್ಯದ ಅಭಿವೃದ್ಧಿಗೆ ಅವರು ಮಾಡಲು ಆಗದೇ ಇದ್ದದ್ದನ್ನು, ನಾನು ಮಾಡಲು ನನ್ನದೇ ಆದ ಕಲ್ಪನೆ ಇಟ್ಟುಕೊಂಡಿದ್ದೇವೆ. ಅವರು ಕೊಟ್ಟಿರುವ ಮಾರ್ಗದರ್ಶನವನ್ನು ಇಟ್ಟುಕೊಂಡಿದ್ದೇವೆ. ಆ ಕಾರ್ಯಕ್ರಮಗಳನ್ನು ತರಲು ಯೋಜನೆ ಇಟ್ಟುಕೊಂಡಿದ್ದೇನೆ ಎಂದರು.

> ನಮ್ಮ ಪಕ್ಷದಲ್ಲಿ ಯಾವುದೇ ಗೊಂದಲಗಳಿಲ್ಲ ಎಂದ ಎಚ್‌ಡಿಕೆ ಹಾಸನದಲ್ಲಿ ವಿಮಾನ ನಿಲ್ದಾಣ ಮಾಡಬೇಕೆನ್ನುವುದು ದೇವೇಗೌಡರ ಕನಸು ರೈತರ ಆರ್ಥಿಕ ಶಕ್ತಿ ಸದೃಢಗೊಳಿಸಬೇಕೆಂದು ದೇವೇಗೌಡರ ಕನಸಿದೆ -ಎಚ್‌ಡಿ ಕುಮಾರಸ್ವಾಮಿ, ಕೇಂದ್ರ ಸಚಿವ



### ಪಕ್ಷದಲ್ಲಿ ಗೊಂದಲ ಇಲ್ಲ

ಜನತೆಗೆ ಎಚ್ಡಿಕೆ ವಿಶ್ವಾಸ

ಜೆಡಿಎಸ್ ವಿರುದ್ಧ ಶಾಸಕ ಜಿ.ಟಿ.ದೇವೇಗೌಡ ಅಸಮಾಧಾನ ವಿಚಾರವಾಗಿ ಕೇಂದ್ರ ಸಚಿವ ಎಚ್ ಡಿ ಕುಮಾರಸ್ವಾಮಿ ಪ್ರತಿಕ್ರಿಯಿಸಿದ್ದಾರೆ. ಹದಿನೈದು ವರ್ಷದಿಂದ ಅವರನ್ನು ನೋಡಿದ್ದೇನೆ. ಅವರ ಕೋಪ ಎಷ್ಟೊತ್ತು ಎಲ್ಲವೂ ಸರಿಯಾಗುತ್ತೆ. ನಮ್ಮ ಪಕ್ಷದಲ್ಲಿ ಗೊಂದಲ ಇಲ್ಲ ಎಂದು ಸ್ಪಷ್ಟನೆ ನೀಡಿದ್ದಾರೆ. ನಮ್ಮಲ್ಲಿ ಯಾವುದೇ ಗೊಂದಲ, ಗುಂಪುಗಾರಿಕೆ ಇಲ್ಲ ಎಂದಿದ್ದಾರೆ.

## ಚಿಕ್ಕಮಂಗಳೂರಿನಲ್ಲಿ ಕೆಎಸ್‌ಟಿಎ ರಾಜ್ಯ ಕಾರ್ಯಕಾರಿಣಿ ಸಮಿತಿ ಸಭೆ



ಉದಯವಾಹಿನಿ ಚಿತ್ರ

• ಉದಯವಾಹಿನಿ ಚಿಕ್ಕಮಂಗಳೂರು

ಕರ್ನಾಟಕ ರಾಜ್ಯ ಟೈಲರ್ಸ್ ಅಸೋಸಿಯೇಷನ್ ಸಂಸ್ಥೆಯ ರಾಜ್ಯ ಕಾರ್ಯಕಾರಿಣಿ ಸಮಿತಿ ಸಭೆಯು ಚಿಕ್ಕಮಂಗಳೂರಿನಲ್ಲಿ ನಡೆಯಿತು.

ಸಭೆಯನ್ನು ಉದ್ದೇಶಿಸಿ ಮಾತನಾಡಿದ ಕರ್ನಾಟಕ ಸ್ಟೇಟ್ ಟೈಲರ್ ಅಸೋಸಿಯೇಷನ್ ರಾಜ್ಯಾಧ್ಯಕ್ಷರಾದ ನಾರಾಯಣ್‌ರವರು ರಾಜ್ಯದಲ್ಲಿ ಟೈಲರ್ ಅಸೋಸಿಯೇಷನ್ ಸಂಸ್ಥೆಯು ಬಲಾಢ್ಯವಾಗಿ ಸಂಘಟಿತವಾಗಿದ್ದು ಇದಕ್ಕೆ ಮುಖ್ಯ ಕಾರಣ ಟೈಲರ್ ವೃತ್ತಿ ಬಾಂಧವರು ಮತ್ತು ವಲಯ ತಾಲೂಕು ಜಿಲ್ಲಾ ಮಟ್ಟದ ಸಮಿತಿಗಳು ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿರುವುದರಿಂದ ರಾಜ್ಯದಲ್ಲಿ ಅಸಂಘಟಿತ ಕಾರ್ಮಿಕರಲ್ಲಿ ಕರ್ನಾಟಕ ಸ್ಟೇಟ್ ಟೈಲರ್ಸ್ ಅಸೋಸಿಯೇಷನ್ ಸಂಸ್ಥೆಯು ಬಲಾಢ್ಯವಾಗಿದೆ ಇದೇ ರೀತಿ ಮುಂದೆಯೂ ಸಹ ಎಲ್ಲಾ ಜಿಲ್ಲಾ ತಾಲ್ಲೂಕು ಮಟ್ಟದ ಸಮಿತಿಗಳು ವಲಯ ಸಮಿತಿಗಳು ಸಕ್ರಿಯವಾಗಿ ಪಾಲ್ಗೊಂಡು ರಾಜ್ಯ ಸಮಿತಿಯ ಜೊತೆ ಕೈಜೋಡಿಸಿ ಸಂಸ್ಥೆ ಸದೃಢಗೊಳ್ಳಲು ಸಹಕಾರಿಯಾಗಬೇಕೆಂದರು.

ಕರ್ನಾಟಕ ಸ್ಟೇಟ್ ಟೈಲರ್ಸ್ ಅಸೋಸಿಯೇಷನ್ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಪ್ರಜ್ವಲ್ ರವರು ಮಾತನಾಡಿ ಟೈಲರ್ ವೃತ್ತಿ ಬಾಂಧವರು ಸಂಘದಲ್ಲಿ ಪ್ರತಿ ವರ್ಷ ನೊಂದಣಿಯನ್ನು ನವೀಕರಣ ಮಾಡಿಸಿಕೊಳ್ಳಬೇಕೆಂದು ತಿಳಿಸಿದರು. ಕೆ ಎಸ್ ಟಿ ಎ ರಾಜ್ಯ ಕೋಶ ಅಧಿಕಾರಿ ರಾಮಚಂದ್ರ, ಉಡುಪಿ ಜಿಲ್ಲಾಧ್ಯಕ್ಷರಾದ ದಯಾನಂದ ಕೋಟ್ಯಾನ್ ಚಿಕ್ಕಮಗಳೂರು ಜಿಲ್ಲೆ ಅಧ್ಯಕ್ಷರಾದ ಸುರೇಂದ್ರ, ರಾಜ್ಯ ಉಪಾಧ್ಯಕ್ಷರಾದ ರೆಹಮಾನ್ ರಾಜ್ಯ ಸಮಿತಿ ಸದಸ್ಯರಾದ ಸಂತೋಷ್ ಕುಮಾರ್ ಜೆ ಬೆಂಗಳೂರಿನ ವಲಯ ಸಮಿತಿ ಸದಸ್ಯರಾದ ಗುರುಮೂರ್ತಿ. ಅರಸೀಕೆರೆ ಲಕ್ಷ್ಮಣ್ ರಾವ್ ರಾಜೇಶ್ ರಾಜ್ಯ ಸಮಿತಿ ಸದಸ್ಯರಾದ ಸತ್ಯನಾರಾಯಣ ಸೇರಿದಂತೆ ರಾಜ್ಯದ ಎಲ್ಲಾ ಜಿಲ್ಲೆಗಳ ಮುಖಂಡರು ಸಭೆಯಲ್ಲಿ ಭಾಗವಹಿಸಿದ್ದರು.

## ಮೈಕ್ರೋ ಫೈನಾನ್ಸ್ ಕಿರುಕುಳ ಕಡಿವಾಣಕ್ಕೆ ಶೀಘ್ರದಲ್ಲೇ ಸುಗ್ರೀವಾಜ್ಞೆ

• ಉದಯವಾಹಿನಿ ಬೆಳಗಾವಿ

### ಸಾಲಮನ್ನಾ ಆಗಲ್ಲ-ಸತೀಶ್ ಜಾರಕಿಹೊಳಿ

ರಾಜ್ಯದಲ್ಲಿ ಮೈಕ್ರೋ ಫೈನಾನ್ಸ್ ಸಂಸ್ಥೆಗಳು ಸಾರ್ವಜನಿಕರಿಗೆ ನೀಡುತ್ತಿರುವ ಕಿರುಕುಳ ಪ್ರಕರಣಗಳು ಕ್ರಮೇಣ ಹೆಚ್ಚುತ್ತಿವೆ.

ಇದಕ್ಕೆ ಕಡಿವಾಣ ಹಾಕುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಸುಗ್ರೀವಾಜ್ಞೆ ಹೊರಡಿಸಲು ಈಗಾಗಲೇ ಅನುಮೋದನೆ ಸಿಕ್ಕಿದ್ದು, ಸದ್ಯದಲ್ಲೇ ಜಾರಿಯಾಗಲಿದೆ ಎಂದು ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರೂ ಆಗಿರುವ ಸತೀಶ ಜಾರಕಿಹೊಳಿ ಹೇಳಿದರು.

ಬೆಳಗಾವಿ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ವಿವಿಧ ಬ್ಯಾಂಕ್/ ಸಹಕಾರಿ ಸಂಘಗಳ/ಮೈಕ್ರೋ ಫೈನಾನ್ಸ್ ಪ್ರತಿನಿಧಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಮನೆಗಳಿಗೆ ಹೋಗಿ ಕಿರುಕುಳ ನೀಡಬಾರದು. ಕಾನೂನು ಬದ್ಧವಾಗಿ ನೋಟಿಸ್ ಜಾರಿ ಮಾಡಬೇಕು.

ಫೈನಾನ್ಸ್‌ಗಳಿಂದ ಪಡೆದ ಸಾಲ ಮನ್ನಾ ಆಗುತ್ತಿದೆ ಎಂದು ಸಾರ್ವಜನಿಕ ವಲಯಗಳಲ್ಲಿ ನಂಬಿಕೆಯಿದೆ. ಸಾರ್ವಜನಿಕರಿಗೆ ತೊಂದರೆಯಾಗಬಾರದು ಎಂಬ ಕಾರಣಕ್ಕೆ ಸರ್ಕಾರ ಮಧ್ಯಪ್ರವೇಶಿಸಿದೆ. ಇದರಲ್ಲಿ ಸಾಲ ಮನ್ನಾ ಎಂಬ ಪ್ರಶ್ನೆಯೇ ಇಲ್ಲ. ನಿಯಮಾನುಸಾರ ಕಾಲಾವಕಾಶ ನೀಡಿ ಸಾಲ ಮರುಪಾವತಿ ಮಾಡಬೇಕು ಎಂದು ತಿಳಿಸಿದರು.



ಮಧ್ಯವರ್ತಿಗಳಿಗೆ ಕಡಿವಾಣ ಹಾಕಲು ಪೊಲೀಸ್ ಇಲಾಖೆಗೆ ಈಗಾಗಲೇ ಸೂಚನೆ ನೀಡಲಾಗಿದೆ. ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಫೈನಾನ್ಸ್ ಸಂಸ್ಥೆಗಳ ಕಿರುಕುಳ ಪ್ರಕರಣಗಳು ದಾಖಲಾಗುತ್ತಿವೆ. ಇದಕ್ಕೆ ಮೂಲ ಕಾರಣ ಮಧ್ಯವರ್ತಿಗಳು. ಇವರು ಜನರ ದಾರಿ ತಪ್ಪಿಸಿ ಕಮಿಷನ್ ಪಡೆಯಲು ಸಬ್ಸಿಡಿ ಸಾಲ ಎಂದು ನಂಬಿಸಿ ಅವರ ಹೆಸರಲ್ಲಿ ಸಾಲ ಮಂಜೂರು ಮಾಡಿಸುವ ಮೂಲಕ ಜನರನ್ನು ವಂಚಿಸುತ್ತಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

> ಮಧ್ಯವರ್ತಿಗಳಿಂದ ಸಬ್ಸಿಡಿ ಸಾಲ ಎಂದು ಮೋಸ ಮಾಡಿದ ಮಧ್ಯವರ್ತಿಗಳ ಮೇಲೆ ಕ್ರಮ ಜರುಗಿಸಿ, ಅವರಿಂದ ಸಾಲ ಮರು ಪಾವತಿಸುವ ಕೆಲಸವನ್ನು ಅಧಿಕಾರಿಗಳಿಗೆ ನೀಡಲಾಗಿದೆ. ಮೈಕ್ರೋ ಫೈನಾನ್ಸ್‌ಗಳು ಕಿರುಕುಳ ನೀಡಿದರೆ ಅಂತಹ ಫೈನಾನ್ಸ್‌ಗಳ ವಿರುದ್ಧವಾಗಿ ಕ್ರಮ ತೆಗೆದುಕೊಳ್ಳಲು ಪೊಲೀಸ್ ಇಲಾಖೆ ನಿರ್ದೇಶನ ನೀಡಲಾಗಿದೆ -ಸತೀಶ್ ಜಾರಕಿಹೊಳಿ, ಜಿಲ್ಲಾ ಉಸ್ತುವಾರಿ ಸಚಿವ

## ವಿಜ್ಞಾನದ ಬೆಳವಣಿಗೆ ದೇಶದ ಅಭಿವೃದ್ಧಿಗೆ ಪೂರಕ: ಇಸ್ರೊ ವಿಜ್ಞಾನಿ ವಿಲಾಸ

• ಉದಯವಾಹಿನಿ ಇಂಡಿ

ಇಂಡಿ ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರದಲ್ಲಿ ಪ್ರಗತಿಯು ಸಂಶೋಧನೆ, ಪ್ರಾಯೋಗಿಕತೆ ಮತ್ತು ಸೃಜನಾತ್ಮಕ ಚಿಂತನೆಯಲ್ಲಿ ಅಡಗಿದೆ, ವಿಜ್ಞಾನ ಪ್ರಗತಿಯು ದೇಶದ ಪ್ರಗತಿಗೆ ಪೂರಕವಾಗಿದೆ ಎಂದು ಇಸ್ರೋ ವಿಜ್ಞಾನಿ ವಿಲಾಸ ರಾಠೋಡ ಹೇಳಿದರು. ಅವರು ಪಟ್ಟಣದ ರಾಯಲ್ ಇಂಟರ್ ನ್ಯಾಶನಲ್ ಶಾಲೆಯಲ್ಲಿ ವಿಜ್ಞಾನ ವಸ್ತು ಪ್ರದರ್ಶನ ಉದ್ಘಾಟಿಸಿ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದರು.

ಈ ವಿಜ್ಞಾನ ಪ್ರದರ್ಶನವು ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಅನುಭವವನ್ನು ನೀಡುವ ಜೊತೆಗೆ, ಅವರಲ್ಲಿ ವಿಜ್ಞಾನ ಮತ್ತು ಸಂಶೋಧನೆಗೆ ಒಲವು ಹೆಚ್ಚಿಸುವಲ್ಲಿ ಸಹಾಯಕವಾಗಲಿದೆ ಎಂದು ಅವರು ಅಭಿಪ್ರಾಯಪಟ್ಟರು.

ರಾಯಲ್ ಇಂಟರ್ ನ್ಯಾಶನಲ್ ಶಾಲೆಯ



ಉದಯವಾಹಿನಿ ಚಿತ್ರ

### ವಿಜ್ಞಾನ ವಸ್ತು ಪ್ರದರ್ಶನ ಉದ್ಘಾಟನೆ

ಈ ಪ್ರಯತ್ನವನ್ನು ಖಂಡಿತವಾಗಿಯೂ ವಿದ್ಯಾರ್ಥಿಗಳ ಭವಿಷ್ಯದ ದೃಢ ಭಿತ್ತಿಯಾಗಿ ನಿಲ್ಲುತ್ತದೆ. ವಿದ್ಯಾರ್ಥಿಗಳ ಸೃಜನಶೀಲತೆ ಮತ್ತು ಅವಿಷ್ಕಾರ ಸಾಮರ್ಥ್ಯವನ್ನು ಮೆಚ್ಚಿ, ಈ ಯುವಕರು ಭವಿಷ್ಯದ ವಿಜ್ಞಾನಿಗಳು ಆಗಲಿದ್ದಾರೆ, ಅವರು ನಮ್ಮ ದೇಶವನ್ನು ಹೊಸ ಎತ್ತರಕ್ಕೆ ಕೊಂಡೊಯ್ಯುತ್ತಾರೆ ಎಂದು ಹೇಳಿದರು.

ಈ ವಿಜ್ಞಾನ ವಸ್ತು ಪ್ರ್ರದರ್ಶನದಲ್ಲಿ ವಿದ್ಯಾರ್ಥಿಗಳು ಅಂತರಿಕ್ಷ ಸಂಶೋಧನೆ, ರೋಬೋಟಿಕ್ಸ್, ಕೃತಕ ಬುದ್ಧಿಮತ್ತೆ, ಪರಿಸರ ಸಂರಕ್ಷಣೆ, ಮತ್ತು ನವೀನ ವಿದ್ಯುತ್ ಶಕ್ತಿಯ ಉಗಮಗಳು ಇತ್ಯಾದಿ ವಿಷಯಗಳ ಮೇಲೆ ತಮ್ಮ ವೈಜ್ಞಾನಿಕ ಮಾದರಿಗಳನ್ನು ಮತ್ತು ಪ್ರಾಜೆಕ್ಟ್‌ಗಳನ್ನು ಪ್ರಸ್ತುತಪಡಿಸಿದರು.

ಅಧ್ಯಕ್ಷತೆ ಸಿಆರ್‌ಪಿ ಪ್ರವೇಜ್ ಪಟೇಲ್ , ಕ್ಷೇತ್ರ ಶಿಕ್ಷಣಾಧಿಕಾರಿ ಟಿ. ಎಸ್. ಅಲಗೂರ ಜಿಸಿಸಿ ಬ್ಯಾಂಕ್ ಸದಸ್ಯ ಅಲ್ಲಾಬಕ್ಷ ವಾಲೀಕರ್, ಅರ್ಜುನ್ ಲಮಾಣಿ, ಹನುಮಂತ ಕಂಣದಿ, ಚಂಬಸಗೌಡ, ಅಸ್ಲಾಂ ಪಟೇಲ್, ಮಹಮ್ಮದ್ ಗುಲ್ಬರ್ಗಾ, ಮತ್ತು ಇಂಡಿ ತಾಲೂಕಾ ಶಿಕ್ಷಕರ ಸಂಘದ ಅಧ್ಯಕ್ಷ ವೈ.ಟಿ. ಪಾಟೀಲ್, ಎಸ್.ವಿ. ಹರಳಯ್ಯಾ,, ಜೈರಾಮ್ ಚೌಹಾಣ್, ಇಂಡಿ ನೌಕರರ ಸಂಘದ ನಿರ್ದೇಶಕರಾದ ಅಬುತಾಲೀಬ್ ಹೊಸೂರು ಮತ್ತಿತರಿದ್ದರು.

## ಅಂಬೇಡ್ಕರ್ ಸಹಾಯ ಹಸ್ತ ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಪಡೆದುಕೊಳ್ಳಬೇಕು: ಎಚ್ ಕೆ ಪ್ರಭಾಕರ್

• ಉದಯವಾಹಿನಿ ಅರಸೀಕೆರೆ



ಟೈಲರ್ ವೃತ್ತಿ ಬಾಂಧವರನ್ನು ಕರ್ನಾಟಕ ರಾಜ್ಯ ಸರ್ಕಾರ ಕಾರ್ಮಿಕ ಇಲಾಖೆ ಅಡಿಯಲ್ಲಿ ಬರುವ ಅಸಂಘಟಿತ ಸಾಮಾಜಿಕ ಭದ್ರತಾ ಮಂಡಳಿ ಯೋಜನೆ ಅಡಿಯಲ್ಲಿ ಸೇರಿಸಲಾಗಿದ್ದು ಇದರಿಂದ ಸರ್ಕಾರದ ಹಲವಾರು ಯೋಜನೆಗಳನ್ನು ಪಡೆಯಲು ಅಂಬೇಡ್ಕರ್ ಸಹಾಯ ಹಸ್ತ ಗುರುತಿನ ಚೀಟಿಯನ್ನು ತಮ್ಮ ಟೈಲರ್ ಅಸೋಸಿಯೇಷನ್ ಸಂಘದ ಮುಖೇನ ಇಲಾಖೆಯಲ್ಲಿ ಪಡೆಯಬೇಕು .

ಇದರಿಂದ ಸರ್ಕಾರದ ಯೋಜನೆಗಳನ್ನು ಪಡೆಯಲು ಅನುಕೂಲವಾಗಲಿದೆ ಕೋವಿಡ್ ಸಂದರ್ಭದಲ್ಲಿ ಸರ್ಕಾರದ ವತಿಯಿಂದ ಟೈಲರ್ಗಳಿಗೆ 2,000ಗಳನ್ನು ನೀಡಲಾಗಿತ್ತು ಇದರಿಂದ ಕೆಲವು ಟೈಲರ್ ವೃತ್ತಿಬಾಂಧವರು ಗುರುತಿನ ಚೀಟಿ ಪಡೆಯದೆ ಇದ್ದದ್ದರಿಂದ ಹಣ ಅವರ ಖಾತೆಗೆ ಜಮಾ ಆಗಲಿಲ್ಲ ಆದ್ದರಿಂದ ಹೊಲಿಗೆ ವೃತ್ತಿಬಾಂಧವರು ಕಡ್ಡಾಯವಾಗಿ ಅಸಂಗಟಿತ ಸಾಮಾಜಿಕ ಭದ್ರತಾ ಮಂಡಳಿಯಲ್ಲಿ ನೊಂದಣಿ ಮಾಡಿಸಿಕೊಂಡು ಅಂಬೇಡ್ಕರ್ ಸಹಾಯ ಹಸ್ತ ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಪಡೆದುಕೊಳ್ಳಬೇಕು ಟೈಲರ್ ಎಂದು ಗುರುತಿಸಿಕೊಳ್ಳಲು ಟೈಲರ್ಸ್ ಅಸೋಸಿಯೇಷನ್ ಸಂಸ್ಥೆಯ ವತಿಯಿಂದ ವೃತ್ತಿ ಪ್ರಮಾಣ ಪತ್ರವನ್ನು ಪಡೆದುಕೊಂಡು ನೋಂದಾವಣೆ ಮಾಡಿಸಿಕೊಳ್ಳಬೇಕೆಂದು ಹಿರಿಯ ಕಾರ್ಮಿಕ ನಿರೀಕ್ಷಕರಾದ ಎಚ್ ಕೆ ಪ್ರಭಾಕರ್ ತಿಳಿಸಿದರು.

## ಬಜೆಟ್‌ನಲ್ಲಿ ಕರ್ನಾಟಕಕ್ಕೆ ಮಲತಾಯಿ ಧೋರಣೆ

• ಉದಯವಾಹಿನಿ ಮುದ್ದೇಬಿಹಾಳ



ಕೇಂದ್ರ ತೆರಿಗೆ ನೀಡುವ ಎರಡನೇ ರಾಜ್ಯ ನಮ್ಮ ಕರ್ನಾಟಕ ಆದರೆ ಬಜೆಟ್ ನಲ್ಲಿ ನಮ್ಮ ಕರ್ನಾಟಕಕ್ಕೆ ಮಲತಾಯಿ ಧೋರಣೆ ಮಾಡಿದ್ದಾರೆ ಆದ್ರೆ ಎರಡು ರಾಜ್ಯಗಳಾದ ಆಂಧ್ರ ಹಾಗೂ ಬಿಹಾರ್ ಗೆ ಹೆಚ್ಚಿನ ಅನುದಾನ ಬಿಡುಗಡೆ ಮಾಡಿದೆ ನಮ್ಮ ರಾಜ್ಯಕ್ಕೆ ಅನ್ಯಾಯ ಮಾಡಿದ್ದಾರೆ ಹೆಣ್ಣುಮಕ್ಕಳಿಗೆ ನಮ್ಮ ಸರ್ಕಾರ ಅಂತ ಹೇಳುವ ಸರ್ಕಾರ ಮಹಿಳಾ ಸಬಲೀಕರಣಕ್ಕೆ ಹೇಳಿಕೊಳ್ಳುವಂತ ಯಾವುದೇ ಯೋಜನೆ ತಂದಿಲ್ಲ ಸರ್ಕಾರ ಎಡುವಿದೆ.

ಈ ಬಜೆಟ್ ಕುರುಡು ಬಜೆಟ್ ಎಂದು ಮಾಧ್ಯಮದ ಮುಂದೆ ಹೇಳಿಕೆ ನೀಡಿದರು. ಪ್ರಕಾಶ ಕಪನೂರ್ ಭಾರತೀಯ ಭೀಮ್ ಸೇನೆಯ ರಾಜ್ಯ ಉಪಾಧ್ಯಕ್ಷರು ಬೆಂಗಳೂರು.

## ಫೆ.13-14ರಂದು ಬೆಂಗಳೂರಲ್ಲಿ ಮೂಲನಿವಾಸಿ ಸಮುದಾಯ ಜಾಗೃತಿ ಅಂದೋಲನ

• ಉದಯವಾಹಿನಿ,ಚಿಂಚೋಳಿ

ಫೆ. 13-14ರಂದು ಬೆಂಗಳೂರಿನಲ್ಲಿ 2 ದಿನ ಸಮೂದಾಯ ಮೂಲ ನಿವಾಸಿ ಜಾಗೃತಿ ಶಿಬಿರ ಅಧ್ಯಯನ ಚಳುವಳಿ ಬೊಮ್ಮುಗೊಂಡೇಶ್ವರ ಕುರಿತು ಜಾಗೃತಿ ಅಂದೋಲನ ಕಾರ್ಯಕ್ರಮ ನಡೆಯಲಿದೆ ಮೂಲನಿವಾಸಿ ಬಂದುಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಿಸಿ ಯಶಸ್ವಿಗೊಳಿಸಬೇಕು ಎಂದು ಬಾಂಶೇಫ್ ಯೂನಿಟಿ ಆಫ್ ಮೂಲನಿವಾಸಿ ಸಂಘಟನೆ ಮತ್ತು ಆದಿವಾಸಿ ಬುಡಕಟ್ಟು ಯುವ ಹೋರಾಟಗಾರ ಗೋಪಾಲ್ ಎಂಪಿ ಗಾರಂಪಳ್ಳಿ ತಿಳಿಸಿದ್ದಾರೆ.



ಪತ್ರಿಕಾ ಪ್ರಕಟನೆ ಹೊರಡಿಸಿದ ಅವರು, ಮೂಲನಿವಾಸಿಗಳಾದ ನಾವುಗಳು ಶೈಕ್ಷಣಿಕವಾಗಿ ರಾಜಕೀಯವಾಗಿ ಸಮಾಜೀಕವಾಗಿ ಕಾನೂನು ಬದ್ದವಾದ ಹಕ್ಕುಗಳು ಪಡೆಯಲು ಮತ್ತು ಮಹಾತ್ಮಾ ಬೊಮ್ಮುಗೊಂಡೇಶ್ವರ ಜೀವನ ಚರಿತ್ರೆ ಕುರಿತು ಮೂಲನಿವಾಸಿ ಬಂದುಗಳಿಗೆ ಅಧ್ಯಯ ಶಿಬಿರ ಬಹುಮುಖ್ಯವಾಗಿದೆ. ಈ ಮಹತ್ವದ ಕಾರ್ಯಕ್ರಮ ಕಾಗಿನೆಲೆ ಸಂಸ್ಥಾಪಕ ಗುರುಪೀಠ ಕಾಗಿನೆಲೆ ಆಯೋಜಕರು,ದೇಶದ ಮೂಲನಿವಾಸಿಗಳಾದ ಗೊಂಡ ಕುರುಬ ಜನಾಂಗದ ಹಕ್ಕೋತ್ತಾಯ ಸಮಿತಿ ಮತ್ತು ಕರ್ನಾಟಕ ಪ್ರದೇಶ ಕುರುಬರ ಸಂಘ ನೇತೃತ್ವದಲ್ಲಿ ಕನಕ ಚಾರೀಟೇಬಲ್ ಟ್ರಸ್ಟ್ ಸ್ಥಳದಲ್ಲಿ ಶಿಬಿರ ಹಮ್ಮಿಕೊಳ್ಳಲಾಗಿದೆ. ಅಖಂಡ ಕರ್ನಾಟಕದ ಮೂಲನಿವಾಸಿ ಬುಡಕಟ್ಟು ಗೋಂಡ ಕುರುಬ ಸಮೂದಾಯ ಜಾಗೃತಿಗಾಗಿ ಮುಂದಿನ ಉಳಿವಿಗಾಗಿ ರಾಜ್ಯದ ಪ್ರತಿ ಜಿಲ್ಲೆ ತಾಲ್ಲೂಕಿನಿಂದ ಸ್ವಯಂ ಪ್ರೇರಿತವಾಗಿ ಕಾರ್ಯಕ್ರಮಜಲ್ಲಿ ಪಾಲ್ಗೊಂಡು ಯಶಸ್ಸುಗೊಳಿಸಬೇಕು ಎಂದು ಮನವಿ ಮಾಡಿದ್ದಾರೆ.

# ಕನ್ನಡ ಬರೆಯಲು ಒದ್ದಾಡಿದ ಶಿವರಾಜ್ ತಂಗಡಗಿ

## ★ ಕನ್ನಡ ಬರೆಯಲು ಬಾರದವರನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರನ್ನಾಗಿಸಿದ್ದಾದರೂ ಏಕೆ?

• ಉದಯವಾಹಿನಿ ಕೊಪ್ಪಳ

ಕೊಪ್ಪಳ ಜಿಲ್ಲೆಯ ಕಾರಟಗಿ ತಾಲ್ಲೂಕಿನ ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿದ್ದ ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ ತಂಗಡಗಿಯವರು ಅಂಗನವಾಡಿಯಲ್ಲಿನ ಬೋರ್ಡ್ ಮೇಲೆ ಕನ್ನಡ ಬರೆಯಲು ಹೋಗಿ ತಪ್ಪಾಗಿ ಬರೆದಿದ್ದಾರೆ.

ಆನಂತರ, ಜೊತೆಯಲ್ಲಿದ್ದ ಅಧಿಕಾರಿಗಳು ಅವರ ಬರಹದಲ್ಲಿನ ತಪ್ಪುಗಳನ್ನು ಗಮನಿಸಿದಾಗ ಅವರು ಆ ತಪ್ಪನ್ನು ತಿದ್ದಲು ಗೊತ್ತಾಗದೇ ತಡಕಾಡಿದ್ದಾರೆ. ಈ ವಿಡಿಯೋ ಫೆ. 2ರಂದು ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ.

ಕಾರಟಗಿಯ ಅಂಗನವಾಡಿ ಶಾಲೆಯಲ್ಲಿನ ಕಾರ್ಯಕ್ರಮವೊಂದಕ್ಕೆ ಭೇಟಿ ನೀಡಿದ್ದ ಸಚಿವರು, ಕಾರ್ಯಕ್ರಮ ಮುಗಿಸಿಕೊಂಡು ವಿದ್ಯಾರ್ಥಿಗಳನ್ನು ತರಗತಿಯೊಂದಕ್ಕೆ ಹೋಗಿ ಅಲ್ಲಿ ವಿದ್ಯಾರ್ಥಿಗಳನ್ನು ಮಾತನಾಡಿಸಿದರು.

ಆ ವೇಳೆ, ತರಗತಿಯಲ್ಲಿನ ಬೋರ್ಡ್ ಮೇಲೆ 'ಕಾರಟಗಿ ಅಂಗನವಾಡಿ ಕೇಂದ್ರ, ಜೆಪಿ ನಗರ, ಉದ್ಘಾಟನಾ ಸಮಾರಂಭ ಎಂದು ಬರೆಯಲಾಗಿತ್ತು. ಈ ಮೂರೂ ವಾಕ್ಯಗಳು ನಂತರ ನಾಲ್ಕನೇ ವಾಕ್ಯವಾಗಿ, ಶುಭವಾಗಲಿ ಎಂದು ಬರೆಯಲು ಸಚಿವರು ಮುಂದಾದರು.



ಉದಯವಾಹಿನಿ ಚಿತ್ರ

### ಜಾಲತಾಣದಲ್ಲಿ ವೈರಲ್

ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ ತಂಗಡಗಿ ಕೊಪ್ಪಳ ಜಿಲ್ಲೆಯ ಕಾರಟಗಿ ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಬೋರ್ಡ್ ಮೇಲೆ ಕನ್ನಡದಲ್ಲಿ ಬರೆಯುವಾಗ ಸರಿಯಾಗಿ ಬರೆಯಲು ತಡಕಾಡಿ ತಪ್ಪು ಮಾಡಿದರು. ಅವರ ಬರಹದ ತಪ್ಪನ್ನು ಗಮನಿಸಿದ ಅಧಿಕಾರಿಗಳು ತಿದ್ದಲು ಸಹಾಯ ಮಾಡಿದರೂ, ಸಚಿವರು ಬರೆಯಲು ಗೊಂದಲಕ್ಕೆ ಸೆಲ್ಪಟ್ಟರು. ಅವರ ಈ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಯಿತು.

> ಕನ್ನಡ ಮತ್ತು ಸಂಸ್ಕೃತಿ ಸಚಿವೆ ಶಿವರಾಜ ತಂಗಡಗಿಯವರು ಕಾರಟಗಿ ಜಿಲ್ಲೆಯ ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿದಾಗ ಬೋರ್ಡ್ ಮೇಲೆ ಕನ್ನಡ ಬರೆಯಲು ಪ್ರಯತ್ನಿಸಿದರು. ಶಿವರಾಜ ತಂಗಡಗಿ ಯವರು 'ಶುಭವಾಗಲಿ' ಎಂದು ಬರೆಯಲು ಸಮಯದಲ್ಲಿ ಗೊಂದಲಕ್ಕೊಳಗಾದರು ಮತ್ತು ಅವರ ಬರಹದಲ್ಲಿ ಕೆಲವು ತಪ್ಪುಗಳನ್ನು ತಿದ್ದಬೇಕಾಯಿತು.

### ಸಂಸ್ಕೃತಿ ಸಚಿವರಿಗೂ ಕನ್ನಡ ಬರಲ್ವಾ?

ಕೈಯ್ಯಲ್ಲಿ ಚಾಕ್ ಪೀಸ್ ಹಿಡಿದು ಶುಭವಾಗಲಿ ಎಂದು ಬರೆಯಲು ಹೋದ ಸಚಿವರಿಗೆ ಅದನ್ನು ಸರಿಯಾಗಿ ಬರೆಯಲು ಆಗಲೇ ಇಲ್ಲ. ಮೊದಲು 'ಶ' ಅಕ್ಷರ ಬರೆದರು. ಆನಂತರ, 'ಬ' ಅಕ್ಷರ ಬರೆದರು.

ಆಗ ಪಕ್ಕದಲ್ಲಿದ್ದವರೊಬ್ಬರು, 'ಶ' ಅಕ್ಷರಕ್ಕೆ ಕೊಂಬು ಕೊಡಬೇಕು ಎಂದಾಗ, ಸಚಿವರು 'ಶ' ಅಕ್ಷರಕ್ಕೆ ಕೊಂಬು ಗೀಚಿದರು. ಅತ್ತ 'ಬ' ಅಕ್ಷರಕ್ಕೂ ತಲೆಕಟ್ಟು ಹಾಕಬೇಕು ಹಾಗೂ 'ಬ' ಅಕ್ಷರಕ್ಕೆ ಕೆಳಗೆ ಬಾಲ ಬರೆಯಬೇಕು ಎಂದು ಪಕ್ಕದಲ್ಲಿದ್ದವರು ಬಿಡಿಸಿ ಹೇಳಿದಾಗ ಸಚಿವರು ಅದನ್ನು ಪಾಲಿಸಿದರು.

ಆನಂತರ, ಶುಭ ಪದವನ್ನು ತಿದ್ದಿ ತೀಡಿ ಸರಿಯಾಗಿ ಬರೆದ ನಂತರ ಅದರ ಮುಂದೆ 'ವಾಗಲಿ' ಎಂದು ಸಚಿವರು ಸರಾಗವಾಗಿ ಬರೆದರು.

ಆದರೆ, ಸ್ಟಾರ್ಟಿಂಗ್ ಟ್ರಬಲ್ ಎಂಬ ರೀತಿಯಲ್ಲಿ ಶುಭಾಶಯ ಎಂಬ ಪದದ ಮೊದಲೆರಡು ಅಕ್ಷರಗಳನ್ನು ಬರೆಯುವುವಾಗ ಸಚಿವರು ಗೊಂದಲಕ್ಕೊಳಲಾಗಿದ್ದು ಮಾತ್ರ ನಿಜ. ಸಾಮಾಜಿಕ ಜಾಲತಾಣದಲ್ಲಿ ಈ ವಿಡಿಯೋ ವೈರಲ್ ಆಗಿದ್ದು, ಅನೇಕರು ಕನ್ನಡ ಬರೆಯಲು ಬಾರದವರನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರನ್ನಾಗಿಸಿದ್ದಾದರೂ ಏಕೆ ಎಂದು ಸಿಎಂ ಸಿದ್ದರಾಮಯ್ಯನವರನ್ನು ಪ್ರಶ್ನಿಸಿದ್ದಾರೆ.

ಕೆಲವು ದಿನಗಳ ಹಿಂದೆ ಪ್ರಾಥಮಿಕ ಶಿಕ್ಷಣ ಸಚಿವ ಮಧು ಬಂಗಾರಪ್ಪನವರು ಶಾಲೆಯೊಂದರಲ್ಲಿ ವಿದ್ಯಾರ್ಥಿಗಳ ಜೊತೆಗೆ ಸಂವಾದ ನಡೆಸುವಾಗ ಅಲ್ಲಿನ ವಿದ್ಯಾರ್ಥಿಯು ಎದ್ದು ನಿಂತು, ಸರ್, ನಿಮಗೆ ಕನ್ನಡ ಸರಿಯಾಗಿ ಬರಲ್ಲ ಎಂದು ಹೇಳಿದ್ದ. ಅದಕ್ಕೆ ಸಚಿವರು ಗರಂ ಆಗಿದ್ದನ್ನು ಇಲ್ಲಿ ಸ್ಮರಿಸಬಹುದು.

## ಅಸ್ಪೃಶ್ಯತಾ ನಿವಾರಣೆಗೆ ಜಾಗೃತಿ ಹೆಜ್ಜೆ

• ಉದಯವಾಹಿನಿ ಇಂಡಿ

ಸಮಾಜ ಕಲ್ಯಾಣ ಇಲಾಖೆಯ ಮೂಲಕ ಸರ್ಕಾರವು ಸಮಾಜದಲ್ಲಿನ ಅಸ್ಪೃಶ್ಯತಾ ಆಚರಣೆಯ ವಿರುದ್ಧ ಜಾಗೃತಿ ಮೂಡಿಸುವ ಉದ್ದೇಶದಿಂದ ಹಾಗೂ ಪರಿಶಿಷ್ಟ ಜಾತಿಯ ಸಬಲೀಕರಣಕ್ಕಾಗಿ ಇಂಡಿ ತಾಲ್ಲೂಕಿನಲ್ಲಿ ಹಮ್ಮಿಕೊಳ್ಳಲಾಯಿತು. ಈ ಕಾರ್ಯಕ್ರಮದಲ್ಲಿ

ವಿಜಯಪುರ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪುಂಡಲೀಕ ಮನಾವರ್ ಅವರ ನೇತೃತ್ವದಲ್ಲಿ ಹಾಗು ತಾಲ್ಲೂಕ ಸಮಾಜ ಕಲ್ಯಾಣ ನಿರ್ದೇಶಕರು ಉಮೇಶ್ ಲಂಬಾಣಿ ಅವರ ನೇತೃತ್ವದಲ್ಲಿ ಅಸ್ಪೃಶ್ಯತಾ ನಿವಾರಣ ಕಾರ್ಯಕ್ರಮ ನಿಮಿತ್ತ ಬೀದಿ ನಾಟಕ ಹಾಗೂ ಕರಪತ್ರಗಳ ಮೂಲಕ ಇಂದು ಯಶಸ್ವಿಯಾಗಿ ಕಾರ್ಯಕ್ರಮ ನಡೆದಿದ್ದು, ಈ ಕಾರ್ಯಕ್ರಮವು ಗ್ರಾಮ ಸೇವಾ ಟ್ರಸ್ಟ್ (ರಿ) ಸಾಮಾಜಿಕ ಸಾಂಸ್ಕೃತಿಕ ಹಾಗೂ ಸೈಕ್ಷಣಿಕ ಇದರ ಅಧ್ಯಕ್ಷರಾದ ಸತೀಶ್ ಚೌಹಾಣ್ (ಇಂಡಿ) ಇವರ ಸಹಯೋಗದಲ್ಲಿ ಯಶಸ್ವಿಯಾಗಿ ಕಾರ್ಯಕ್ರಮವನ್ನು ಮಾಡಲಾಗಿದೆ. ಈ ಕಾರ್ಯಕ್ರಮವು ಸ್ಥಳೀಯರ ಮನ್ನಣೆಗೆ ಹಾಗೂ ಆಕರ್ಷಣೆಗೆ ಸಾಕ್ಷಿಯಾಗಿದೆ ಎಂದು ದಲಿತ ಸಂಘಟನೆಯ ಮುಖಂಡರು ಹಾಗೂ ಸಾರ್ವಜನಿಕರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಈ ಜಾಗೃತಿ ಕಾರ್ಯಕ್ರಮದಲ್ಲಿ ಬೀದಿ ನಾಟಕ ಮಾಡಿ ಯಶಸ್ವಿಗೊಳಿಸುವಲ್ಲಿ ಮುಖ್ಯ ಪಾತ್ರ ವಹಿಸಿದವರು ಸತೀಶ್ ಚವಾಣ್ (ಇಂಡಿ) ವಿನೋದ್ ಇಂಡಿಗೋವಿಂದ ಬಂಡಿಹಳ್ಳಿ(ಹೊಸಪೇಟೆ) ಹನುಮಯ್ಯ ವೆಂಕಟಾಪುರ(ಹೊಸಪೇಟೆ) ಮಂಜುನಾಥ್ ತುಮಕೂರ ವೆಂಕಟೇಶ್ ಮೂರ್ತಿ ಶಾರದಾ ಎಲ್ಲನುಮಂತಕ್ಕ ಸುಮಿತ್ ಪೂರ್ಣಿಮಾ ಬೈಲಹೊಂಗಲ ಹೀಗೆ ಸಾರ್ವಜನಿಕರು


ಉದಯವಾಹಿನಿ ಚಿತ್ರ



> ಸಮಾಜ ಕಲ್ಯಾಣ ಇಲಾಖೆಯ ಮೂಲಕ ಸರ್ಕಾರವು ಸಮಾಜದಲ್ಲಿನ ಅಸ್ಪೃಶ್ಯತಾ ಆಚರಣೆಯ ವಿರುದ್ಧ ಜಾಗೃತಿ ಮೂಡಿಸುವ ಉದ್ದೇಶದಿಂದ ಹಾಗೂ ಪರಿಶಿಷ್ಟ ಜಾತಿಯ ಸಬಲೀಕರಣಕ್ಕಾಗಿ ಇಂದು ವಿಜಯಪುರ ಜಿಲ್ಲೆಯ ಇಂಡಿ ತಾಲೂಕಿನ ಬಳ್ಳೊಳ್ಳಿ. ಝಳಕಿ. ನದ್ರಾಳ ಧೂಳಖೇಡ . ಹಲಸಂಗಿ.ಗ್ರಾಮಗಳಲ್ಲಿ ಅಸ್ಪೃಶ್ಯತಾ ನಿವಾರಣ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಂಡು ಜನರಲ್ಲಿ ಪ್ರಬುದ್ಧತೆಯ ಭಾವನೆ ಮೂಡಿಸಿದೆ. ಈ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಇಂಡಿ ತಾಲ್ಲೂಕಿನ ಉಪವಿಭಾಗ ದೌರ್ಜನ್ಯ ಸಮೀತಿ ಅಧ್ಯಕ್ಷ ಶಿವಾನಂದ ಮುರಮಾನ ಅವರು ಮಾತನಾಡಿದರು ಇನ್ನು ಕೆಲವು ಗ್ರಾಮಗಳಲ್ಲಿ ಅಸ್ಪೃಶ್ಯತೆ ಇದ್ರೆ ನಮ್ಮ ಗಮನಕೆ ತರಬೇಕೆಂದು ಗ್ರಾಮದ ಜನರಲ್ಲಿ ಕೇಳಿಕೊಂಡರು ಹಾಗೊಂದು ವೇಳೆ ಇದ್ರೆ ಹೇಳಿ ಎಂದು ಗ್ರಾಮದ ಜನರಲ್ಲಿ ಕೇಳಿಕೊಂಡರು -ಶಿವಾನಂದ ಮುರಮಾನ

# ಶ್ರೀಲೀಲಾ ಬಗ್ಗೆ ತೆಲುಗು ನಿರ್ಮಾಪಕರ ಬೇಸರ



ಕನ್ನಡ ಚಿತ್ರರಂಗದಿಂದ ಬೆಳಕಿಗೆ ಬಂದ ನಟಿ ಶ್ರೀಲೀಲಾ ಈಗ ತೆಲುಗು ಚಿತ್ರರಂಗದಲ್ಲಿ ಟಾಪ್ ನಟಿಯಾಗಿ ಗುರುತಿಸಿಕೊಂಡಿದ್ದಾರೆ. ಒಂದರ ಹಿಂದೊಂದರಂತೆ ಬ್ಲಾಕ್ ಬಸ್ಟರ್ ಸಿನಿಮಾಗಳನ್ನು ನೀಡುತ್ತಿದ್ದಾರೆ ನಟಿ ಶ್ರೀ ಲೀಲಾ. ಇದೀಗ ಬಾಲಿವುಡ್ ಮತ್ತು ತಮಿಳು ಚಿತ್ರರಂಗಕ್ಕೂ ಸಹ ಶ್ರೀಲೀಲಾ ಕಾಲಿಟ್ಟಿದ್ದಾರೆ.

ಈಗ ಪ್ರಸ್ತುತ ಶ್ರೀಲೀಲಾ ಕೈಯಲ್ಲಿ ಸುಮಾರು ಆರು ಸಿನಿಮಾಗಳಿವೆ. ಆದರೆ ಬೇಡಿಕೆ ಹೆಚ್ಚಾದಷ್ಟು ಶ್ರೀಲೀಲಾಗೆ ಸಮಸ್ಯೆಗಳು ಸಹ ಶುರುವಾಗಿವೆ. ಒಬ್ಬ ನಿರ್ಮಾಪಕರಂತೂ ಶ್ರೀಲೀಲಾ ವಿರುದ್ಧ ತೆಲುಗು ಸಿನಿಮಾ ನಿರ್ಮಾಪಕರ ಸಂಘಕ್ಕೆ ದೂರು ನೀಡಲು ಮುಂದಾಗಿದ್ದಾರೆ. ಅಷ್ಟಕ್ಕೂ ಶ್ರೀಲೀಲಾ ಮಾಡಿರುವ ತಪ್ಪೇನು

ಶ್ರೀಲೀಲಾ ಒಂದೇ ಸಮಯದಲ್ಲಿ ಹಲವು ಸಿನಿಮಾಗಳನ್ನು ಒಪ್ಪಿಕೊಂಡು ನಟಿಸುತ್ತಿದ್ದಾರೆ. ಇದರಿಂದಾಗಿ ಅವರಿಗೆ ಡೇಟ್ಸ್ ಸಮಸ್ಯೆ ಎದುರಾಗಿದ್ದು, ಒಪ್ಪಿಕೊಂಡ ಎಲ್ಲಾ ಸಿನಿಮಾಗಳಿಗೆ ಸರಿಯಾಗಿ ಸಮಯ ನೀಡಲು ಸಾಧ್ಯವಾಗುತ್ತಿಲ್ಲ. ಕೆಲ ತಿಂಗಳ ಮುಂಚೆ ರವಿತೇಜ ನಟನೆಯ 'ಮಾಸ್ ಜಾತರ' ಹೆಸರಿನ ಸಿನಿಮಾದಲ್ಲಿ ನಟಿಸಲು ಶ್ರೀಲೀಲಾ ಒಪ್ಪಿಕೊಂಡಿದ್ದರು. ಸಿನಿಮಾದ ಕೆಲ ಹಂತದ ಚಿತ್ರೀಕರಣವೂ ಮುಗಿದಿತ್ತು. ಆದರೆ ಈಗ ಶ್ರೀಲೀಲಾ ಚಿತ್ರೀಕರಣಕ್ಕೆ ಬರುತ್ತಿಲ್ಲ ಎನ್ನಲಾಗುತ್ತಿದೆ. ಇನ್ನು 20 ದಿನಗಳ ಚಿತ್ರೀಕರಣ ಬಾಕಿ ಇದೆ ಆದರೆ ಶ್ರೀಲೀಲಾ ಬೇರೆ ಸಿನಿಮಾಗಳಲ್ಲಿ ಬ್ಯುಸಿಯಾಗಿರುವ ಕಾರಣದಿಂದಾಗಿ 'ಮಾಸ್ ಜಾತರ' ಸಿನಿಮಾದ ಚಿತ್ರೀಕರಣದಲ್ಲಿ ಪಾಲ್ಗೊಳ್ಳಲು ಸಾಧ್ಯವಾಗುತ್ತಿಲ್ಲವಂತೆ.

**20 ದಿನಗಳ ಚಿತ್ರೀಕರಣ ಮಾತ್ರವೇ ಬಾಕಿ**

ಶ್ರೀಲೀಲಾ ನಟಿಸಿರುವ ಹಲವು ದೃಶ್ಯಗಳ ಚಿತ್ರೀಕರಣವನ್ನು ಈಗಾಗಲೇ ಮುಗಿಸಿದ್ದು, ಇನ್ನು 20 ದಿನಗಳ ಚಿತ್ರೀಕರಣ ಮಾತ್ರವೇ ಬಾಕಿ ಇದೆ. ಹೀಗಾಗಿ ಈ ಹಂತದಲ್ಲಿ ಶ್ರೀಲೀಲಾ ಅವರನ್ನು ಬದಲಾಯಿಸಿ ಮತ್ತೊಬ್ಬ ನಟಿಯನ್ನು ಹಾಕಿಕೊಳ್ಳುವುದು ಬಹಳ ನಷ್ಟದ ವಿಚಾರ ಆಗಲಿದೆ. ಹಾಗಾಗಿ ಸಿನಿಮಾದ ನಿರ್ಮಾಪಕ ಭಾನು ಬೋಗವರ್ಪು ಅವರು ತಲೆ ಕೆಡಿಸಿಕೊಂಡಿದ್ದು, ತೆಲುಗು ಸಿನಿಮಾ ನಿರ್ಮಾಪಕರ ಸಂಘಕ್ಕೆ ಹಾಗೂ ಮಾ ಅಸೋಸಿಯೇಷನ್‌ಗೆ ಈ ಬಗ್ಗೆ ದೂರು ನೀಡಲು ಮುಂದಾಗಿದ್ದಾರೆ ಎನ್ನಲಾಗುತ್ತಿದೆ. ರವಿತೇಜ ಜೊತೆಗೆ ಈ ಹಿಂದೆಯೂ ಶ್ರೀಲೀಲಾ ನಟಿಸಿದ್ದು, ರವಿತೇಜ ಪಾಲಿಗೆ ಶ್ರೀಲೀಲಾ ಲಕ್ಕಿ ನಾಯಕಿ ಎಂಬ ಕಾರಣಕ್ಕೆ 'ಮಾಸ್ ಜಾತರ' ಸಿನಿಮಾಕ್ಕೆ ಶ್ರೀಲೀಲಾ ಅವರನ್ನು ನಾಯಕಿಯನ್ನಾಗಿ ಆಯ್ಕೆ ಮಾಡಿಕೊಳ್ಳಲಾಗಿತ್ತು. ಆದರೆ ಬಾಲಿವುಡ್ ಸಿನಿಮಾ ಹಾಗೂ ತಮಿಳಿನ ಒಂದು ಪ್ರಮುಖ ಸಿನಿಮಾದಲ್ಲಿ ಅವಕಾಶ ಸಿಕ್ಕಿದ ಕಾರಣ ಎಲ್ಲಾ ಡೇಟ್ಸ್ ಅನ್ನು ಆ ಸಿನಿಮಾಗಳಿಗೆ ನೀಡಿರುವ ಶ್ರೀಲೀಲಾ 'ಮಾಸ್ ಜಾತರ' ಸಿನಿಮಾಕ್ಕೆ ಕೈ ಕೊಟ್ಟಿದ್ದಾರೆ.



ಸಾರಾ ನಯಾ ಲುಕ್ ಈಗ ಪಡ್ಡೆ ಹುಡುಗರ ನಿದ್ದೆಗೆಡಿಸಿದೆ.

# ಗ್ಲ್ಯಾಮರಸ್ ಅವತಾರದಲ್ಲಿ ಸಾರಾ ಅಣ್ಣಯ್ಯ

ಕನ್ನಡತಿ, ಅಮೃತಧಾರೆ ಸೀರಿಯಲ್ ನಟಿ ಸಾರಾ ಅಣ್ಣಯ್ಯ ಸದಾ ಒಂದಲ್ಲಾ ಒಂದು ಫೋಟೋಶೂಟ್ ಮೂಲಕ ಸದ್ದು ಮಾಡುತ್ತಲೇ ಇರುತ್ತಾರೆ. ಇದೀಗ ಗ್ಲ್ಯಾಮರಸ್ ಅವತಾರ ತಾಳಿರುವ ಸಾರಾ ನಯಾ ಲುಕ್ ಅನ್ನು ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ.

ಬಿಳಿ ಬಣ್ಣದ ಲೆಹೆಂಗಾ ಧರಿಸಿ ನಟಿ ಬೋಲ್ಡ್ ಆಗಿ ಪೋಸ್ ನೀಡಿದ್ದಾರೆ. ವಿವಿಧ ಭಂಗಿಯಲ್ಲಿ ನಟಿ ಮಿಂಚಿದ್ದಾರೆ. ಸಾರಾ ನಯಾ ಲುಕ್ ಈಗ ಪಡ್ಡೆ ಹುಡುಗರ ನಿದ್ದೆಕೆಡಿಸಿದೆ.

ಇನ್ನೂ ಜನಪ್ರಿಯ ಸೀರಿಯಲ್ 'ಅಮೃತಧಾರೆ' ಪ್ರಾಜೆಕ್ಟ್‌ನಿಂದ ಸಾರಾ ಹೊರನಡೆದಿದ್ದಾರೆ. ನಾಯಕ ಗೌತಮ್ ದಿವಾನ್ ತಂಗಿಯ ಪಾತ್ರದಲ್ಲಿ ಅವರು ನಟಿಸುತ್ತಿದ್ದರು. ಆದರೆ ಅವರ ಪಾತ್ರಕ್ಕೆ ಇಶಿತಾ ವರ್ಷ ಎಂಟ್ರಿ ಕೊಟ್ಟಿದ್ದಾರೆ. ಆದರೆ ಸಾರಾ ಯಾಕೆ ಸೀರಿಯಲ್‌ನಿಂದ ಹೊರನಡೆದರು ಎಂಬುದು ತಿಳಿದುಬಂದಿಲ್ಲ.

ಈ ಹಿಂದೆ 'ಕನ್ನಡತಿ' ಸೀರಿಯಲ್‌ನಲ್ಲಿ ಕಿರಣ್ ರಾಜ್ ಮತ್ತು ರಂಜನಿ ರಾಘವನ್ ಜೊತೆ ಸಾರಾ ಕೂಡ ಪ್ರಮುಖ ಪಾತ್ರದಲ್ಲಿ ನಟಿಸಿದ್ದರು. ಈ ಸೀರಿಯಲ್ ಸೂಪರ್ ಹಿಟ್ ಆಗಿತ್ತು. 2017ರಲ್ಲಿ 'ನಮ್ಮೂರ ಹೈಕ್ಳು' ಎಂಬ ಚಿತ್ರದಲ್ಲಿ ಸಾರಾ ನಟಿಸಿದ್ದರು. ಈ ಸಿನಿಮಾ ಮೂಲಕ ಕೊಡಗಿನ ಬೆಡಗಿ ಸದ್ದು ಮಾಡಿದ್ದರು.



# ನಂಬಿಕೆ, ತಾಳ್ಮೆ ಇರಬೇಕು..

ಯಾವಾಗಲೂ ನಂಬಿಕೆ ಮತ್ತು ತಾಳ್ಮೆ ಎನ್ನುವುದು ಇರಬೇಕು. ಸ್ವಲ್ಪ ಟೈಂ ತೆಗೆದುಕೊಂಡ್ರೂ, ಯಾವತ್ತಿದ್ದರೂ ನಿಜ ಆಚೆ ಬರುತ್ತದೆ. ಇದೀಗ ಬಂದಿದೆ ಎಂದು ಡ್ರಗ್ಸ್ ಕೇಸ್ ಖುಲಾಸೆ ಆಗಿರುವ ಬಗ್ಗೆ ನಟಿ ರಾಗಿಣಿ ದ್ವಿವೇದಿ ಪ್ರತಿಕ್ರಿಯಿಸಿದರು. ದೇವರ ಮೇಲೆ ನಂಬಿಕೆ ಇದೆ. ನಂಬಿಕೆ ಮತ್ತು ತಾಳ್ಮೆ ಇರಬೇಕು. ಯಾವಾಗಲೂ ಹೇಳುವ

**ಟೈಂ ತಗೊಂಡ್ರೂ ನಿಜ ಯಾವತ್ತೂ ಆಚೆ ಬರುತ್ತೆ**

ಹಾಗೆಯೇ ಸತ್ಯ ಯಾವತ್ತಿದ್ದರೂ ಹೊರ ಬರುತ್ತೆ, ಇದೀಗ ನಿಜ ಏನು ಅಂತ ಆಚೆ ಬಂದಿದೆ ಎಂದು ಸಮಾಧಾನ ವ್ಯಕ್ತಪಡಿಸಿದರು. ಪ್ರಕರಣ ಮುಗಿದಿದೆ. ಆ ಬಗ್ಗೆ ಈಗ ಮಾತಾಡೋದು ಬೇಡ. ಹೊಸ ವರ್ಷ, ಹೊಸ ಹೊಸ ಪ್ರಾಜೆಕ್ಟ್‌ಗಳು ಬರ್ತಿದೆ, ಸಿನಿಮಾಗಳು ರಿಲೀಸ್ ಆಗ್ತಿದೆ. ಒಳ್ಳೆಯ ವಿಷಯಗಳ ಬಗ್ಗೆ ಮಾತಾಡೋಣ ಎಂದರು.



# ದರ್ಶನ್–ಪ್ರೇಮ್ ಸಿನಿಮಾ ಮಾಡೇ ಮಾಡ್ತಾರೆ

ದರ್ಶನ್ ಹಾಗೂ ಪ್ರೇಮ್ ಸಿನಿಮಾ ಮಾಡೇ ಮಾಡ್ತಾರೆ, ಅದರ ಬಗ್ಗೆ ಡೌಟೇ ಇಲ್ಲ ಅಂತ ನಟಿ ರಕ್ಷಿತಾ ಹೇಳಿದರು. ಬೆಂಗಳೂರಿನಲ್ಲಿ ಕಾರ್ಯಕ್ರಮವೊಂದರ ವೇಳೆ ಪಬ್ಲಿಕ್ ಟಿವಿ ಜೊತೆಗೆ ಮಾತನಾಡಿದ ಅವರು, ದರ್ಶನ್ ಹಾಗೂ ಪ್ರೇಮ್ ಸಿನಿಮಾ ಮಾಡ್ತಾರೆ ಅದ್ರ ಬಗ್ಗೆ ಡೌಟೇ ಇಲ್ಲ. ಯಾವ ಬ್ಯಾನರ್ ಅನ್ನೋದು ಮ್ಯಾಟರ್ ಆಗಲ್ಲ ಎಂದರು. ಇದೇ ವೇಳೆ ದರ್ಶನ್‌ಗೆ ಮಗನ ಮದುವೆ ಬರುವಂತೆ ಇನ್ವಿಟೇಷನ್ ಕೊಟ್ಟಿದ್ದೀನಿ. ರಾಣಾನ ಚಿಕ್ಕವನಿದ್ದಾಗಿಂದ ದರ್ಶನ್ ನೋಡಿದ್ದಾನೆ. ಮದುವೆಗೆ ಬರ್ತೀನಿ ಅಂತ ಹೇಳಿದ್ದಾನೆ ಎಂದರು. ಇನ್ನೂ ರೇಣುಕಾಸ್ವಾಮಿ ಪ್ರಕರಣದ ಬಗ್ಗೆ ಮಾತನಾಡಿದ ರಕ್ಷಿತಾ, ಅದೊಂದು ಕೆಟ್ಟಗಳಿಗೆ ಅದರಿಂದ ಆಚೆ ಬರಲಿ. ನನಗೆ ಅವ್ನು ಯಾವಾಗಲೂ ಫ್ಯಾಮಿಲಿನೇ. ನನ್ನ ಅಕ್ಕಪಕ್ಕದ ಜನ ಚನಾಗಿದ್ರೆ, ನಾನು ಚನಾಗಿರ್ತೀನಿ ಅಂತಾ ನಾನು ಅನ್ಕೋತಿನಿ. ದರ್ಶನ್‌ಗೆ ಅವನ ಫ್ಯಾಮಿಲಿನೇ ದೊಡ್ಡ ಶಕ್ತಿ. ಅವನಿಗೋಸ್ಕರ ವಿಜಯಲಕ್ಷ್ಮೀ ತುಂಬಾ ಕಷ್ಟಪಟ್ಟಿದ್ದಾರೆ ಎಂದು ತಿಳಿಸಿದರು. ಸೋಶಿಯಲ್ ಮೀಡಿಯಾ ಒಳ್ಳೆದಕ್ಕೂ ಇದೆ ಕೆಟ್ಟದಕ್ಕೂ ಇದೆ. ನಾನೇನಾದ್ರು ಹೇಳ್ಬೇಕು ಅಂದ್ರೆ, ಜಾಲತಾಣದಲ್ಲಿ ಹಾಕ್ತಿನಿ. ನನಗೆ ಗೊತ್ತಿರೋ ಪ್ರಕಾರ ಪ್ರೇಮ್ ದರ್ಶನ್ ಸಿನಿಮಾ ಮಾಡ್ತಾರೆ. ಬ್ಯಾನರ್ ಯಾವ್ದು ಅನ್ನೋದು ಮ್ಯಾಟರ್ ಆಗೋಲ್ಲ. ಯಾವುದೇ ಬ್ಯಾನರ್ ಅದ್ರೂ ಸಿನಿಮಾ ಮಾಡೇ ಮಾಡ್ತಾರೆ ಎಂದು ರಕ್ಷಿತಾ ಹೇಳಿದರು.



# ಹಸೆಮಣೆ ಏರಲು ಸಜ್ಜಾದ ನಟಿ ಮಾನಸಿ ಜೋಶಿ

**ಬೆಂಗಳೂರಿನಲ್ಲಿ ಈ ಮದುವೆ**

'ಪಾರು' ಸೀರಿಯಲ್‌ನಲ್ಲಿ ವಿಲನ್ ಆಗಿ ಗಮನ ಸೆಳೆದ ನಟಿ ಮಾನಸಿ ಜೋಶಿ ಅವರು ದಾಂಪತ್ಯ ಜೀವನಕ್ಕೆ ಕಾಲಿಡಲು ಸಜ್ಜಾಗಿದ್ದಾರೆ. ಈ ಮೂಲಕ ನಟಿ ಅಭಿಮಾನಿಗಳಿಗೆ ಗುಡ್ ನ್ಯೂಸ್ ಕೊಟ್ಟಿದ್ದಾರೆ. ಕಳೆದ ವರ್ಷ ನಟಿ ಸರಳವಾಗಿ ಎಂಗೇಜ್‌ಮೆಂಟ್ ಮಾಡಿಕೊಂಡಿದ್ದರು. ಇದೀಗ ಇದೇ ಫೆ.16ರಂದು ರಾಘವ್ ಜೊತೆ ನಟಿ ಮದುವೆಗೆ ರೆಡಿಯಾಗಿದ್ದಾರೆ. ಬೆಂಗಳೂರಿನಲ್ಲಿ ಈ ಮದುವೆ ಜರುಗಲಿದೆ. ಸದ್ಯ ಸ್ಪೆಷಲ್ ಪ್ರೀ ವೆಡ್ಡಿಂಗ್ ಫೋಟೋಶೂಟ್ ಮೂಲಕ ನಟಿ ಡೇಟ್ ರಿವೀಲ್ ಮಾಡಿದ್ದಾರೆ. ಸೇವ್ ದಿ ಡೇಟ್ ಎಂದಿದ್ದಾರೆ.

ಈ ಮದುವೆಗೆ 'ಬಿಗ್ ಬಾಸ್' ಖ್ಯಾತಿಯ ಮೋಕ್ಷಿತಾ ಪೈ, ಭಾರತಿ ವಿಷ್ಣುವರ್ಧನ್ ಸೇರಿದಂತೆ ಅನೇಕರಿಗೆ ಮದುವೆಗೆ ಆಹ್ವಾನ ನೀಡಿದ್ದಾರೆ. ಇನ್ನೂ ಹೊಸ ಬದುಕಿಗೆ ಕಾಲಿಡುತ್ತಿರುವ ನಟಿಗೆ ಫ್ಯಾನ್ಸ್ ಶುಭಕೋರಿದ್ದಾರೆ.

# ಕೊಹ್ಲಿ ವಿಕೆಟ್ ಉರುಳಿಸಿದ ವೇಗಿಗೆ ಸ್ಮರಣೀಯ ಉಡುಗೊರೆ

ಬಿಸಿಸಿಐ ಕಟ್ಟುನಿಟ್ಟಿನ ಆದೇಶದ ಮೇರೆಗೆ ದೇಶೀ ಕ್ರಿಕೆಟ್‌ನತ್ತ ಮುಖ ಮಾಡಿದ ಟೀಂ ಇಂಡಿಯಾದ ಸ್ಟಾರ್ ಆಟಗಾರರಲ್ಲಿ ಒಬ್ಬರೂ ಕೂಡ ಗಮನಾರ್ಹ ಪ್ರದರ್ಶನ ನೀಡುವಲ್ಲಿ ಯಶಸ್ವಿಯಾಗಲಿಲ್ಲ. ಅಂತರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಆಟಗಾರರ ಕಳಪೆ ಪ್ರದರ್ಶನವನ್ನು ಗಮನದಲ್ಲಿಟ್ಟುಕೊಂಡು ಬಿಸಿಸಿಐ, ಪ್ರತಿಯೊಬ್ಬರು ದೇಶೀ ಟೂರ್ನಿಯನ್ನು ಆಡಲೇಬೇಕೆಂಬ ಸೂಚನೆ ನೀಡಿತ್ತು. ಅದರಂತೆ ದೇಶೀ ಟೂರ್ನಿ ರಣಜಿ ಅಂಗಳದಲ್ಲಿ ಬಹಳ ವರ್ಷಗಳ ನಂತರ ಕಾಣಿಸಿಕೊಂಡಿದ್ದ ವಿರಾಟ್ ಕೊಹ್ಲಿ, ರೋಹಿತ್ ಶರ್ಮಾ, ರಿಷಬ್ ಪಂತ್, ಕೆಎಲ್ ರಾಹುಲ್ ಸೇರಿದಂತೆ ಇನ್ನು ಅನೇಕ ಆಟಗಾರರಿಗೆ ಅರ್ಧಶತಕದ ಇನ್ನಿಂಗ್ಸ್ ಆಡಲು ಸಾಧ್ಯವಾಗಲಿಲ್ಲ. ಇತ್ತೀಚೆಗೆ ಡೆಲ್ಲಿ ಪರ ರಣಜಿ ಪಂದ್ಯವನ್ನಾಡಿದ ವಿರಾಟ್ ಕೊಹ್ಲಿ ಮೇಲೆ ಸಾಕಷ್ಟು ನಿರೀಕ್ಷೆಗಳನ್ನು ಇಡಲಾಗಿತ್ತು. ಆದರೆ ಕೊಹ್ಲಿಗೆ ಒಂದಂಕಿಯನ್ನು ದಾಟಲು ಸಾಧ್ಯವಾಗದೆ ಕ್ಲೀನ್ ಬೌಲ್ಡ್ ಆಗಿದ್ದರು. ಇದೀಗ ತನ್ನ ವಿಕೆಟ್ ಉರುಳಿಸಿದ್ದ ಎದುರಾಳಿ ತಂಡದ ಆ ಬೌಲರ್?ಗೆ ಕೊಹ್ಲಿ ಸ್ಮರಣೀಯ ಉಡುಗೊರೆಯೊಂದನ್ನು ನೀಡಿದ್ದಾರೆ.

**12 ವರ್ಷಗಳ ನಂತರ ರಣಜಿ**

ವಾಸ್ತವವಾಗಿ ರಣಜಿ ಟ್ರೋಫಿಯ ಏಳನೇ ಸುತ್ತಿನಲ್ಲಿ ದೆಹಲಿ ಮತ್ತು ರೈಲ್ವೇಸ್ ನಡುವೆ ಪಂದ್ಯ ನಡೆಯಿತು. ಈ ಪಂದ್ಯವನ್ನು ಗೆದ್ದುಕೊಳ್ಳುವಲ್ಲಿ ದೆಹಲಿ ತಂಡ ಯಶಸ್ವಿಯಾಗಿತ್ತು. ಈ ಪಂದ್ಯದಲ್ಲಿ ವಿರಾಟ್ ಕೊಹ್ಲಿ ಕೂಡ ದೆಹಲಿ ಪರ ಕಣಕ್ಕಿಳಿದಿದ್ದರು. ಕೊಹ್ಲಿ ಬರೋಬ್ಬರಿ 12 ವರ್ಷಗಳ ನಂತರ ರಣಜಿ ಪಂದ್ಯವನ್ನಾಡಿದರಾದರೂ ವಿರಾಟ್ ಅವರ ಕಳಪೆ ಪ್ರದರ್ಶನ ರಣಜಿಯಲ್ಲೂ ಮುಂದುವರೆದಿತ್ತು.

ಈ ಪಂದ್ಯದಲ್ಲಿ ಕೊಹ್ಲಿಗೆ ಕೇವಲ ಒಂದು ಇನ್ನಿಂಗ್ಸ್‌ನಲ್ಲಿ ಮಾತ್ರ ಬ್ಯಾಟಿಂಗ್ ಮಾಡುವ ಅವಕಾಶ ಸಿಕ್ಕಿತು. ಆ ಇನ್ನಿಂಗ್ಸ್‌ನಲ್ಲೂ ಕೊಹ್ಲಿ ಕೇವಲ 6 ರನ್ ಗಳಿಸಿ ಔಟಾದರು. ರೈಲ್ವೇಸ್ ತಂಡದ ವೇಗದ ಬೌಲರ್ ಹಿಮಾಂಶು ಸಂಗ್ವಾನ್ ಎಸೆತದಲ್ಲಿ ಕೊಹ್ಲಿ ಕ್ಲೀನ್ ಬೌಲ್ಡ್ ಆದರು. ಇದೀಗ ಪಂದ್ಯ ಮುಗಿದ ಬಳಿಕ ಕೊಹ್ಲಿ ಹಿಮಾಂಶು ಅವರಿಗೆ ವಿಶೇಷ ಉಡುಗೊರೆಯನ್ನು ನೀಡಿದ್ದಾರೆ. ಇದೀಗ ಅದರ ವಿಡಿಯೋ ಎಲ್ಲೆಡೆ ವೈರಲ್ ಆಗಿದೆ.

**ಹಿಮಾಂಶು ಹೊಗಳಿದ ಕೊಹ್ಲಿ**



**ಹಿಮಾಂಶುಗೆ ವಿಶೇಷ ಉಡುಗೊರೆ**

ವೈರಲ್ ಆಗಿರುವ ವಿಡಿಯೋದಲ್ಲಿ, ಪಂದ್ಯ ಮುಗಿದ ನಂತರ ರೈಲ್ವೇಸ್ ತಂಡದ ವೇಗಿ ಹಿಮಾಂಶು ಸಂಗ್ವಾನ್ ವಿರಾಟ್ ಕೊಹ್ಲಿಯನ್ನು ಕ್ಲೀನ್ ಬೌಲ್ಡ್ ಮಾಡಿದ ಅದೇ ಚೆಂಡಿನೊಂದಿಗೆ ದೆಹಲಿ ಡ್ರೆಸ್ಸಿಂಗ್ ಕೋಣೆಗೆ ತೆರಳಿದ್ದಾರೆ. ಈ ಸಮಯದಲ್ಲಿ ಕೊಹ್ಲಿ ಹಿಮಾಂಶು ಅವರನ್ನು ಇದು ಅದೇ ಚೆಂಡು ತಾನೆ ಎಂದು ಕೇಳಿದ್ದಾರೆ. ಹಿಮಾಂಶು ಹೌದು ಎಂದು ಹೇಳಿದಾಗ, ಕೊಹ್ಲಿ ಉತ್ತಮವಾಗಿ ಬೌಲ್ ಮಾಡಿದೆ, ತುಂಬಾ ಖುಷಿ ಕೊಟ್ಟಿತು ಎಂದು ಹೇಳಿದ್ದಾರೆ. ಇದಾದ ನಂತರ, ವಿರಾಟ್ ಆ ಚೆಂಡಿನ ಮೇಲೆ ಹಿಮಾಂಶು ಸಾಂಗ್ವಾನ್‌ಗೆ ತಮ್ಮ ಆಟೋಗ್ರಾಫ್ ನೀಡಿದ್ದಾರೆ. ಆ ಬಳಿಕ ಹಿಮಾಂಶುರನ್ನು ಹೊಗಳಿದ ಕೊಹ್ಲಿ, 'ನಾನು ನಿಮ್ಮ ಬಗ್ಗೆ ಕೇಳಿದ್ದೇನೆ. ನೀವು ಒಳ್ಳೆಯ ಬೌಲರ್. ನಿಮ್ಮ ಭವಿಷ್ಯಕ್ಕೆ ಶುಭಾಶಯಗಳು' ಎಂದಿದ್ದಾರೆ.

# ಇಂಗ್ಲೆಂಡ್ ವಿರುದ್ಧ ಟೀಂ ಇಂಡಿಯಾಗೆ ಬಿಗ್ ವಿನ್!

ವಾಂಖೆಡೆ ಅಂತಾರಾಷ್ಟ್ರೀಯ ಕ್ರಿಕೆಟ್ ಸ್ಟೇಡಿಯಂನಲ್ಲಿ ನಡೆದ ಭಾರತ ತ ಇಂಗ್ಲೆಂಡ್ 5ನೇ ಟಿ-20 ಪಂದ್ಯದಲ್ಲಿ, ಪ್ರವಾಸಿ ಇಂಗ್ಲೆಂಡ್ ವಿರುದ್ಧ ಅತಿಥೇಯ ಭಾರತ ತಂಡವು ಭರ್ಜರಿ ಗೆಲುವು ಸಾಧಿಸಿದೆ. ಈ ಮೂಲಕ ಐದು ಪಂದ್ಯಗಳ ಟಿ-20 ಸರಣಿಯನ್ನು ಭಾರತವು 4-1 ಅಂತರದಲ್ಲಿ ತನ್ನದಾಗಿಸಿಕೊಂಡಿದೆ. ವಾಂಖೆಡೆ ಮೈದಾನದಲ್ಲಿ ಟಾಸ್ ಗೆದ್ದು ಫೀಲ್ಡಿಂಗ್ ಆಯ್ದುಕೊಂಡ ಇಂಗ್ಲೆಂಡ್, ತನ್ನ ನಿರ್ಧಾರಕ್ಕೆ ಪಶ್ಚಾತ್ತಾಪ ಪಡಬೇಕಾದ ಪರಿಸ್ಥಿತಿಯನ್ನು ಭಾರತದ ಸ್ಟಾರ್ ಆಟಗಾರ ಅಭಿಷೇಕ್ ಶರ್ಮಾ ನಿರ್ಮಿಸಿದರು. ಕೇವಲ 54 ಎಸೆತಗಳಲ್ಲಿ ಭರ್ಜರಿ 135 ರನ್‌ಗಳಿಸಿದ ಅಭಿಷೇಕ ಶರ್ಮಾ, 7 ಬೌಂಡರಿ ಮತ್ತು 13 ಸಿಕ್ಸರ್ ಸಿಡಿಸಿ ಇಂಗ್ಲೆಂಡ್ ಬೌಲರ್‌ಗಳ ಬೆವರಿಳಿಸಿದರು. ಅಭಿಷೇಕ್ ಶರ್ಮಾ ಅವರ ಭರ್ಜರಿ ಶತಕದ ನೆರವಿನಿಂದ ಭಾರತ ತಂಡವು ನಿಗದಿತ 20 ಓವರ್‌ಗಳಲ್ಲಿ 9 ವಿಕೆಟ್ ನಷ್ಟಕ್ಕೆ 247 ರನ್‌ಗಳ ಬೃಹತ್ ಮೊತ್ತವನ್ನು ಕಲೆ ಹಾಕಿತು. ಆದರೆ ಸರಣಿಯುದ್ದಕ್ಕೂ ಉತ್ತಮ ಪ್ರದರ್ಶನ ತೋರುವಲ್ಲಿ ವಿಫಲವಾಗಿರುವ ನಾಯಕ ಸೂರ್ಯಕುಮಾರ್ ಯಾದವ್(2) ಮತ್ತು ಆರಂಭಿಕ ಆಟಗಾರ ಸಂಜು ಸ್ಯಾಮ್ಸನ್(16) ಈ ಬಾರಿಯೂ ನಿರಾಶೆ ಮೂಡಿಸಿದರು. ಇನ್ನುಳಿದಂತೆ ಶಿವಂ ದುಬೆ(30), ತಿಲಕ್ ವರ್ಮಾ(24) ಕೂಡ ಹೇಳಿಕೊಳ್ಳುವಂತ ಪ್ರದರ್ಶನ ತೋರದಿದ್ದರೂ, ತಂಡದ ಒಟ್ಟಾರೆ ಮೊತ್ತಕ್ಕೆ ತಮ್ಮ ಕೊಡುಗೆ ನೀಡಿದರು. ಇಂಗ್ಲೆಂಡ್ ಪರವಾಗಿ ಬ್ರೈಡನ್ ಕಾರ್ಸ್ 3, ಮಾರ್ಕ್ ವುಡ್ 2, ಜೋಫ್ರಾ ಆರ್ಚರ್, ಜೆಮಿ ಓವರ್‌ಟನ್ ಹಾಗೂ ಅಬ್ದುಲ್ ರಷಿದ್ ತಲಾ 1 ವಿಕೆಟ್ ಕಬಳಿಸಿದರು. ಆದರೆ ಅಭಿಷೇಕ್ ಶರ್ಮಾ ಸ್ಫೋಟಕ ಬ್ಯಾಟಿಂಗ್‌ನಿಂದ ಈ ಬೌಲರ್‌ಗಳು ಹೈರಾಣಾದರು. ಇನ್ನು ಭಾರತ ನೀಡಿದ 247 ರನ್‌ಗಳ ಬೃಹತ್ ಮೊತ್ತ ಬೆನ್ನತ್ತಿದ ಪ್ರವಾಸಿ ಇಂಗ್ಲೆಂಡ್ ಕೇವಲ 10.3 ಓವರ್‌ಗಳಲ್ಲಿ ತನ್ನೆಲ್ಲಾ ವಿಕೆಟ್ ಕಳೆದುಕೊಂಡು ಕೇವಲ 97 ರನ್‌ಗಳಿಸಲಷ್ಟೇ ಶಕ್ತವಾಯಿತು. ಭಾರತ ಇನ್ನೂ 9.3 ಓವರ್‌ಗಳನ್ನು ಬಾಕಿ ಉಳಿಸಿಕೊಂಡು, ಭರ್ಜರಿ 150 ರನ್‌ಗಳ ಜಯ ದಾಖಲಿಸಿತು.



**ಇನ್ನು ಭಾರತ ಮತ್ತು ಇಂಗ್ಲೆಂಡ್ ನಡುವಿನ ಐದನೇ ಟಿ-20 ಪಂದ್ಯವನ್ನು ವೀಕ್ಷಿಸಲು, ಬ್ರಿಟನ್ ಮಾಜಿ ಪ್ರಧಾನಿ ರಿಷಿ ಸುನಕ್, ಇನ್ಫೋಸಿಸ್ ಸಂಸ್ಥಾಪಕ ಮುಖ್ಯಸ್ಥ ನಾರಾಯಣ ಮೂರ್ತಿ ಹಾಗೂ ರಿಲಯನ್ಸ್ ಇಂಡಸ್ಟ್ರೀಸ್ ಮುಖ್ಯಸ್ಥ ಮುಕೇಶ್ ಅಂಬಾನಿ ವಾಂಖೆಡೆ ಸ್ಟೇಡಿಯಂನಲ್ಲಿ ಉಪಸ್ಥಿತರಿದ್ದರು.**

ಇಂಗ್ಲೆಂಡ್ ತಂಡದ ಪರವಾಗಿ ಫಿಲ್ ಸಾಲ್ಟ್(55) ಉತ್ತಮ ಪ್ರದರ್ಶನ ತೋರಿದರೂ, ಅಂತಿಮವಾಗಿ ಭಾರತೀಯ ಬೌಲರ್‌ಗಳ ಎದುರಿಗೆ ಇತರ ಇಂಗ್ಲೆಂಡ್ ಬ್ಯಾಟ್ಸಮನ್‌ಗಳು ಮಂಡಿಯೂರಿದರು. ಭಾರತದ ಬೌಲರ್‌ಗಳ ಪೈಕಿ ಮೊಹಮ್ಮದ್ ಶಮಿ 3 ವಿಕೆಟ್ ಕಬಳಿಸಿದರೆ, ಅಭಿಷೇಕ್ ಶರ್ಮಾ, ಶಿವಂ ದುಬೆ, ವರುಣ್ ಚಕ್ರವರ್ತಿ ತಲಾ 2 ವಿಕೆಟ್ ಪಡೆದರು. ಅದೇ ರೀತಿ ರವಿ ಬಿಷ್ಣೋಯಿ 1 ವಿಕೆಟ್ ಪಡೆದರು. ಬ್ಯಾಟಿಂಗ್‌ನಲ್ಲಿ ಭರ್ಜರಿ ಪ್ರದರ್ಶನ ತೋರಿದ್ದ ಅಭಿಷೇಕ್ ಶರ್ಮಾ ಬೌಲಿಂಗ್‌ನಲ್ಲೂ ಮಿಂಚಿದ್ದು, ಗಮನ ಸೆಳೆಯಿತು. ಒಟ್ಟಿನಲ್ಲಿ ಇಂಗ್ಲೆಂಡ್ ವಿರುದ್ಧದ ಐದು ಪಂದ್ಯಗಳ ಟಿ-20 ಸರಣಿಯನ್ನು 4-1 ಅಂತರದಲ್ಲಿ ಗೆದ್ದುಕೊಂಡುವ ಭಾರತ, ಭಾರತದ ಕ್ರಿಕೆಟ್ ಪ್ರಿಯರಿಗೆ ಸರಣಿ ಗೆಲುವಿನ ಉಡುಗೊರೆ ನೀಡಿದೆ.

# ಧೋನಿಯ ದಾಖಲೆ ಮುರಿದ ದಿನೇಶ್ ಕಾರ್ತಿಕ್

ಸೌತ್ ಆಫ್ರಿಕಾ ಟಿ20 ಲೀಗ್ ಆಡಿದ ಮೊದಲ ಭಾರತೀಯ ಆಟಗಾರನೆಂದರೆ ಅದು ದಿನೇಶ್ ಕಾರ್ತಿಕ್. ಇದೀಗ ಜೋಬರ್ಗ್ ಸೂಪರ್ ಕಿಂಗ್ಸ್ ವಿರುದ್ಧ ಅರ್ಧಶತಕ ಬಾರಿಸುವ ಮೂಲಕ, ಸೌತ್ ಆಫ್ರಿಕಾ ಟಿ20 ಲೀಗ್‌ನಲ್ಲಿ ಹಾಫ್ ಸೆಂಚುರಿ ಸಿಡಿಸಿದ ಮೊದಲ ಭಾರತೀಯ ಬ್ಯಾಟರ್ ಎನಿಸಿಕೊಂಡಿದ್ದಾರೆ. ಈ ಅರ್ಧಶತಕದೊಂದಿಗೆ ಧೋನಿಯ ದಾಖಲೆಯೊಂದನ್ನು ಸಹ ಡಿಕೆ ಮುರಿದಿದ್ದಾರೆ. ಸೌತ್ ಆಫ್ರಿಕಾದಲ್ಲಿ ನಡೆಯುತ್ತಿರುವ ಟಿ20 ಲೀಗ್‌ನಲ್ಲಿ ಅರ್ಧಶತಕ ಬಾರಿಸುವ ಮೂಲಕ ದಿನೇಶ್ ಕಾರ್ತಿಕ್ ವಿಶೇಷ ದಾಖಲೆ ಬರೆದಿದ್ದಾರೆ. ಅದು ಸಹ ಮಹೇಂದ್ರ ಸಿಂಗ್ ಧೋನಿಯ ಹೆಸರಿನಲ್ಲಿದ್ದ ಸಾರ್ವಕಾಲಿಕ ದಾಖಲೆಯನ್ನು ಮುರಿಯುವ ಮೂಲಕ ಎಂಬುದು ವಿಶೇಷ.

ಸೌತ್ ಆಫ್ರಿಕಾ ಟಿ20 ಲೀಗ್‌ನ 26ನೇ ಪಂದ್ಯದಲ್ಲಿ ಪಾರ್ಲ್ ರಾಯಲ್ಸ್ ಪರ ಕಣಕ್ಕಿಳಿದ ದಿನೇಶ್ ಕಾರ್ತಿಕ್, ಜೋಬರ್ಗ್ ಸೂಪರ್ ಕಿಂಗ್ಸ್ ವಿರುದ್ಧ 39 ಎಸೆತಗಳಲ್ಲಿ 3 ಸಿಕ್ಸ್ ಹಾಗೂ 4 ಫೋರ್‌ಗಳೊಂದಿಗೆ 53 ರನ್ ಬಾರಿಸಿದ್ದರು. ಈ ಅರ್ಧಶತಕದೊಂದಿಗೆ ಟಿ20 ಕ್ರಿಕೆಟ್‌ನಲ್ಲಿ ಅತ್ಯಧಿಕ ರನ್ ಬಾರಿಸಿದ ಭಾರತದ ವಿಕೆಟ್ ಕೀಪರ್ ಎನಿಸಿಕೊಂಡಿದ್ದಾರೆ. ಇದಕ್ಕೂ ಮುನ್ನ ಈ ದಾಖಲೆ ಟೀಮ್ ಇಂಡಿಯಾದ ಮಾಜಿ ನಾಯಕ ಮಹೇಂದ್ರ ಸಿಂಗ್ ಧೋನಿ ಹೆಸರಿನಲ್ಲಿತ್ತು. ಟಿ20 ಕ್ರಿಕೆಟ್‌ನಲ್ಲಿ ಈವರೆಗೆ 342 ಇನಿಂಗ್ಸ್ ಆಡಿರುವ ಧೋನಿ 28 ಅರ್ಧಶತಕಗಳೊಂದಿಗೆ 7432 ರನ್ ಬಾರಿಸಿ ಈ ದಾಖಲೆ ನಿರ್ಮಿಸಿದ್ದರು. ಇದೀಗ ಈ ದಾಖಲೆಯನ್ನು ದಿನೇಶ್ ಕಾರ್ತಿಕ್ ಮುರಿದಿದ್ದಾರೆ.

ದಿನೇಶ್ ಕಾರ್ತಿಕ್ ಈವರೆಗೆ 362 ಟಿ20 ಇನಿಂಗ್ಸ್ ಆಡಿದ್ದು, ಈ ವೇಳೆ 35 ಅರ್ಧಶತಕಗಳೊಂದಿಗೆ ಒಟ್ಟು 7504 ರನ್ ಕಲೆಹಾಕಿದ್ದಾರೆ. ಈ ಮೂಲಕ ಟಿ20 ಕ್ರಿಕೆಟ್ ಇತಿಹಾಸದಲ್ಲೇ ಅತೀ ಹೆಚ್ಚು ರನ್ ಬಾರಿಸಿದ ಭಾರತದ ವಿಕೆಟ್ ಕೀಪರ್ ಬ್ಯಾಟರ್ ಎನಿಸಿಕೊಂಡಿದ್ದಾರೆ.

ಸದ್ಯ ದಿನೇಶ್ ಕಾರ್ತಿಕ್ ಹೆಸರಿನಲ್ಲಿರುವ ಈ ದಾಖಲೆಯನ್ನು ಮುರಿಯಲು ಮಹೇಂದ್ರ ಸಿಂಗ್ ಧೋನಿಗೂ ಉತ್ತಮ ಅವಕಾಶವಿದೆ. ಏಕೆಂದರೆ ಮುಂಬರುವ ಐಪಿಎಲ್‌ನಲ್ಲಿ ಧೋನಿ ಆಟಗಾರನಾಗಿ ಕಣಕ್ಕಿಳಿದರೆ, ದಿನೇಶ್ ಕಾರ್ತಿಕ್ ಆರ್‌ಸಿಬಿ ತಂಡದ ಬ್ಯಾಟಿಂಗ್ ಕೋಚ್ ಆಗಿ ಕಾಣಿಸಿಕೊಳ್ಳಲಿದ್ದಾರೆ.



# ಸತತ 2ನೇ ಬಾರಿಗೆ ಟಿ20 ವಿಶ್ವಕಪ್ ಗೆದ್ದ ಭಾರತ ವನಿತಾ ಪಡೆ

ಮಲೇಷ್ಯಾ ರಾಜಧಾನಿ ಕೌಲಾಲಂಪುರದ ಬ್ಯೂಮಾಸ್ ಓವಲ್ ಸ್ಟೇಡಿಯಂನಲ್ಲಿ ನಡೆದ ಅಂಡರ್ 19 ಮಹಿಳಾ ಟಿ20 ವಿಶ್ವಕಪ್ ಫೈನಲ್ ಪಂದ್ಯದಲ್ಲಿ ಭಾರತ ಮತ್ತು ದಕ್ಷಿಣ ಆಫ್ರಿಕಾ ತಂಡಗಳ ಮುಖಾಮುಖಿ ಯಾಗಿದ್ದವು. ಈ ಪಂದ್ಯದಲ್ಲಿ ಹಾಲಿ ಚಾಂಪಿಯನ್ ಭಾರತ ತಂಡ ಸುಲಭವಾಗಿ ದಕ್ಷಿಣ ಆಫ್ರಿಕಾವನ್ನು ಮಣಿಸಿ ಸತತ ಎರಡನೇ ಬಾರಿಗೆ ಪ್ರಶಸಿಯನ್ನು ತನ್ನದಾಗಿಸಿಕೊಂಡಿತು.

ಈ ಹಿಂದೆ 2023ರಲ್ಲಿ ನಡೆದಿದ್ದ ಚೊಚ್ಚಲ ಆವೃತ್ತಿಯಲ್ಲೂ ಟೀಂ ಇಂಡಿಯಾ, ಇಂಗ್ಲೆಂಡ್ ತಂಡವನ್ನು ಮಣಿಸಿ ಚಾಂಪಿಯನ್ ಆಗಿತ್ತು. ಇನ್ನು ಈ ಪಂದ್ಯದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟ್ ಮಾಡಿದ ದಕ್ಷಿಣ ಆಫ್ರಿಕಾ ತಂಡ 82 ರನ್ ಕಲೆಹಾಕಿತು. ಈ ಗುರಿ ಬೆನ್ನಟ್ಟಿದ ಭಾರತ ವನಿತಾ ಪಡೆ 11.2 ಓವರ್‌ಗಳಲ್ಲಿ ಕೇವಲ 1 ವಿಕೆಟ್ ಕಳೆದುಕೊಂಡು ಜಯದ ನಗೆಬೀರಿತು.

ಈ ಟೂರ್ನಿಯಲ್ಲಿ ಕನ್ನಡತಿ ನಿಕ್ಕಿ ಪ್ರಸಾದ್ ನಾಯಕತ್ವದಲ್ಲಿ ಕಣಕ್ಕಿಳಿದಿದ್ದ ಟೀಂ ಇಂಡಿಯಾದ ಪ್ರದರ್ಶನ ಸ್ಮರಣೀಯವಾಗಿತ್ತು. ಅದಕ್ಕೆ ಪೂರಕವಾಗಿ ಭಾರತ ತಂಡ ಇಡೀ ಟೂರ್ನಿಯಲ್ಲಿ ಒಂದೇ ಒಂದು ಪಂದ್ಯವನ್ನು ಸೋಲದೆ ಪ್ರಶಸ್ತಿ ಗೆದ್ದುಕೊಂಡಿದೆ. ಇನ್ನು ಉಭಯ ತಂಡಗಳ ನಡುವೆ ನಡೆದ ಈ ಫೈನಲ್ ಪಂದ್ಯದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಲು ನಿರ್ಧರಿಸಿದ ಆಫ್ರಿಕಾ ಮಹಿಳಾ ತಂಡ 20 ಓವರ್‌ಗಳಲ್ಲಿ ಕೇವಲ 82 ರನ್‌ಗಳಿಗೆ ಆಲೌಟ್ ಆಯಿತು. ತಂಡದ ಪರ




ಮೈಕ್ ವ್ಯಾನ್ ವೂರ್ಸ್ಟ್ ಗರಿಷ್ಠ 23 ರನ್ ಗಳಿಸಿದರು. ಅವರನ್ನು ಹೊರತುಪಡಿಸಿ, ಗೆಮ್ಮಾ ಬೋಥಾ 16 ರನ್ ಮತ್ತು ಫೇ ಕೌಲಿಂಗ್ 15 ರನ್‌ಗಳ ಇನ್ನಿಂಗ್ಸ್ ಆಡಿದರು. ಮತ್ತೊಂದೆಡೆ ಭಾರತ ಪರ ಬೌಲಿಂಗ್‌ನಲ್ಲಿ ಮಿಂಚಿದ ಗೊಂಗಡಿ ತ್ರಿಶಾ 4 ಓವರ್‌ಗಳಲ್ಲಿ ಕೇವಲ 15 ರನ್ ನೀಡಿ 3 ವಿಕೆಟ್ ಪಡೆದರು. ಇವರಲ್ಲದೆ ವೈಷ್ಣವಿ ಶರ್ಮಾ, ಆಯುಷಿ ಶುಕ್ಲಾ ಮತ್ತು ಪರುಣಿಕಾ ಸಿಸೋಡಿಯಾ ತಲಾ 2 ವಿಕೆಟ್ ಪಡೆದರು. ಉಳಿದಂತೆ ಶಬ್ನಮ್ ಶಕೀಲ್ ಕೂಡ 1 ವಿಕೆಟ್ ಪಡೆಯುವಲ್ಲಿ ಯಶಸ್ವಿಯಾದರು.

**ಭಾರತ ಮತ್ತು ದಕ್ಷಿಣ ಆಫ್ರಿಕಾ ಮುಖಾಮುಖಿ**

**ಟೀಂ ಇಂಡಿಯಾಗೆ ಸುಲಭ ಜಯ:** ಗೆಲುವಿಗೆ 83 ರನ್‌ಗಳ ಗುರಿ ಪಡೆದಿದ್ದ ಟೀಂ ಇಂಡಿಯಾಕ್ಕೆ ಆರಂಭಿಕರಾದ ಗೊಂಗಡಿ ತ್ರಿಶಾ ಮತ್ತು ಕಮಲಿನಿ ತಂಡಕ್ಕೆ ಉತ್ತಮ ಆರಂಭ ನೀಡಿದರು. ಉಭಯ ಆಟಗಾರರು ಮೊದಲ ವಿಕೆಟ್‌ಗೆ ಕೇವಲ 4.3 ಓವರ್‌ಗಳಲ್ಲಿ 36 ರನ್ ಕಲೆಹಾಕಿದರು. ಇದರಿಂದಾಗಿ ಭಾರತ ತಂಡ ಕೇವಲ 1 ವಿಕೆಟ್ ಕಳೆದುಕೊಂಡು ಗೆಲುವಿನ ದಡ ಮುಟ್ಟಿತು. ಕಾಕತಾಳೀಯವೆಂಬಂತೆ ಕಳೆದ ವರ್ಷ ನಡೆದಿದ್ದ ಪುರುಷರ ಟಿ20 ವಿಶ್ವಕಪ್‌ನಲ್ಲಿ ಭಾರತ ಮತ್ತು ದಕ್ಷಿಣ ಆಫ್ರಿಕಾ ತಂಡಗಳು ಫೈನಲ್‌ನಲ್ಲಿ ಪರಸ್ಪರ ಮುಖಾಮುಖಿಯಾಗಿದ್ದವು. ಆಗಲೂ ಟೀಂ ಇಂಡಿಯಾ ಗೆದ್ದಿತ್ತು.

**ಭಾರತ ತಂಡದ ಪ್ರದರ್ಶನ ಹೀಗಿತ್ತು**

ಈ ವಿಶ್ವಕಪ್‌ನಲ್ಲಿ ಟೀಂ ಇಂಡಿಯಾದ ಗೆಲುವಿನ ನಾಗಾಲೋಟಕ್ಕೆ ಬ್ರೇಕ್ ಹಾಕಲು ಯಾವ ತಂಡಕ್ಕೂ ಸಾಧ್ಯವಾಗಲಿಲ್ಲ. ಲೀಗ್ ಹಂತದ ಮೊದಲ ಪಂದ್ಯದಲ್ಲಿ ವೆಸ್ಟ್ ಇಂಡೀಸ್ ತಂಡವನ್ನು 9 ವಿಕೆಟ್‌ಗಳಿಂದ ಸೋಲಿಸಿದ್ದ ಭಾರತ ತಂಡ ಇದಾದ ನಂತರ ಮಲೇಷ್ಯಾವನ್ನು 10 ವಿಕೆಟ್‌ಗಳಿಂದ ಸೋಲಿಸಿತ್ತು. ನಂತರ ಶ್ರೀಲಂಕಾವನ್ನು 60 ರನ್‌ಗಳಿಂದ ಸೋಲಿಸಿದರೆ, ಬಾಂಗ್ಲಾದೇಶದ ವಿರುದ್ಧ 8 ವಿಕೆಟ್‌ಗಳಿಂದ ಮತ್ತು ಸ್ಕಾಟ್ಲೆಂಡ್ ವಿರುದ್ಧ 150 ರನ್‌ಗಳಿಂದ ಗೆದ್ದಿತು. ನಂತರ ಸೆಮಿಫೈನಲ್‌ನಲ್ಲಿ ಇಂಗ್ಲೆಂಡ್ ತಂಡವನ್ನು 9 ವಿಕೆಟ್‌ಗಳಿಂದ ಸೋಲಿಸಿ ಫೈನಲ್‌ಗೆ ಲಗ್ಗೆ ಇಟ್ಟಿದ್ದ ನಿಕಿ ಪಡೆ ಈಗ ಫೈನಲ್‌ನಲ್ಲಿಯೂ 9 ವಿಕೆಟ್‌ಗಳ ಸುಲಭ ಜಯ ದಾಖಲಿಸಿದೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966